ಸಂಪುಟ: 04 ಸಂಚಿಕೆ: 308 ಪುಟಗಳು: 08 ಸೋಮವಾರ 20 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

**ಮುಂಜಾನೆ ಮಾತು**
ದೊಡ್ಡ ಗುರಿ, ಜ್ಞಾನದ ಸಂಪಾದನೆ, ಕಠಿಣ ಪರಿಶ್ರಮ ಮತ್ತು ದೃಢ ಹಾಗೂ ಸತತ ಪ್ರಯತ್ನ ಎಂಬ ನಾಲ್ಕು ವಿಷಯಗಳನ್ನು ಅನುಸರಿಸಿದರೆ ಏನು ಬೇಕಾದರೂ ಸಾಧಿಸಬಹುದು

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸಿಎಂ ಮಹಿಳೆಯರೊಂದಿಗೆ ಅಸಭ್ಯವಾಗಿ ವರ್ತಿಸುತ್ತಾರೆ

• **ಉದಯವಾಹಿನಿ, ಬೆಳಗಾವಿ**

ಸಿಎಂ ಸಿದ್ದರಾಮಯ್ಯ ಕುರಿತು ನಾಜಿಯಾ ಖಾನ್ ಇದೀಗ ವಿವಾದಾತ್ಮಕ ಹೇಳಿಕೆಯೊಂದನ್ನು ನೀಡಿದ್ದಾರೆ. ಮಹಿಳೆಯರ ಜೊತೆ ಸಿಎಂ ಸಿದ್ದರಾಮಯ್ಯ ಅಸಭ್ಯವಾಗಿ ವರ್ತಿಸುತ್ತಾರೆ ಎಂದು ಬೆಳಗಾವಿ ತಾಲ್ಲೂಕಿನ ಸುಳೇಬಾವಿ ಗ್ರಾಮದಲ್ಲಿ ಈ ಒಂದು ಹೇಳಿಕೆ ನೀಡಿದ್ದಾರೆ. ಸಿಎಂ ಕಾಂಗ್ರೆಸ್ ಪಕ್ಷದ ಮಹಿಳಾ ಕಾರ್ಯಕರ್ತರಿಗೆ ಮುತ್ತು ನೀಡುತ್ತಾರೆ. ಸಿದ್ದರಾಮಯ್ಯ ನಡೆಯ ಬಗ್ಗೆ ನಾನು ವಿರೋಧಿಸಿದ್ದೇನೆ. ಪಕ್ಷದ ಮಹಿಳಾ ವಕ್ತಾರೆಯರಿಗೆ ಸಿದ್ದರಾಮಯ್ಯನವರು ಮುತ್ತು ನೀಡುತ್ತಾರೆ.ಚಲನಚಿತ್ರ ನಟಿಯರನ್ನು ಕೂಡ ಬಿಡದೆ ಸಿಎಂ ಸಿದ್ದರಾಮಯ್ಯ ಅಪ್ಪಿಕೊಳ್ಳುತ್ತಾರೆ ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಮುಂದುವರೆದು ಮಹಿಳಾ ಪತ್ರಕರ್ತೆಯರ ಜೊತೆಗೂ ಸಿಎಂ ಅಸಭ್ಯವಾಗಿ ವರ್ತಿಸಲು ಯತ್ನಿಸಿದ್ದಾರೆ. ನನ್ನ ಬಳಿ ನೊಂದ ಮಹಿಳಾ ಪತ್ರಕರ್ತೆಯರಲ್ಲಿ ಲಿಸ್ಟ್ ಕೂಡ ಇದೆ ಎಂದು ಬೆಳಗಾವಿ ತಾಲ್ಲೂಕಿನ ಸುಳೇಬಾವಿ ಗ್ರಾಮದಲ್ಲಿ ಸಿಎಂ ಸಿದ್ದರಾಮಯ್ಯ ಕುರಿತು ನಾಜಿಯಾ ಖಾನ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

## ರಾಯಚೂರು ಜಿಲ್ಲಾಧಿಕಾರಿಯಾಗಿದ್ದ ಪೆರುಮಾಳ್ ಈಗ ಸನ್ಯಾಸಿ!

• **ಉದಯವಾಹಿನಿ, ರಾಯಚೂರು**

1993–94ರಲ್ಲಿ ರಾಯಚೂರು ಜಿಲ್ಲಾಧಿಕಾರಿಯಾಗಿದ್ದ ಐ. ಆರ್. ಪೆರುಮಾಳ್ ಈಗ ಸನ್ಯಾಸಿಯಾಗಿ ಕುಂಭಮೇಳದಲ್ಲಿ ಕಾಣಿಸಿಕೊಂಡಿದ್ದಾರೆ ಎನ್ನಲಾಗುತ್ತಿದೆ. ಅವರನ್ನು ಈ ರೀತಿ ನೋಡಿದ ಜನರ ಹುಬ್ಬೇರುವಂತೆ ಮಾಡಿದ್ದಾರೆ. ಡಿಸಿಯಾಗಿದ್ದಾಗ ಕಚೇರಿಯಲ್ಲಿ ಕುಳಿತ ಫೋಟೊ ಹಾಗೂ ಈಗ ಗಡ್ಡ ಜಟ ಬಿಟ್ಟಿರುವ ಫೋಟೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಜೀವನದ ಪಾರಮಾರ್ಥ ಅರಿತು ಸನ್ಯಾಸದತ್ತ ವಾಲಿರಬಹುದು ಎಂಬ ವಿಶ್ಲೇಷಣೆ ಮಾಡಲಾಗುತ್ತಿದೆ. ಪ್ರಯಾಗರಾಜ್ ನಲ್ಲಿರುವ ಮಹಾ ಕುಂಭಮೇಳ ಎಲ್ಲಾರ ಆಕರ್ಷಣೆಯಾಗಿದೆ. ಇಲ್ಲಿ ಎಂತೆಂಥವರು ಸನ್ಯಾಸಿಗಳಾಗಿರುವುದು ಕಂಡು ಬರುತ್ತಿದೆ. ಜೀವನದ ಅಂತಿಮ ಸತ್ಯಕ್ಕೆ ಮನಸೋತ ಅಧ್ಯಾತದತ್ತ ವಾಲಿದ ಎಷ್ಟೋ ಜನ ಕಂಡು ಬರುತ್ತಿದ್ದಾರೆ. ಅವರ ಸಾಲಿನಲ್ಲಿ ರಾಯಚೂರಿನಲ್ಲಿ ಡಿಸಿಯಾಗಿದ್ದ ಪೆರುಮಾಳರು ಒಬ್ಬರು ಎಂಬುದು ಗಮನಾರ್ಹ.

## ಪಕ್ಷ ಮುನ್ನಡೆಸಲು ಮತ್ತೊಮ್ಮೆ ಅವಕಾಶ ಸಿಗುವ ವಿಶ್ವಾಸವಿದೆ

• **ಉದಯವಾಹಿನಿ, ಮಾನ್ವಿ**

ಹಿರಿಯರು ಮತ್ತೊಮ್ಮೆ ಆಶೀರ್ವಾದ ಮಾಡಿ ಪಕ್ಷ ಮುನ್ನಡೆಸಲು ಅವಕಾಶ ಕೊಡುತ್ತಾರೆ ಎನ್ನುವ ವಿಶ್ವಾಸವಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ತಿಳಿಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಬದಲಾವಣೆ ಕುರಿತು ಶಾಸಕ ಬಸನಗೌಡ ಯತ್ನಾಳ ಹೇಳಿಕೆಗೆ ಪ್ರತಿಕ್ರಿಯಿಸಿದರು. ಬಿಜೆಪಿ ಆಂತರಿಕ ಪ್ರಜಾಪ್ರಭುತ್ವ ಇರುವಂತಹ ರಾಜಕೀಯ ಪಕ್ಷವಾಗಿದೆ. ರಾಷ್ಟ್ರೀಯ ಪಕ್ಷದ ಹಿರಿಯರು ಆಶೀರ್ವಾದ ಮಾಡಿ ಜವಾಬ್ದಾರಿ ಕೊಟ್ಟಿದ್ದಾರೆ. ಕಳೆದೊಂದು ವರ್ಷದಿಂದ ನನಗೆ ವಹಿಸಿದ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಿಕೊಂಡು ಬಂದಿದ್ದೇನೆ. ಮತ್ತೊಮ್ಮೆ ಎಲ್ಲಾರನ್ನು ಒಗ್ಗೂಡಿಸಿಕೊಂಡು ಕೆಲಸ ಮಾಡುವ ಅವಕಾಶ ಸಿಗುತ್ತದೆ ಎನ್ನುವ ವಿಶ್ವಾಸವಿದೆ ಎಂದರು. ರಾಜಿನಾಮೆಗೆ ಯತ್ನಾಳ್ ಆಗ್ರಹ ಮಾಡಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಯತ್ನಾಳ್‌ಗೆ ಎಲ್ಲಾ ಒಳ್ಳೆಯದಾಗಲಿ, ಭಗವಂತ ಅವರಿಗೆ ಒಳ್ಳೆಯದು ಮಾಡಲಿ ಎಂದು ಕೈ ಮುಗಿದರು.

## ಮುಡಾ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ತಪ್ಪು ಮಾಡಿದ್ದಾರೆ

• **ಉದಯವಾಹಿನಿ, ಬೆಳಗಾವಿ**

ಹಗರಣ ಬಂದಮೇಲೆ ಎಷ್ಟೋ ದಿನಗಳ ನಂತರ ಮುಡಾ ಆಸ್ತಿಗಳು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಮುಡಾ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ತಪ್ಪು ಮಾಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಹೇಳಿದರು. ಯಾವುದೇ ಷರತ್ತಿಲ್ಲದೆ ಸಿದ್ಧರಾಮಯ್ಯ ಆಸ್ತಿ ಹಸ್ತಾಂತರ ಮಾಡಿದ್ದಾರೆ. ಇಡಿ ಪ್ರಕಟಿಸಿದ ತನಿಖೆಯಲ್ಲಿ ಸಿದ್ದರಾಮಯ್ಯ ಅಲ್ಲದೇ ಬೇರೆ ಬೇರೆ ಸೈಟ್ ಗಳನ್ನು ಮುಟ್ಟುಗೋಲು ಹಾಕಿಕೊಂಡಿದ್ದಾರೆ. ಇದರಲ್ಲಿ ರಾಜಕಾರಣ ಇಲ್ಲ, ಕಾನೂನು ಪ್ರಕಾರ ಇಡಿ ಕೆಲಸ ಮಾಡುತ್ತಿದೆ ಎಂದರು. ಸಿಎಂ ಸಿದ್ದರಾಮಯ್ಯ ಇವತ್ತಲ್ಲ, ನಾಳೆ ರಾಜೀನಾಮೆ ಕೊಡುವ ಪರಿಸ್ಥಿತಿ ಎದುರಾಗುತ್ತದೆ. ಸಿದ್ದರಾಮಯ್ಯ ಯಾವಾಗ ಬೇಕಾದರೂ ರಾಜೀನಾಮೆ ಕೊಡುವ ಪರಿಸ್ಥಿತಿ ಬರುತ್ತದೆ. ರಾಜ್ಯ ಕಾಂಗ್ರೆಸ್ ನಲ್ಲಿ ಅರಾಜಕತೆ ಸೃಷ್ಟಿಯಾಗಲಿದೆ ಎಂದು ಭವಿಷ್ಯ ನುಡಿದರು. ರಾಜ್ಯ ಸರ್ಕಾರದ ಹಣ ಖರ್ಚು ಮಾಡಿ ಗಾಂಧಿ ಭಾರತ ಸಮಾವೇಶ ಮಾಡುತ್ತಿದ್ದಾರೆ. ಸಮಾವೇಶದ ಬ್ಯಾನರಗಳಲ್ಲಿ ಕಾಂಗ್ರೆಸ್ ಲೀಡರ್, ಮರಿ ಲೀಡರ್, ಯುವ ಲೀಡರ್ ಬ್ಯಾನರ್ ರಾರಾಜಿಸುತ್ತಿವೆ. ಆದರೆ ಬ್ಯಾನರ್ ಗಳಲ್ಲಿ ಮಹಾತ್ಮಾ ಗಾಂಧಿಜಿ ಫೋಟೋ ದುರ್ಬಿನು ಹಿಡಿದು ನೋಡಬೇಕು ಎಂದು ಜಗದೀಶ್ ಶೆಟ್ಟರ್ ವ್ಯಂಗ್ಯವಾಡಿದರು.

## ■ ಭಾರೀ ಅಗ್ನಿ ಅವಘಡ ■ ಹೆಚ್ಚು ಟೆಂಟ್‌ಗಳು ಸುಟ್ಟು ಭಸ್ಮ ■ ಬೆಂಕಿ ನಂದಿಸಲು ಹರಸಾಹಸ! ■ ಗ್ಯಾಸ್ ಸಿಲಿಂಡರ್ ಸ್ಫೋಟ ■ ಧಗಧಗಿಸಿದ ಜ್ವಾಲೆ ■ ಹಲವು ಡೇರೆಗಳು ಸುಟ್ಟು ಭಸ್ಮ ■ ಟೆಂಟ್‌ನಲ್ಲಿ ಅಡುಗೆ ಮಾಡುವಾಗ ಬೆಂಕಿ ಹೊತ್ತಿಕೊಂಡಿದೆ ಎಂದು ವರದಿ



# ಪ್ರಯಾಗ ಧಗಧಗ

• **ಉದಯವಾಹಿನಿ, ಉತ್ತರಪ್ರದೇಶ**

ಪ್ರಯಾಗ್‌ರಾಜ್‌ನ ಮಹಾ ಕುಂಭಮೇಳದಲ್ಲಿ ಅಗ್ನಿ ಅವಘಡ ಸಂಭವಿಸಿರುವ ಘಟನೆ ನಡೆದಿದೆ. ಕುಂಭಮೇಳ ಪ್ರದೇಶದ ಸೆಕ್ಟರ್ 19ರಲ್ಲಿ ಎರಡು–ಮೂರು ಸಿಲಿಂಡರ್‌ಗಳು ಸ್ಫೋಟಗೊಂಡಿವೆ. ಸ್ಫೋಟದ ತೀವ್ರತೆಗೆ ಟೆಂಟ್‌ಗಳು ಹೊತ್ತಿ ಉರಿದಿದ್ದು, ಕುಂಭಮೇಳ ಪ್ರದೇಶದ ಸೆಕ್ಟರ್ 20ಕ್ಕೂ ಬೆಂಕಿ ವ್ಯಾಪಿಸಿದೆ. ಸದ್ಯ ಯಾವುದೇ ಸಾವು ನೋವು ಸಂಭವಿಸಿಲ್ಲ. ವಿವೇಕಾನಂದ ಸೇವಾ ಸಮಿತಿಗೆ ಸೇರಿದ 25ಕ್ಕೂ ಹೆಚ್ಚು ಟೆಂಟ್‌ಗಳಿಗೆ ಬೆಂಕಿ ಹತ್ತಿಕೊಂಡಿದೆ. ಟೆಂಟ್‌ಗಳಲ್ಲಿ ಇಟ್ಟಿದ್ದ ಸಿಲಿಂಡರ್‌ಗಳು ಒಂದೊಂದಾಗಿ ಸ್ಫೋಟಗೊಳ್ಳುತ್ತಿರುವುದರಿಂದ ಬೆಂಕಿ ತೀವ್ರತೆ ಹೆಚ್ಚಾಗುತ್ತಿದೆ. ಬೆಂಕಿ ಅವಘಡದಿಂದಾಗಿ ಮಹಾ ಕುಂಭಮೇಳ ಪ್ರದೇಶದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿದೆ. ಟೆಂಟ್‌ನಲ್ಲಿ ಇರುವವರನ್ನು ಅಧಿಕಾರಿಗಳು ದೂರ ಕಳುಹಿಸಿದ್ದಾರೆ. ಸದ್ಯ ಸ್ಥಳಕ್ಕಾಗಮಿಸಿದ 50ಕ್ಕೂ ಹೆಚ್ಚು ಅಗ್ನಿಶಾಮಕ ವಾಹನಗಳಿಂದ ಬೆಂಕಿ ನಂದಿಸಿದ್ದಾರೆ. ಘಟನಾ ಸ್ಥಳಕ್ಕೆ ಸಿಎಂ ಯೋಗಿ ಆದಿತ್ಯನಾಥ್ ಭೇಟಿ ನೀಡಿದ್ದು, ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದಾರೆ. ಮಹಾ ಕುಂಭಮೇಳದ ಸೆಕ್ಟರ್ 19ರಲ್ಲಿ 2 ಸಿಲಿಂಡರ್ ಸ್ಫೋಟದಿಂದ ಅಗ್ನಿ ಅವಘಡ ಸಂಭವಿಸಿದ್ದು, ಹಲವು ಟೆಂಟ್‌ಗಳು ಸುಟ್ಟು ಭಸ್ಮವಾಗಿವೆ. ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಅಖಾರಾ ಪೊಲೀಸ್ ಠಾಣೆಯ ಉಸ್ತುವಾರಿ ಭಾಸ್ಕರ್ ಮಿಶ್ರಾ ತಿಳಿಸಿದ್ದಾರೆ. ಬೆಂಕಿಬಿದ್ದ ಟೆಂಟ್‌ನಲ್ಲಿದ್ದ ಜನರನ್ನು ಸುರಕ್ಷತಾ ದೃಷ್ಟಿಯಿಂದ ಸ್ಥಳಾಂತರಿಸಲಾಗಿದೆ. ಸದ್ಯ ಯಾವುದೇ ಸಾವು ನೋವಾಗಿರುವ ಬಗ್ಗೆ ಮಾಹಿತಿ ಬಂದಿಲ್ಲ.



ಇನ್ನೂ ಮಹಾ ಕುಂಭದಲ್ಲಿ ಬೆಂಕಿ ನಂದಿಸುವ ಘಟನೆಯು ಎಲ್ಲಾರನ್ನೂ ಬೆಚ್ಚಿಬೀಳಿಸಿದೆ. ಆಡಳಿಯ ಮಂಡಳಿಯು ರಕ್ಷಣಾ ಕ್ರಮ ಕೈಗೊಳ್ಳುವ ಜೊತೆಗೆ ಸಂತ್ರಸ್ತರಿಗೆ ಸೂಕ್ತ ಪರಿಹಾರ ಒದಗಿಸಲಿದೆ. ಅಲ್ಲದೇ ಪ್ರತಿಯೊಬ್ಬರ ಸುರಕ್ಷತೆಗಾಗಿ ನಾವು ಗಂಗಾ ದೇವಿಯನ್ನು ಪ್ರಾರ್ಥಿಸುತ್ತೇವೆ ಎಂಬುದಾಗಿ ಕುಂಭಮೇಳ ಆಡಳಿತ ಮಂಡಳಿ ತಿಳಿಸಿದೆ.ಮಹಾ ಕುಂಭಮೇಳ ಸೆಕ್ಟರ್ 19ರ ಗೀತಾ ಪ್ರೆಸ್ ಟೆಂಟ್‌ನಲ್ಲಿ ಭಾನುವಾರ ಸಂಜೆ 4.30ರ ವೇಳೆಗೆ ಬೆಂಕಿ ಕಾಣಿಸಿಕೊಂಡಿದ್ದು, ಸಮೀಪದ 10 ಟೆಂಟ್‌ಗಳಿಗೆ ಬೆಂಕಿ ವ್ಯಾಪಿಸಿದೆ. ಪೊಲೀಸರು ಮತ್ತು ಆಡಳಿತ ತಂಡಗಳು ತ್ವರಿತವಾಗಿ ಸ್ಪಂದಿಸಿದ್ದು, ಬೆಂಕಿಯನ್ನು ನಂದಿಸಲಾಗಿದೆ. ಯಾವುದೇ ಸಾವು–ನೋವುಗಳ ಸಂಭವಿಸಿಲ್ಲ. ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಪ್ರಯಾಗರಾಜ್ ಜಿಲ್ಲಾಧಿಕಾರಿ ರವೀಂದ್ರ ಕುಮಾರ್ ಖಚಿತ ಪಡಿಸಿದ್ದಾರೆ.

> ಹೌದು, ಮಹಾ ಕುಂಭ ಮೇಳದಲ್ಲಿ ಕಠಿಣ ಚಳಿಯ ನಡುವೆಯೂ ಭಕ್ತರು ಉತ್ಸಾಹದಿಂದ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಿದ್ದಾರೆ. ಹರ ಹರ ಮಹಾದೇವ್, ಜೈ ಶ್ರೀ ರಾಮ್ ಮತ್ತು ಜೈ ಗಂಗಾ ಮೈಯಾ ಎಂದು ಘೋಷಣೆ ಕೂಗುತ್ತಾ ಭಕ್ತರು ಸಂಗಮದಲ್ಲಿ ಸ್ನಾನ ಮಾಡಿದ್ದಾರೆ. ನಾನು ಮೊದಲ ಬಾರಿಗೆ ಸಂಗಮದಲ್ಲಿ ಸ್ನಾನ ಮಾಡಿದ್ದೇನೆ.
>
> –ನಿಬಾರ್ ಚೌಧರಿ
> ಉತ್ತರ ಪ್ರದೇಶದ ಬಸ್ತಿ ನಿವಾಸಿ

**1** ಸಿಲಿಂಡರ್ ಸ್ಫೋಟಗೊಂಡು ಮಹಾ ಕುಂಭಮೇಳದಲ್ಲಿ ಭಾರೀ ಅಗ್ನಿ ಅವಘಡ

**2** ಬೆಂಕಿಯ ತೀವ್ರತೆಗೆ ಹಲವು ಡೇರೆಗಳು ಸುಟ್ಟ ಭಸ್ಮ , ಬೆಂಕಿ ನಂದಿಸಲು ಅಗ್ನಿಶಾಮಕ ದಳ ಹರಸಾಹಸ

**3** ಮಹಾ ಕುಂಭಮೇಳದ ಸೆಕ್ಟರ್ 19ರಲ್ಲಿ ಎರಡು ಸಿಲಿಂಡರ್‌ಗಳು ಸ್ಫೋಟಗೊಂಡಿದ್ದರಿಂದ ದುರಂತ

### ಮಹಾ ಕುಂಭಮೇಳಕ್ಕೆ ಕೋಟಿ ಕೋಟಿ ಜನರ ಆಗಮನ

ಇನ್ನು, 45 ದಿನಗಳ ಮಹಾ ಕುಂಭಮೇಳ ಜನವರಿ 13ರಂದು ಪ್ರಾರಂಭವಾಯಿತು ಮತ್ತು ಫೆಬ್ರವರಿ 26ರಂದು ಮಹಾ ಶಿವರಾತ್ರಿಯ ಅಮೃತ ಸ್ನಾನದೊಂದಿಗೆ ಮುಕ್ತಾಯಗೊಳ್ಳಲಿದೆ. ವಿಶ್ವದ ಅತಿ ದೊಡ್ಡ ಕುಂಭಮೇಳಕ್ಕೆ ಸುಮಾರು 45 ಕೋಟಿ ಜನರು ಆಗಮಿಸುವ ನಿರೀಕ್ಷೆಯಿದೆ. ಇದೀಗ ಮೇಳದ ಅವಧಿಗೆ ಜಿಲ್ಲೆಯಾಗಿ ಘೋಷಣೆಯಾಗಿರುವ ಸ್ಥಳದಲ್ಲಿ ಭಾರೀ ಭದ್ರತಾ ವ್ಯವಸ್ಥೆ ಮಾಡಲಾಗಿದೆ. ಇದಲ್ಲದೆ, ದೇಶ ಮತ್ತು ಪ್ರಪಂಚದ ವಿವಿಧ ಭಾಗಗಳಿಂದ ಇಲ್ಲಿಗೆ ಬರುವ ಜನರಿಗೆ ರಾತ್ರಿ- ಆಶ್ರಯ ಮತ್ತು ಆಹಾರದ ವ್ಯವಸ್ಥೆಯನ್ನು ಸಹ ಮಾಡಲಾಗಿದೆ. ಮಹಾ ಕುಂಭಮೇಳವು 144 ವರ್ಷಗಳಿಗೊಮ್ಮೆ ಬರುವುದರಿಂದ ದೊಡ್ಡ ಮಹತ್ವವನ್ನು ಹೊಂದಿದೆ. ಮಹಾಕುಂಭ ಮೇಳದ ವೇಳೆ ಭಾನುವಾರ ಸಿಎಂ ಯೋಗಿ ಆದಿತ್ಯನಾಥ್ ಕೂಡ ಪ್ರಯಾಗ್‌ರಾಜ್‌ಗೆ ಆಗಮಿಸಿದ್ದರು. ಬೆಂಕಿ ಅವಘಡಕ್ಕೂ ಮುನ್ನ ಹೆಲಿಕಾಪ್ಟರ್ ಮೂಲಕ ಮಹಾಕುಂಭ ಪ್ರದೇಶವನ್ನು ಪರಿಶೀಲಿಸಿದ್ದರು.

### ನೂರಾರು ನಾಗಾ ಸಾಧುಗಳ ಸ್ಥಳಾಂತರ

ಉತ್ತರಪ್ರದೇಶದ ಪ್ರಯಾಗ್‌ರಾಜ್ ಮಹಾ ಕುಂಭ ಮೇಳದಲ್ಲಿ ಅಗ್ನಿ ದುರಂತ ಸಂಭವಿಸಿದೆ. ಬೆಂಕಿಯ ಕೆನ್ನಾಲಿಗೆ ಟೆಂಟ್‌ವೊಂದು ಧಗಧಗಿಸಿದೆ. ಬೆಂಕಿಯನ್ನು ನಂದಿಸಲು ಅಗ್ನಿ ಶಾಮಕದಳ ಸಿಬ್ಬಂದಿ ಹರಸಾಹಸ ಪಡುತ್ತಿದ್ದಾರೆ. ಬೆಂಕಿ ಒಂದು ಟೆಂಟ್‌ನಿಂದ ಮತ್ತೊಂದು ಟೆಂಟ್‌ಗೆ ಆವರಿಸಿಕೊಳ್ಳುತ್ತಿದ್ದು, ಸ್ಥಳದಲ್ಲಿ ನೆಲೆಗೊಂಡಿದ್ದ ನೂರಾರು ನಾಗಾ ಸಾಧುಗಳನ್ನು ಸ್ಥಳಾಂತರಿಸಲಾಗುತ್ತಿದೆ. ಚಳಿಗಾಲದಲ್ಲಿ ದೊಡ್ಡ ಮಟ್ಟದಲ್ಲಿ ಬೆಂಕಿ ಹರಡಿಕೊಳ್ಳುತ್ತಿದ್ದು ಆಕಾಶದೆತ್ತರಕ್ಕೆ ದಟ್ಟ ಹೊಗೆ ಕಾಣಿಸಿಕೊಂಡಿದೆ. ಮಹಾ ಕುಂಭ ಮೇಳದಲ್ಲಿ ಭಾಗಿಯಾದ ಭಕ್ತರು ಭಯ ಭೀತರಾಗಿದ್ದಾರೆ. ಬೆಂಕಿ ಅವಘಡದ ದೃಶ್ಯಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿವೆ.



## ಪಿಎಂ ಜನ್ ಮನ್ ಯೋಜನೆಗೆ ಕೆ.ಆರ್.ಪೇಟೆಯ ಪೂವನಹಳ್ಳಿ ಆಯ್ಕೆ

• **ಉದಯವಾಹಿನಿ, ನವದೆಹಲಿ**

**ಆದಿವಾಸಿ ಜನಜಾತಿ ನ್ಯಾಯ ಅಭಿಯಾನ**

ಬುಡಕಟ್ಟು ಸಮುದಾಯದ ಜನರನ್ನು ಮುಖ್ಯವಾಹಿನಿಗೆ ತಂದು, ಅವರನ್ನು ಆರ್ಥಿಕ ಮತ್ತು ಸಾಮಾಜಿಕವಾಗಿ ಸಬಲೀಕರಣ ಮಾಡುವ ನಿಟ್ಟನಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಆದಿವಾಸಿ ಜನಜಾತಿ ನ್ಯಾಯ ಅಭಿಯಾನ (ಪಿಎಂ ಜನ್ ಮನ್ ಯೋಜನೆ) ಕಾರ್ಯಕ್ರಮಕ್ಕೆ ಮಂಡ್ಯ ಲೋಕಸಭೆ ಕ್ಷೇತ್ರದ ಕೆ.ಆರ್.ಪೇಟೆ ತಾಲ್ಲೂಕಿನ ಪೂವನಹಳ್ಳಿ ಗ್ರಾಮವನ್ನು ಆಯ್ಕೆ ಮಾಡಲಾಗಿದೆ. ಈ ವಿಷಯವನ್ನು ಮಂಡ್ಯ ಲೋಕಸಭೆ ಸದಸ್ಯರು ಹಾಗೂ ಕೇಂದ್ರದ ಬೃಹತ್ ಕೈಗಾರಿಕೆ, ಉಕ್ಕು ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ತಿಳಿಸಿದ್ದಾರೆ. ಹಾಗೂ ಈ ಯೋಜನೆಯನ್ನು ಯಶಸ್ವಿಗೊಳಿಸಲು ಅಧಿಕಾರಿಗಳು ಸಮರೋಪದಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಗಂಜಿಗೆರೆ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಪೂವನಹಳ್ಳಿ ಗ್ರಾಮವನ್ನು ಪಿಎಂ ಜನ್ ಮನ್ ಯೋಜನೆಗೆ ಪರಿಗಣಿಸಲಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕಳೆದ ವರ್ಷ ಈ ಯೋಜನೆಯನ್ನು ಘೋಷಿಸಿ ಬುಡಕಟ್ಟು ಸಮುದಾಯದ ಜನರು ವಾಸವಿರುವ ಗ್ರಾಮಗಳನ್ನು ಅಭಿವೃದ್ಧಿಪಡಿಸುವ ಯೋಜನೆಯನ್ನು ಘೋಷಣೆ ಮಾಡಿದ್ದರು. 79,000 ಕೋಟಿಗಳ ಈ ಬೃಹತ್ ಯೋಜನೆಯ ಮೂಲಕ ದೇಶದ 63,000 ಹಳ್ಳಿಗಳನ್ನು ಆಮೂಲಾಗ್ರವಾಗಿ ಅಭಿವೃದ್ಧಿ ಮಾಡುವುದು ಕೇಂದ್ರ ಸರ್ಕಾರದ ಉದ್ದೇಶವಾಗಿದೆ. ಶಿಕ್ಷಣ, ಆರೋಗ್ಯ, ವಸತಿ, ನೈರ್ಮಲ್ಯ, ಮೂಲಸೌಕರ್ಯ, ಶುದ್ಧ ಕುಡಿಯುವ ನೀರು, ಕೌಶಲ್ಯಾಭಿವೃದ್ಧಿ ಸೇರಿದಂತೆ 25ಕ್ಕೂ ಹೆಚ್ಚು ಜನೋಪಯೋಗಿ ಕಾರ್ಯಕ್ರಮಗಳನ್ನು 18 ಇಲಾಖೆಗಳು ಅನುಷ್ಠಾನಕ್ಕೆ ತರುತ್ತವೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.



> ಪಿಆರ್‌ಡಿಐ ಮೂಲಕ ಮನೆ ನಿರ್ಮಾಣ, ಶುದ್ಧ ಕುಡಿಯುವ ನೀರು, ನೈರ್ಮಲ್ಯ, ಆರೋಗ್ಯ, ಪೌಷ್ಠಿಕಾಂಶ ಹೆಚ್ಚಿಸುವ ಜತೆಗೆ ರಸ್ತೆ, ದೂರ ಸಂಪರ್ಕ ಸುಸ್ಥಿರ ಜೀವನಾವಕಾಶಗಳನ್ನು ಕಲ್ಪಿಸುವ ಉದ್ದೇಶದೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಆದಿವಾಸಿಗಳ ಗುಡಿ ಕೈಗಾರಿಕೆಗಳ ಉತ್ಪನ್ನಗಳಿಗೆ ಪ್ರೋತ್ಸಾಹ ನೀಡುವ ಸಲುವಾಗಿ ತರಬೇತಿ ನೀಡಲಾಗುವುದು
>
> –ಕುಮಾರಸ್ವಾಮಿ, ಕೇಂದ್ರ ಸಚಿವ

## ಡಿಕೆ ಶಿವಕುಮಾರ್ 'ಸಿಎಂ' ಆಗಲಿ ಎಂದು 'ತ್ರಿಶೂಲ' ನೀಡಿ ಆಶೀರ್ವದಿಸಿದ ಅರ್ಚಕರು!

• **ಉದಯವಾಹಿನಿ, ಬೆಳಗಾವಿ**



ಜನವರಿ 21ರಂದು ಬೆಳಗಾವಿಯಲ್ಲಿ ಕಾಂಗ್ರೆಸ್ ಸಮಾವೇಶ ನಡೆಯುತ್ತಿದ್ದು, ಈ ಒಂದು ಸಮಾವೇಶದ ಸಿದ್ಧತೆಯನ್ನು ಈಗಾಗಲೇ ಡಿಸಿಎಂ ಡಿಕೆ ಶಿವಕುಮಾರ್ ಅವರು ಪರಿಶೀಲನೆ ನಡೆಸಿದ್ದು ಕಳೆದ ಎರಡು ದಿನಗಳಿಂದ ಬೆಳಗಾವಿಯಲ್ಲಿಯೇ ಠಿಕಾಣಿ ಹೂಡಿದ್ದಾರೆ. ಇದೀಗ ಡಿಕೆ ಶಿವಕುಮಾರ್ ಟೆಂಪಲ್ ರನ್ ಮಾಡಿದ್ದು ಸಮಾವೇಶ ಯಾವುದೇ ತೊಂದರೆ ಇಲ್ಲದೆ ಅತ್ಯಂತ ಸರಳವಾಗಿ ನಡೆಯಲಿ ಎಂದು ದೇವರ ಮೊರೆ ಹೋಗಿದ್ದಾರೆ. ಹೌದು ಡಿಸಿಎಂ ಡಿಕೆ ಶಿವಕುಮಾರ್ ಬೆಳಗಾವಿಯಲ್ಲಿರುವ ಕಪಿಲೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿದ್ದರು. ಈ ವೇಳೆ ತಮ್ಮ ಅಂಗಿ ಬಿಚ್ಚಿ ಸಮಾವೇಶ ಸರಳವಾಗಿ ಯಾವುದೇ ಸಮಸ್ಯೆ ಆಗದೆ, ನಡೆಯಲಿ ಮತ್ತು ಯಶಸ್ವಿಯಾಗಲಿ ಎಂದು ದೇವರಿಗೆ ವಿಶೇಷ ಪೂಜೆ ಹಾಗೂ ಅಭಿಷೇಕ ಮಾಡಿದರು. ಪೂಜೆ ಮುಗಿದ ಬಳಿಕ ಕಪಲೇಶ್ವರ ದೇವಸ್ಥಾನದ ಅರ್ಚಕ ಮಂಜುನಾಥ್ ಅವರು ಮುಂದಿನ ಬಾರಿ ಡಿಕೆ ಶಿವಕುಮಾರ್ ಅವರು ಸಿಎಂ ಆಗಲಿ ಎಂದು ಅವರಿಗೆ ತ್ರಿಶೂಲ ನೀಡಿ ಆಶೀರ್ವದಿಸಿದರು. ಡಿಕೆ ಶಿವಕುಮಾರ್ ಅರ್ಚಕರಿಂದ ಸನ್ಮಾನ ಸ್ವೀಕರಿಸಿ ಆಶೀರ್ವಾದ ಪಡೆದರು.



## ವಿಜಯೇಂದ್ರ ವಿರುದ್ಧ ಮತ್ತೆ ಗುಡುಗಿದ ಯತ್ನಾಳ್

• **ಉದಯವಾಹಿನಿ, ಬಿಜಾಪುರ**

ಯಾವುದೇ ಕಾರಣಕ್ಕೂ ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ನಾಯಕತ್ವವನ್ನು ಒಪ್ಪಿಕೊಳ್ಳುವುದಿಲ್ಲ ಎಂದು ಗುಡುಗಿರುವ ಭಿನ್ನಮತೀಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾಜಿ ಸಿಎಂ ಯಡಿಯೂರಪ್ಪನವರನ್ನು ಜೈಲಿಗೆ ಕಳುಹಿಸಿದವರನ್ನು ನಾವು ಒಪ್ಪಿಕೊಳ್ಳಬೇಕೇ ಎಂದು ಪ್ರಶ್ನಿಸಿದ್ದಾರೆ. ಪಕ್ಷದ ವಿಚಾರ ಬಂದಾಗ ನಾನು ಯಾವಾಗಲೂ ಪಕ್ಷ ನಿಷ್ಠೆಯಾಗಿ ರುತ್ತೇನೆ. ಆದರೆ ನಾಯಕತ್ವ ವಿಚಾರ ಬಂದಾಗ ವಿಜಯೇಂದ್ರ ಅವರನ್ನು ಒಪ್ಪಿಕೊಳ್ಳಲು ಸಾಧ್ಯವೇ ಇಲ್ಲ. ಮೊದಲು ಅವರು ತಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಬೇರೆಯವರ ಬಗ್ಗೆ ಮಾತನಾಡಲಿ ಎಂದು ಏಕವಚನದಲ್ಲೇ ವಾಗ್ದಾಳಿ ನಡೆಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆ ಕೇಳುವ ವಿಜಯೇಂದ್ರ ಮೊದಲು ರಾಜ್ಯಾಧ್ಯಕ್ಷ ಸ್ಥಾನ ಬಿಟ್ಟುಕೊಡಬೇಕು. ಯಾವುದೇ ಕಾರಣಕ್ಕೂ ಅವರ ನಾಯಕತ್ವವನ್ನು ನಾವು ಒಪ್ಪಿಕೊಳ್ಳುವುದಿಲ್ಲ.

ನಮ್ಮ ನಿಲುವನ್ನು ನಾವು ಈಗಾಗಲೇ ವರಿಷ್ಠರ ಬಳಿ ಸ್ಪಷ್ಟಪಡಿಸಿದ್ದೇವೆ ಎಂದು ಹೇಳಿದರು. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಅವರ ನಕಲಿ ಸಹಿಗಳನ್ನು ಹಾಕುತ್ತಿದುದ್ದೇ ವಿಜಯೇಂದ್ರ, ಹೀಗಾಗಿಯೇ ಯಡಿಯೂರಪ್ಪರು ಜೈಲಿಗೆ ಹೋಗಬೇಕಾಯಿತು. ಇಂಥ ಗುಣಗಳನ್ನು ಹೊಂದಿರುವ ವಿಜಯೇಂದ್ರನನ್ನು ನಾವು ಅಧ್ಯಕ್ಷ ಎಂದು ಒಪ್ಪಿಕೊಳ್ಳಲು ಸಾಧ್ಯವೇ ಎಂದು ಪ್ರಶ್ನೆ ಮಾಡಿದರು.

ಯಡಿಯೂರಪ್ಪನವರಿಗೆ ಅವರ ಮನೆಯಲ್ಲೇ ಕಿಮತ್ತಿಲ್ಲ, ವಿಜಯೇಂದ್ರ ಹೊರಗಡೆ ಪೂಜ್ಯ ತಂದೆ, ಮನೆಯಲ್ಲಿ ಮುದಿಯಾ ಎಂದು ಕರೆಯುತ್ತಾನೆ.

ಯಡಿಯೂರಪ್ಪ ಮೊದಲು ಮಗನ ವ್ಯಾಮೋಹ ಬಿಡಲಿ. ಯಡಿಯೂರಪ್ಪ ಕೂಡ ಎಷ್ಟು ಜನರಿಗೆ ಮೋಸ ಮಾಡಿಲ್ಲ. ಮಾಜಿ ರಾಜ್ಯಾಧ್ಯಕ್ಷ ಬಿ.ಬಿ.ಶಿವಪ್ಪ, ಮಲ್ಲಿಕಾರ್ಜುನಯ್ಯ ಅವರಿಗೆ ಅನ್ಯಾಯ ಮಾಡಿದ್ದಾರೆ. ತಮ್ಮ ಸ್ವಾರ್ಥಕ್ಕಾಗಿ ಅನೇಕರನ್ನು ಮಣ್ಣಲ್ಲಿ ಇಟ್ಟಿದ್ದಾರೆ. ಸುಮ್ಮನೇ ಮೊಮಕ್ಕಳ ಜೊತೆ ಆಟ ಆಡುತ್ತಾ ಕೂಡಲಿ ಎಂದು ವಾಗ್ದಾಳಿ ನಡೆಸಿದರು. ನಮ್ಮ ವಿರುದ್ಧ ಎರಡು ಹಂದಿ ಗಳು ಬಿಟ್ಟರೆ ಬೇರೆ ಯಾರೂ ಮಾತನಾಡುವುದಿಲ್ಲ. ಆ ಹಂದಿಗಳಿಗೆ ನಾವು ತಲೆಕೆಡಿಸಿಕೊಳ್ಳುವುದಿಲ್ಲ.

**ವಿಜಯೇಂದ್ರ ಪರ ಹೊಗಳು ಭಟರು ಮಾತ್ರ ಮಾತನಾಡುತ್ತಾರೆ ಎಂದು ವ್ಯಂಗ್ಯವಾಡಿದರು. ನಾನು ಸದಾಕಾಲ ರಮೇಶ್ ಜಾರಕಿಹೊಳಿ ಪರವಾಗಿದ್ದೇನೆ. ವಿಜಯೇಂದ್ರ ರಾಜ್ಯಾಧ್ಯಕ್ಷನಾಗಲು ಲಾಯಕ್ಕಿಲ್ಲ. ಅವನನ್ನು ನಾವ್ಯಾರು ಒಪ್ಪಲ್ಲ ಅವನು ಕೂಡ ರಾಜೀನಾಮೆ ಕೊಡಬೇಕು. ಇವನಿಂದಲೇ ಸುನೀಲ್ಕುಮಾರ್ ಕಾರ್ಯದರ್ಶಿ ಸ್ಥಾನದಿಂದ ಬಿಡುಗಡೆಗೊಳಿಸುವಂತೆ ಕೋರಿದ್ದಾರೆ. ರಮೇಶ್ ಜಾರಕಿಹೊಳಿ ಅವರು ಮಾತನಾಡಿರುವುದರಲ್ಲಿ ತಪ್ಪೇನಿಲ್ಲ. ನಾವು ಉತ್ತರ ಕರ್ನಾಟಕದ ಜನರು ಹೀಗೇ, ಸತೀಶ್ ಜಾರಕಿಹೊಳಿ ಅವರು ಹೇಳಿದ್ದಾಗ ಕೂಡ ನಾನು ಒಬ್ಬನೆ ಹೋಗಿದ್ದೆ. ನಾವು ಯಾರಿಗೂ ಹೆದರುವುದಿಲ್ಲ ಎಂದು ಕಿಡಿಕಾರಿದರು.**

### ತಾರಕಕ್ಕೇರಿದ ಬಿಜೆಪಿ ನಾಯಕರ ಕಚ್ಚಾಟ

ರಾಜ್ಯ ಬಿಜೆಪಿಯಲ್ಲಿ ಬಣ ಕಚ್ಚಾಟ ತೀವ್ರಗೊಂಡಿದ್ದು, ವಸ್ತುಸ್ಥಿತಿ ವರದಿ ಪಡೆಯಲು ರಾಜ್ಯಕ್ಕೆ ಬಿಎಲ್ ಸಂತೋಷ್ ಎಂಟ್ರಿ ಕೊಟ್ಟಿದ್ದಾರೆ. ರಾಜ್ಯ ಘಟಕ ಅಧ್ಯಕ್ಷ ಸ್ಥಾನದ ಚುನಾವಣೆ ಸಮೀಪ ಪರಿಸ್ಥಿತಿ ಕೈ ಮೀರಿದ್ದು ವಸ್ತುಸ್ಥಿತಿ ಪಡೆಯಲು ಬಿಎಲ್ ಸಂತೋಷ್ ರಾಜ್ಯಕ್ಕೆ ಬಂದಿದ್ದಾರೆ. 6. 6 ಈ ಮಧ್ಯೆ ಪ್ರಧಾನ ಕಾರ್ಯದರ್ಶಿ ಹುದ್ದೆಯಿಂದ ಸುನಿಲ್ ಕುಮಾರ್ ವಿಮುಕ್ತಿ ಕೇಳೋ ಮೂಲಕ ನಾಯಕರಿಗೆ ಶಾಕ್ ಕೊಟ್ಟಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ಸಮೀಪಿಸುತ್ತಿದೆ. ಈ ಚುನಾವಣೆ ಪಕ್ಷದೊಳಗಿನ ಬಣಗಳ ಮಧ್ಯೆ ಬಲ ಪ್ರದರ್ಶನಕ್ಕೆ ವೇದಿಕೆ ಆಗುವ ಎಲ್ಲಾ ಮುಚ್ಚಲಾಗದಷ್ಟು ಹೆಚ್ಚಾಗಿದ್ದು ಆಂತರಿಕ ಕಚ್ಚಾಟ ಉಲ್ಬಣಗೊಂಡಿದೆ. ಲಕ್ಷಣಗಳೂ ಈಗಿಂದಲೇ ಕಾಣಿಸುತ್ತಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,111 /Gram24ct ₹7,435/Gram22ct | ಬೆಳ್ಳಿ: ₹96.50/Gram

# ಸಿಎಂ ಸಿದ್ದರಾಮಯ್ಯ ರಾಜೀನಾಮೆ ಕೊಡಲಿ: ಯದುವೀರ್

## ತನಿಖೆ ಬಳಿಕವೇ ತಪ್ಪಿತಸ್ಥರಲ್ಲ ಎಂದರೆ ಅಧಿಕಾರಕ್ಕೆ ಬರಲಿ, ಸದ್ಯಕ್ಕೆ ಅವರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಿ

• ಉದಯವಾಹಿನಿ, ಮೈಸೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹಿಸಿದರು.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸಿಎಂ ತವರು ಜಿಲ್ಲೆಯಲ್ಲಿ ಹಗರಣ ನಡೆದಿದೆ. ಸಿಎಂ ಸಿದ್ದರಾಮಯ್ಯ ಹೆಸರು ಪ್ರಕರಣದಲ್ಲಿ ತಳಕು ಹಾಕಿಕೊಂಡಿದೆ. ಮೊದಲ ದಿನದಿಂದಲೂ ನಾವು ರಾಜೀನಾಮೆ ಕೇಳುತ್ತಿದ್ದೇವೆ. ಕಾಂಗ್ರೆಸ್ ಸರ್ಕಾರ ಕೂಡಲೇ ರಾಜೀನಾಮೆ ಪಡೆದುಕೊಳ್ಳಬೇಕು. ತನಿಖೆ ಬಳಿಕವೇ ತಪ್ಪಿತಸ್ಥರಲ್ಲ ಎಂದರೆ ಅಧಿಕಾರಕ್ಕೆ ಬರಲಿ. ಸದ್ಯಕ್ಕೆ ಅವರ ವಿರುದ್ಧ ಅಗತ್ಯ ಕ್ರಮಕೈಗೊಳ್ಳಬೇಕು. ಮುಡಾ ಹಗರಣ ಪ್ರಕರಣ ಸದ್ಯಕ್ಕೆ ಇಲ್ಲಿಗೆ ವಿಚಾರಣೆ ಮುಗಿಯುವುದಿಲ್ಲ. ಸೈಟ್ ವಾಪಸ್ ನೀಡಿದ ಬಳಿಕ ತಪ್ಪಾಗಿರುವುದನ್ನು ಸಿಎಂ ಒಪ್ಪಿಕೊಂಡಿದ್ದಾರೆ. ಬಿಜೆಪಿಯ ಹೋರಾಟ ಮತ್ತಷ್ಟು ನಿರಂತರವಾಗಿ ನಡೆಯಲಿದೆ. ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಿ ತನಿಖೆ ಎದುರಿಸಲಿ. ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ ಎಂದರು. ರಾಜ್ಯಾಧ್ಯಕ್ಷರು ಕ್ರಮಕೈಗೊಳ್ಳುತ್ತಾರೆ. ಸದ್ಯಕ್ಕೆ ಪ್ರತಾಪ್ ಸಿಂಹ ಅವರು ಭಿನ್ನಾಭಿಪ್ರಾಯಗಳನ್ನ ದೂರ ಇರಿಸಲಿ. ಪಕ್ಷಕ್ಕೆ ಧಕ್ಕೆ ಬಾರದ ರೀತಿ ಕಾರ್ಯಚಟುವಟಿಕೆಯಲ್ಲಿ ಪಾಲ್ಗೊಳ್ಳಲಿ ಎಂದು ತಿಳಿಸಿದರು.



ಬೆಂಗಳೂರು ಅರಮನೆ ಟಿಡಿಆರ್ ವಿಚಾರ ಕುರಿತು ಪ್ರತಿಕ್ರಿಯಿಸಿದ ಸಂಸದ ಯದುವೀರ್, ಮೊದಲಿನಿಂದಲೂ ಅರಮನೆ ಗುರಿ ಆಗಿದೆ. ಸಿಎಂ ಸಿದ್ದರಾಮಯ್ಯ ಅವರು ಉಪ ಮುಖ್ಯಮಂತ್ರಿ ಯಾದಾಗ ಆರಂಭವಾಯಿತು. ಅಂದಿನಿಂದಲೂ ಇದು ಮುಂದುವರಿದುಕೊಂಡು ಬಂದಿದೆ. ಈ ಕುರಿತು ತಾಯಿ ಪ್ರಮೋದಾದೇವಿ ಒಡೆಯರ್ ಅವರು ಕಾನೂನು ಸಮರ ನಡೆಸುತ್ತಾರೆ. ಅರಮನೆ ಆಸ್ತಿ ರಕ್ಷಣೆ ವಿಚಾರದಲ್ಲಿ ಕ್ರಮಕೈಗೊಳ್ಳುತ್ತಾರೆ ಎಂದರು. ಇನ್ನಾದರೂ ಸಿಎಂ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ ಎಂದು ಒತ್ತಾಯಿಸಿದರು. ದೂರು ವಿಚಾರ ಕುರಿತು ಮಾತನಾಡಿ, ಪ್ರತಾಪ್ ಸಿಂಹ ವಿರುದ್ಧ ಕಾರ್ಯಕರ್ತರು ದೂರು ನೀಡಿರೋದು ನಿಜ. ರಾಜ್ಯಾಧ್ಯಕ್ಷ ವಿಜಯೇಂದ್ರ ಅವರಿಗೂ ದೂರು ನೀಡಿದ್ದಾರೆ. ಪಕ್ಷದಲ್ಲಿ ಗೊಂದಲವಿಲ್ಲ ಆದರೆ ಸಣ್ಣ ಪುಟ್ಟ ವ್ಯತ್ಯಾಸವಿದೆ. ಪಕ್ಷದಿಂದ ಪ್ರತಾಪ್ ಸಿಂಹ ದೂರವಿಲ್ಲ. ನಾವು ಮಾತನಾಡುತ್ತೇವೆ. ಪಕ್ಷದ ಚೌಕಟ್ಟನ್ನು ಯಾರು ಮೀರಬಾರದು. ಪಕ್ಷದ ಸಭೆಯಲ್ಲಿ ಅವರು ಕೂಡ ಭಾಗಿಯಾಗುತ್ತಿದ್ದಾರೆ.

ಕೆಲ ಹೋರಾಟಗಳನ್ನು ಪ್ರತ್ಯೇಕವಾಗಿ ಮಾಡುತ್ತಿದ್ದಾರೆ. ಈ ಬಗ್ಗೆ ನಾನು ಪ್ರತಾಪ್ ಸಿಂಹ ಜೊತೆ ಮಾತನಾಡುತ್ತೇನೆ. ಸಣ್ಣಪುಟ್ಟ ಸಮಸ್ಯೆ ಇದ್ದರೆ ಬಗೆಹರಿಸುತ್ತೇವೆ ಎಂದು ಹೇಳಿದರು.

> ಮಾಜಿ ಸಂಸದ ಪ್ರತಾಪಸಿಂಹ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೆ ಬಿಜೆಪಿ ಕಾರ್ಯಕರ್ತರು ದೂರು ನೀಡಿರುವ ಕುರಿತು ಪ್ರತಿಕ್ರಿಯಿಸಿ ಮಾಜಿ ಸಂಸದ ಪ್ರತಾಪಸಿಂಹ ಅವರು ಪಕ್ಷದ ತತ್ವ ಸಿದ್ಧಾಂತದ ಪ್ರಕಾರ ನಡೆದುಕೊಳ್ಳಲಿ. ಪ್ರತಾಪಸಿಂಹ ಅವರ ಇತ್ತೀಚಿನ ನಡೆಗೆ ಬೇಸರ ವ್ಯಕ್ತವಾಗಿದೆ. ಕಳೆದ ಮೂರು ನಾಲ್ಕು ತಿಂಗಳಿಂದ ಅವರು ಸರಿಯಾಗಿ ನಡೆದುಕೊಳ್ಳುತ್ತಿಲ್ಲ. ಸಹಜವಾಗಿಯೇ ಕಾರ್ಯಕರ್ತರಿಗೆ ಅದು ಬೇಸರ ತರಿಸಿದೆ. ಪಕ್ಷದ ನಿಷ್ಠಾವಂತ ಕಾರ್ಯಕರ್ತರು ವರಿಷ್ಠರಿಗೆ ದೂರು ನೀಡಿದ್ದಾರೆ.

### ಇಡಿ ಪ್ರೆಸ್ ರಿಲೀಸ್‌ನಲ್ಲಿ ಅಕ್ರಮ

ಮುಡಾ ಆಸ್ತಿಯನ್ನು ಇಡಿ ಮುಟ್ಟುಗೋಲು ಹಾಕಿಕೊಂಡ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಲಿ. ಮುಡಾದಲ್ಲಿ ಸಾಕಷ್ಟು ಅವ್ಯವಹಾರ ಆಗಿದೆ. ಈ ಬಗ್ಗೆ ಸಿಬಿಐ ತನಿಖೆ ಆಗಬೇಕು. ಇಡಿ ಪ್ರೆಸ್ ರಿಲೀಸ್‌ನಲ್ಲಿ ಅಕ್ರಮ ಎಂದು ಹೇಳಿದೆ. ಅಲ್ಲದೆ ಆಸ್ತಿಯನ್ನು ಕೂಡ ಮುಟ್ಟುಗೋಲು ಹಾಕಿಕೊಂಡಿದೆ.

# ರಸ್ತೆ ಸುರಕ್ಷತಾ ನಿಯಮ ಪಾಲಿಸಿ: ವಿವೇಕಾನಂದ ಮನವಿ

• ಉದಯವಾಹಿನಿ, ಚಿಂತಾಮಣಿ

ವಾಹನಗಳ ಮಾಲೀಕರು ಹಾಗೂ ಚಾಲಕರು ಕಡ್ಡಾಯವಾಗಿ ರಸ್ತೆ ಸುರಕ್ಷಾ ನಿಯಮಗಳನ್ನು ಪಾಲಿಸುವ ಮೂಲಕ ಅಪಘಾತಗಳನ್ನು ತಡೆಗಟ್ಟಲು ಸಹಕಾರ ನೀಡಬೇಕು ಎಂದು ಪ್ರಾದೇಶಕ ಸಾರಿಗೆ ಅಧಿಕಾರಿ ವಿವೇಕಾನಂದ ಮನವಿ ಮಾಡಿದರು.ರಾಜ್ಯ ಸಾರಿಗೆ ಸಂಸ್ಥೆಯ ಬಸ್ ಘಟಕದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸ ಹಾಗೂ ಇಂಧನ ಉಳಿತಾಯ ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.ಸರ್ಕಾರದ ಆದೇಶದಂತೆ ಪ್ರತಿವರ್ಷವೂ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹವನ್ನು ಆಚರಿಸಲಾಗುತ್ತದೆ. ಒಂದು ತಿಂಗಳು ವಿವಿಧ ಚಟುವಟಿಕೆಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತದೆ.

ವಾಹನ ಮಾಲೀಕರಿಗೆ ಮತ್ತು ಚಾಲಕರಿಗೆ ಹೆಚ್ಚಿನ ಆದ್ಯತೆ ನೀಡಿ ಜಾಗೃತಿ ಮೂಡಿಸಲಾಗುತ್ತದೆ. ಅನೇಕ ಅಪಘಾತಗಳು ಮಾನವನ ತಪ್ಪುಗಳಿಂದಲೇ ನಡೆಯುತ್ತವೆ. ಅಮಾಯಕರು ಜೀವ ಕಳೆದುಕೊಂಡು ಕುಟುಂಬದವರನ್ನು ಬೀದಿಪಾಲು ಮಾಡುತ್ತಾರೆ ಎಂದು ಹೇಳಿದರು. ಚಾಲಕರು ರಸ್ತೆ ನಿಯಮಗಳನ್ನು, ಸಂಚಾರಿ ಚಿಹ್ನೆಗಳನ್ನು ಚೆನ್ನಾಗಿ ಅರಿತುಕೊಳ್ಳಬೇಕು. ಬೇಜವಾಬ್ದಾರಿ ಅಥವಾ ನಿರ್ಲಕ್ಷ್ಯ ತೋರದೆ ನಿಯಮ ಪಾಲನೆ ಮಾಡಬೇಕು. ದ್ವಿಚಕ್ರವಾಹನ ಸವಾರರು ಹೆಲ್ಮೆಟ್ ಧರಿಸಬೇಕು. ಸಂಚಾರ ನಿಯಮಗಳನ್ನು ಪಾಲನೆ ಮಾಡುವುದರಿಂದ ಸಾಕಷ್ಟು ಅಪಘಾತಗಳನ್ನು ತಡೆಗಟ್ಟಬಹುದು ಎಂದು ಅಭಿಪ್ರಾಯಪಟ್ಟರು.


ಉದಯವಾಹಿನಿ ಚಿತ್ರ

ಡಿವೈಎಸ್ಪಿ ಪಿ.ಮುರಳೀಧರ್ ಮಾತನಾಡಿ, ಚಾಲಕರು ಜಾಗರೂಕರಾಗಿರಬೇಕು. ಕಡ್ಡಾಯವಾಗಿ ವಿಮೆ ಮಾಡಿಸಿರಬೇಕು ಎಂದು ಸಲಹೆ ನೀಡಿದರು.

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಜಿಲ್ಲಾಧಿಕಾರಿ ಬಸವರಾಜ್, ನಗರ ಠಾಣೆ ಇನ್‌ಸ್ಪೆಕ್ಟರ್ ವಿಜಿಕುಮಾರ್, ಘಟಕದ ವ್ಯವಸ್ಥಾಪಕಿ ಸರಿತಾ ಭಾಗವಹಿಸಿದ್ದರು.

# ಗಮಕ ಕಲೆಯು ಮನುಷ್ಯನನ್ನು ಸನ್ಮಾರ್ಗದಲ್ಲಿ ಕೊಂಡೊಯ್ಯುತ್ತದೆ

• ಉದಯವಾಹಿನಿ, ಚಾಮರಾಜನಗರ

ಗಮಕ ಕಲೆ ಅಮರವಾದದ್ದು. ಗಮಕ ಕಲೆಯು ಮನುಷ್ಯನನ್ನು ಸನ್ಮಾರ್ಗದಲ್ಲಿ ಕೊಂಡೊಯ್ಯುತ್ತದೆ. ಕನ್ನಡ ಸಾಹಿತ್ಯ ಲೋಕದಲ್ಲಿ ಗಮಕ ಕಲೆಯನ್ನು ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಗಮಕಿ ಹಾಗೂ ವೈದ್ಯರಾದ ಡಾ. ಉಮಾರಾಣಿ ತಿಳಿಸಿದರು.

ಅವರು ಕರ್ನಾಟಕ ಗಮಕಕಲಾ ಪರಿಷತ್ತು ಬೆಂಗಳೂರು ಮತ್ತು ಚಾಮರಾಜನಗರ ಜಿಲ್ಲಾ ಗಮಕ ಕಲಾ ಪರಿಷತ್ತು, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ ಕುಮಾರವ್ಯಾಸ ಜಯಂತಿ ಹಾಗೂ ಗಮಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ಕನ್ನಡದ ಮಹತ್ವದ ಕವಿ ಕುಮಾರವ್ಯಾಸರು. ಕರ್ನಾಟಕ ಭಾರತ ಕಥಾಮಂಜರಿ ರಚಿಸಿ ಕನ್ನಡ ಸಾಹಿತ್ಯದಲ್ಲಿ ಬಹುದೊಡ್ಡ ಕ್ರಾಂತಿಯನ್ನೇ ಮಾಡಿದವರು.

ಉದಯವಾಹಿನಿ ಚಿತ್ರ



ಅಧ್ಯಕ್ಷತೆಯನ್ನು ಚಾಮರಾಜನಗರ ಜಿಲ್ಲಾ ಗಮಕಕಲಾ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ್ ಎನ್ ಋಗ್ವೇದಿ ಮಾತನಾಡಿ, ಗಡಿ ಜಿಲ್ಲೆ ಚಾಮರಾಜನಗರ ಗಮಕದ ತವರೂರು. ತಿಪಟೂರು ರಾಮಸ್ವಾಮಿ, ಸುಂದರ ರಾಜನ್, ರಾಮಸಮುದ್ರ ರಾಮದಾಸ್, ವಿಜಯಲಕ್ಷ್ಮಿ, ನಾಗೇಶ್ ರಾವ್, ಗಮಕಿ ಸುಬ್ರಹ್ಮಣ್ಯಂ. ವರದರಾಜು, ಜಯರಾಮ್ ಮುಂತಾದ ಶ್ರೇಷ್ಠ ಗಮಕ ವಿದ್ವಾಂಸರು ನೆಲೆಸಿದ್ದ ಪ್ರದೇಶವಾಗಿತ್ತು. ಇತ್ತೀಚಿನ ವರ್ಷಗಳಲ್ಲಿ ಗಮಕಕಲೆ ಯುವ ಜನಾಂಗವನ್ನು ತಲುಪುತ್ತಿಲ್ಲ. ಕರ್ನಾಟಕ ಗಮಕಲಾ ಪರಿಷತ್ತು ಜಿಲ್ಲಾ ಘಟಕ ಅಸ್ತಿತ್ವಕ್ಕೆ ಬಂದಿದ್ದು ಗಮಕಕಲೆ ಬೆಳೆಸುವ ದಿಕ್ಕಿನಲ್ಲಿ ಯೋಜನೆಗಳು ರೂಪಿಸಿ ಗಮಕ ಕಲೆಯನ್ನು ಬೆಳೆಸುವ ದಿಕ್ಕಿನಲ್ಲಿ ನಮ್ಮೆಲ್ಲರ ಪ್ರಯತ್ನ ಬಹಳ ಮುಖ್ಯವಾಗಿದೆ ಎಂದು ತಿಳಿಸಿದರು.

### ಸಭಿಕರಿಗೆ ಬಹಳ ಆನಂದ

ಗದುಗಿನ ವೀರನಾರಾಯಣ ಸ್ವಾಮಿಯ ಭಕ್ತರಾಗಿದ್ದವರು. ಚಾಮರಾಜನಗರ ಜಿಲ್ಲೆಯಲ್ಲಿ ಗಮಕಕಲೆ ಬಹಳ ಪ್ರಸಿದ್ಧಿ ಪಡೆದಿತ್ತು. ವಿದ್ಯಾರ್ಥಿಗಳು, ಯುವಕರಲ್ಲಿ ಗಮಕ ಕಲೆಯನ್ನು ಬೆಳೆಸುವ ದಿಕ್ಕಿನಲ್ಲಿ ಜಿಲ್ಲಾ ಗಮಕ ಕಲಾ ಪರಿಷತ್ತು ಉತ್ತಮ ಕಾರ್ಯಕ್ರಮಗಳನ್ನು ರೂಪಿಸಲಿ ಎಂದು ತಿಳಿಸಿದರು. ಗಮಕಿ ವಿಜಯಲಕ್ಷ್ಮಿ, ಗಮಕಿ ವೀರಶೆಟ್ಟಿರವರು ಕುಮಾರವ್ಯಾಸ ರಚಿತ ಕರ್ನಾಟ ಭಾರತ ಕಥಾಮಂತರಿಯ ಅನೇಕ ಪದ್ಯಗಳನ್ನು ವಾಚಿಸಿದರು. ಗಮಕವಾಚನವು ಸಭಿಕರಿಗೆ ಬಹಳ ಆನಂದವನ್ನು ತಂದಿತು.

# ನಿತ್ಯವೂ ಪುಣ್ಯಸ್ನಾನ ಮಾಡುತ್ತೇನೆ: ಸಚಿವ

• ಉದಯವಾಹಿನಿ, ಮೈಸೂರು

ನಾನು ನಿತ್ಯವೂ ಪುಣ್ಯ ಸ್ನಾನ ಮಾಡುತ್ತೇನೆ' ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಹೇಳಿದರು. ಜಿಲ್ಲೆಯ ತಿ. ನರಸೀಪುರದ ಸಂಗಮ ಕ್ಷೇತ್ರದಲ್ಲಿ ಫೆ.10ರಿಂದ 12ರವರೆಗೆ ಕುಂಭಮೇಳ ಆಯೋಜಿಸಲಾಗಿದ್ದು ಅಲ್ಲಿ ಮಠಾಧೀಶರೊಂದಿಗೆ ಪುಣ್ಯಸ್ನಾನ ಮಾಡುತ್ತೀರಾ ಎಂಬ ಪತ್ರಕರ್ತರ ಪ್ರಶ್ನೆಗೆ ಭಾನುವಾರ ಪ್ರತಿಕ್ರಿಯಿಸಿದ ಅವರು, 'ನಾನು ಸ್ನಾನ ಮಾಡಿದಾಗೆಲ್ಲಾ ಪುಣ್ಯ ಬಂದೇ ಬರುತ್ತದೆ' ಎಂದರು.

ನನ್ನ ಮೈಮೇಲೆ ಅಂಟಿರಬಹುದಾದ ರೋಗಾಣುಗಳು, ದೂಳು, ಕಸವೆಲ್ಲಾ ನಿತ್ಯವೂ ಸ್ನಾನ ಮಾಡಿದಾಗ ಹೋಗುತ್ತದೆ. ಆಗ, ನನ್ನ ದೇಹವೆಲ್ಲಾ ಪುಣ್ಯಮಯವಾಗುತ್ತದೆ. ಹೀಗಾಗಿ, ಅದು ನಿತ್ಯವೂ ಪುಣ್ಯಸ್ನಾನವೇ ಎಂದು ಹೇಳಿದರು.



ನಾನು ಶಾಲಾ ವಿದ್ಯಾರ್ಥಿಯಾಗಿದ್ದಾಗ ಕಾಲುವೆಯಲ್ಲಿ, ಕಪಿಲಾ ನದಿಯಲ್ಲಿ ಈಜುತ್ತಿದ್ದೆ. ಈಗ ಈಜುತ್ತಿಲ್ಲ' ಎಂದರು. ಕುಂಭಮೇಳಕ್ಕೆ 10 ಕೋಟಿ ಬೇಕಾಗುತ್ತದೆ ಎಂಬ ಪ್ರಸ್ತಾವವನ್ನು ಜಿಲ್ಲಾಡಳಿತ ಸಲ್ಲಿಸಿದೆ. ಹೋದ ಬಾರಿ 4 ಕೋಟಿಯನ್ನು ಸರ್ಕಾರ ಕೊಟ್ಟಿತ್ತು. ಈ ಬಾರಿ 5ಕೋಟಿಯಿಂದ 6 ಕೋಟಿ ಕೊಡಬಹುದು.

ಮೂರು ದಿನಗಳ ಕಾಲವರೆಗೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬರಲಿದ್ದಾರೆ. ಅವರಿಗೆ ಎಲ್ಲಾ ರೀತಿಯ ಅನುಕೂಲ ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಧಾರ್ಮಿಕ ಆಚರಣೆಗಳಿಗೆ ವೈಯುಕ್ತಿಕ ವಿರೋಧ ಇಲ್ಲ. ಅವರವರ ಧಾರ್ಮಿಕ ನಂಬಿಕೆ, ಆಚರಣೆ ಸಂವಿಧಾನಾತ್ಮಕ ಹಕ್ಕು' ಎಂದರು.

> ಸಿಎಂ ಸಿದ್ದರಾಮಯ್ಯ ಹೆಸರು ಬಳಸಿ ಜಾರಿ ನಿರ್ದೇಶನಾಲಯ ಮಾಧ್ಯಮ ಪ್ರಕಟಣೆ ನೀಡಿರುವುದಕ್ಕೆ ಸಮಾಜ ಕಲ್ಯಾಣ ಸಚಿವ ಹೆಚ್.ಸಿ. ಮಹದೇವಪ್ಪ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ಸರ್ಕಾರ ಮತ್ತು ಸಿದ್ದರಾಮಯ್ಯನವರ ಇಮೇಜ್ ಕುಗ್ಗಿಸುವ ಕುತಂತ್ರವಿದು. ಮುಡಾ ಪ್ರಕರಣದಲ್ಲಿ ಸಿಎಂಗೆ ಕಪ್ಪು ಚುಕ್ಕೆ ತರಲು ಹೀಗೆ ಮಾಡಿದ್ದಾರೆ. ಈ ರೀತಿ ಮಿಸ್ ಲೀಡ್ ಮಾಡುವುದು ಪ್ರಜಾಪ್ರಭುತ್ವಕ್ಕೆ ಮಾರಕ. ರಾಜ್ಯ ಸರ್ಕಾರದ ಇಮೇಜ್ ಗೆ ಮಸಿ ಬಳಿಯುವ ಪ್ರಯತ್ನವಿದು. ನಮ್ಮ ಲೀಗಲ್ ತಂಡ ಎಲ್ಲಾವನ್ನು ಪರಿಶೀಲನೆ ಮಾಡುತ್ತಿದೆ. ನಾವು ಕಾನೂನು ಬದ್ಧವಾಗಿಯೇ ಹೋರಾಟ ಮಾಡುತ್ತೇವೆ
>
> – ಡಾ.ಎಚ್. ಸಿ. ಮಹದೇವಪ್ಪ, ಸಮಾಜ ಕಲ್ಯಾಣ ಸಚಿವ

# ಚಿಕ್ಕಬಳ್ಳಾಪುರ-ಬೆಂಗಳೂರು ಮೆಮೋ ರೈಲು ಸಂಚಾರ ಸ್ಥಗಿತ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಕಂಟೋನ್ಮೆಂಟ್ ನಡುವೆ ಸಂಚರಿಸುತ್ತಿದ್ದ ರೈಲ್ವೆ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ಕುಂಭ ಮೇಳಕ್ಕೆ ನಿಯೋಜನೆ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಕಂಟೋನ್ಮೆಂಟ್ ಮಾರ್ಗದಲ್ಲಿ ಸಂಚರಿಸುತ್ತಿದ್ದ ರೈಲು ಸೇವೆ ಜ.20 ರಿಂದ ಲಭ್ಯವಿರುವುದಿಲ್ಲ ಎಂದು ಸಹಾಯಕ ರೈಲ್ವೆ ಸಾರಿಗೆ ವ್ಯವಸ್ಥಾಪಕ ಬಿ.ಎಲ್.ಶಿವಕುಮಾರ್ ತಿಳಿಸಿದ್ದಾರೆ.

06531 ಸಂಖ್ಯೆಯ ರೈಲು ಬೆಂಗಳೂರು ವಲಯದಿಂದ ಬೆಳಗ್ಗೆ 5.10ಕ್ಕೆ ಬಿಟ್ಟು ಬೆಳಗ್ಗೆ 6.55ಕ್ಕೆ ಚಿಕ್ಕಬಳ್ಳಾಪುರ, ಇದೇ ರೈಲು (ಸಂಖ್ಯೆ 06535) ಬೆಳಗ್ಗೆ 8.20ಕ್ಕೆ ಚಿಕ್ಕಬಳ್ಳಾಪುರ ಬಿಟ್ಟು ಬೆಂಗಳೂರು ವಲಯಕ್ಕೆ ಬೆಳಗ್ಗೆ 10.40ಕ್ಕೆ, 06536 ಸಂಖ್ಯೆಯ ರೈಲು ಮಧ್ಯಾಹ್ನ 12.20ಕ್ಕೆ ಬೆಂಗಳೂರು ವಲಯ ಬಿಟ್ಟು ಚಿಕ್ಕಬಳ್ಳಾಪುರಕ್ಕೆ ಮಧ್ಯಾಹ್ನ 1.40ಕ್ಕೆ, 06537 ಸಂಖ್ಯೆಯ ರೈಲು ಚಿಕ್ಕಬಳ್ಳಾಪುರದಿಂದ 2ಕ್ಕೆ ಬಿಟ್ಟು ಬೆಂಗಳೂರು ವಲಯಕ್ಕೆ ಮಧ್ಯಾಹ್ನ 3.15ಕ್ಕೆ, 06538 ಸಂಖ್ಯೆಯ ರೈಲು ಸಂಜೆ 4ಕ್ಕೆ ಬೆಂಗಳೂರು ವಲಯ ಬಿಟ್ಟು ಚಿಕ್ಕಬಳ್ಳಾಪುರಕ್ಕೆ ಸಂಜೆ 6ಕ್ಕೆ, 06532 ಸಂಖ್ಯೆಯ ರೈಲು ರಾತ್ರಿ 6.30ಕ್ಕೆ ಬಿಟ್ಟು ಬೆಂಗಳೂರು ವಲಯವನ್ನು ರಾತ್ರಿ 9 ಕ್ಕೆ ಸೇರುತ್ತಿತ್ತು. ತಾತ್ಕಾಲಿಕ ಸ್ಥಗಿತ.




ಕಳೆದ ಲೋಕಸಭಾ ಚುನಾವಣೆಯ ಮೊದಲು ರೈಲ್ವೆ ಸೇವೆ ಸೌಲಭ್ಯವನ್ನು ಒದಗಿಸಿದ್ದು ರಾಜಧಾನಿಯಿಂದ ದೇವನಹಳ್ಳಿ ವಿಮಾನ ನಿಲ್ದಾಣದವರೆಗೂ ಬರುತ್ತಿದ್ದ ರೈಲುಗಳ ಓಡಾಟವನ್ನು ಚಿಕ್ಕಬಳ್ಳಾಪುರದವರೆಗೂ ವಿಸ್ತರಿಸಲಾಗಿತ್ತು. ಇದರಿಂದ ಈ ಭಾಗದಲ್ಲಿ ಬೆಂಗಳೂರಿಗೆ ಕಡಿಮೆ ದರದಲ್ಲಿ ಪಯಣಿಸಲು ಪ್ರಯಾಣಿಕರಿಗೆ ಅನುಕೂಲವಾಗಿದ್ದು ಈಗ ಭಾನುವಾರ ರಜಾ ದಿನ ಹೊರತುಪಡಿಸಿ ಬೆಂಗಳೂರಿನಿಂದ ಚಿಕ್ಕಬಳ್ಳಾಪುರ ಮಾರ್ಗವಾಗಿ ಶಿಡ್ಲಘಟ್ಟ, ಚಿಂತಾಮಣಿ, ಶ್ರೀನಿವಾಸಪುರ ಮತ್ತು ಕೋಲಾರದ ನಡುವೆ ಎರಡು ರೈಲುಗಳು ಸಂಚರಿಸುತ್ತಿವೆ. ಬೆಳಗ್ಗೆ ಒಂದು ರೈಲು ಕೋಲಾರ ಮತ್ತು ಮತ್ತೊಂದು ರೈಲು ಬೆಂಗಳೂರಿನಿಂದ ಓಡಾಡುತ್ತಿವೆ.

# ಹಸೆಮಣೆ ಏರಬೇಕಿದ್ದವಳು, ಮಸಣಕ್ಕೆ; ಎರಡು ಬೈಕ್‌ಗಳ ಮಧ್ಯ

## ಭೀಕರ ಅಪಘಾತದಲ್ಲಿ ನರೇಗಾ ಇಂಜಿನಿಯರ್ ಸಾವು

• ಉದಯವಾಹಿನಿ, ಮಂಡ್ಯ

ದ್ವಿಚಕ್ರ ವಾಹನಗಳ ಮುಖಾಮುಖಿ ಡಿಕ್ಕಿಯಾಗಿರುವ ಪರಿಣಾಮ ನರೇಗಾ ಎಂಜಿನಿಯರ್ ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ಮಳವಳ್ಳಿ ತಾಲ್ಲೂಕಿನ ಹಲಗೂರು ಸಮೀಪದ ಬಸಾಪುರ ಗೇಟ್ ಬಳಿ ನಡೆದಿದೆ.ಮೃತಳನ್ನು ಮೂಲತಃ ಹಲಗೂರು ಸಮೀಪದ ಬಳಹೊನ್ನಿಗ ಗ್ರಾಮದ ನರೇಗಾ ಎಂಜಿನಿಯರ್ ಆಗಿದ್ದ ಶರಣ್ಯ ಗೌಡ (25) ಎಂದು ಗುರುತಿಸಲಾಗಿದೆ.

ಮೂಲತಃ ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಬಳೆಹೊನ್ನಿಗನ ಗ್ರಾಮದವಳಾದ ಶರಣ್ಯಾ ಗೌಡ, ಕಳೆದ ಒಂದು ವರ್ಷದಿಂದ ಕನಕಪುರ ವಿಭಾಗದಲ್ಲಿ ನರೇಗಾ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದಳು. ಕನಕಪುರ ತಾಲ್ಲೂಕಿನ ಸಾತನೂರು ಪಂಚಾಯಿತಿಯಲ್ಲಿ ನರೇಗಾ ಇಂಜಿನಿಯರ್ ಆಗಿ ಕರ್ತವ್ಯ ಮಾಡುತ್ತಿದ್ದ ಶರಣ್ಯಾ ಗೌಡ, ನಿನ್ನೆ ತನ್ನ ಕೆಲಸವನ್ನು ಮುಗಿಸಿ ವಾಪಸ್ ಹಲಗೂರಿನ ಬಳಿಯ ಸ್ವಗ್ರಾಮಕ್ಕೆ ಹೋವಾಗ ಎರಡು ಬೈಕ್‌ಗಳ ನಡುವ ಮುಖಾಮುಖಿ ಡಿಕ್ಕಿಯಾಗಿವೆ.


ಉದಯವಾಹಿನಿ ಚಿತ್ರ

ಈ ವೇಳೆ ಬೈಕ್‌ನಿಂದ ಬಿದ್ದ ಶರಣ್ಯಾ ತಲೆಗೆ ಗಂಭೀರ ಗಾಯವಾಗಿದೆ. ಇದರಿಂದ ತಲೆ ಬಿದ್ದು ಗಂಭೀರ ಪೆಟ್ಟಿನಿಂದಾಗ ತೀವ್ರ ರಕ್ತಸ್ರಾವ ಉಂಟಾಗಿದೆ. ಅವರನ್ನು ಆಸ್ಪತ್ರೆಗೆ ಸೇರಿಸಲು ಯಾವುದೇ ವಾಹನಗಳು ಸರಿಯಾದ ಸಮಯಕ್ಕೆ ಲಭ್ಯವಾಗಲಿಲ್ಲ. ಹೀಗಾಗಿ ಕೆಲವೇ ಕ್ಷಣಗಳಲ್ಲಿ ಶರಣ್ಯಾ ಗೌಡ ಸ್ಥಳದಲ್ಲಿಯೇ ಅಸುನೀಗಿದ್ದಾರೆ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಸದ್ಯ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಗುರುವಿನಲ್ಲಿ ನಂಬಿಕೆ ಇದ್ದರೆ ಶಿಷ್ಯನ ಉದ್ಧಾರ

• ಉದಯವಾಹಿನಿ, ಚಿಂತಾಮಣಿ

ಸದ್ಗುರು ಕೈವಾರ ತಾತಯ್ಯ ಅವರು ಕರುಣಾಮಯರಾಗಿ ಶಿಷ್ಯನನ್ನು ಉದ್ಧರಿಸುತ್ತಾರೆ. ಮೊದಲು ಗುರುವಿನಲ್ಲಿ ನಂಬಿಕೆ ಇರಿಸಿಕೊಳ್ಳುವುದು ಮುಖ್ಯ ಎಂದು ಕೈವಾರ ಕ್ಷೇತ್ರದ ಧರ್ಮಾಧಿಕಾರಿ ಡಾ.ಎಂ.ಆರ್.ಜಯರಾಮ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಶ್ರೀ ಕ್ಷೇತ್ರ ಕೈವಾರ ಸದ್ಗುರು ಶ್ರೀ ಯೋಗಿನಾರೇಯಣ ಮಠಕ್ಕೆ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆಯಿಂದ ಸಂಕೀರ್ತನಾ ಪಾದಯಾತ್ರೆ ಮೂಲಕ ಆಗಮಿಸಿದ್ದ ಭಕ್ತರನ್ನುದ್ದೇಶಿಸಿ ಮಾತನಾಡಿ, ಕೈವಾರದ ಸಂತ ಶ್ರೀ ಯೋಗಿನಾರೇಯಣ ತಾತಯ್ಯ ಅವರು ತಮ್ಮ ಬೋಧನೆಗಳಲ್ಲಿ ಗುರುವಿನ ಲಕ್ಷಣ, ಸ್ವರೂಪ, ನಾನಾ ವಿಚಾರಗಳ ಮೂಲಕ ಭಕ್ತರನ್ನು ಎಚ್ಚರಿಸಿದ್ದಾರೆ.

ಅಧ್ಯಾತ್ಮ ಸಾಧನೆ ಮಾಡಲು ಬಯಸಿದ ಶಿಷ್ಯನ ಮೊದಲ ಗುರಿಯೆಂದರೆ ಉತ್ತಮ ಜ್ಞಾನಿಯಾದ ಗುರುವನ್ನು ಆಶ್ರಯಿಸಬೇಕು.


ಉದಯವಾಹಿನಿ ಚಿತ್ರ

ಅಂತಹ ಸಾಧನೆಯನ್ನು ಬೋಧಿಸುವ ಗುರು ಸಿದ್ಧಪುರುಷನಾಗಿರಬೇಕು. ಯೋಗದ ವಿಚಾರವನ್ನು ಓದಿ ತಿಳಿದುಕೊಂಡಿದ್ದರೆ ಸಾಲದು, ಸಾಧನೆಯ ಮಾರ್ಗವನ್ನು ಅನುಭವಿಸಿ ತಪಃಸಿದ್ಧಿ ಪಡೆದಿರಬೇಕು. ಶಿಷ್ಯನನ್ನು ಉದ್ಧರಿಸುವ ಕಾರುಣ್ಯ ಗುರು ಆಗಿರಬೇಕು ಎಂದರು.

ಶಿಷ್ಯನ ಅಂತರಂಗ ಶುದ್ಧಿಯನ್ನು ಮಾಡುವುದು ಗುರುವಿಗೆ ದೊಡ್ಡ ಹೊಣೆ. ಧ್ಯಾನ ಮಾಡಬಹುದು, ಪ್ರಾಣಾಯಾಮಗಳಿಂದ ಒಳನೋಟದ ದೃಷ್ಟಿಯೂ ಬರಬಹುದು. ಆದರೆ, ಅಂತರಂಗದ ಶುದ್ಧಿಯಾಗುವುದು ಬಹಳ ಕಷ್ಟ. ಅಂತರಂಗ ಎಂದರೆ ಮುಖ್ಯವಾಗಿ ಮನಸ್ಸಿನ ಶುದ್ಧಿಯೇ ಆಗಿರುತ್ತದೆ. ಏನು ಮಾಡಿದರೂ ಮನಸ್ಸಿನ ಕೊಳೆ ತೊಳೆಯುವುದು ಕಷ್ಟ.

ಅವಿದ್ಯೆಗಳಿಂದ ಕೂಡಿರುವ ಮನಸ್ಸನ್ನು ಹೇಗೆ ಶುದ್ಧಿಪಡಿಸಬೇಕು ಎಂಬುದು ಕಾರುಣ್ಯ ಗುರುವಿಗೆ ಮಾತ್ರ ತಿಳಿದಿರುತ್ತದೆ ಎಂದರು.

ಅಂತರಂಗ ಶುದ್ಧಿ ಮಾಡಿದ ನಂತರ ಗುರು ಮನಸ್ಸನ್ನು ಸಾಧನೆಗೆ ಸಿದ್ಧಪಡಿಸುತ್ತಾನೆ ಎಂದರು.

> ಶಿಷ್ಯ ತನ್ನಿಂದ ಸಾಧನೆ ಆಗುವುದೋ ಇಲ್ಲವೋ ಎಂದು ಕಳವಳಪಡುತ್ತಾ, ಭಯಪಡುತ್ತಿರುವಾಗ, ಗುರು ಶಿಷ್ಯನ ಭೀತಿಯನ್ನು ತೊಲಗಿಸುತ್ತಾನೆ. ಸಮಾಧಿಯೋಗವನ್ನು ಸಾಧಿಸಿ, ಪರಮಾತ್ಮನ ಸಾಕ್ಷಾತ್ಕಾರವನ್ನು ಪಡೆಯುವೆ ಎಂದು ಭರವಸೆ ನೀಡಿ, ಗುರು ಶಿಷ್ಯನನ್ನು ಹುರಿದುಂಬಿಸುತ್ತಾನೆ ಎಂದರು.

# ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹೆಚ್ಚಿದ ಇವಿ ವಾಹನಗಳು

## ಹೀಗೆ ನಾಲ್ಕು ವರ್ಷಗಳಲ್ಲಿ ಜಿಲ್ಲೆಯಲ್ಲಿ ಎರಡೂ ಪ್ರಾದೇಶಿಕ ಸಾರಿಗೆ ಕಚೇರಿ ವ್ಯಾಪ್ತಿಯಲ್ಲಿ ಒಟ್ಟು 2,276 ಇವಿ ವಾಹನಗಳು ನೋಂದಣಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ವರ್ಷದಿಂದ ವರ್ಷಕ್ಕೆ ಎಲೆಕ್ಟ್ರಿಕ್ ವಾಹನಗಳ (ಇವಿ ವಾಹನಗಳು) ಸಂಖ್ಯೆ ಹೆಚ್ಚುತ್ತಿದೆ. ನಗರಗಳಷ್ಟೇ ಅಲ್ಲ ಗ್ರಾಮಾಂತರ ಭಾಗಗಳಲ್ಲಿ ಜನರು ಇವಿ ವಾಹನಗಳ ಮೊರೆ ಹೋಗುತ್ತಿದ್ದಾರೆ. ಚಿಕ್ಕಬಳ್ಳಾಪುರ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ 2020ರಿಂದ 2024ರವರೆಗೆ 1,759 ಮತ್ತು ಚಿಂತಾಮಣಿ ಪ್ರದೇಶಿಕ ಸಾರಿಗೆ ಕಚೇರಿಯಲ್ಲಿ 517 ಇವಿ ವಾಹನಗಳು ನೋಂದಣಿ ಆಗಿವೆ.

ಹೀಗೆ ನಾಲ್ಕು ವರ್ಷಗಳಲ್ಲಿ ಜಿಲ್ಲೆಯಲ್ಲಿ ಎರಡೂ ಪ್ರಾದೇಶಿಕ ಸಾರಿಗೆ ಕಚೇರಿ ವ್ಯಾಪ್ತಿಯಲ್ಲಿ ಒಟ್ಟು 2,276 ಇವಿ ವಾಹನಗಳು ನೋಂದಣಿಯಾಗಿವೆ. ಈ ಸಂಖ್ಯೆಯು ಜಿಲ್ಲೆಯಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆಯ ಹೆಚ್ಚಳವನ್ನು ಎತ್ತಿ ತೋರುತ್ತಿದೆ ಪೆಟ್ರೋಲ್ ಬೆಲೆ ದುಬಾರಿ ಕಾರಣಕ್ಕೆ ಬಹಳಷ್ಟು ಮಂದಿ ಇವಿ ವಾಹನಗಳ ಮೊರೆ ಹೋಗುತ್ತಿದ್ದಾರೆ. ಅಲ್ಲದೆ ಜಿಲ್ಲೆಯಲ್ಲಿ ಇವಿ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳ ಸಂಖ್ಯೆಯೂ ಹೆಚ್ಚಿದೆ.


ಉದಯವಾಹಿನಿ ಚಿತ್ರ

ಚಿಕ್ಕಬಳ್ಳಾಪುರದ ಬೆಸ್ಕಾಂ ಕಾರ್ಯನಿರ್ವಾಹಕ ಎಂಜಿನಿಯರ್ ಕಚೇರಿ, ತಾಲ್ಲೂಕು ಕೇಂದ್ರಗಳಲ್ಲಿನ ಬೆಸ್ಕಾಂ ಕಚೇರಿಗಳು, ವಿವಿಧ ಖಾಸಗಿ ಹೋಟೆಲ್‌ಗಳು, ಪೆಟ್ರೋಲ್ ಬಂಕ್‌ಗಳ ಬಳಿಯೂ ಇವಿ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ನಿರ್ಮಿಸಲಾಗಿದೆ. ಇಲ್ಲಿ ವಾಹನಗಳನ್ನು ವೇಗವಾಗಿ ಚಾರ್ಜಿಂಗ್ ಮಾಡಿಕೊಳ್ಳಲು ಸಹ ಅವಕಾಶಗಳು ಇವೆ. ದ್ವಿಚಕ್ರ ವಾಹನಗಳನ್ನು ಮನೆಗಳಲ್ಲಿಯೇ ಚಾರ್ಜಿಂಗ್ ಮಾಡಿದರೆ ಕಾರುಗಳನ್ನು ಚಾರ್ಜಿಂಗ್ ಪಾಯಿಂಟ್‌ಗಳಲ್ಲಿ ಚಾರ್ಜಿಂಗ್ ಮಾಡಲಾಗುತ್ತಿದೆ.

ಚಿಕ್ಕಬಳ್ಳಾಪುರ, ಚಿಂತಾಮಣಿ ನಗರಗಳಲ್ಲಿ ಇವಿ ವಾಹನಗಳ ಮಾರಾಟ ಮಳಿಗೆಗಳು ಸಹ ಹೆಚ್ಚುತ್ತಿವೆ. ರಿಯಲ್ ಎಸ್ಟೇಟ್ ವ್ಯವಹಾರ ನಡೆಸುವವರು ನಿವೇಶನಗಳನ್ನು ಖರೀದಿಸುವವರಿಗೆ ಆಫರ್ ಎನ್ನುವಂತೆ ಇವಿ ವಾಹನಗಳನ್ನು ಉಡುಗೊರೆಯಾಗಿ ನೀಡುವ ಪ್ರಕಟಣೆಗಳನ್ನು ಸಹ ಹೊರಡಿಸಿದ್ದಾರೆ.

ಇವಿ ವಾಹನಗಳ ಸಂಖ್ಯೆ ಮತ್ತಷ್ಟು ಹೆಚ್ಚುವ ಸಾಧ್ಯತೆ ಇದೆ. ಆದರೆ ಅವುಗಳ ಬ್ಯಾಟರಿಗಳು ಹಾಳಾದರೆ ಹೆಚ್ಚು ಹಣ ತೆರಬೇಕಾಗುತ್ತದೆ. ಆದ ಕಾರಣ ಇನ್ನೂ ದೊಡ್ಡ ಸಂಖ್ಯೆಯಲ್ಲಿ ಇವಿ ವಾಹನ ಖರೀದಿಗೆ ಜನರು ಮನಸ್ಸು ಮಾಡುತ್ತಿಲ್ಲ ಎನ್ನುತ್ತಾರೆ ಪ್ರಾದೇಶಿಕ ಸಾರಿಗೆ ಇಲಾಖೆಯ ಕೆಲ ಸಿಬ್ಬಂದಿ.

ಬ್ಯಾಟರಿಗಳ ಬೆಲೆ ಗರಿಷ್ಠವಿದೆ. ಮುಂದಿನ ದಿನಗಳಲ್ಲಿ ಈ ಬ್ಯಾಟರಿಗಳು ಹಾಳಾದರೆ ಅವುಗಳ ಸಂಸ್ಕರಣೆಗೂ ಹಣ ನೀಡಬೇಕಾದ ಸ್ಥಿತಿ ಬರಬಹುದು. ನಗರ ಪ್ರದೇಶಗಳಲ್ಲಿ ಅಷ್ಟೇ ಇವಿ ವಾಹನ ಖರೀದಿಗೆ ಜನರು ಮನಸ್ಸು ಮಾಡುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಕಡಿಮೆ ಎಂದು ತಿಳಿಸುವರು. ಈ ಮೊದಲು ನಮ್ಮ ಬಳಿ ಬೈಕ್ ಇತ್ತು. ಹೆಚ್ಚು ಓಡಾಟದ ಕಾರಣ ಪೆಟ್ರೋಲ್‌ಗೆ ವಾರಕ್ಕೆ ಒಂದು ಸಾವಿರ ವೆಚ್ಚ ಮಾಡುತ್ತಿದ್ದೆವು. ಇವಿ ದ್ವಿಚಕ್ರ ವಾಹನ ಖರೀದಿಸಿದರೆ ಪೆಟ್ರೋಲ್‌ಗೆ ನೀಡುವ ಹಣ ಉಳಿತಾಯವಾಗುತ್ತದೆ ಎನಿಸಿತು.

> ಜಿಲ್ಲೆಯಲ್ಲಿ ಇವಿ ವಾಹನ ಖರೀದಿ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ. ಚಿಂತಾಮಣಿಗಿಂತ ಚಿಕ್ಕಬಳ್ಳಾಪುರ ಪ್ರಾದೇಶಿಕ ಸಾರಿಗೆ ಕಚೇರಿ ವ್ಯಾಪ್ತಿಯಲ್ಲಿ ನೋಂದಣಿ ಹೆಚ್ಚಿದೆ ಎಂದು ಚಿಕ್ಕಬಳ್ಳಾಪುರ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿ ವಿವೇಕಾನಂದ ತಿಳಿಸಿದರು.

> ಆ ಕಾರಣದಿಂದ ಇವಿ ವಾಹನ ಖರೀದಿಸಿದೆವು. ಖರೀದಿಸಿ ಒಂದು ವರ್ಷವಾಗಿದೆ. ಯಾವುದೇ ಸಮಸ್ಯೆ ಇಲ್ಲ. ಬಹಳಷ್ಟು ಸ್ನೇಹಿತರು, ನೆಂಟರು ಈ ವಾಹನದ ಬಗ್ಗೆ ಕೇಳಿದ್ದಾರೆ. ಚೆನ್ನಾಗಿದೆ ಎಂದೇ ಹೇಳಿದ್ದೇನೆ
>
> -ಚಂದ್ರಪ್ಪ, ಚಿಕ್ಕಬಳ್ಳಾಪುರದ ವ್ಯಾಪಾರಿ.

## ಮಿನಿ ನ್ಯೂಸ್

### ಸಂಭ್ರಮದ ಕೆಂಗಲ್ ರಥೋತ್ಸವ

• ಉದಯವಾಹಿನಿ, ಚನ್ನಪಟ್ಟಣ

ಕೆಂಗಲ್ ಆಂಜನೇಯಸ್ವಾಮಿ ಜಾತ್ರಾ ಮಹೋತ್ಸವ, ಲಕ್ಷ್ಮಿ ವೆಂಕಟೇಶ್ವರ ರಥೋತ್ಸವ ಶನಿವಾರ ವಿಜೃಂಭಣೆಯಿಂದ ನೆರವೇರಿತು. ರಥೋತ್ಸವ ಅಂಗವಾಗಿ ಬೆಳಿಗ್ಗೆಯಿಂದ ರಥಾಂಗ ಹೋಮ, ಯಾತ್ರಾದಾನ, ಮಂಟಪೋತ್ಸವ, ಬಲಿಪ್ರಧಾನ, ಗೋವು ಹಾಗೂ ಅಶ್ವಪೂಜೆ, ಪೂಜಾ ಕುಣಿತ, ತಮಟೆ, ಡೊಳ್ಳು ಕುಣಿತ ತೋಮಾಲ ಸೇವೆ, ಯಾತ್ರಾದಾನ ಸೇವೆ ನಡೆಯಿತು. ರಥೋತ್ಸವಕ್ಕೆ ಜಿಲ್ಲಾಧಿಕಾರಿ ಯಶಮಂತ ಗುರುಕರ್ ಚಾಲನೆ ನೀಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಚಂದ್ರಯ್ಯ, ತಹಶೀಲ್ದಾರ್ ನರಸಿಂಹಮೂರ್ತಿ, ಧಾರ್ಮಿಕ ದತ್ತಿ ಇಲಾಖೆ ಅಧಿಕಾರಿಗಳು, ತಾಲ್ಲೂಕಿನ ಹಲವು ಇಲಾಖೆಗಳ ಅಧಿಕಾರಿಗಳು ಸಂದರ್ಭದಲ್ಲಿ ಹಾಜರಿದ್ದರು. ಭಕ್ತಾಧಿಗಳು ರಥವನ್ನು ದೇವಸ್ಥಾನದ ಆವರಣ, ಅಕ್ಕಪಕ್ಕದ ರಸ್ತೆಗಳಲ್ಲಿ ಎಳೆದು ಪುನೀತರಾದರು. ರಾಜ್ಯದ ಹಲವು ಭಾಗಗಳಿಂದ ಆಗಮಿಸಿದ್ದ ಭಕ್ತಾದಿಗಳು ರಥೋತ್ಸದಲ್ಲಿ ಭಾಗ ವಹಿಸಿ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಹಣ್ಣು, ಜವನ ಅರ್ಪಿಸಿ ಭಕ್ತಿಭಾವ ಮೆರೆದರು. ಸಂಜೆ ಮುತ್ತಿನ ಪಲ್ಲಕ್ಕಿ ಉತ್ಸವ, ಹೂವಿನ ಪಲ್ಲಕ್ಕಿ ಉತ್ಸವ, ತಿರುಕಲ್ಯಾಣಿಯಲ್ಲಿ ವಸಂತೋತ್ಸವ, ಅಶ್ವವಾಹನೋತ್ಸವ, ಪುಷ್ಪ ಮುಡಿ ಉತ್ಸವ, ಧ್ವಜಾರೋಹಣ, ಪೂರ್ಣಾಹುತಿ, ಅಶ್ವವಾಹನೋತ್ಸವ, ಪುಷ್ಪಯಾಗ ನಡೆಯಿತು. ಜಿಲ್ಲೆ ಹಾಗೂ ತಾಲ್ಲೂಕಿನ ಹಲವಾರು ಗಣ್ಯರು, ಜನಪ್ರತಿನಿಧಿಗಳು, ಅಧಿಕಾರಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು. ರಾಜ್ಯದ ವಿವಿಧ ಮೂಲೆಗಳಿಂದ ಆಗಮಿಸಿದ್ದ ಭಕ್ತರು ಭಾಗವಹಿಸಿದ್ದರು. ರಥೋತ್ಸವ ಜೊತೆಗೆ ಇತಿಹಾಸ ಪ್ರಸಿದ್ಧ ಕೆಂಗಲ್ ದನಗಳ ಜಾತ್ರೆ ಶನಿವಾರ ಅಂತ್ಯ ಕಂಡಿತು. ಭಾನುವಾರ ಅಷ್ಟೋತ್ತರ ಶತಕುಂಭಾಭಿಷೇಕ, ಶಾಂತ್ಯೋತ್ಸವ ನಡೆಯಲಿದೆ.

### ನಾಮಫಲಕದಲ್ಲಿ ಬೆಂಗಳೂರಿನ ಹೆಸರನ್ನು ತಪ್ಪಾಗಿ ಬರೆದ ಗುತ್ತಿಗೆದಾರ

• ಉದಯವಾಹಿನಿ, ಬೇತಮಂಗಲ

ಬೆಂಗಳೂರಿನಿಂದ ಚೆನ್ನೈ ಕಾರಿಡಾರ್ ರಸ್ತೆಯ, ಸುಂದರಪಾಳ್ಯ ಗ್ರಾಮದ ಟೋಲ್ ಪಾವತಿ ಕೇಂದ್ರಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿ ನಿರ್ಮಿಸಿರುವ ನಾಮಫಲಕದಲ್ಲಿ ಕರ್ನಾಟಕದ ರಾಜಧಾನಿ ಬೆಂಗಳೂರು ಹೆಸರನ್ನೇ ತಪ್ಪಾಗಿ ನಮೂದಿಸಿ ಕನ್ನಡಕ್ಕೆ ಅಪಮಾನ ಮಾಡಲಾಗಿದೆ. ರಾಜ್ಯದ ಗಡಿ ಭಾಗದಲ್ಲಿ ಆಂಧ್ರ ಪ್ರದೇಶ ತೆಲುಗು ಭಾಷೆಯ ಪ್ರಭಾವದ ನಡುವೆ ಕನ್ನಡ ಭಾಷೆಯನ್ನು ಉಳಿಸುವುದೇ ಸವಾಲಾಗಿರುವ ಸಂದರ್ಭದಲ್ಲಿ ಗುತ್ತಿಗೆದಾರರು ಬೆಂಗಳೂರು ಹೆಸರನ್ನು ಬಂಗಳೂರು ಎಂದು ನಮೂದಿಸಿ ಕನ್ನಡ ಸಂಘಟನೆಗಳ ಆಕ್ರೋಶಕ್ಕೆ ಗುರಿಯಾಗಿದ್ದಾರೆ.

ಸುಂದರಪಾಳ್ಯ ಗ್ರಾಮದ ಮೂಲಕವೇ ಬೇತಮಂಗಲ ಹಾಗೂ ಇತರ ಗ್ರಾಮಗಳಿಗೆ ಕಾರಿಡಾರ್ ರಸ್ತೆಯಿಂದ ಇಳಿದು ತೆರಳಬೇಕು. ಇಂತಹ ಪ್ರಮುಖ ರಸ್ತೆಯಲ್ಲಿ ಸುಂದರಪಾಳ್ಯ ಗ್ರಾಮದ ಹೆಸರೆ ಇಲ್ಲ. ಜೊತೆಗೆ ನಮ್ಮ ರಾಜ್ಯದ ಹೆಮ್ಮೆಯ ನಗರಿ ಬೆಂಗಳೂರಿನ ಹೆಸರೇ ತಪ್ಪಾಗಿ ಬರೆದಿದ್ದಾರೆ. ಇದು ಖಂಡನೀಯ ಎಂದು ಸುಂದರಪಾಳ್ಯದ ಗ್ರಾಪಂ ಮಾಜಿ ಅಧ್ಯಕ್ಷ ರಾಮ್ ಬಾಬು ಆಕ್ರೋಶ ವ್ಯಕ್ತಪಡಿಸಿದರು.

### ಕಾಡಾನೆ ದಾಳಿಯಿಂದ: ವ್ಯಕ್ತಿ ಕುಟುಂಬಕ್ಕೆ 15 ಲಕ್ಷರೂ. ಪರಿಹಾರ ವಿತರಣೆ

• ಉದಯವಾಹಿನಿ, ಮಡಿಕೇರಿ

ಕಾಡಾನೆ ದಾಳಿಯಿಂದ ಮೃತಪಟ್ಟಿದ್ದ ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ಯಡವನಾಡು ಮೀಸಲು ಅರಣ್ಯದ ಕೂಪಾಡಿ ಗಿರಿಜನರ ಹಾಡಿಯ ತಮ್ಮಣ್ಣ (67) ಅವರ ಕುಟುಂಬದವರಿಗೆ ಅರಣ್ಯ ಇಲಾಖೆ ವತಿಯಿಂದ 15 ಲಕ್ಷ ರೂಪಾಯಿ ಪರಿಹಾರದ ಚೆಕ್ ವಿತರಿಸಲಾಗಿದೆ. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಎ.ಎ. ಗೋಪಾಲ್ ಚೆಕ್ ನೀಡಿದ್ದಾರೆ. ಶಾಸಕ ಮಂತರ್ ಗೌಡ ಅವರ ಸೂಚನೆಯಂತೆ ಮೃತರ ಕುಟುಂಬಕ್ಕೆ ಪರಿಹಾರ ನೀಡಲಾಗಿದ್ದು, ಉತ್ತಮ ಕಾರ್ಯಕ್ಕೆ ವಿನಿಯೋಗಿಸುವಂತೆ ಸಲಹೆ ನೀಡಿದ್ದಾರೆ.

ಆಡಿ ಮೀಸಲು ಅರಣ್ಯಕ್ಕೆ ಹೊಂದಿಕೊಂಡಂತೆ ಇದ್ದು, ಕಾಡಾನೆ ದಾಳಿಯ ಸಂದರ್ಭದಲ್ಲಿ ಎಚ್ಚರ ವಹಿಸಬೇಕು. ಅರಣ್ಯದಲ್ಲಿ ತಿರುಗಾಡಬಾರದು. ಕಾಡಾನೆ ಕಂಡಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಗೆ ಮಾಹಿತಿ ನೀಡಬೇಕು ಎಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.

### ರೌಡಿಶೀಟರ್ ಬರ್ಬರ ಹತ್ಯೆ

• ಉದಯವಾಹಿನಿ, ಮಂಡ್ಯ

ಜಿಲ್ಲೆಯಲ್ಲಿ ತಡರಾತ್ರಿ ಮತ್ತೆ ಮಚ್ಚು ಲಾಂಗ್ ರಕ್ತ ಹರಿಸಿದ್ದು, ಹಳೆ ದ್ವೇಷದ ಹಿನ್ನೆಲೆಯಲ್ಲಿ ರೌಡಿಶೀಟರ್ ನನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಶ್ರೀರಂಗಪಟ್ಟಣದ ಪಾಲಹಳ್ಳಿ ಗ್ರಾಮದಲ್ಲಿ ನಡೆದಿದೆ. ಸುಪ್ಪಿ ಅಲಿಯಾಸ್ ಸುಪ್ರೀತ್ ಮೃತ ರೌಡಿ ಶೀಟರ್ ಎಂದು ಗುರುತಿಸಲಾಗಿದೆ. ನಿನ್ನೆ ತಡರಾತ್ರಿ ತೋಟದ ಮನೆಗೆ ತೆರಳುತ್ತಿದ್ದ ವೇಳೆ ಸಂಚು ಹಾಕಿ ಹೊಂಚು ಹಾಕಿದ್ದ ದುಷ್ಕರ್ಮಿಗಳು ಏಕಾಏಕಿ ಹಲ್ಲೆ ನಡೆಸಿದ್ದಾರೆ. ದಾಳಿಯ ವೇಳೆ ಸುಪ್ರೀತ್ ಗಂಭೀರ ಗಾಯಗೊಂಡಿದ್ದು, ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಸದ್ಯ ಈ ಪ್ರಕರಣದ ಸಂಬಂಧ ಶ್ರೀರಂಗಪಟ್ಟಣದ ಗ್ರಾಮಾಂತರ ಪೊಲೀಸ್ ಠಾಣಾಯಲ್ಲಿ ದೂರು ದಾಖಲಾಗಿದೆ. ಆರೋಪಿಗಳ ಬಗ್ಗೆ ಇದುವರೆಗೂ ಯಾವುದೇ ಸುಳಿವು ತಿಳಿದು ಬಂದಿಲ್ಲ. ಸ್ಥಳೀಯ ರೌಡಿಶೀಟರ್‌ಗಳನ್ನು ವಿಚಾರಣೆಗೊಳಪಡಿಸಿರುವ ಪೊಲೀಸರು ಕೊಲೆಗಾರನ ಪತ್ತೆಗೆ ತನಿಖೆ ಕೈಗೊಂಡಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ.

### ಎಡಪಾಲ ಅಂಡಮಾನಿ ಮಖಾಂ ಉರುಸ್

• ಉದಯವಾಹಿನಿ, ನಾಪೋಕ್ಲು

ಇಲ್ಲಿಗೆ ಸಮೀಪದ ಎಡಪಾಲ ಎಂಬ ಗ್ರಾಮದಲ್ಲಿ ಸುಮಾರು 300 ವರ್ಷಗಳ ಇತಿಹಾಸವಿರುವ ದರ್ಗಾ ಇದ್ದು, ಅಲ್ಲಿ ಎಡಪಾಲ ಅಂಡತ್ ಮಾನಿ ಮಖಾಂ ಉರೂಸ್ ಜ. 19ರಿಂದ 21ವರೆಗೆ ಮೂರು ದಿನಗಳ ಕಾಲ ವಿಜೃಂಭಣೆಯಿಂದ ನಡೆಯಲಿದೆ. 17ನೇ ಶತಮಾನದಿಂದಲೇ ಕೊಡಗು ಜಿಲ್ಲೆಯಲ್ಲಿ ಹೆಸರಾದಂತಹ ಎಡಪಾಲ ಅಂಡತ್ ಮಾನಿ ದರ್ಗಾ ಷರೀಫಿನಲ್ಲಿ ಅಂತ್ಯ ವಿಶ್ರಾಂತಿ ಪಡೆಯುತ್ತಿರುವ ಪವಾಡ ಪುರುಷರ ಹೆಸರಿನಲ್ಲಿ ವರ್ಷಂಪ್ರತಿ ನಡೆಸಿಕೊಂಡು ಬರುತ್ತಿರುವ ವಾರ್ಷಿಕ ಉರುಸ್ ಇದಾಗಿದೆ. ಸಾರ್ವಜನಿಕರು, ಭಕ್ತರು, ಜಾತಿ, ಮತ ಭೇದವಿಲ್ಲದೆ ಅಧಿಕ ಸಂಖ್ಯೆಯಲ್ಲಿ ಉರುಸ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂಭ್ರಮಿಸುತ್ತಾರೆ. ಜ. 19ರಂದುಸಂಜೆ 4.30ಕ್ಕೆ ಪೊಯಾಪಳ್ಳಿ ಮುಸ್ಲಿಂ ಜಮಾಯತ್ ಅಧ್ಯಕ್ಷ ಕೆ.ಎ.ಬಷೀರ್ ಧ್ವಜಾರೋಹಣ ನೆರವೇರಿಸುವ ಮೂಲಕ ಉರುಸ್ ಸಮಾರಂಭಕ್ಕೆ ಅದ್ದೂರಿ ಚಾಲನೆ ನೀಡಲಿದ್ದಾರೆ.

ಮಖಾಂ ಝಿಯಾರತ್ ಗೆ ಎಡಪಾಲ ಮುದರ್‍ರಿಸ್ ಅಲ್ ಹಾಜ್ ಕೆ.ನಿಝಾರ್ ಫೈಝಿ ನೇತೃತ್ವ ವಹಿಸಲಿದ್ದಾರೆ.

ಬಳಿಕ, 5 ಗಂಟೆಗೆ ತಕ್ಕ ಮುಖ್ಯಸ್ಥರಾದ ಕೆ.ವೈ.ಕುಂಞಹ್ಮದ್ ನೇತೃತ್ವದಲ್ಲಿ ಮಖಾಂ ಅಲಂಕಾರ ನಡೆಯಲಿದ್ದು ರಾತ್ರಿ ಆಶೀಕ್ ದಾರಿಮಿ ಅಲಪ್ಪುಝ ಧಾರ್ಮಿಕ ಉಪನ್ಯಾಸ ನೀಡಲಿದ್ದಾರೆ.

ಅಂತರಾಳದಿಂದ... EDITORIAL

# ಕೆಪಿಎಸ್‌ಸಿ ಕಾರ್ಯವೈಖರಿ ಸುಧಾರಣೆಗೆ ಬೇಕು ಕಠಿಣ ಕ್ರಮ



ಉದಯವಾಹಿನಿ ಚಿತ್ರ

ಕರ್ನಾಟಕ ಲೋಕಸೇವಾ ಆಯೋಗವು ಬೇಡದ ಕಾರಣಗಳಿಗೆ ಸುದ್ದಿಯಾಗಿರುವುದೇ ಹೆಚ್ಚು. ಈಗಲೂ ಅಂತಹದೇ ಕಾರಣಕ್ಕೆ ಸುದ್ದಿಯಲ್ಲಿದೆ.

ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ ಕಳೆದ ವರ್ಷ ಆಗಸ್ಟ್ 27ರಂದು ಪೂರ್ವಭಾವಿ ಪರೀಕ್ಷೆ ನಡೆಸಲಾಗಿತ್ತು. ಈ ಪರೀಕ್ಷೆಯ ಕನ್ನಡ ಪ್ರಶ್ನೆಪತ್ರಿಕೆಯಲ್ಲಿ ಭಾರಿ ಲೋಪದೋಷಗಳು ಪತ್ತೆಯಾಗಿದ್ದರಿಂದ ಡಿ. 29ರಂದು ಮರುಪರೀಕ್ಷೆ ನಡೆಸಲಾಯಿತು.

ಪ್ರಶ್ನೆಪತ್ರಿಕೆಗಳ ಕನ್ನಡ ಭಾಷಾಂತರದಲ್ಲಿ ಈ ಬಾರಿಯೂ ಬಹಳಷ್ಟು ಲೋಪಗಳಾಗಿವೆ. ಕನ್ನಡದಲ್ಲಿನ ಪ್ರಶ್ನೆಗಳನ್ನು ಓದಿದರೆ ಅರ್ಥವೇ ಆಗದಂತಹ ಪ್ರಶ್ನೆಗಳೂ ಇವೆ. ಅಪಾರ್ಥಕ್ಕೆ ಎಡೆಮಾಡುವ ಪ್ರಶ್ನೆಗಳೂ ಇವೆ. ಕನ್ನಡದಲ್ಲಿ ಪ್ರಶ್ನೆ ಅರ್ಥವಾಗದಿದ್ದರೆ ಇಂಗ್ಲಿಷ್‌ನಲ್ಲಿರುವ ಪ್ರಶ್ನೆಯನ್ನು ಓದಿ ಅರ್ಥ ಮಾಡಿಕೊಂಡು ಉತ್ತರ ಬರೆಯಿರಿ ಎಂದು ಆಯೋಗ ಸೂಚಿಸಿರುವುದು ಅದರ ಉದ್ಧಟತನಕ್ಕೆ ದ್ಯೋತಕ. ಕನ್ನಡ ನಾಡಿನಲ್ಲಿ ಕನ್ನಡದಲ್ಲಿಯೇ ಪ್ರಶ್ನೆಪತ್ರಿಕೆ ಸಿದ್ಧ ಮಾಡುವ ಯೋಗ್ಯತೆ ಆಯೋಗಕ್ಕೆ ಇಲ್ಲ ಎಂದರೆ ಅದನ್ನು ಕನ್ನಡ ನಾಡಿಗೆ ಬಗೆದ ದ್ರೋಹ ಎಂದೇ ಪರಿಗಣಿಸಬೇಕಾಗುತ್ತದೆ.

ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಎಲ್ಲಾ ಪರೀಕ್ಷೆಗಳಲ್ಲಿಯೂ ಪ್ರಶ್ನೆಪತ್ರಿಕೆಗಳನ್ನು ಮೊದಲು ಕನ್ನಡದಲ್ಲಿಯೇ ಸಿದ್ಧಪಡಿಸಿ ನಂತರ ಅವುಗಳನ್ನು ಇಂಗ್ಲಿಷ್‌ಗೆ ಭಾಷಾಂತರಿಸಬೇಕು. ಅದು ಸರಿಯಾದ ಕ್ರಮ. ಒಮ್ಮೆ ತಪ್ಪಾಗಿದೆ ಎಂದು ಮರುಪರೀಕ್ಷೆ ಮಾಡುವಾಗಲೂ ಆಯೋಗ ಯಾವುದೇ ಮುನ್ನೆಚ್ಚರಿಕೆ ತೆಗೆದುಕೊಳ್ಳುವುದಿಲ್ಲ ಎಂದರೆ ಅದನ್ನು ಉಡಾಫೆ ಧೋರಣೆ ಎಂದೇ ಭಾವಿಸಬೇಕಾಗುತ್ತದೆ. ಆ. 27ರಂದು ನಡೆದ ಪರೀಕ್ಷೆಯಲ್ಲಿ ಕನ್ನಡ ಭಾಷಾಂತರದ ಅಭಾಸ ವಿಪರೀತ ಆಗಿದೆ ಎನ್ನುವುದು ಗೊತ್ತಾದ ಮೇಲೆ ಮರುಪರೀಕ್ಷೆ ಮಾಡುವಾಗ ಗರಿಷ್ಠ ಎಚ್ಚರಿಕೆ ವಹಿಸಬೇಕಿತ್ತು.

**ಒಂದು ಪ್ರಶ್ನೆಪತ್ರಿಕೆಯನ್ನು ದೋಷರಹಿತವಾಗಿ ಸಿದ್ಧಪಡಿಸಲೂ ಸಾಧ್ಯವಾಗದ ಸ್ಥಿತಿಗೆ ಲೋಕಸೇವಾ ಆಯೋಗ ತಲುಪಿರುವುದು ನಾಚಿಕೆಗೇಡು**

ಕನ್ನಡ ನಾಡಿನಲ್ಲಿ ವಿಷಯ ಪರಿಣತಿ ಹೊಂದಿರುವ ಭಾಷಾಂತರಕಾರರಿಗೆ ಕೊರತೆ ಏನೂ ಇಲ್ಲ. ಅಂತಹವರನ್ನು ಸಂಪರ್ಕಿಸಿ ಅಭ್ಯರ್ಥಿಗಳಿಗೆ ಅರ್ಥವಾಗುವ ರೀತಿಯಲ್ಲಿ ಪ್ರಶ್ನೆಪತ್ರಿಕೆ ಸಿದ್ಧಪಡಿಸಬೇಕಾದುದು ಆಯೋಗದ ಹೊಣೆ. ಈ ಹೊಣೆಯನ್ನು ಸರಿಯಾಗಿ ನಿರ್ವಹಿಸದ ಆಯೋಗವು ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳ ಭವಿಷ್ಯದ ಜತೆ ಚೆಲ್ಲಾಟವಾಡಿದೆ.

ಆಯೋಗದ ಕಿವಿ ಹಿಂಡಿ ಸರಿದಾರಿಗೆ ತರಬೇಕಾದ ಜವಾಬ್ದಾರಿ ರಾಜ್ಯ ಸರ್ಕಾರದ ಮೇಲೆ ಇದೆ. ಡಿ. 29ರಂದು ನಡೆದ ಮರುಪರೀಕ್ಷೆಯ ಪ್ರಶ್ನೆಪತ್ರಿಕೆಯಲ್ಲಿಯೂ ಲೋಪದೋಷಗಳು ಕಂಡುಬಂದಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದ್ದಾರೆ.

ಕನ್ನಡದ ಪ್ರಶ್ನೆಪತ್ರಿಕೆಯಲ್ಲಿ ಲೋಪದೋಷ ಹೆಚ್ಚಾಗಿರುವುದರಿಂದ ಕನ್ನಡದಲ್ಲಿ ಉತ್ತರ ಬರೆದ ಅಭ್ಯರ್ಥಿಗಳಿಗೆ ತೊಂದರೆಯಾಗಿದೆ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಾಹಿತಿ ಗೊ.ರು. ಚನ್ನಬಸಪ್ಪ ಅವರೂ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕರ್ನಾಟಕ ಆಡಳಿತ ಸೇವೆಗೆ ಸೇರಬೇಕು ಎಂಬ ಕನಸು ಹೊತ್ತ ಹಲವಾರು ಅಭ್ಯರ್ಥಿಗಳಿಗೆ ತೊಂದರೆಯಾಗಿದ್ದು ಮತ್ತೊಮ್ಮೆ ಮರುಪರೀಕ್ಷೆ ನಡೆಸಬೇಕು ಅಥವಾ ಪೂರ್ವಭಾವಿ ಪರೀಕ್ಷೆಯಲ್ಲಿ ಭಾಗಿಯಾದ ಎಲ್ಲಾರಿಗೂ ಮುಖ್ಯ ಪರೀಕ್ಷೆ ಬರೆಯಲು ಅವಕಾಶ ನೀಡಬೇಕು ಎಂಬ ಬೇಡಿಕೆಯನ್ನು ಕೆಲವು ಅಭ್ಯರ್ಥಿಗಳು ಇಟ್ಟಿದ್ದಾರೆ. ಅಭ್ಯರ್ಥಿಗಳ ಹೋರಾಟಕ್ಕೆ ವಿರೋಧ ಪಕ್ಷವಾದ ಬಿಜೆಪಿ ಕೂಡ ಬೆಂಬಲ ವ್ಯಕ್ತಪಡಿಸಿದೆ. ಆ ಪಕ್ಷ ಅಧಿಕಾರದಲ್ಲಿ ಇದ್ದಾಗಲೂ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯವೈಖರಿಯು ಈಗಿರುವುದಕ್ಕಿಂತ ಭಿನ್ನವೇನೂ ಆಗಿರಲಿಲ್ಲ. ಆಯೋಗದ ಕಾರ್ಯಕ್ಷಮತೆ ಹದಗೆಡುವಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ಕೊಡುಗೆಯೂ ಇದೆ. ಭ್ರಷ್ಟಾಚಾರ, ಸ್ವಜನಪಕ್ಷಪಾತದಂತಹ ಕಾರಣಗಳಿಗಾಗಿ ಕುಲಗೆಟ್ಟು ಹೋಗಿರುವ ಆಯೋಗಕ್ಕೆ ಕಾಯಕಲ್ಪ ನೀಡಲು ಈ ಹಿಂದೆ ಸಿದ್ದರಾಮಯ್ಯ ಪ್ರಯತ್ನ ನಡೆಸಿದ್ದರು. ಆ ಪ್ರಯತ್ನವೂ ನಿರೀಕ್ಷಿತ ಫಲಿತಾಂಶ ನೀಡಲಿಲ್ಲ. ಒಂದು ಪ್ರಶ್ನೆಪತ್ರಿಕೆಯನ್ನು ಸಮರ್ಪಕವಾಗಿ ಸಿದ್ಧಪಡಿಸಲೂ ಸಾಧ್ಯವಾಗದ ಸ್ಥಿತಿಗೆ ಆಯೋಗ ತಲುಪಿರುವುದು ನಾಚಿಕೆಗೇಡು. ಪ್ರಶ್ನೆಪತ್ರಿಕೆಗಳು ದೋಷಮುಕ್ತವಾಗಿರಬೇಕು. ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಬೇಕು. ಕಾಲಮಿತಿಯಲ್ಲಿ ಪರೀಕ್ಷಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಬೇಕು. ಈ ಎಲ್ಲಾ ಕಾರಣಗಳಿಗಾಗಿ ಆಯೋಗದ ಕಾರ್ಯವೈಖರಿ ಸುಧಾರಿಸಲು ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು. ಅಭ್ಯರ್ಥಿಗಳಲ್ಲಿ ವಿಶ್ವಾಸ ಮೂಡಿಸುವ ಜವಾಬ್ದಾರಿ ಈಗ ರಾಜ್ಯ ಸರ್ಕಾರದ ಮೇಲೆ ಇದೆ.

# ರಾಮಾಯಣ



## ಶ್ರೀರಾನುನು ಅಯೋಧ್ಯಾಪಟ್ಟಣದಲ್ಲಿ ಸಂತೋಷದಿಂದ ನಿಹರಿಸಿದ್ದು

• ಹಿಂದಿನ ಸಂಚಿಕೆಯಿಂದ **77ನೆಯ ಅಧ್ಯಾಯ**

ಆ ಸಮಯದಲ್ಲಿ ಇಂದ್ರಾದಿದೇವತೆಗಳೂ ಯಷಿಗಳೂ ಬ್ರಹ್ಮದೇವನನ್ನು ಮುಂದಿಟ್ಟುಕೊಂಡು, ಬಿಲ್ಲಿನಲ್ಲಿ ಅಂಬನ್ನು ಹೂಡಿಕೊಂಡು ಸನ್ನದ್ದನಾಗಿದ್ದ ಶ್ರೀರಾಮನ ಸಮೀಪಕ್ಕೆ ಬಂದು ಆತನ ವರಾಕ್ರಮಾತಿಶಯದಿಂದ ಕಾಂತಿಗುಂದಿ ಶಕ್ತಿಹೀನನಾಗಿ ಪ್ರಜ್ಞೆತಪ್ಪಿ ಆತನನ್ನೇ ನೋಡುತ್ತ ತನ್ನ ಕೋಪವು, ಬಡಬಾಗ್ನಿಜ್ವಾಲೆಯಿಂದ ಗಂಗಾಪ್ರವಾಹದ ವೇಗವು ಶಮನವಾಗುವ ರೀತಿಯಲ್ಲಿ ಶಾಂತವಾಗಲು, ಲಜ್ಜಿತನಾಗಿ ಮುಖಕಾಂತಿಗುಂದಿ ಕಮಲದಳಾಕ್ಷನಾದ ಶ್ರೀರಾಮನನ್ನು ಕುರಿತು ಶ್ರೀರಾಮ, ನನ್ನನ್ನು ರಕ್ಷಿಸು. ನನ್ನ ಮಾತನ್ನು ಕೇಳು ; ನಾನು ರಾಜಸೂಯಯಾಗವನ್ನು ಮಾಡಿ ಆ ಯಾಗದಲ್ಲಿ ದಕ್ಷಿಣಾಂಗವಾಗಿ ಸಮಸ್ತ ಭೂಮಂಡಲವನ್ನೂ ಕಶ್ಯಪನಿಗೆ ಕೊಟ್ಟೆನು. ಆ ಮುನಿಯು ತನಗೆ ಕೊಟ್ಟ ಭೂಮಿಯಲ್ಲಿ ನಾನಿರಕೂಡದೆಂದು ನನ್ನನ್ನು ಹೊರಡಿಸಿದನು. ಆತನ ಮಾತು ಗುರು ವಾಕ್ಯವೆಂದು ತಿಳಿದು ಆತನ ಮುಂದೆ ಭೂಮಿಯಲ್ಲೆಲ್ಲಿಯೂ ಇರುವುದಿಲ್ಲವೆಂದು ಪ್ರತಿಜ್ಞೆಯನ್ನು ಮಾಡಿದೆನು. ನೀನು ನಿನ್ನ ಬಾಣದಿಂದ ನನ್ನ ಸಂಚಾರವನ್ನು ನಿಲ್ಲಿಸಿದರೆ. ನನಗೆ ಮತ್ತೊಂದು ಗತಿಯಿಲ್ಲ. ಆದಕಾರಣ, ನಾನು ತವನ್ನನ್ನು ಮಾಡಿ ಅನೇಕ ಪುಣ್ಯಲೋಕಗಳನ್ನು ಸಂಪಾದಿಸಿದ್ದೇನೆ... ಆ ಪೆಣ್ಯಲೋಕಗಳ ಮಾರ್ಗವನ್ನು ನಿನ್ನ ಅಮೋಘವಾದ ಬಾಣದಿಂದ ನಿಲ್ಲಿಸು. ಕಾಲವಿಳಂಬವನ್ನು ಮಾಡಬೇಡ. ನೀನು ಅನೇಕ ಪಾಪರಾಶಿಗಳನ್ನು ತೊಲಗಿಸುವಂಥವನು. ನೀನು ಪ್ರುರುಷೋತ್ತಮ ನಾದ ವಿಷ್ಣು. ನಿನ್ನ ವೃತ್ತಾಂತವನ್ನು ಈ ನಿನ್ನ ಬಿಲ್ಲನ್ನು ಹಸ್ತಕ್ಕೆ ತೆಗೆದುಕೊಂಡಾಗಲೇ ತಿಳಿದೆನು ! ನವಗೆ ಅನೇಕ ಪ್ರೇಯಸ್ಸಾಗಲಿ! ಸಮಸ್ತ ದೇವತೆಗಳೂ ಯಷಗಳೂ ಬ ಶಿಷ್ಠದೇವನು ದಲಾದವರೂ ಯುದ್ಧರಂಗದಲ್ಲಿ ಪ್ರತಿಯಿಲ್ಲದ ನಿನ್ನನ್ನು ನೋಡುತ್ತಾ ಇದ್ದಾರೆ. ತ್ರೈಲೋಕ್ಯಾಧಿ ಪತಿಯಾದ ನಿನ್ನಿಂದ ನಾನು ಪರಾಜಿತನಾದರೆ ನನಗೆ ಅವಮಾನವಲ್ಲ. ನಿನ್ನ ಬಾಣವನ್ನು ಪ್ರಯೋಗಿಸು. ನಿನ್ನ ಬಾಣದ ಪ್ರಯೋಗಾನಂತರ ನಾನು ಸ್ವಸ್ಥಚಿತ್ತನಾಗಿ ಮಹೇಂದ್ರಪರ್ವತಕೆ I ಹೋಗುತ್ತೇನೆ ಎಂದು ಮಡಿದನು. ಆ ಮಾತನ್ನು ಕೇಳಿ ಶ್ರೀರಾಮನು ತನ್ನ ಅಮೋಘವಾದ ಬಾಣವನ್ನು ಪ್ರಯೋಗಿಸಿ, ಪರಶುರಾಮನು ತನ್ನ ಯಜ್ಞಾದಿಪೆಣ್ಯಕರ್ಮಗಳಿಂದ ಸಂಪಾದಿಸಿದ್ದ ಪುಣ್ಯಲೋಕವನ್ನು ಸಂಹರಿಸಿ ವಿಶ್ವಾಮಿತರ್ರ ಅಕ್ಕನಾದ ಸತ್ಯವತಿಯ ಮಗ ಜಮದಗ್ನಿ. ಆತನ ಮಗ ಪರಶುರಾಮ. ದನು. ಅನಂತರ ಪರಶುರಾಮನು ಶ್ರೀರಾಮನನ ಪ್ರದಕ್ಷಿಣವನ್ನು ಮಾಡಿ ಅನುಮತಿಯನ್ನು ವಡೆದು ಮಹೇಂದ್ರಪರ್ವತಕ್ಕೆ ಹೋದನು. ಆಮೇಲೆ ಸಮಸ್ತ ದಿಕ್ಕುಗಳೂ ಪ್ರಸನ್ನವಾದವು. ಅವರಿಬ್ಬರ ಮೊರೆಯಿಡುತ್ತಿದ್ದ ಸಮಸ್ತ ಲೋಕದವರೂ ಮನೋಹರ್ಷವನ್ನು ಪಡೆದರು. ಬ್ರಹ ಮೊದಲಾದ ನಿಖಿಲ ದೇವತೆಗಳೂ ಯಷಿಗಳೂ ಧನುರ್ವಿದ್ಯಾವಿಶಾರದನಾದ ರಘುನಾಥನನ್ನು ವಿ ಜಯ ಜಯ!'' ಎಂದು ಕೊಂಡಾಡುತ್ತಿದ್ದರು.

**ಶ್ರೀರಾನುನು ಅಯೋಧ್ಯಾಪಟ್ಟಣದಲ್ಲಿ ಸಂತೋಷದಿಂದ ನಿಹರಿಸಿದ್ದು:** ಆಮೇಲೆ ಶ್ರೀರಾಮನು ಪರಶುರಾಮನು ಕೊಟ್ಟ ಬಿಲ್ಲನ್ನು ಸ ಮಹಾಮುನಿ ಮೊದಲಾದ ಯಷಿಗಳಿಗೆ ನಮಸ್ಕಾರವನ್ನು ಮಾಡಿ ಪರಶುರಾಮನ ಭಯದಿಂದ ಕಂಗೆಟ್ಟಿದ್ದ ತನ್ನ ತಂದೆಯಾದ ದಶರಥರಾಯನನ್ನು ಮಧುರೋಕ್ತಿಗಳಿಂದ ಸಂತವಿಟ್ಟು '' ತಂದೆಯೆ ಪರಶುರಾಮನು ಮಹೇಂದ್ರಪರ್ವತಕ್ಕೆ ಹೋದನು. ನಮ್ಮ ಸೇನೆಗಳು ಚಾತಕಪಕ್ಷಿಗಳು ಮಳೆಯ ಹನಿಯನ್ನು ಬಯಸುವ ರೀತಿಯಲ್ಲಿ ನಿನ್ನ ಅನುಜ್ಞೆಯನ್ನು ಬಯಸುತ್ತಿವೆ. ನೀನು ಅವರಿಗೆ ಅವ್ಪಣೆ ಯನ್ನು ಕೊಟ್ಟು ಆಯೋಧ್ಯಾ ಪಟ್ಟಣಕ್ಕೆ ತೆರಳುವಂತೆ ಮಾಡು '' ಎಂದು ಬಿನ್ನಹ ಮಾಡಿದನು. ಪರಶುರಾಮನು ಹೋದ ವೃತ್ತಾಂತವನ್ನು ಕೇಳಿ ದಶರಥರಾಯನು ಅತಿಹರ್ಷವಟ್ಟು ತನ್ನ ಕುಮಾರನಾದ ಶ್ರೀರಾಮನನ್ನು ಪುತ್ರವಾತ್ಸಲ್ಯದಿಂದ ತಬ್ಬಿಕೊಂಡು ಶಿರಸ್ಸನ್ನಾಘ್ರಾಣಿಸಿ ತಮಗೆ ಪುನರ್ಜನ್ಮವಾಯಿತೆಂದು ಮನಸ್ಸಿನಲ್ಲಿ ತಿಳಿದನು.

**ಮುಂದುವರಿಯುವುದು...**

# ಬಹುಮುಖ ಪ್ರತಿಭೆ ನೃತ್ಯಕಲಾವಿದೆ ಮೇಘಾ ಬಿದರಕೋಟಿ ರಂಗಪ್ರವೇಶ



**ಕಲಾ ಸಾಹಿತ್ಯ**
**ವೈ.ಕೆ. ಸಂಧ್ಯಾ ಶರ್ಮ**
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ಹೆಸರಾಂತ ಅಂಜಲಿ ಇನ್ಸ್ಟಿಟ್ಯೂಟ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್ ಭರತ ನಾಟ್ಯ ಶಾಲೆಯ ನೃತ್ಯಗುರು ಡಾ. ಸ್ವರೂಪಲಕ್ಷ್ಮಿ ಕೃಷ್ಣಮೂರ್ತಿ ಅವರ ನುರಿತ ಗರಡಿಯಲ್ಲಿ ಕಳೆದ ಹತ್ತುವರ್ಷಗಳಿಂದ ಅತ್ಯಾಸಕ್ತಿಯಿಂದ ಅಭ್ಯಾಸ ಮಾಡುತ್ತಿರುವ ನೃತ್ಯಪ್ರತಿಭೆ ಮೇಘ ಬಿದರಕೋಟಿ ಉದಯೋನ್ಮುಖ ನೃತ್ಯಕಲಾವಿದೆ. ಶ್ರೀ ಪ್ರಶಾಂತ್ ಬಿದರಕೋಟಿ ಮತ್ತು ಎನ್. ಲಕ್ಷ್ಮೀ ಅವರ ಪುತ್ರಿಯಾದ ಮೇಘಾ, ಎಂಟುವರ್ಷದ ಹುಡುಗಿಯಾಗಿದ್ದಾಗಿನಿಂದ ನೃತ್ಯ ಕಲಿಯುತ್ತ ತನ್ನ ವ್ಯಕ್ತಿತ್ವ ರೂಪಿಸಿಕೊಂಡವಳು.

ಓದಿನಲ್ಲಿ ಬುದ್ಧಿವಂತೆಯಾಗಿ ಎಸ್‌ಎಸ್‌ಎಲ್‌ಸಿ ತರಗತಿ ಮತ್ತು ಪಿಯೂಸಿಯಲ್ಲಿ ಅತ್ಯುಚ್ಚ ಅಂಕ ಗಳಿಸಿ ತೇರ್ಗಡೆಯಾಗಿ, ಬಿ.ಕಾಂ ವಿದ್ಯಾಭ್ಯಾಸ ಮಾಡುತ್ತಿರುವ ಇವಳು, ಜೊತೆ ಜೊತೆಯಲ್ಲಿ ನೃತ್ಯಾಭ್ಯಾಸದ ಬಗ್ಗೆ ಸಮಾನ ಬದ್ಧತೆ ತೋರಿ ಪರಿಶ್ರಮಿಸುತ್ತಿರುವ ಉತ್ತಮ ವಿದ್ಯಾರ್ಥಿನಿ.

ನೃತ್ಯವೇ ಉಸಿರಾಗಿ ಭಾವಿಸಿರುವ ಮೇಘಾ, ಕರ್ನಾಟಕ ಸರ್ಕಾರದ ಜ್ಯೂನಿಯರ್ ಮತ್ತು ಸೀನಿಯರ್ ನೃತ್ಯ ಪರೀಕ್ಷೆಗಳಲ್ಲಿ ಡಿಸ್ಟಿಂಕ್ಷನ್ ಗಳಿಸಿರುವಳಲ್ಲದೆ, ಕರ್ನಾಟಕ ಸಂಗೀತದ ಪರೀಕ್ಷೆಯಲ್ಲೂ ಅತ್ಯುಚ್ಚ ಅಂಕ ಗಳಿಸಿರುವ ವೈಶಿಷ್ಟ್ಯ ಅವಳದು. ಮೇಘಾ ತನ್ನ ಪ್ರತಿಭಾ ಪ್ರದರ್ಶನ ಮಾಡಲು, ಇದೇ ತಿಂಗಳ ಶುಕ್ರವಾರ 24 ರಂದು ಸಂಜೆ 5 ಗಂಟೆಗೆ ವೈಯಾಲಿಕಾವಲ್ಲಿನ ಶ್ರೀ ಕೃಷ್ಣದೇವರಾಯ ಕಲಾ ಮಂದಿರದಲ್ಲಿ ವಿದ್ಯುಕ್ತವಾಗಿ ರಂಗ ಪ್ರವೇಶ ಮಾಡುತ್ತಿದ್ದಾಳೆ. ಇವಳ ಕಲಾ ಆಯಾಮಗಳನ್ನು ಕಣ್ತುಂಬಿಕೊಳ್ಳಲು ಎಲ್ಲಾರಿಗೂ ಆದರದ ಸುಸ್ವಾಗತ.

ಮೇಘಾ, ತಾನು ಓದುತ್ತಿರುವ ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರದಲ್ಲಿ ಓದಿನಲ್ಲೂ ತುಂಬಾ ಚುರುಕು. ನೃತ್ಯ-ಸಂಗೀತ ಸ್ಪರ್ಧೆಗಳಲ್ಲಿ ಬಹುಮಾನಗಳ ಸೂರೆ. ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 95 ಅಂಕಗಳನ್ನು ಗಳಿಸಿದ ಹೆಮ್ಮೆ. ಮುಂದೆ ಸಿಂಧಿ ಪಿ.ಯೂ. ಕಾಲೇಜಿನಲ್ಲಿ ಓದು ಮುಂದುವರಿಸಿ, ಇಡೀ ರಾಜ್ಯಕ್ಕೆ 7 ನೇ ರ್‍ಯಾಂಕ್ ಪಡೆದ ವಿಶಿಷ್ಟ್ಯ ಅವಳದು.




ಶೇ. 98.5 ಅಂಕ ಪಡೆದು, ನಾಡಿನ ಬಹುತೇಕ ಪತ್ರಿಕೆಗಳಲ್ಲಿ ಅವಳ ಸಾಧನೆ ಪ್ರಕಟವಾಯಿತು. ಅವಳ ಮೇಧಾಶಕ್ತಿಯ ಓದಿಗೆ, ನೃತ್ಯಾಭ್ಯಾಸಕ್ಕೆ ಅವಳ ಹೆತ್ತವರ ಅಮಿತ ಪ್ರೋತ್ಸಾಹ. ಅನಂತರ ಮೇಘಾ 'ಕ್ರಿಸ್ತು ಜಯಂತಿ' ಕಾಲೇಜಿನಲ್ಲಿ ಬಿಕಾಂ ಪದವಿ ವಿದ್ಯಾಭ್ಯಾಸವನ್ನು ಮುಂದುವರಿಸಿ, ಅವಳು ತನ್ನ ಕರ್ತೃತ್ವ ಶಕ್ತಿ ಮತ್ತು ನೇತೃತ್ವ ಗುಣಕ್ಕೆ ಬೆಸ್ಟ್ ಮ್ಯಾನೇಜರ್ ಪ್ರಶಸ್ತಿಯನ್ನು ಕಾಲೇಜಿನಿಂದ ಪಡೆದದ್ದು ಅವಳ ಅಗ್ಗಳಿಕೆ. ಓದಿನಷ್ಟೇ ಕಲಾಭ್ಯಾಸದ ಬಗ್ಗೆಯೂ ಸಮಾನ ಆಸಕ್ತಿ- ಪ್ರಗತಿ ತೋರುತ್ತಿರುವ ಮೇಘಾ ತನ್ನ ನೃತ್ಯಸಾಧನೆಯಲ್ಲಿ ಆಶಾದಾಯಕವಾಗಿ ಮುಂದುವರೆಯುತ್ತಿದ್ದಾಳೆ.

ರಂಗಪ್ರವೇಶದ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಲೇಖಕಿ- ಕಲಾ ವಿಮರ್ಶಕಿ ಲಿಪಿಪ್ರಾಜ್ಞೆ ವೈ.ಕೆ.ಸಂಧ್ಯಾ ಶರ್ಮ, ವಿದುಷಿ. ಉಷಾ ಬಸಪ್ಪ- ಸದಸ್ಯರು ಸಂಗೀತ ನೃತ್ಯ ಅಕಾಡೆಮಿ, ಅನಿತಾ ಮುಜುಂದಾರ್- ವೈಸ್ ಪ್ರಿನಿಸಿಪಾಲ್ ಜೆಜಿಆರ್ ವಿ ಕೆ. ರಾಮಮೂರ್ತಿ ನಗರ ಮತ್ತು ,ಡಾ. ಕಾಂಚನಾ ಸತೀಶ್ ವೈಸ್ ಪ್ರಿನ್ಸಿಪಾಲ್ ಸಿಂಧಿ ಪಿ ಯು ಕಾಲೇಜ್ ಥಣಿಸಂದ್ರ ಇವರು ಆಗಮಿಸುತ್ತಾರೆ.

# ಗಾಯತ್ರಿ ಸಾರಸಂಪತ್ತು ನೂತನ ಕೃತಿ ಬಿಡುಗಡೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಸುವರ್ಣ ಸಂಭ್ರಮಾಚರಣೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ರವರಿಂದ ಲೋಕಾರ್ಪಣೆ**

ಬೆಂಗಳೂರು ಅರಮನೆ ಮೈದಾನ ತ್ರಿಪುರ ವಾಸಿನಿಯಲ್ಲಿ ನಡೆಯುತ್ತಿರುವ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಸುವರ್ಣ ಸಂಭ್ರಮಾಚರಣೆ ಸಮಾರಂಭ ಅಂಗವಾಗಿ ನಡೆದ ಗಾಯತ್ರಿ ಮಹಾಯಾಗದ ಸ್ಮರಣಿಕೆಯಾಗಿ ಸಂಸ್ಕೃತಿ ಚಿಂತಕ, ಅಂಕಣಕಾರ,ಪ್ರಣವ ಮೀಡಿಯಾ ಹೌಸ್ ಪ್ರಕಾಶನದ ಕಾರ್ಯನಿರ್ವಾಹಕ ಡಾ ಗುರುರಾಜ ಪೋಶೆಟ್ಟಿಹಳ್ಳಿ ರವರ ಗಾಯತ್ರಿ ಸಾರಸಂಪತ್ತು ಕೃತಿಯನ್ನು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಲೋಕಾರ್ಪಣೆಗೊಳಿಸಿದರು .

ಕಾರ್ಯಕ್ರಮವನ್ನು ಶೃಂಗೇರಿ ಜಗದ್ಗುರು ಶ್ರೀ ವಿದುಶೇಖರ ಭಾರತಿ ಮಹಾ ಸ್ವಾಮಿಗಳು ಉದ್ಘಾಟಿಸಿದರು . ಸ್ವರ್ಣವಲ್ಲಿ ಶ್ರೀಗಳ ಮೊದಲಾದ ಅನೇಕ ಯತಿವರೇಣ್ಯರು ದಿವ್ಯ ಸಾನಿಧ್ಯ ವಹಿಸಿದ್ದರು. ಕೇಂದ್ರ ಸಚಿವೆ ಶೋಭಾ ಕರಂ ದ್ಲಾಜೆ,ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ, ಶಾಸಕ ಸಿ ಕೆ ರಾಮಮೂರ್ತಿ ರವಿ ಸುಬ್ರಮಣ್ಯ, ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ ಸೇರಿದಂತೆ ಗಣ್ಯಮಾನ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.ಐತಿಹಾಸಿಕ ಈ ಸಮಾರಂಭದಲ್ಲಿ 30000 ಪ್ರತಿನಿಧಿಗಳಿಗೆ ಗಾಯತ್ರಿ ಮಂತ್ರದ ಅರ್ಥ ವಿವರಣೆಯುಳ್ಳ ಕಿರು ಹೊತ್ತಿಗೆಯನ್ನು ವಿತರಿಸಲಾಯಿತು ಎಂದು ಮಹಾಸಭಾಧ್ಯಕ್ಷರಾದ ಅಶೋಕ ಹಾರನಹಳ್ಳಿ ತಿಳಿಸಿರುತ್ತಾರೆ. ವಿಶ್ವಾಮಿತ್ರ ಸಾಮರಸ್ಯದಿ ಜಗವ ಬೆಳಗುವ ಬ್ರಹ್ಮತೇಜವು ಹರಡಲಿ ಎಂಬ ಸದಾಶಿಯದೊಂದಿಗೆ ವಿಶ್ವದೆಲ್ಲೆಡೆ ಬೆಳಕ ಪಸರಿಸುವ ಒಳಿತ ಬಯಸುವ ವಿಪ್ರ ಬಂಧುಗಳ ಮಹಾಸಂಗಮ ಕಾರ್ಯಕ್ರಮದಲ್ಲಿ ಸಂಸ್ಕಾರ ಸಂಘಟನೆ ಸ್ವಾವಲಂಬನೆ ಎಂಬ ಧ್ಯೇಯದಡಿ ವೇದ ಧರ್ಮ ಸಂಸ್ಕೃತಿ ಹಾಗೂ ಸಂಸ್ಕಾರಗಳ ಸಂರಕ್ಷಣೆ ವಿವಿಧತೆಯಲ್ಲಿ ಏಕತೆಯ ಅನುಪಾಲನೇ ಮತ್ತು ಸದೃಢ ರಾಷ್ಟ್ರ ನಿರ್ಮಾಣವೇ ನಮ್ಮೆಲ್ಲರ ಗುರಿಯಾಗಲಿ ಎಂಬ ಉದ್ದೇಶದೊಂದಿಗೆ ಈ ಕೃತಿ ಲೋಕಾರ್ಪಣೆಗೊಂಡಿದೆ ಎಂದು ಲೇಖಕರು ಅಭಿಪ್ರಾಯಪಡುತ್ತಾರೆ. ಈ ಕೃತಿಯ ಪಿಡಿಎಫ್ ಬೇಕೆಂದವರು ಸಂಪರ್ಕಿಸಬಹುದು ಡಾ. ಗುರುರಾಜ ಪೋಶೆಟ್ಟಿಹಳ್ಳಿ, ಕಾರ್ಯನಿರ್ವಾಹಕರು ಪ್ರಣವ ಮೀಡಿಯಾ ಹೌಸ್ ಪ್ರಕಾಶನ, ಬೆಂಗಳೂರು 9739369621

**ದಾಖಲೆಯ 30000 ಪ್ರತಿ ವಿತರಣೆ**

# ಶೌರ್ಯ ತರಬೇತಿ ಶಿಬಿರ ಸಂಪನ್ನ


ಉದಯವಾಹಿನಿ ಚಿತ್ರ

• ಶ್ರೀ. ಮೋಹನ್ ಗೌಡ
• ಉದಯವಾಹಿನಿ, ಬೆಂಗಳೂರು

ಹಿಂದೂ ಜನಜಾಗೃತಿ ಸಮಿತಿಯಿಂದ ಹಿಂದೂ ಯುವಕರಲ್ಲಿ ಶೌರ್ಯ ಮತ್ತು ಪರಾಕ್ರಮ ಜಾಗೃತಿ ಮೂಡಿಸಲು ಅವರಲ್ಲಿ ರಾಷ್ಟ್ರಪ್ರೇಮ ಮತ್ತು ಧರ್ಮಪ್ರೇಮವನ್ನು ಜಾಗೃತಗೊಳಿಸಲು ಶೌರ್ಯಜಾಗೃತಿ ಶಿಬಿರವನ್ನು ಇಲ್ಲಿನ ವಿಜಯನಗರದಲ್ಲಿ ಆಯೋಜಿಸಲಾಗಿತ್ತು. ಎಲ್ಲಾ ಯುವಕರಿಗೆ ಸ್ವರಕ್ಷಣೆಯೊಂದಿಗೆ ರಾಷ್ಟ್ರರಕ್ಷಣೆ ಹಾಗೂ ಧರ್ಮ ರಕ್ಷಣೆಗಾಗಿ ಲಾಠಿ ತರಬೇತಿಯನ್ನು ನೀಡಲಾಯಿತು.

ಭಾರತದಾದ್ಯಂತ ಕೆಲವು ವರ್ಷಗಳಿಂದ ಸಮಿತಿಯು ಯುವಕರಿಗೆ ಶೌರ್ಯ ಜಾಗೃತಿ ತರಬೇತಿ ಶಿಬಿರವನ್ನು ಆಯೋಜಿಸುತ್ತಿದ್ದು ಸಾವಿರಾರು ಹಿಂದೂ ಯುವಕರು ಇದರ ಲಾಭವನ್ನು ಪಡೆಯುತ್ತಿದ್ದಾರೆ. ಛತ್ರಪತಿ ಶಿವಾಜಿ ಮಹಾರಾಜರು, ಮಹಾರಾಣಾ ಪ್ರತಾಪ್ ಸಿಂಹ, ಶ್ರೀಕೃಷ್ಣದೇವರಾಯರಂತಹ ಮಹಾನ್ ಚೇತನಗಳು ತಮ್ಮ ಶೌರ್ಯ, ಸಾಹಸ, ಪರಾಕ್ರಮಗಳಿಂದ ಭಾರತವನ್ನು ದುಷ್ಟಶಕ್ತಿ ಗಳಿಂದ ರಕ್ಷಿಸಿ ಸದೃಢವಾಗಿ ಆಳ್ವಿಕೆಯನ್ನು ಮಾಡಿದ್ದರು.

ಅವರೆಲ್ಲರ ಶೌರ್ಯ ಪರಾಕ್ರಮ ಇಂದಿನ ಪೀಳಿಗೆಗಳಿಗೆ ಆದರ್ಶಪ್ರಾಯವಾಗಿದೆ. ಭಾರತವನ್ನು ವಿಶ್ವಗುರುವನ್ನಾಗಿಸುವಲ್ಲಿ ಇಂದಿನ ಯುವಕರ ಪಾತ್ರ ಮಹತ್ವದ್ದಾಗಿದೆ. ಅವರನ್ನು ಸದೃಢವಾಗಿಸುವ ಜೊತೆಗೆ ಆತ್ಮಸ್ಥೈರ್ಯವನ್ನು ಜಾಗೃತಗೊಳಿಸುವ ಕಾರ್ಯವು ಇಂತಹ ತರಬೇತಿ ಶಿಬಿರಗಳಿಂದ ಸಾಧ್ಯವಾಗುತ್ತದೆ.

# ಹಾವು, ನಾಯಿಗಳಿಲ್ಲದ ಪ್ರದೇಶ ಯಾವುದು ಗೊತ್ತಾ?

• ಉದಯವಾಹಿನಿ, ಬೆಂಗಳೂರು



ಹಾವುಗಳು ಮತ್ತು ನಾಯಿಗಳು ಮನುಷ್ಯರ ನಡುವೆ ವಾಸಿಸುವ ಸಾಮಾನ್ಯ ಜೀವಿಗಳಾಗಿವೆ. ಅದರಲ್ಲೂ ನಾಯಿಗಳು ಮನುಷ್ಯ ಬೆಸ್ಟ್ ಫ್ರೆಂಡ್ ಎಂದು ಹೇಳಿದರೆ ತಪ್ಪಾಗಲಾರದು. ನಿಯತ್ತಿಗೆ ಇನ್ನೊಂದು ಹೆಸರೇ ಶ್ವಾನಗಳು. ಒಂದು ಹೊತ್ತು ಊಟ ಹಾಕಿದರೆ ಸಾಯುವವರೆಗೂ ಆತನನ್ನು ಶ್ವಾನಗಳು ಮರೆಯುವುದಿಲ್ಲ. ಇನ್ನು ಹಾವುಗಳನ್ನು ನಮ್ಮ ದೇಶದಲ್ಲಿ ಪೂಜನೀಯ ಭಾವನೆಯಿಂದ ನೋಡಲಾಗುತ್ತದೆ. ಅಷ್ಟಕ್ಕೂ ಹೀಗೇಕೆ ನಾಯಿ ಮತ್ತು ಹಾವಿನ ವಿಚಾರ ಎಂಬ ಪ್ರಶ್ನೆ ನಿಮ್ಮಲ್ಲಿ ಮೂಡಿರಬಹುದು. ಅದಕ್ಕೂ ಒಂದು ಕಾರಣವಿದೆ.

ಅದೇನೆಂದರೆ, ನಮ್ಮ ಭಾರತದಲ್ಲಿ ನಾಯಿ ಮತ್ತು ಹಾವುಗಳಿರದ ಒಂದು ಪ್ರದೇಶವಿದೆ ಅಂದರೆ ನೀವು ನಂಬುತ್ತೀರಾ? ನಂಬಲು ಕಷ್ಟವಾಗಬಹುದು. ಆದರೆ, ಇದೇ ವಾಸ್ತವ. ಹಾವುಗಳು ಮತ್ತು ನಾಯಿಗಳಿಂದ ಮುಕ್ತವಾಗಿರುವ ಭಾರತದ ಪ್ರದೇಶ ಯಾವುದು ಎಂಬುದರ ಕುರಿತು ನಾವೀಗ ತಿಳಿದುಕೊಳ್ಳೋಣ. ಆತ್ಮೀಯ ಏಷ್ಯಾದಲ್ಲಿ 3,600 ಜಾತಿಯ ಹಾವುಗಳಿವೆ. ಇವುಗಳಲ್ಲಿ ಸುಮಾರು 600 ಜಾತಿಗಳು ವಿಷಪೂರಿತವಾಗಿವೆ. ಭಾರತವೊಂದರಲ್ಲೇ 230 ಜಾತಿಯ ಹಾವುಗಳಿವೆ. ಅವುಗಳಲ್ಲಿ ಕಾಳಿಂಗ ಸರ್ಪ, ವೈಪರ್ ಮತ್ತು ಬೋವಾ ಕನ್ಸಿಕ್ಟರ್ ವಿಷಪೂರಿತ ಹಾವುಗಳಾಗಿವೆ.ಇನ್ನು ಕೇರಳವು ಭಾರತದಲ್ಲಿ ಅತಿ ಹೆಚ್ಚು ಹಾವು ಪ್ರಭೇದಗಳನ್ನು ಹೊಂದಿರುವ ರಾಜ್ಯವಾಗಿದೆ. ಆದರೆ, ಪರಿಸರ ಹಾನಿ, ಅರಣ್ಯನಾಶ ಮುಂತಾದ ವಿವಿಧ ಕಾರಣಗಳಿಂದಾಗಿ ಹಾವು ಪ್ರಭೇದಗಳು ದಿನದಿಂದ ದಿನಕ್ಕೆ ನಶಿಸಿ ಹೋಗುತ್ತಿವೆ ಎಂದು ವನ್ಯಜೀವಿ ಕಾರ್ಯಕರ್ತರು ಕಳವಳ ವ್ಯಕ್ತಪಡಿಸಿದ್ದಾರೆ.

ಆದರೆ ಭಾರತದ ಒಂದು ಪ್ರದೇಶದಲ್ಲಿ ಹಾವುಗಳು ಅಥವಾ ನಾಯಿಗಳಿಲ್ಲ ಎಂಬುದು ನಿಮಗೆ ತಿಳಿದಿದೆಯೇ? ಇದು ನಿಜಕ್ಕೂ ಆಶ್ಚರ್ಯಕರವಾಗಿದೆ. ಅಂದಹಾಗೆ ಲಕ್ಷದ್ವೀಪವು ಭಾರತದ ಕೇಂದ್ರಾಡಳಿತ ಪ್ರದೇಶವಾಗಿದೆ. ಇದರ ವಿಸ್ತೀರ್ಣ 32 ಚದರ ಕಿಲೋಮೀಟರ್ ಲಕ್ಷದ್ವೀಪವು 36 ಸಣ್ಣ ದ್ವೀಪಗಳಿಂದ ಕೂಡಿದೆ. ಇಲ್ಲಿನ ಜನಸಂಖ್ಯೆ 64,000. ಲಕ್ಷದ್ವೀಪದಲ್ಲಿ ಶೇ.96 ರಷ್ಟು ಮುಸ್ಲಿಮರು ವಾಸವಿದ್ದಾರೆ. ಉಳಿದ ಶೇ.4 ರಷ್ಟು ಹಿಂದು, ಬೌದ್ಧರು ಮತ್ತು ಇತರ ಧರ್ಮದವರಿದ್ದಾರೆ.

ಭಾರತದಲ್ಲಿ ಹಾವುಗಳು ಮತ್ತು ನಾಯಿಗಳಿಂದ ಮುಕ್ತವಾಗಿರುವ ಏಕೈಕ ರಾಜ್ಯ ಲಕ್ಷದ್ವೀಪ. ಅಷ್ಟೇ ಅಲ್ಲ, ಲಕ್ಷದ್ವೀಪಕ್ಕೆ ಭೇಟಿ ನೀಡುವ ಪ್ರವಾಸಿಗರು ತಮ್ಮೊಂದಿಗೆ ನಾಯಿಗಳನ್ನು ತರುವುದನ್ನು ಸಹ ನಿಷೇಧಿಸಲಾಗಿದೆ ಎಂಬುದು ಗಮನಾರ್ಹ ಸಂಗತಿ.

# ಬಾಲ್ಯದ ದಿನಗಳ ಕನ್ನಡದಲ್ಲೇ ಸ್ಮರಿಸಿದ ತಲೈವಾ

• ಉದಯವಾಹಿನಿ, ಬೆಂಗಳೂರು

ನನ್ನ ನಟನೆಯ ವೃತ್ತಿ ಆರಂಭವಾಗಿದ್ದೇ ಎಪಿಎಸ್ (ಆಚಾರ್ಯ ಪಾಠ ಶಾಲಾ)ನಿಂದ ಎಂದು ಹೇಳಿರುವ ಸೂಪರ್ ಸ್ಟಾರ್ ನಟ ರಜನಿಕಾಂತ್ ಅವರು, ಕನ್ನಡದಲ್ಲಿ ಮಾತನಾಡಿ ತಮ್ಮ ಶಾಲಾ ದಿನಗಳನ್ನು ಸ್ಮರಿಸಿದ್ದಾರೆ. Skyscanner ಬಸವನಗುಡಿಯ ಆಚಾರ್ಯ ಪಾಠಶಾಲಾ ಶಾಲೆಯ (ಎಪಿಎಸ್) 90ನೇ ವಾರ್ಷಿಕೋತ್ಸವ ಹಾಗೂ ಹಳೆಯ ವಿದ್ಯಾರ್ಥಿಗಳ ಸಮಾವೇಶದಲ್ಲಿ ಭಾಗವಹಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ರಜನಿಕಾಂತ್ ಅವರು ಬ್ಯಾಂಕಾಕ್‌ನಿಂದ ವಿಡಿಯೋ ಮೂಲಕ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಂಡಿದ್ದಾರೆ. ಬೆಂಗಳೂರಿನಲ್ಲಿ ಎಪಿಎಸ್ ಸ್ಕೂಲ್-ಕಾಲೇಜಿನಲ್ಲಿ ಓದಿದಕ್ಕೆ ನನಗೆ ಈಗಲೂ ತುಂಬಾ ಹೆಮ್ಮೆ ಇದೆ. ಮೊದಲು ನಾನು ಗವಿಪುರದಲ್ಲಿರುವ ಗಂಗಾಧರೇಶ್ವರ ದೇವಾಲಯದ ಬಳಿ ಇರುವ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಓದುತ್ತಿದ್ದೆ. ನಾನು ಕ್ಲಾಸ್‌ಗೆ ಫಸ್ಟ್, ಬೆಸ್ಟ್ ಸ್ಟುಡೆಂಟ್, ಕ್ಲಾಸ್‌ಗೆ ನಾನೇ ಮಾನಿಟರ್ ಆಗಿದ್ದೆ. ಮಿಡಲ್ ಸ್ಕೂಲ್ ನಲ್ಲಿ ಶೇ.98 ಸ್ಕೋರ್ ಮಾಡಿದ್ದೆ. ಸ್ಕೂಲ್‌ನಲ್ಲಿ ತುಂಬಾ ಒಳ್ಳೆಯ ಮಾರ್ಕ್ಸ್ ತೆಗೆದುಕೊಂಡಿದ್ದಕ್ಕೆ ನಮ್ಮ ಅಣ್ಣ, ನನ್ನನ್ನು ಇಂಗ್ಲಿಷ್ ಮೀಡಿಯಂಗೆ ಎಪಿಎಸ್ ಹೈಸ್ಕೂಲ್‌ಗೆ ಸೇರಿಸಿಬಿಟ್ಟ. ಇದರಿಂದ ನಾನು ಫಂಕ್ ಆಗಿಬಿಟ್ಟೆ. ಮೊದಲ ಬೆಂಚ್ ನಲ್ಲಿದ್ದ ಸ್ಟುಡೆಂಟ್ ಕೊನೆ ಬೆಂಚ್‌ಗೆ ಬಂದು ಬಿಟ್ಟೆ ಇದರಿಂದ ಡಿಪ್ರೆಶನ್‌ಗೆ ಹೋದೆ. ಆದರೆ, ಎಪಿಎಸ್ ಸ್ಕೂಲ್-ಕಾಲೇಜಿನಲ್ಲಿ ಶಿಕ್ಷಕರು ನನ್ನ ಮೇಲೆ ಸಾಕಷ್ಟು ಅಭಿಮಾನ ತೋರಿಸಿದರು. ಕರುಣೆ ತೋರಿಸಿ, ಪ್ರೇಮದಿಂದ ಪಾಠ ಹೇಳಿದರು. ಇದರಿಂದ ನಾನು 8, 9ನೇ ತರಗತಿಯನ್ನು ಪಾಸ್ ಮಾಡಿದೆ. ಆದರೆ, 10ನೇ ತರಗತಿಯಲ್ಲಿ ಪಿಸಿಎಂ ವಿಷಯ ತೆಗೆದುಕೊಂಡಿದ್ದರಿಂದ ಓದುವುದರಲ್ಲಿ ಬಹಳ ವೀಕ್ ಆಗಿದ್ದ. ಇದರಿಂದ ಈ ವಿಷಯಗಳಲ್ಲಿ ಫೇಲ್ ಆಗಿದ್ದೆ. ಆವಾಗ ನಮ್ಮ ಕೆಮಿಸ್ಟ್ರೀ ಟೀಚರ್, ಮನಗೆ ಬಂದು 6 ಗಂಟೆಗೆ ಕ್ಲಾಸ್ ತೆಗೆದುಕೊಳ್ಳುತ್ತಿದ್ದರು. ಉಚಿತವಾಗಿ, ಸ್ಪೆಷಲ್ ಇಂಟ್ರಸ್ಟ್ ತೆಗೆದುಕೊಂಡು ಕ್ಲಾಸ್ ಮಾಡುತ್ತಿದ್ದರು. ಹೀಗಾಗಿ 10ನೇ ಕ್ಲಾಸ್ ಪಾಸ್ ಮಾಡಿದೆ. ಇದಾದ ಮೇಲೆ ಅಲ್ಲೇ ಎಪಿಎಸ್ ಕಾಲೇಜಿಗೆ ಸೇರಿದೆ. ಆದರೆ ಆ ಮೇಲೆ ಕೆಲ ಕಾರಣಗಳಿಂದ ಕಾಲೇಜು ಕಂಟಿನ್ಯೂ ಮಾಡಲಾಗಲಿಲ್ಲ ಎಂದು ಸ್ಮರಿಸಿದರು.

ಎಪಿಎಸ್ ಹೈಸ್ಕೂಲ್‌ನಲ್ಲಿ ಓದುವಾಗ ಪ್ರತಿ ವರ್ಷದಂತೆ ಇಂಟರ್ ಹೈಸ್ಕೂಲ್ ಡ್ರಾಮಾಗಳು ನಡೆದವು. ಇದರಲ್ಲಿ 10, 15 ಶಾಲೆಗಳು ಭಾಗಿಯಾಗಿದ್ದವು. ನಾನು ಶಾಲೆಗೆ ಲೇಟ್ ಆಗಿ ಬಂದಾಗ ಟೀಚರ್ ಬಳಿ, ಯಾವುದಾದರೂ ಸಿನಿಮಾ ನೋಡಿದ್ದು, ನಾಟಕ ನೋಡಿದನ್ನ ಆಯಕ್ಟ್ ಮಾಡಿ, ಕಥೆ ಹೇಳುತ್ತಿದ್ದರಿಂದ ಎಲ್ಲರಿಗೂ ತುಂಬಾ ಇಷ್ಟ ಆಗಿದ್ದೆ.

ಇದು ಶಿಕ್ಷಕರಿಗೂ ಗೊತ್ತಾಗಿತ್ತು. ಹೀಗಾಗಿ ಇಂಟರ್ ಹೈಸ್ಕೂಲ್ ಡ್ರಾಮಾ ಕಾರ್ಯಕ್ರಮದಲ್ಲಿ ನೀನು ಡ್ರಾಮಾ ಮಾಡಬೇಕು ಎಂದು ಹೇಳಿದ್ದರು. ಆದಿಶಂಕರ ಮತ್ತು ಚಾಂಡಾಲ ಭೇಟಿಯ ನಾಟಕವದು. ಈ ದೃಶ್ಯದಲ್ಲಿ ನಾನು ಚಾಂಡಾಲನ ಪಾತ್ರ ನಿರ್ವಹಿಸಿದ್ದೆ. ನೋಡಲು ಚಾಂಡಾಲನಂತೆ ಕಾಣುತ್ತಿದ್ದುದರಿಂದ ನನ್ನನ್ನು ಆ ಪಾತ್ರಕ್ಕೆ ಆಯ್ಕೆ ಮಾಡಿದ್ದರು ಎನ್ನಿಸುತ್ತದೆ. ಈ ನಾಟಕಕ್ಕಾಗಿ ನಮ್ಮ ತಂಡಕ್ಕೆ ಪ್ರಶಸ್ತಿ ಸಿಕ್ಕಿತು. ನನಗೆ ಅತ್ಯುತ್ತಮ ನಟ ಎಂಬ ದೊಡ್ಡ ಕಪ್ ಕೊಟ್ಟರು. ಆಗಿನಿಂದಲೇ ನನ್ನನ್ನು ನಟ ಎಂದು ಅಂಗೀಕಾರ ಮಾಡಿ, ನಟನೆಯನ್ನೇ ವೃತ್ತಿಯನ್ನಾಗಿ ತೆಗೆದುಕೊಳ್ಳುವಂತೆ ಮಾಡಿದ್ದು ಎಪಿಎಸ್ ಎಂದು ಹೇಳಿಕೊಳ್ಳಲು ಹೆಮ್ಮೆಯಾಗುತ್ತಿದೆ.

> **ಆ ಹೈಸ್ಕೂಲ್, ಕಲ್ಲಿನ ಕಟ್ಟಡ, ಎದುರಿರುವ ಮೈದಾನ, ಅಲ್ಲಿ ಆಡಿದ ಆಟಗಳನ್ನು ಮರೆಯಲು ಸಾಧ್ಯವಿಲ್ಲ. ಹೈಸ್ಕೂಲ್‌ಗೆ ಹೋಗುವಾಗ ನಮ್ಮ ಮನೆ ಹನುಮಂತನಗರದಲ್ಲಿತ್ತು ಅಲ್ಲಿಂದ ನಡೆದು ಹೈಸ್ಕೂಲ್ ಹೋಗುವ ರಸ್ತೆ ಯಾವಾಗಲು ಮನಸ್ಸಿನಲ್ಲಿ ಹಚ್ಚಹಸಿರಾಗಿರುತ್ತದೆ. ಮುಂದಿನ ಬಾರಿ ಬಂದಾಗ ನಿಮ್ಮೆಲ್ಲರನ್ನೂ ಭೇಟಿ ಮಾಡುತ್ತೇನೆ ಎಂದು ಎಪಿಎಸ್ ಹೈಸ್ಕೂಲ್ ಸಿಬ್ಬಂದಿಗೆ ತಿಳಿಸಿದ್ದಾರೆ. ಇದೇ ವೇಳೆ ಎಪಿಎಸ್ ಹೈಸ್ಕೂಲ್- ಕಾಲೇಜಿನ ಹಳೆಯ ವಿದ್ಯಾರ್ಥಿಗಳ ದಿನಾಚರಣೆಗೆ ಶುಭಾಶಯಗಳನ್ನು**
> -ರಜನಿಕಾಂತ್, ನಟ



# ಯುವ ಜನರಲ್ಲಿ ಹೆಚ್ಚುತ್ತಿರುವ ಕ್ಯಾನ್ಸರ್

## ಜೀವನಶೈಲಿಯ ಬದಲಾವಣೆಯ ಅಗತ್ಯತೆ

• ಉದಯವಾಹಿನಿ, ಬೆಂಗಳೂರು



ದಿನಕಳೆದಂತೆವಿವಿಧರೀತಿಯಕ್ಯಾನ್ಸರ್‌ಪ್ರಕರಣಗಳು ಏರುತ್ತಲೇಇವೆ.ಅದಕ್ಕೆದೊಡ್ಡವರುಚಿಕ್ಕವರುಎಂಬಬೇಧವಿಲ್ಲ. ಅದರಲ್ಲೂ ಮಹಿಳೆಯರಲ್ಲಿ ಹೆಚ್ಚು ಕ್ಯಾನ್ಸರ್ ಪ್ರಕರಣಗಳು ಕಂಡುಬರುತ್ತಿವೆ ಎಂದು ಹೇಳದೆ. ವರದಿಯಲ್ಲಿ ಸ್ತನ, ಗರ್ಭಾಶಯ, ಕೊಲೊರೆಕ್ಟಲ್ ಮತ್ತು ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ಸೇರಿದಂತೆ 50 ವರ್ಷಕ್ಕಿಂತ ಕಡಿಮೆ ವಯಸ್ಸಿನ ವಯಸ್ಕರಲ್ಲಿ ಆರಂಭಿಕ ಕ್ಯಾನ್ಸರ್‌ಗಳ ದರವನ್ನು ತೋರಿಸುತ್ತವೆ. ಇದಕ್ಕೆ ಆನುವಂಶಿಕ ಅಥವಾ ಜೀವನಶೈಲಿಯ ಅಂಶಗಳು ಪ್ರಮುಖ ಪಾತ್ರವಹಿಸುತ್ತವೆ. ಆದರೆ ಆರೋಗ್ಯಕರ ತೂಕವನ್ನು ಕಾಪಾಡಿಕೊಳ್ಳುವುದು, ಧೂಮಪಾನವನ್ನು ತ್ಯಜಿಸುವುದು, ಆಲೋಹಾಲ್ ಸೇವನೆಯನ್ನು ಮಿತಗೊಳಿಸುವುದು ಮತ್ತು ಪೌಷ್ಟಿಕಾಂಶ-ಭರಿತ ಆಹಾರವನ್ನು ತಿನ್ನುವುದು ಮುಂತಾದ ಸರಳ ಜೀವನಶೈಲಿ ಬದಲಾವಣೆಗಳು ಕ್ಯಾನ್ಸರ್ ಅಪಾಯಗಳನ್ನು ಗಮನಾರ್ಹವಾಗಿ ಕಡಿಮೆ ಮಾಡಬಹುದು. ಕ್ಯಾನ್ಸರ್ ಅಪಾಯವನ್ನು ಕಡಿಮೆ ಮಾಡುವಂಥ ಜೀವನಶೈಲಿ ಬದಲಾವಣೆಗಳ ಆರೋಗ್ಯಕರ ತೂಕವನ್ನು ಕಾಪಾಡಿಕೊಳ್ಳಿ. ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವ ಮೂಲಕ ತೂಕವನ್ನು ಕಳೆದುಕೊಳ್ಳುವುದು ಕ್ಯಾನ್ಸರ್ ಅಪಾಯವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ಅಧಿಕ ತೂಕ ಅಥವಾ ಸ್ಥೂಲಕಾಯತೆಯು ಸ್ತನ ಕ್ಯಾನ್ಸರ್, ಕರುಳಿನ ಕ್ಯಾನ್ಸರ್, ಗರ್ಭಾಶಯದ ಕ್ಯಾನ್ಸರ್, ಪಿತ್ತಕೋಶದ ಕ್ಯಾನ್ಸರ್, ಯಕೃತ್ತಿನ ಕ್ಯಾನ್ಸರ್ ಸೇರಿದಂತೆ 13 ವಿಧದ ಕ್ಯಾನ್ಸರ್ ಬರುವ ಹೆಚ್ಚಿನ ಅಪಾಯದೊಂದಿಗೆ ಸಂಬಂಧಿಸಿದೆ.

**ತಂಬಾಕುಬಿಟ್ಟುಬಿಡಿ:**

ಸಿಗರೇಟ್ ಮತ್ತು ಹೊಗೆರಹಿತ ತಂಬಾಕು ಮುಂತಾದ ತಂಬಾಕಿನ ಉತ್ಪನ್ನಗಳನ್ನು ತ್ಯಜಿಸುವುದರಿಂದ ಕ್ಯಾನ್ಸರ್ ಅಪಾಯವನ್ನು ಕಡಿಮೆ ಮಾಡಬಹುದು. ತಂಬಾಕು ಸೇವನೆಯು ಶ್ವಾಸಕೋಶದ ಕ್ಯಾನ್ಸರ್, ಬಾಯಿ ಕ್ಯಾನ್ಸರ್ ಮತ್ತು ಮೂತ್ರಕೋಶದ ಕ್ಯಾನ್ಸರ್ಗಳಿಗೆ ಸಂಬಂಧಿಸಿದೆ. ಒಂದು ದಶಕಗಳ ಕಾಲ ಸಿಗರೇಟುಗಳನ್ನು ತ್ಯಜಿಸುವುದರಿಂದ ನಿಮ್ಮ ಶ್ವಾಸಕೋಶದ ಕ್ಯಾನ್ಸರ್ ಅಪಾಯವನ್ನು 30-50% ರಷ್ಟು ಕಡಿಮೆ ಮಾಡಬಹುದು. ಹಾಗೆಯೇ ಮೂತ್ರಕೋಶ ಅನ್ನನಾಳ ಅಥವಾ ಮೂತ್ರಪಿಂಡದ ಕ್ಯಾನ್ಸರ್ ಅಪಾಯವನ್ನೂ ಕಡಿಮೆ ಮಾಡುತ್ತದೆ. ಜೊತೆಗೆ 5-10 ವರ್ಷಗಳ ಕಾಲ ಈ ಉತ್ಪನ್ನಗಳನ್ನು ತ್ಯಜಿಸುವ ಮೂಲಕ ನೀವು ಬಾಯಿ, ಗಂಟಲು ಅಥವಾ ಧ್ವನಿ ಪೆಟ್ಟಿಗೆಯ ಕ್ಯಾನ್ಸರ್ ಅಪಾಯವನ್ನು ಕಡಿಮೆ ಮಾಡಬಹುದು.

**ಫೈಬರ್ಸಮೃದ್ಧವಾಗಿರುವ ಆಹಾರಗಳನ್ನು ಸೇವಿಸಿ:** ಫೈಬರ್‌ನಲ್ಲಿ ಸಮೃದ್ಧವಾಗಿರುವ ಆಹಾರವನ್ನು ಸೇವಿಸುವುದರಿಂದ ನಿಮ್ಮ ಕರುಳನ್ನು ಆರೋಗ್ಯವಾಗಿಡಬಹುದು. ತೂಕ ಹೆಚ್ಚಾಗುವುದನ್ನು ತಡೆಯಬಹುದು. ಅಲ್ಲದೇ ಕನಿಷ್ಠ 13 ವಿಧದ ಕ್ಯಾನ್ಸರ್ ಅಪಾಯವನ್ನು ಕಡಿಮೆ ಮಾಡಬಹುದು. ಇದು ವಿಶೇಷವಾಗಿ ಕರುಳಿನ ಕ್ಯಾನ್ಸರ್ ಅಪಾಯವನ್ನು ಕಡಿಮೆ ಮಾಡುತ್ತದೆ. ಫೈಬರ್-ಭರಿತ ಆಹಾರಗಳು ಕರುಳಿನಲ್ಲಿರುವ ಹಾನಿಕಾರಕ ವಸ್ತುಗಳನ್ನು ಸಹ ತೆರವುಗೊಳಿಸಲೂ ಸಹಕಾರಿಯಾಗಿದೆ.

**ಯಾವಾಗಲೂಸನ್ ನೆಚ್ಚಿಕೊಳ್ಳಿ:** ಸೂರ್ಯನ ಹಾನಿಕಾರಕ ಯುವಿ ಕಿರಣಗಳು ಚರ್ಮದ ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸಬಹುದು. ಈ ಮಾರಣಾಂತಿಕ ರೋಗವನ್ನು ತಡೆಗಟ್ಟಲು ಸನ್‌ಸ್ಕ್ರೀನ್ ಹಚ್ಚಿಕೊಳ್ಳುವುದು ಮುಖ್ಯವಾಗಿದೆ. ಚರ್ಮದ ಕ್ಯಾನ್ಸರ್‌ಗೆ ಕಾರಣವಾಗುವ ಯುವಿ ಕಿರಣ ಗಳನ್ನು ತಡೆಯಲು ಇದು ಸಹಕಾರಿಯಾಗಿದೆ. ಸನ್‌ಸ್ಕಿನ್ ಕ್ಯಾನ್ಸರ್ ಅನ್ನು ಉಂಟುಮಾಡುವ ಬಗ್ಗೆ ಚರ್ಚೆಗಳಿದ್ದರೂ ಸ್ತನ ಕ್ಯಾನ್ಸರ್ ಅಥವಾ ಯಾವುದೇ ರೀತಿಯ ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸುವ ಸನ್ ಸ್ಕ್ರೀನ್ ಬಳಕೆಯ ಬಗ್ಗೆ ಸ್ಪಷ್ಟವಾದ ಪುರಾವೆಗಳಿಲ್ಲ.

**ಮದ್ಯಪಾನಮಾಡಬೇಡಿ**

**ಮದ್ಯಪಾನವು ಬಾಯಿ, ಗಂಟಲು, ಧ್ವನಿಪೆಟ್ಟಿಗೆ, ಅನ್ನನಾಳ, ಕೊಲೊನ್ ಮತ್ತು ಗುದನಾಳ, ಯಕೃತ್ತು ಮತ್ತು ಸ್ತನ ಕ್ಯಾನ್ಸರ್ ಸೇರಿದಂತೆ ಏಳು ರೀತಿಯ ಕ್ಯಾನ್ಸರ್‌ಗೆ ಸಂಬಂಧಿಸಿದೆ. ಯುಎಸ್ ಸರ್ಜನ್ ಡಾ.ವಿವೇಕ್ ಮೂರ್ತಿ ಅವರು ಇತ್ತೀಚೆಗೆ ಈ ಅಪಾಯವನ್ನು ಎತ್ತಿ ತೋರಿಸಲು ಆಲ್ಕೊಹಾಲ್‌ಯುಕ್ತ ಪಾನೀಯಗಳ ಲೇಬಲ್‌ಗಳನ್ನು ನವೀಕರಿಸಲು ಒತ್ತಾಯಿಸಿದ್ದರು. ತಂಬಾಕು ಮತ್ತು ಸ್ಥೂಲಕಾಯದ ನಂತರ, ಯುಎಸ್ ನಲ್ಲಿ ಕ್ಯಾನ್ಸರ್‌ಗೆ ಕಾರಣವಾಗಬಹುದಾದ ಮೂರನೇ ಅಂಶ ಆಲೋಹಾಲ್ ಆಗಿದೆ. ಹಾಗಾಗಿ ಅದನ್ನು ಸಂಪೂರ್ಣವಾಗಿ ತ್ಯಜಿಸಿ.**

# ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲಾ ಮಕ್ಕಳಿಗೂ ವಿಮೆ

## ರಾಷ್ಟ್ರೀಯ ಗ್ರಾಮೀಣ ಸಾಕ್ಷರತಾ ಮಿಷನ್ ಸಂಸ್ಥೆ ನವದೆಹಲಿ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ಸ್ಕೂಲ್ ಬ್ಯಾಗ್ ವಿತರಣೆ

• ಉದಯವಾಹಿನಿ ವಿಜಯಪುರ

ರಾಜ್ಯದಲ್ಲೇ ಪ್ರಥಮ ಹಾಗೂ ವಿನೂತನವಾಗಿ ಶಾಲಾ ಮಕ್ಕಳಿಗೆ ಗುಂಪು ವಿಮೆಗೆ ಒಳಪಡಿಸುವ ಮಹತ್ತರ ಕಾರ್ಯಕ್ರಮಕ್ಕೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣವು ಸಾಕ್ಷಿ ಆಯಿತು.

ಮಕ್ಕಳು ಅಪಘಾತ, ವಿದ್ಯುತ್ ಶಾಕ್, ಹಾವು, ಚೇಳು ಕಡಿತ ಮತ್ತಿತರೆ ಕಾರಣಗಳಿಂದ ಮೃತಪಟ್ಟರೆ, ಅವರನ್ನೇ ನಂಬಿದ್ದ ಆ ಮನೆಯೇ ಕತ್ತಲಾಗಲಿದೆ. ಈ ವಿಮೆ ಸೌಲಭ್ಯದಿಂದ ಅಂತಹ ಪಾಲಕರಿಗೆ ಆರ್ಥಿಕವಾಗಿ ನೆರವಾಗಲು (ರೂ.2 ಲಕ್ಷ ಪರಿಹಾರ), ಗಂಭೀರವಾಗಿ ಗಾಯಗೊಂಡ ಮಕ್ಕಳ ಚಿಕಿತ್ಸೆಗೆ (ರೂ.1 ಲಕ್ಷ ಪರಿಹಾರ) ಅನುಕೂಲ ಕಲ್ಪಿಸುವ ಸದುದ್ದೇಶದಿಂದ ಸಿದ್ದಸಿರಿ ಸೌಹಾರ್ದ ಸಹಕಾರಿ ಸಂಘ ನಿಯಮಿತದಿಂದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ವಿಮಾ ಖಾತೆಗೆ ಹಣ ಭರಣಾ ಮಾಡಿ, ವಿಜಯಪುರ ನಗರ ಮತಕ್ಷೇತ್ರದದಲ್ಲಿ ಬರುವ 128 ಪ್ರಾಥಮಿಕ ಶಾಲೆಗಳು ಹಾಗೂ 7 ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 15,279 ಮಕ್ಕಳನ್ನು ಗುಂಪು ವಿಮೆಗೆ ಒಳಪಡಿಸಿ, ಪ್ರಮಾಣ ಪತ್ರ ವಿತರಿಸಲಾಯಿತು.

> ಮಕ್ಕಳ ಜೀವನದಲ್ಲಿ ನೀರಿನಲ್ಲಿ ಮುಳುಗಿ, ಹಾವು, ಚೇಳು ಕಡಿತ, ವಿದ್ಯುತ್ ಶಾಕ್ ಮತ್ತಿತರೆ ಕಾರಣದಿಂದ ಆಗಬಹುದಾದ ಅಪಾಯಕ್ಕೆ ಗುಂಪು ವಿಮೆ ಜಾರಿ ಮಾಡಿರುವುದು ಶ್ಲಾಘನೀಯ ಕಾರ್ಯ ಎಂದರು.
> -ಶಂಕರ ಮಾರಿಹಾಳ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಅಲ್ಲದೆ, ರಾಷ್ಟ್ರೀಯ ಗ್ರಾಮೀಣ ಸಾಕ್ಷರತಾ ಮಿಷನ್ ಸಂಸ್ಥೆ ನವದೆಹಲಿ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ಸ್ಕೂಲ್ ಬ್ಯಾಗ್ ಸಹ ವಿತರಿಸಲಾಯಿತು.

ನಂತರ ಮಾತನಾಡಿದ ಸಿದ್ದಸಿರಿ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ ಹಾಗೂ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು, ಸುರಕ್ಷತೆ ಎನ್ನುವುದು ಎಲ್ಲದಕ್ಕೂ ಇದೆ.

ಅವರಿಗೆ ವಿಮೆ ಮಾಡಬೇಕೆಂದು ಯೋಚಿಸಿ, ನಗರ ಮಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಶಾಲೆಗಳಿಗೆ ಮಾತ್ರ ವಿಮೆಗೆ ಒಳಪಡಿಸಲಾಗಿತ್ತು. ಈಗಾಗಲೇ ನಗರದ ಸರ್ಕಾರಿ ಶಾಲೆಗಳ ಸಾಕಷ್ಟು


ಉದಯವಾಹಿನಿ ಚಿತ್ರ

ಕೊಠಡಿಗಳ ನಿರ್ಮಾಣ, ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ, ಮೂಲಸೌಕರ್ಯ ಒದಗಿಸಲಾಗಿದ್ದು, ದೇಶದ ಭವಿಷ್ಯ ರೂಪಿಸುವ ಶಾಲೆಗಳ ಅಭಿವೃದ್ಧಿಗೂ ಇನ್ನೂ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಶಾಸಕ ವಿಠ್ಠಲ ಕಟಕಧೋಂಡ ಮಾತನಾಡಿ, ಈ ದಿನ ಅತ್ಯಂತ ಶುಭ ದಿನವಾಗಿದೆ. ಬಸನಗೌಡ ಪಾಟೀಲ ಯತ್ನಾಳರು, ಇಂದಿನ ಮಕ್ಕಳೇ ನಾಳೆಯ ನಾಗರಿಕರು ಎಂಬ ಕಲ್ಪನೆಯಿಂದ ತಮ್ಮ ಅಧ್ಯಕ್ಷತೆಯ ಸಿದ್ದಸಿರಿ ಸೌಹಾರ್ದ ಸಹಕಾರಿಯಿಂದ ಜಾತಿ, ಧರ್ಮ ಎನ್ನದೆ, ನನ್ನ ನಾಗಠಾಣ ಮತಕ್ಷೇತ್ರದಲ್ಲೂ 33 ಶಾಲೆಗಳು ಸೇರಿ ನೂರಾರು ಶಾಲೆಗಳ ಮಕ್ಕಳಿಗೆ ಗುಂಪು ವಿಮೆ

### ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ

ಶಿಕ್ಷಣ ಇಲಾಖೆ ಅಧಿಕಾರಿಗಳು, ಶಿಕ್ಷಕರ ಮನವಿ ಮೇರೆಗೆ ನಗರದಲ್ಲಿ ಬರುವ ಎಲ್ಲಾ ಅನುದಾನಿತ, ಅನುದಾನ ರಹಿತ ಶಾಲೆಗಳ ಮಕ್ಕಳಿಗೂ ಸಹ ಈ ಗುಂಪು ಯೋಜನೆಯಡಿ ಒಳಪಡಿಸುವುದಾಗಿ ಘೋಷಿಸಿದರು. ವಿಮೆ ಜೊತೆಗೆ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲು ಹಾಗೂ ಅವರ ಉನ್ನತ ಶಿಕ್ಷಣಕ್ಕೆ ಅನುಕೂಲ ಮಾಡಿಕೊಡಲು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ವಿಜಯಪುರ ಜಿಲ್ಲೆಗೆ ಹಾಗೂ ಎಲ್ಲಾ ತಾಲ್ಲೂಕುಗಳಿಗೆ ಪ್ರಥಮ ಸ್ಥಾನ ಪಡೆಯುವ ಮಕ್ಕಳಿಗೆ ಲ್ಯಾಪಟಾಪ್ ಬಹುಮಾನವಾಗಿ ನೀಡಲಾಗುವುದು ಎಂದು ತಿಳಿಸಿದರು.

**ಉನ್ನತ ಶಿಕ್ಷಣಕ್ಕೆ ಅನುಕೂಲ**

ಮಾಡಿಸುವ ಮೂಲಕ ದೇಶದಲ್ಲೇ ಮಾದರಿ ಕಾರ್ಯ. ಅವರು ಮತ್ತೊಬ್ಬರಿಗೆ ಮಾರ್ಗದರ್ಶಿಯಾಗುವ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಇದು ಮಕ್ಕಳ ಪ್ರಪಂಚ. ಮಕ್ಕಳಿಗಾಗಿಯೇ ಶಿಕ್ಷಕರು, ಪಾಲಕರು. ಅವರ ಯೋಜನೆಗಳನ್ನು ರೂಪಿಸುವುದು ನಮ್ಮ ಕರ್ತವ್ಯ. ಶಾಸಕ ಬಸನಗೌಡ ಪಾಟೀಲ ಯತ್ನಾಳರು ಮಕ್ಕಳಿಗಾಗಿ ಮಾಡುತ್ತಿರುವ ವಿಮೆ ಯೋಜನೆ ದೇಶದಲ್ಲೇ ಪ್ರಥಮ ಕಾರ್ಯಕ್ರಮ ಎನ್ನುವುದಕ್ಕೆ ಖುಷಿ ಆಗುತ್ತಿದೆ ಎಂದರು.

ವಿಜಯಪುರ ನಗರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ, ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ಮಕ್ಕಳನ್ನು ಅತ್ಯಂತ ಸಮಾಜಮುಖಿಯಾಗಿ ಗುಂಪು ವಿಮೆ ಅದ್ಯಾರ್ಪಿಸಿ, ಪತ್ರ ನೀಡುವ ಮೂಲಕ ಮಕ್ಕಳ ಬದುಕಿನಲ್ಲಿ ಹೊಸ ಭಾಷ್ಯ ಬರೆಯುವ ಸುಂದರ ಕ್ಷಣಕ್ಕೆ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಮಾಡಿರುವ ಕೆಲಸ ಐತಿಹಾಸಿಕ ಹಾಗೂ ಅರ್ಥಪೂರ್ಣವಾದದ್ದು ಎಂದು ಹೇಳಿದರು.

# ಮಹಿಳಾ ವಿಚಾರಗೋಷ್ಠಿ ಕಾಯಕ್ರಮ

• ಉದಯವಾಹಿನಿ ನವಲಗುಂದ

ಮಹಿಳೆಯರ ಸ್ವಾವಲಂಬಿ ಜೀವನ ನಡೆಸಲು ಧರ್ಮಸ್ಥಳ ಯೋಜನೆಯು ದಾರಿದೀಪವಾಗಿದೆ ಎಂದು ಪಿಎಸ್ಐ ಜನಾರ್ಧನ ಭಟ್ರಳ್ಳಿ ಹೇಳಿದರು.

ಅವರು ಪಟ್ಟಣದ ಗವಿಮಠದ ದಾಸೋಹ ಭವನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಮಹಿಳೆಯರಿಗೆ ಕಾನೂನಿನಲ್ಲಿರುವ ಸೌಲಭ್ಯಗಳು ಮತ್ತು ಅವುಗಳನ್ನು ಪಡೆಯುವುದರ ಬಗ್ಗೆ ಮಾಹಿತಿಯನ್ನು ನೀಡಿದರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ನಿರ್ದೇಶಕರಾದ ಯೋಗೀಶ್ ಮಾತನಾಡಿ ತಾಯಂದಿರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಸಂಸ್ಥೆಯು ನಿರ್ಗತಿಕರ ಮಾಶಾಸನ, ಜನ ಮಂಗಳ ಕಾರ್ಯಕ್ರಮ, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಯೋಜನೆಯು ನಡೆದು ಬಂದ ದಾರಿಯ ಕುರಿತು ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾದ ಡಾ.ರೂಪಾ ಕಿಣಗಿ ಮಾತನಾಡಿ ಮಹಿಳೆಯರಿಗೆ ಯೋಜನೆಯು ವರದಾನ ಆಗಿದ್ದು ಇದರ ಸದುಪಯೋಗ ಪಡೆದು ಮಹಿಳೆಯು


ಉದಯವಾಹಿನಿ ಚಿತ್ರ

ಮನೆಯ ಜವಾಬ್ದಾರಿಯನ್ನು ನಿಭಾಯಿಸಿದಲ್ಲಿ ಮನೆಯ ಅಭಿವೃದ್ಧಿ ಉತ್ತುಂಗದ ಶಿಖರ ಏರುತ್ತದೆ ಎಂದು ತಿಳಿಸಿದರು.

ಇದೆ ವೇಳೆ ಸಾಂಸ್ಕೃತಿಕ ಕಾರ್ಯಕ್ರಮ ನೀಡಿದ ಎಲ್ಲಾ ಸದಸ್ಯರಿಗೂ ಸ್ಮರಣಿಕೆಯನ್ನು ನೀಡಿ ಗೌರವಿಸಲಾಯಿತು. ಅಧ್ಯಕ್ಷತೆಯನ್ನು ಪೂರ್ಣಿಮಾ ಜೋಶಿ ವಹಿಸಿದ್ದರು.

ಈರಣ್ಣ ಚವಡಿ, ಪಾರ್ವತಿ ಹಿರೇಮಠ, ಪ್ರೇಮಾ ಹತ್ತಿಕಟಗಿ, ಸೇರಿದಂತೆ ಜ್ಞಾನ ವಿಕಾಸ ಕೇಂದ್ರದ ಸಂಯೋಜಕೀಯರು ಉಪಸ್ಥಿತರಿದ್ದರು. ಯೋಜನಾಧಿಕಾರಿಗಳಾದ ದಿನೇಶ್ ಶೇರಿಗಾರ ಸ್ವಾಗತಿಸಿದರು, ಕೃಷಿ ಅಧಿಕಾರಿ ಶಂಕ್ರಪ್ಪ ನಿರೂಪಿಸಿದರು, ಜಿ ವಿ ಕೆ ಆಶಾ ವಂದಿಸಿದರು.

# ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ಯುವ ಮೋರ್ಚಾ ಪ್ರತಿಭಟನೆ

• ಉದಯವಾಹಿನಿ ಚಿಕ್ಕಮಗಳೂರು

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು 'ನಮ್ಮ ಹೋರಾಟ ಭಾರತದ ವಿರುದ್ಧ' ಎಂಬ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಬಿಜೆಪಿ ಯುವ ಮೋರ್ಚಾ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಹನುಮಂತಪ್ಪ ವೃತ್ತದಲ್ಲಿ ಜಮಾಯಿಸಿದ ಕಾರ್ಯಕರ್ತರು ರಾಹುಲ್ ಗಾಂಧಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಆರ್ .ದೇವರಾಜ್ ಶೆಟ್ಟಿ ಮಾತನಾಡಿ, 'ದೇಶಕ್ಕೆ ತುರ್ತು ಪರಿಸ್ಥಿತಿ ಹೇರಿದ್ದ ಇಂದಿರಾ ಗಾಂಧಿ ವಿರುದ್ಧ ಆಟಲ್ ಬಿಹಾರಿ ವಾಜಪೇಯಿ ವಿದೇಶದಲ್ಲಿ ಎಂದಿಗೂ ಟೀಕಿಸಿರಲಿಲ್ಲ, ಆದರೆ, ಇಂದಿರಾ ಮೊಮ್ಮಗ ಇಂದು ವಿದೇಶಗಳಲ್ಲಿ ಭಾರತದ ಬಗ್ಗೆ ಸುಳ್ಳು ಹೇಳಿಕೊಂಡು ಪ್ರಚಾರ ಗಿಟ್ಟಿಸುತ್ತಿದ್ದಾರೆ ಎಂದು ಆರೋಪಿಸಿದರು.

ದೇಶದ ಜನತೆಗೆ ಗೌರವ ತರಲು ಭಾರತವನ್ನು ವಿಶ್ವಗುರು ಮಾಡಲು ಪ್ರಧಾನಿ ನರೇಂದ್ರ



ಉದಯವಾಹಿನಿ ಚಿತ್ರ

ಮೋದಿ ಹೊರಟಿದ್ದಾರೆ. ಇನ್ನೊಂದೆಡೆ ರಾಹುಲ್ ಗಾಂಧಿ ಬೇಜವಾಬ್ದಾರಿ ಹೇಳಿಕೆ ನೀಡಿ ದೇಶ ಒಡೆಯುವ ಕಾರ್ಯದಲ್ಲಿ ತೊಡಗಿದ್ದಾರೆ ಎಂದು ದೂರಿದರು.

ಯುವ ಮೋರ್ಚಾ ಜಿಲ್ಲಾ ಘಟಕದ ಅಧ್ಯಕ್ಷ ಸಂತೋಷ್ ಕೋಟ್ಯಾನ್ ಮಾತನಾಡಿ, ಕಾಂಗ್ರೆಸ್ ಕಚೇರಿ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾರತ ದೇಶ, ಬಿಜೆಪಿ ಹಾಗೂ ಆರ್‌ಎಸ್‌ಎಸ್ ವಿರುದ್ಧ ನಮ್ಮ ಹೋರಾಟ ಎಂದು ಹೇಳಿಕೆ ನೀಡಿದ್ದಾರೆ.

ರಾಹುಲ್ ಗಾಂಧಿ ನೈತಿಕವಾಗಿ ನಕ್ಸಲರು, ಉಗ್ರಗ್ರಾಮಿಗಳ ನೆರಳಿನಲ್ಲಿ ನಿಂತಿದ್ದಾರೆ. ಇದು

> ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಂದ್ರ ಮಾತನಾಡಿ, ಕಾಂಗ್ರೆಸ್ ಮೋದಿ ಆಳ್ವಿಕೆ ಟೀಕಿಸುವುದು, ಹೊರ ದೇಶದಲ್ಲಿ ಭಾರತಕ್ಕೆ ಅವಮಾನ ಮಾಡುವ ಹೇಳಿಕೆ ನೀಡುವುದೇ ರಾಹುಲ್ ಗಾಂಧಿ ದೊಡ್ಡ ಸಾಧನೆಯಾಗಿದೆ. ಅವರನ್ನು ಸಂಸದರ ಸ್ಥಾನದಿಂದ ಅನರ್ಹಗೊಳಿಸಬೇಕು' ಎಂದು ಒತ್ತಾಯಿಸಿದರು.

ಭವಿಷ್ಯದಲ್ಲಿ ದೇಶಕ್ಕೆ ಆಘಾತಕಾರಿ ಬೆಳವಣಿಗೆ' ಎಂದು ಹೇಳಿದರು.

ಬಿಜೆಪಿ ಒಬಿಸಿ ಘಟಕದ ರಾಜ್ಯ ಕಾರ್ಯದರ್ಶಿ ಬಿ.ರಾಜಪ್ಪ, ಜಿಲ್ಲಾ ವಕ್ತಾರ ಸಿ.ಎಚ್. ಲೋಕೇಶ್, ಮುಖಂಡರುಗಳಾದ ಹಿರೇಮಗಳೂರು ಪುಟ್ಟಸ್ವಾಮಿ, ಶಶಿ ಆಲ್ದೂರು, ನೆಟ್ಟಿಕೆರೆಹಳ್ಳಿ ಜಯಣ್ಣ, ಮಂಜುನಾಥ್ ಹಾಜರಿದ್ದರು.

# ಸ್ವಾಮಿ ವಿವೇಕಾನಂದರ ಜಯಂತ್ಯುತ್ಸವದ ಅಂಗವಾಗಿ ರಾಷ್ಟ್ರೀಯ ಯುವ ದಿನಾಚರಣೆ

• ಉದಯವಾಹಿನಿ ಬೀದರ

ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ, ಬೀದರ ಶಾಖೆಯ ವತಿಯಿಂದ ಕಮಠಾಣಾದ ಮೊರಾರ್ಜಿ ದೇಸಾಯಿ ವಸತಿಶಾಲೆ ಹಾಗೂ ಪಿ.ಯು ಕಾಲೇಜ್‌ನಲ್ಲಿ ಸ್ವಾಮಿ ವಿವೇಕಾನಂದರ ಜಯಂತ್ಯುತ್ಸವದ ಅಂಗವಾಗಿ ''ರಾಷ್ಟ್ರೀಯ ಯುವ ದಿನಾಚರಣೆ'' ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದ ಎಫ್‌ಪಿಎಐ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಪಾಟೀಲ್ ಇವರು ''ಯುವಜನರು ಶಿಕ್ಷಣದ ಜೊತೆಗೆ ಸಮಾಜ ಕಾರ್ಯ ಮಾಡುವ ಮನಸ್ಸು, ಮತ್ತು ಇಚ್ಛಾ ಶಕ್ತಿ ಹೊಂದಿದರೆ, ಯಾವುದೇ ಕಾರ್ಯವಾದರೂ ಸಾಧಿಸಬಹುದು, ದೇಶದ ಅಭಿವೃದ್ದಿಯಲ್ಲಿ ಯುವಕರ ಪಾತ್ರ ಬಹು ಮುಖ್ಯವಾಗಿದೆ. ಯುವಜನತೆ ದೇಶದ ಏಳಿಗೆಗಾಗಿ, ಅಭಿವೃದ್ದಿಗಾಗಿ ಸೇವೆ ಸಲ್ಲಿಸಬೇಕೆಂದು'' ಕರೆ ನೀಡಿದರು. ಎಫ್‌ಪಿಎಐ ಸಂಸ್ಥೆಯ ಕಾರ್ಯಕಾರಿಣಿ ಸಭೆಯ ಸದಸ್ಯರು ಹಾಗೂ ನೌಬಾದನ ಸಹಾರ್ದಾ ತರಬೇತಿ ಕೇಂದ್ರದ ನಿರ್ದೇಶಕರಾದ ಶ್ರೀ ಸುಬ್ರಮಣ್ಯ ಪ್ರಭು ಇವರು ಯುವ ದಿನಾಚರಣೆಯ ಅಂಗವಾಗಿ ಸ್ವಾಮಿ ವಿವೇಕಾನಂದರ ಜೀವನದ ನಡೆ-ನುಡಿ ಕುರಿತು ತಿಳಿಸಿ, ಇಂದಿನ ಯುವ ಜನಾಂಗ ತಮ್ಮ ಜೀವನದಲ್ಲಿ ಸ್ವಾಮಿ ವಿವೇಕಾನಂದರ ತತ್ವಗಳನ್ನು,



ಉದಯವಾಹಿನಿ ಚಿತ್ರ

ಆದರ್ಶಗಳನ್ನು ಮಾದರಿಯಾಗಿಟ್ಟುಕೊಂಡು, ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು, ಸ್ವಾಮಿ ವಿವೇಕಾನಂದರ ನುಡಿಯಂತೆ ಏಳಿ, ಎದ್ದೇಳಿ, ಗುರಿ ಮುಟ್ಟುವ ತನಕ ನಿಲ್ಲದಿರಿ, ನಿಮ್ಮಲ್ಲಿ ಆತ್ಮಸ್ಥೈರ್ಯ ಬೆಳಸಿಕೊಳ್ಳಿ, ಶಿಕ್ಷಣವನ್ನೇ ಬಲಿಷ್ಟ ಶಕ್ತಿಯಾಗಿ ಬಳಸಿಕೊಂಡು ನಿಮ್ಮ ವ್ಯಕ್ತಿತ್ವವನ್ನು ಬೆಳಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಮೋರಾರ್ಜಿ ವಸತಿ ಶಾಲೆ ಹಾಗೂ ಪಿ.ಯು ಕಾಲೇಜಿನ ಪ್ರಾಚಾರ್ಯರಾದ ಶ್ರೀ ಗೋವಿಂದರಾವ ಇವರು ಸಂಸ್ಥೆಯ ಕಾರ್ಯಚಟುವಟಿಕೆಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದರು, ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ

> ಎಫ್‌ಪಿಎಐ ಸಂಸ್ಥೆಯ ಕಾರ್ಯಚಟುವಟಿಕೆಗಳ ಕುರಿತು ತಿಳಿಸಿದರು ಹಾಗೂ ಹದಿಹರೆಯದವರ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಕುರಿತು ತಿಳಿಸಿದರು ಹಾಗೂ ಯುವ ಜನಾಂಗವೇ ದೇಶದ ಆಸ್ತಿ. ಆದ್ದರಿಂದ ಯುವಜನತೆ ತಮ್ಮ ಅಮೂಲ್ಯವಾದ ಈ ಹಂತದಲ್ಲಿ ತಮ್ಮ ಆರೋಗ್ಯ ಪೂರ್ಣ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಹಾಗೂ ಸಮಾಜಕ್ಕೆ ಮಾದರಿಯಾಗಿ ಬೆಳೆಯಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು
> -ಶ್ರೀನಿವಾಸ ಬಿರಾದಾರ, ಎಫ್‌ಪಿಎಐ ಸಂಸ್ಥೆಯ ಶಾಖಾ ವ್ಯವಸ್ಥಾಪಕರಾದ

ಜೀವನದಲ್ಲಿ ಒಳ್ಳೆಯ ಗುರಿ ಇಟ್ಟುಕೊಳ್ಳಬೇಕು, ಶಿಸ್ತು, ಸಂಯಮ ಕಾಪಾಡಿಕೊಳ್ಳಬೇಕು. ಮಹಾನ್ ದಾರ್ಶನಿಕರ ವ್ಯಕ್ತಿತ್ವವನ್ನು ಬೆಳೆಸಿಕೊಂಡು ಸತ್ಪ್ರಜೆಗಳಾಗಿ ಬೆಳೆಯಬೇಕೆಂದು ಕರೆ ನೀಡಿದರು.

# ಇಂದಿರಾ ಕ್ಯಾಂಟೀನ್ ಪರಿಶೀಲನೆ

• ಉದಯವಾಹಿನಿ ಶಿರಹಟ್ಟಿ

ಸ್ಥಳೀಯ ತಹಶೀಲ್ದಾರ್ ಕಚೇರಿಗೆ ಹತ್ತಿರದ ಇಂದಿರಾ ಕ್ಯಾಂಟೀನ್‌ಗೆ ತಹಶೀಲ್ದಾರ್ ಅನಿಲ ಬಡಿಗೇರ ಹಾಗೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದದರು.

ತಹಶೀಲ್ದಾರ್ ಅನಿಲ ಬಡಿಗೇರ ಮಾತನಾಡಿ, ಇಂದಿರಾ ಕ್ಯಾಂಟೀನ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಹತ್ತರ ಯೋಜನೆಯಲ್ಲಿ ಒಂದಾಗಿದ್ದು, ಬಡವರು, ರೈತರು, ಕಾರ್ಮಿಕರು, ವಿದ್ಯಾರ್ಥಿಗಳಿಗೆ ಅನುಕೂಲವಾಗುವ ದಿಸೆಯಲ್ಲಿ ಪ್ರಸ್ತುತ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿದೆ' ಎಂದ ಅವರು ಕ್ಯಾಂಟೀನ್‌ನಲ್ಲಿಯೇ ಉಪಹಾರ ಸೇವಿಸಿ ಆಹಾರದ ಗುಣಮಟ್ಟ ಪರಿಶೀಲಿಸಿ ಸಾರ್ವಜನಿಕರಿಂದ ಯಾವುದೇ ದೂರುಗಳು ಬಾರದಂತೆ ಗುಣಮಟ್ಟದ ಸೇವೆ ಒದಗಿಸಬೇಕು.

ಕುಂದುಕೊರತೆಗಳಿದ್ದಲ್ಲಿ ತಿಳಿಸುವಂತೆ ಕ್ಯಾಂಟೀನ್ ವ್ಯವಸ್ಥಾಪಕರಿಗೆ ಸೂಚಿಸಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ಮಾತನಾಡಿ, ಬಡವರ,


ಉದಯವಾಹಿನಿ ಚಿತ್ರ

ಮಧ್ಯಮ ವರ್ಗದವರಿಗೆ ಅನುಕೂಲವಾಗಲಿ ಎಂದು ರಿಯಾಯಿತಿ ದರದಲ್ಲಿ ಇಂದಿರಾ ಕ್ಯಾಂಟೀನ್ ಸ್ಥಾಪಿಸಿರುವ ಪರಿಣಾಮ ಸಾಕಷ್ಟು ಜನ ಆಹಾರ ಸೇವಿಸುತ್ತಿದ್ದಾರೆ. ಇಲ್ಲಿನ ಸಿಬ್ಬಂದಿ ಮನು ಪ್ರಕಾರ ಆಹಾರ ತಯಾರಿಸಿ ಗುಣಮಟ್ಟದ ಆಹಾರ ನೀಡುವ ಜೊತೆ ಶುದ್ಧ ಕುಡಿಯುವ ನೀರು ಕೊಡುವಂತೆ ವ್ಯವಸ್ಥಾಪಕರಿಗೆ ತಿಳಿಸಿದರು. ಬಡವರಿಂದ ಹೆಚ್ಚಿನ ಹಣ ಪಡೆಯುವ ವಿಷಯ ನಮ್ಮ ಗಮನಕ್ಕೆ ಬಂದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಗ್ರಾಮಾಡಳಿತ ಅಧಿಕಾರಿ ನಾಗರಾಜ ಚೋಳಮ್ಮನವರ ಹಾಗೂ ಕ್ಯಾಂಟೀನ್ ಸಿಬ್ಬಂದಿ ಇದ್ದರು.

# ಭಾರತೀಯ ಸಂಸ್ಕೃತಿ ಉತ್ಸವ: ಬಸವ ರಥಕ್ಕೆ ಚಾಲನೆ 21ರಂದು

• ಉದಯವಾಹಿನಿ ಬೀದರ್

ಜನವರಿ 29ರಿಂದ ಫೆಬ್ರುವರಿ 6ರ ವರೆಗೆ ಸೇಡಂನಲ್ಲಿನಡೆಯಲಿರುವ ಭಾರತೀಯ ಸಂಸ್ಕೃತಿ ಉತ್ಸವದ ಅಂಗವಾಗಿ ಜನವರಿ 21ರಂದು ನಗರದಲ್ಲಿ ಬಸವ ರಥಕ್ಕೆ ಚಾಲನೆ ನೀಡಲಾಗುವುದು' ಎಂದು ವಿಕಾಸ ಅಕಾಡೆಮಿ ಜಿಲ್ಲಾ ಸಂಯೋಜಕ ರೇವಣಸಿದ್ದಪ್ಪ ಜಲಾದ ತಿಳಿಸಿದರು. ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಏಳೂ ಜಿಲ್ಲೆಗಳಲ್ಲಿ ಅಲ್ಲಿನ ಮಹಾತ್ಮರ ಹೆಸರುಗಳಲ್ಲಿ ರಥ ಸಂಚರಿಸಲಿವೆ. ಬಸವಣ್ಣನವರ ಕರ್ಮಭೂಮಿ ಇದಾಗಿರುವುದರಿಂದ ಅವರ ಹೆಸರಿನಲ್ಲಿ ರಥ ಸಂಚರಿಸಲಿದೆ' ಎಂದು ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.



ಅಂದು ಬೆಳಿಗ್ಗೆ, 10 ಗಂಟೆಗೆ ನಗರದ ಮನ್ನಳ್ಳಿ ರಸ್ತೆಯ ರಾಣಿ ಚನ್ನಮ್ಮ ವೃತ್ತ ಹಾಗೂ ಶಿವನಗರ ವೃತ್ತದಿಂದ ಏಕಕಾಲಕ್ಕೆ ನೂರಾರು ವಿದ್ಯಾರ್ಥಿಗಳನ್ನು ಒಳಗೊಂಡ ಮೆರವಣಿಗೆ ಆರಂಭವಾಗಲಿದೆ. ಎರಡೂಬಂದು ನಗರದ ನೆಹರೂ ಕ್ರೀಡಾಂಗಣದಲ್ಲಿ ಸಮಾವೇಶಗೊಳ್ಳಲಿವೆ. ಬೆಳಿಗ್ಗೆ 11ಕ್ಕೆ ಜಿಲ್ಲೆಯ ವಿವಿಧ ಗಣ್ಯರು ಬಸವ ರಥಕ್ಕೆ ಚಾಲನೆ ನೀಡಲಿದ್ದಾರೆ' ಎಂದು ವಿವರಿಸಿದರು. ಧಾರಾವಾಡ ಗದಗ 'ಜಿಲ್ಲೆಯ ಕಮಲನಗರ, ಔರಾದ್, ಭಾಲ್ಕಿ, ಬಸವಕಲ್ಯಾಣ, ಹುಮನಾಬಾದ್, ಚಿಟಗುಪ್ಪ ತಾಲ್ಲೂಕಿನಲ್ಲಿ ಸಂಚರಿಸಿ ಬಳಿಕ ಕಲಬುರಗಿ ಜಿಲ್ಲೆಯತ್ತ ಮುಖ ಮಾಡಲಿದೆ. ಕೆಲ ಜಿಲ್ಲೆಗಳ ರಥಗಳು ಸೇಡಂ ತಲುಪಿದರೆ, ಕೆಲವು ಕಲಬುರಗಿ ತಲುಪಲಿವೆ.

ಅಲ್ಲಿ ನಡೆಯಲಿರುವ ಮೆರವಣಿಗೆ ಮೂಲಕ ಕಾರ್ಯಕ್ರಮದ ಸ್ಥಳಕ್ಕೆ ತೆರಳಲಿವೆ. ಜಿಲ್ಲೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನ ಭಾಗವಹಿಸಬೇಕು, ಸೇಡಂನಲ್ಲಿ ನಡೆಯಲಿರುವ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳ ಖ್ಯಾತನಾಮರು ಪಾಲ್ಗೊಳ್ಳುವರು. ಅವರ ವಾಣಿ ಆಲಿಸಬೇಕು' ಎಂದು ಮನವಿ ಮಾಡಿದರು. ಗಣೇಶ ಹಡಪದ ಹಾಜರಿದ್ದರು.

# ಮೈಕ್ರೋ ಫೈನಾನ್ಸ್‌ಗಳ ಹಾವಳಿ ನಿಯಂತ್ರಿಸಲು ಆಗ್ರಹ

• ಉದಯವಾಹಿನಿ ಲಕ್ಷ್ಮೇಶ್ವರ

ಪಟ್ಟಣ ಹಾಗೂ ತಾಲ್ಲೂಕಿನ ಗ್ರಾಮಗಳಲ್ಲಿ ಮೈಕ್ರೋ ಫೈನಾನ್ಸ್‌ಗಳ ಹಾವಳಿ ಹೆಚ್ಚಾಗಿದ್ದು ಇದರಿಂದಾಗಿ ಬಡವರು, ದೀನ ದಲಿತರು, ಹಿಂದುಳಿದ ಜನಾಂಗದ ಸಾಲಗಾರರು ತೊಂದರೆಗೆ ಸಿಲುಕಿದ್ದಾರೆ. ಇಂಥ ಮೈಕ್ರೋ ಫೈನಾನ್ಸ್ ಸಂಸ್ಥೆಗಳನ್ನು ನಿಯಂತ್ರಿಸಬೇಕು ಎಂದು ಒತ್ತಾಯಿಸಿ ಭೀಮ್ ಆರ್ಮಿ ಕಾರ್ಯಕರ್ತರು ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಆರ್ಮಿಯ ತಾಲ್ಲೂಕು ಘಟಕದ ಅಧ್ಯಕ್ಷ ದ್ಯಾಮೇಶ ಮ್ಯಾಗೇರಿ ಮಾತನಾಡಿ 'ಹಣಕಾಸು ಸಂಸ್ಥೆಯವರು ಕೇವಲ ಆಧಾರ್ ಕಾರ್ಡ್.ವೋಟರ್ ಐಡಿ ತೆಗೆದುಕೊಂಡು ಸಾಲ ನೀಡುತ್ತಾರೆ. ಆದರೆ ನಂತರ ಸಾಲದ ಮರುಪಾವತಿಗಾಗಿ ಸಾಲಗಾರನ ಮನೆ ಮುಂದೆ ಬಂದು ದೌರ್ಜನ್ಯ, ದಬ್ಬಾಳಿಕೆ, ಕಿರುಕುಳ ನೀಡುತ್ತಿದ್ದಾರೆ. ಇದರಿಂದಾಗಿ ಎಷ್ಟೋ ಕುಟುಂಬಗಳು


ಉದಯವಾಹಿನಿ ಚಿತ್ರ

ಪಟ್ಟಣ ಮತ್ತು ಗ್ರಾಮಗಳನ್ನೆ ಬಿಟ್ಟು ಬೇರಡೆ ಹೋಗುತ್ತಿದ್ದಾರೆ. ಆದ್ದರಿಂದ ತಾಲ್ಲೂಕು ಆಡಳಿತ ಮೈಕೊ ಫೈನಾನ್ಸ್‌ಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು' ಎಂದು ಒತ್ತಾಯಿಸಿದರು. ಮಂಜುನಾಥ ಗಡದವರ, ಫಕ್ಕೀರೇಶ ಎಂ. ಹಿತ್ತಲಮನಿ, ಆಕಾಶ ಜೆ.ದೂಳಮ್ಮನವರ, ರಾಕೇಶ ಎಂ. ಜೀಮಣ್ಣವರ, ಅರುಣ ಬಸವನಾಯ್ಕರ ಇದ್ದರು.

# ಬಳ್ಳಾರಿಯಲ್ಲಿ ಮೆಣಸಿನಕಾಯಿ ಮಾರುಕಟ್ಟೆ ಸ್ಥಾಪನೆ: ಶಿವಾನಂದ ಪಾಟೀಲ

## ಚಿಲ್ಲಿ ಮಾರುಕಟ್ಟೆ ನಿರ್ಮಾಣಕ್ಕೆ ಎಪಿಎಂಸಿಯಿಂದ 5 ಕೋಟಿ ರೂ. ಅನುದಾನ, ಇತರ ಮೂಲಗಳಿಂದ ಅಗತ್ಯ ಸಂಪನ್ಮೂಲ ಕ್ರೋಢೀಕರಣ

• ಉದಯವಾಹಿನಿ ಬಳ್ಳಾರಿ

ಬಳ್ಳಾರಿ ಜಿಲ್ಲೆಯಲ್ಲಿ ಮೆಣಸಿನಕಾಯಿ ಬೆಳೆಯುವ ರೈತರಿಗೆ ಸಿಹಿಸುದ್ದಿ ಇದೆ. ಕೃಷಿ ಮಾರುಕಟ್ಟೆ ಖಾತೆ ಸಚಿವ ಶಿವಾನಂದ ಪಾಟೀಲ ಬಳ್ಳಾರಿ ಜಿಲ್ಲೆಯಲ್ಲಿ ಮೆಣಸಿನಕಾಯಿ ಮಾರುಕಟ್ಟೆ ಸ್ಥಾಪನೆ ಮಾಡುವ ಕುರಿತು ಭರವಸೆ ನೀಡಿದ್ದಾರೆ. ಮಾರುಕಟ್ಟೆಗೆ ಖರೀದಿದಾರರನ್ನು ಕರೆತರುವ ಜವಾಬ್ದಾರಿ ನಮ್ಮದು ಎಂದು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹೇಳಿದೆ.

**ಖರೀದಿದಾರರನ್ನು ಕರೆತರುವ ಜವಾಬ್ದಾರಿ ನಮ್ಮದು**

ಬಳ್ಳಾರಿ ಜಿಲ್ಲಾ ಪ್ರವಾಸ ಕೈಗೊಂಡಿದ್ದ ಸಚಿವ ಶಿವಾನಂದ ಪಾಟೀಲ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದರು, ಅತಿ ಹೆಚ್ಚು ಮೆಣಸಿನಕಾಯಿ ಬೆಳೆಯುತ್ತಿರುವ ಬಳ್ಳಾರಿ ಜಿಲ್ಲೆಯಲ್ಲಿ ಚಿಲ್ಲಿ ಮಾರುಕಟ್ಟೆ ನಿರ್ಮಾಣ ಮಾಡಬೇಕು ಎಂಬ ಬೇಡಿಕೆ ಇದೆ. ಹೀಗಾಗಿ ಕೋಲ್ಡ್ ಸ್ಟೋರೇಜ್ ಜತೆಗೆ ಚಿಲ್ಲಿ ಮಾರುಕಟ್ಟೆಯನ್ನೂ ನಿರ್ಮಾಣ ಮಾಡಲಾಗುವುದು ಎಂದರು.

ಚಿಲ್ಲಿ ಮಾರುಕಟ್ಟೆ ನಿರ್ಮಾಣಕ್ಕೆ ಎಪಿಎಂಸಿಯಿಂದ 5 ಕೋಟಿ ರೂ. ಅನುದಾನ ನೀಡಲಿದ್ದು, ಇತರ ಮೂಲಗಳಿಂದ ಅಗತ್ಯ ಸಂಪನ್ಮೂಲ ಕ್ರೋಢೀಕರಣ ಮಾಡಲಾಗುವುದು. ಶಾಸಕ ನಾರಾ ಭರತ್‌ರೆಡ್ಡಿ ಅವರು ಸಹ ನೆರವಿನ ಭರವಸೆ ನೀಡಿದ್ದಾರೆ. ಈಗ ಚಿಲ್ಲಿ ಮಾರುಕಟ್ಟೆ ನಿರ್ಮಾಣಕ್ಕೆ ಗುರುತಿಸಿರುವ 23 ಎಕರೆ ಪ್ರದೇಶ ಕಡಿಮೆಯಾಗಲಿದೆ. ಭವಿಷ್ಯದ ದೃಷ್ಟಿಯಿಂದ ಕನಿಷ್ಟ 50 ಎಕರೆ ಪ್ರದೇಶದಲ್ಲಿ ನಿರ್ಮಾಣ ಮಾಡುವುದು ಸೂಕ್ತ ಎಂದು ಸಚಿವರು ಸಲಹೆ ನೀಡಿದರು.

ಪಿಪಿಪಿ ಮಾಡೆಲ್‌ನಲ್ಲಿ ಚಿಲ್ಲಿ ಮಾರುಕಟ್ಟೆ ನಿರ್ಮಾಣ ಕಷ್ಟಸಾಧ್ಯ. ಹೀಗಾಗಿ ಈ ಯೋಜನೆ ಬದಲಿಗೆ ಅಗತ್ಯ ಸಂಪನ್ಮೂಲ ಕ್ರೋಢೀಕರಣ ಮಾಡಿ ನಿರ್ಮಿಸಲು ಉದ್ದೇಶಿಸಲಾಗಿದೆ. ಎಪಿಎಂಸಿ ಸಚಿವನಾಗಿ ಈ ಜಿಲ್ಲೆಯಲ್ಲಿ ಚಿಲ್ಲಿ ಮಾರುಕಟ್ಟೆಯನ್ನು ನಿರ್ಮಾಣ ಮಾಡುವೆ ಎಂದು ಸಚಿವರು ಭರವಸೆಯನ್ನು ಕೊಟ್ಟರು. ಸಭೆಯಲ್ಲಿ ಮಾತನಾಡಿದ ವಾಣಿಜ್ಯೋದ್ಯಮ ಸಂಸ್ಥೆ, ಬಳ್ಳಾರಿಯ ಮಾಜಿ ಅಧ್ಯಕ್ಷ ಮಹಾರುದ್ರ ಗೌಡ, ಬಳ್ಳಾರಿಯಲ್ಲಿ


ಉದಯವಾಹಿನಿ ಚಿತ್ರ

ಚಿಲ್ಲಿ ಮಾರುಕಟ್ಟೆ ನಿರ್ಮಿಸಿದರೂ ಖರೀದಿದಾರರು ಬರುವುದಿಲ್ಲ ಎಂಬ ಸುದ್ದಿ ಹರಡಲಾಗುತ್ತಿದೆ. ಬಳ್ಳಾರಿಗೆ ಖರೀದಿದಾರರನ್ನು ತರುವ ಜವಾಬ್ದಾರಿ ನಮ್ಮದು. ಈ ವಿಚಾರದಲ್ಲಿ ರಾಜ್ಯ ಸರ್ಕಾರಕ್ಕೆ ಯಾವುದೇ ಸಂದೇಹ ಬೇಡ ಎಂದರು.

ಶಾಸಕ ನಾರಾ ಭರತ್ ರೆಡ್ಡಿ ಮಾತನಾಡಿ, ಚಿಲ್ಲಿ ಮಾರುಕಟ್ಟೆ ನಿರ್ಮಾಣಕ್ಕೆ ಎಪಿಎಂಸಿ ಸಚಿವ ಶಿವಾನಂದ ಪಾಟೀಲ ಅವರೊಂದಿಗೆ ಕೈ ಜೋಡಿಸಲಾಗುವುದು. ಬಹು ದಿನಗಳ ಬೇಡಿಕೆಯಾಗಿರುವ ಚಿಲ್ಲಿ ಮಾರುಕಟ್ಟೆಯನ್ನು ಶೀಘ್ರವಾಗಿ ನಿರ್ಮಾಣ ಮಾಡಬೇಕು. ಈಗಾಗಲೇ ನಿವೇಶನ ಗುರುತು ಮಾಡಿರುವುದರಿಂದ ಸಮಸ್ಯೆ

### 23 ಸಾವಿರ ಕೋಟಿ ರೂ. ಮೌಲ್ಯ

ರಾಜ್ಯದಲ್ಲಿ ಎಪಿಎಂಸಿ ಸುಮಾರು 23 ಸಾವಿರ ಕೋಟಿ ರೂ. ಮೌಲ್ಯದ ಆಸ್ತಿ ಹೊಂದಿದೆ. ಈ ಆಸ್ತಿಯನ್ನು ಉಳಿಸಿಕೊಳ್ಳುವುದಷ್ಟೇ ಅಲ್ಲ. ಆರ್ಥಿಕವಾಗಿ ಮತ್ತಷ್ಟು ಬಲಶಾಲಿಯಾಗಿ ಮಾಡಬೇಕಿದೆ. ಲಾಭ ಮಾಡುವ ಉದ್ದೇಶ ಅಲ್ಲದಿದ್ದರೂ ಆರ್ಥಿಕವಾಗಿ ಸಬಲ ಇರುವಂತೆ ನೋಡಿಕೊಳ್ಳಬೇಕಿದೆ ಎಂದು ತಿಳಿಸಿದರು.

ಇಲ್ಲ ಎಂದು ಹೇಳಿದರು.

**ಇಲಾಖೆಯ ಆದಾಯ ಏರಿಕೆ:** ಸಚಿವ ಶಿವಾನಂದ ಪಾಟೀಲ ಮಾತನಾಡಿ, ಕಳೆದ ಸರ್ಕಾರ ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ತರುವ ಪೂರ್ವದಲ್ಲಿ ವಾರ್ಷಿಕ ಸುಮಾರು 600 ರಿಂದ 680 ಕೋಟಿ ರೂ. ಆದಾಯ ಇತ್ತು. ಕಾಯ್ದೆ ತಿದ್ದುಪಡಿ ನಂತರ ಆದಾಯ 180 ಕೋಟಿ ರೂ.ಗಳಿಗೆ ಕುಸಿಯಿತು. ನಮ್ಮ ಪಕ್ಷ ಚುನಾವಣೆ ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ಎಪಿಎಂಸಿ ಕಾಯ್ದೆಯನ್ನು ಮರು ಸ್ಥಾಪನೆ ಮಾಡಿದ ನಂತರ ಆದಾಯದಲ್ಲಿ ಏರಿಕೆಯಾಗಿದ್ದು, ಈ ವರ್ಷ ಸುಮಾರು 450 ಕೋಟಿ ರೂ. ಸಂಗ್ರಹವಾಗುವ ವಿಶ್ವಾಸ ಇದೆ. ಕಾಯ್ದೆ ಮರುಸ್ಥಾಪನೆಯಿಂದ ರೈತರಿಗೂ ಅನುಕೂಲವಾಗಿದೆ ಎಂದರು.

> ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಎಪಿಎಂಸಿಯಲ್ಲಿ ತೆರಿಗೆ ವಸತಿ ಮತ್ತು ವೈದ್ಯಕೀಯ ಸೌಲಭ್ಯ ಒದಗಿಸುವ ಮೂಲಕ ರಾಜ್ಯಕ್ಕೆ ಮಾದರಿಯಾದ ಕೆಲಸ ಮಾಡಿದೆ. ಈ ಯೋಜನೆಯನ್ನು ಎಲ್ಲಾ ಎಪಿಎಂಸಿಗಳಲ್ಲಿ ವಾಣಿಜ್ಯೋದ್ಯಮ ಸಂಸ್ಥೆಗಳ ಸಹಕಾರದೊಂದಿಗೆ ವಿಸ್ತರಿಸುವ ಉದ್ದೇಶ ಹೊಂದಿದ್ದೇನೆ. ಈ ಯೋಜನೆ ರೈತರಿಗೆ ತುಂಬಾ ಅನುಕೂಲಕರವಾಗಿದೆ ಎಂದು ಸಚಿವ ಶಿವಾನಂದ ಪಾಟೀಲ ಮೆಚ್ಚುಗೆ ವ್ಯಕ್ತಪಡಿಸಿದರು -ಶಿವಾನಂದ ಪಾಟೀಲ

# ಮಿನಿ ನ್ಯೂಸ್

## ಹಿಡಕಲ್‌ನಿಂದ ಕೈಗಾರಿಕೆಗೆ ನೀರು ಜ.21ರ ನಂತರ ಸೂಕ್ತ ತೀರ್ಮಾನ

• ಉದಯವಾಹಿನಿ ಬೆಳಗಾವಿ



ಹಿಡಕಲ್ ಜಲಾಶಯದಿಂದ ಹುಬ್ಬಳ್ಳಿ-ಧಾರವಾಡ ಕೈಗಾರಿಕೆ ಪ್ರದೇಶಕ್ಕೆ ಕೇಳಿದ ತಕ್ಷಣವೇ ನೀರು ಸರಬರಾಜು ಮಾಡಲು ಆಗುವುದಿಲ್ಲ. ಇದಕ್ಕೆ ಕೆಲವು ನಿಯಮಗಳಿವೆ. ಯಾರೂ ಇಲ್ಲಸಲ್ಲದ ಮಾತು ಕೇಳಬೇಡಿ' ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಇಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ಕೈಗಾರಿಕೆ ಪ್ರದೇಶಕ್ಕೆ ನೀರು ನೀಡಲು ಸರ್ಕಾರದಿಂದ ಅನುಮತಿ ಅಗತ್ಯ. ಒಂದುವೇಳೆ ನೀರು ಕೊಡುವುದೇ ಆದರೆ, ಈಗಿನ ದರ ಪರಿಷ್ಕರಣೆ ಮಾಡಲಾಗಿದೆ. ನೀರಿನ ಬಳಕೆ ವಿಚಾರವಾಗಿ ಪಂಜಾಬ್ ಮತ್ತು ಮಹಾರಾಷ್ಟ್ರ ಮಾದರಿಯಲ್ಲಿ ಕೇಂದ್ರ ಸರ್ಕಾರವೂ ನಿಯಮ ರೂಪಿಸಿದೆ. ಈ ಕುರಿತು ಮುಂದಿನ ಅಧಿವೇಶನದಲ್ಲಿ ಚರ್ಚಿಸುತ್ತೇವೆ' ಎಂದರು. ಹಿಡಕಲ್‌ನಿಂದ ಕೈಗಾರಿಕೆಗೆ ನೀರು ಕೊಡುವ ವಿಚಾರ ಜಿಲ್ಲಾ ಉಸ್ತುವಾರಿ ಸಚಿವರಿಗೆ ಗೊತ್ತಿಲ್ಲವೇ' ಎಂಬ ಪ್ರಶ್ನೆಗೆ, ಎಲ್ಲಾ ವಿಷಯಗಳು ಸಚಿವರಿಗೆ ಗೊತ್ತಿರುವುದಿಲ್ಲ. ಬೇರೆ ಬೇರೆ ಇಲಾಖೆಯವರು ತೀರ್ಮಾನ ಕೈಗೊಂಡಿರುತ್ತಾರೆ. ಈ ಬಗ್ಗೆ ಪರಿಶೀಲಿಸಿದಾಗ ಮಾಹಿತಿ ಗೊತ್ತಾಗುತ್ತದೆ. ಈ ವಿಚಾರವಾಗಿ ಹುಕ್ಕೇರಿ ಶಾಸಕ ನಿಖಿಲ್ ಕತ್ತಿ ಜತೆಗೆ ಮಾತನಾಡಿದ್ದೇನೆ. ಜ.21ರಂದು ನಡೆಯಲಿರುವ ಕಾರ್ಯಕ್ರಮದ ನಂತರ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು' ಎಂದು ಉತ್ತರಿಸಿದರು.

## ರೈಲಿನಲ್ಲಿ ಸಾಗಿಸುತ್ತಿದ್ದ 250 ಲೀ. ಸೇಂದಿ ವಶ

• ಉದಯವಾಹಿನಿ ರಾಯಚೂರು

ತೆಲಂಗಾಣದಿಂದ ರಾಯಚೂರಿಗೆ ರೈಲಿನ ಮೂಲಕ ಅಕ್ರಮವಾಗಿ ಸಾಗಣೆ ಮಾಡುತ್ತಿದ್ದ ಸಿ.ಎಚ್ ಪೌಡರ್ ಮಿಶ್ರಿತ 250 ಲೀಟರ್ ಸೇಂದಿಯನ್ನು ಭಾನುವಾರ ಅಬಕಾರಿ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಖಚಿತ ಮಾಹಿತಿ ಮೇರೆಗೆ ಅಬಕಾರಿ ಇಲಾಖೆ ಹಾಗೂ ಆರ್‌ಪಿಎಫ್ ಅಧಿಕಾರಿಗಳ ತಂಡದೊಂದಿಗೆ ರೈಲ್ವೆ ನಿಲ್ದಾಣದಲ್ಲಿ ದಾಳಿ ನಡೆಸಿ ಅಪಾರ ಪ್ರಮಾಣದಲ್ಲಿ ಸಿಎಚ್ ಪೌಡರ್ ಮಿಶ್ರಿತ ಸೇಂದಿಯನ್ನು ವಶಪಡಿಸಿಕೊಂಡು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಕ್ಲೋರಲ್ ಹೈಡೇಡ್ ವಿಷಪೂರಿತ ರಾಸಾಯನಿಕ ಮಿಶ್ರಣ ಮಾಡಿ ಕಲಬೆರಿಕೆ ಸೇಂದಿಯನ್ನು ಮಾರಾಟಕ್ಕೆ ತಯಾರಿಸಿಕೊಂಡು ತೆಲಂಗಾಣದ ಕೃಷ್ಣ ಗ್ರಾಮದ ರೈಲ್ವೆ ನಿಲ್ದಾಣ ಮೂಲಕ ಆಗಮಿಸಿ ರಾಯಚೂರು ರೈಲ್ವೆ ನಿಲ್ದಾಣದಿಂದ ನಗರದ ವಿವಿಧ ಬಡಾವಣೆಯಲ್ಲಿ ಮಾರಾಟ ಮಾಡುತ್ತಿರುವು ಮಾಹಿತಿ ಬಂದಿತ್ತು. ಅಧಿಕಾರಿಗಳು ದಾಳಿ ನಡೆಸಿ ಸೇಂದಿ ವಶಪಡಿಸಿಕೊಂಡು ನಾಶ ಪಡಿಸಿದರು. ದಾಳಿಯಲ್ಲಿ ಅಬಕಾರಿ ಉಪ ಆಯುಕ್ತ, ಅಧೀಕ್ಷಕ, ನಿರೀಕ್ಷಕ, ಉಪ ನಿರೀಕ್ಷಕ, ರಾಯಚೂರು ವಿಭಾಗ ಹಾಗೂ ವಲಯ ವಿಭಾಗದ ಅಧಿಕಾರಿಗಳು ಭಾಗವಹಿಸಿದ್ದರು.

## ತೊಗರಿ ಖರೀದಿ ಕೇಂದ್ರ ಆರಂಭಕ್ಕೆ ವಿಘ್ನ

• ಉದಯವಾಹಿನಿ ವಿಜಯಪುರ

ಕಳಪೆ ಬಿತ್ತನೆ ಬೀಜ ಹಾಗೂ ಹವಾಮಾನ ವೈಪರೀತ್ಯದಿಂದಾಗಿ ತೊಗರಿ ಬೆಳೆ ಹಾನಿಗೀಡಾಗಿದೆ. ಇದರಿಂದ ಕಂಗಾಲಾಗಿರುವ ರೈತರಿಗೆ ದಿನದಿಂದ ದಿನಕ್ಕೆ ಧಾರಣೆ ಕುಸಿಯುತ್ತಿರುವುದು ಗಾಯದ ಮೇಲೆ ಬರೆ ಎಳೆದಂತಾಗಿದೆ. ಸೆಪ್ಟೆಂಬರ್-ಅಕ್ಟೋಬರ್‌ನಲ್ಲಿ ಕ್ವಿಂಟಲ್ ತೊಗರಿಗೆ ಕನಿಷ್ಠ 10 ಸಾವಿರದಿಂದ ಗರಿಷ್ಠ 12 ಸಾವಿರದವರೆಗೆ ದರವಿತ್ತು.

ಈಗ 6,500ದಿಂದ 7,400ಕ್ಕೆ ಕುಸಿದಿದೆ. ಜಿಲ್ಲೆಯಲ್ಲಿ ಈ ಬಾರಿ 5.34 ಲಕ್ಷ ಹೆಕ್ಟೇರ್‌ನಲ್ಲಿ ತೊಗರಿ ಬಿತ್ತನೆ ಮಾಡಲಾಗಿದೆ. ವಿವಿಧ ಕಾರಣಗಳಿಂದ ಇಳುವರಿ ಕುಂಠಿತಗೊಂಡಿದೆ.

ಕೆಲವು ರೈತರು ಉತ್ತಮ ಇಳುವರಿಯ ನಿರೀಕ್ಷೆಯಲ್ಲಿದ್ದಾರೆ. ಆದರೆ, ದರ ಕಡಿಮೆಯಾಗುತ್ತಿರುವುದು ಅವರಲ್ಲಿ ಆತಂಕ ಹೆಚ್ಚಿಸಿದೆ. ಜಿಲ್ಲೆಯಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 55 ಖರೀದಿ ಕೇಂದ್ರಗಳನ್ನು ತೆರೆದು ಖರೀದಿ ಪ್ರಕ್ರಿಯೆಯನ್ನು ಆರಂಭಿಸುವಂತೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಕ್ಕೆ ರಾಜ್ಯ ಸರ್ಕಾರವು ಸೂಚಿಸಿತ್ತು. ಆದರೆ, ಈವರೆಗೂ ರೈತರ ಹೆಸರು ನೋಂದಣಿಯೇ ಆರಂಭವಾಗಿಲ್ಲ. ಇನ್ನು ಖರೀದಿ ಆರಂಭಿಸುವುದು ಯಾವಾಗ? ಎಂದು ರೈತ ಮುಖಂಡರು ಪ್ರಶ್ನಿಸುತ್ತಾರೆ. ಜಿಲ್ಲೆಯಲ್ಲಿ ತೊಗರಿ ಕಟಾವು ಮುಗಿದರೂ ಖರೀದಿ ಕೇಂದ್ರಗಳು ಆರಂಭವಾಗಿಲ್ಲ.

ಹಾಗಾಗಿ, ರೈತರು ಸಿಕ್ಕಷ್ಟು ದರಕ್ಕೆ ದಲ್ಲಾಳಿಗಳಿಗೆ ತೊಗರಿ ಮಾರಾಟ ಮಾಡುತ್ತಿದ್ದಾರೆ. ಸರ್ಕಾರವು ನೆಪ ಮಾತ್ರಕ್ಕೆ ಖರೀದಿ ಕೇಂದ್ರ ತೆರೆಯುವುದಾಗಿ ಘೋಷಿಸಿದರೆ ಸಾಲದು. ಸಂಕಷ್ಟದಲ್ಲಿರುವ ರೈತರ ನೆರವಿಗೆ ಬರಬೇಕು.

## ಶುರುವಾಗದ ಭತ್ತ ಹಾಗೂ ರಾಗಿ ಖರೀದಿ ಪ್ರಕ್ರಿಯೆ: ರೈತರಿಗೆ ಸಂಕಷ್ಟ

• ಉದಯವಾಹಿನಿ ಹಾಸನ

ಬೆಂಬಲ ಬೆಲೆ ಯೋಜನೆಯಡಿ ಭತ್ತ ಹಾಗೂ ರಾಗಿ ಖರೀದಿಸಲು ರಾಜ್ಯ ಸರ್ಕಾರ ಮುಂದಾಗಿದ್ದು ಅದಕ್ಕಾಗಿ ರೈತರ ನೋಂದಣಿ ಪ್ರಕ್ರಿಯೆ ಆರಂಭಿಸಿತ್ತು. ಈ ಮಧ್ಯೆ ಜ.1 ರಿಂದ ಶುರುವಾಗಬೇಕಿದ್ದ ಖರೀದಿ ಪ್ರಕ್ರಿಯೆ ತಾಂತ್ರಿಕ ಕಾರಣದಿಂದ ವಿಳಂಬವಾಗಿದ್ದು, ರೈತರು ಸಂಕಷ್ಟ ಅನುಭವಿಸುವಂತಾಗಿದೆ.

ಬೆಂಬಲ ಬೆಲೆ ಯೋಜನೆಯಡಿ ಪ್ರತಿ ಕ್ವಿಂಟಲ್ ರಾಗಿಗೆ 4,290, ಭತ್ತಕ್ಕೆ 2300 ದರ ನಿಗದಿಪಡಿಸಲಾಗಿದೆ. ಡಿಸೆಂಬರ್ 1 ರಿಂದಲೇ ನೋಂದಣಿ ಪ್ರಕ್ರಿಯೆ ಆರಂಭವಾಗಿತ್ತು. ನೋಂದಣಿ ಮಾಡಿಕೊಂಡ ರೈತರಿಂದ ಜ.1 ರಿಂದ ಮಾರ್ಚ್ 31 ರವರೆಗೆ ಉತ್ಪನ್ನಗಳ ಖರೀದಿಗೆ ಚಾಲನೆ ಸಿಗಬೇಕಿತ್ತು. ಈಗಾಗಲೇ ಜಿಲ್ಲೆಯ 38 ಹೋಬಳಿ ಕೇಂದ್ರಗಳಲ್ಲಿ ಆರಂಭಿಸಲಾಗಿರುವ ಕೇಂದ್ರಗಳಲ್ಲಿ ರೈತರು ಸರದಿಯಲ್ಲಿ ನಿಂತು ನೋಂದಣಿ ಮಾಡಿದ್ದಾರೆ. 4,616 ಕ್ವಿಂಟಲ್ ಭತ್ತ ಖರೀದಿಗೆ 174 ರೈತರು ಹಾಗೂ 5,50,383.50 ಕ್ವಿಂಟಲ್ ರಾಗಿ ಖರೀದಿಗೆ 35,129 ರೈತರು ನೋಂದಣಿ ಮಾಡಿದ್ದಾರೆ. ಸರ್ಕಾರದ ಆದೇಶದಂತೆ ಜ.1 ರಿಂದ ಖರೀದಿ ಪ್ರಕ್ರಿಯೆ ಪ್ರಾರಂಭವಾಗಬೇಕಿತ್ತು. ಆದರೆ ತಂತ್ರಾಂಶ, ಹಸ್ತಾಂತರ, ಸಾಗಾಣಿಕೆ ಗುತ್ತಿಗೆದಾರರ ನೇಮಕ ಸೇರಿದಂತೆ ಕೆಲವು ತಾಂತ್ರಿಕ ಕಾರಣಗಳಿಂದಾಗಿ ಖರೀದಿ ಪ್ರಕ್ರಿಯೆ ಪ್ರಾರಂಭಿಸಲು ಸಾಧ್ಯವಾಗುತ್ತಿಲ್ಲ ಎಂದು ರಾಜ್ಯ ಸಹಕಾರ ಮಾರಾಟ ಮಹಾಮಂಡಳ ವ್ಯವಸ್ಥಾಪಕರು ಹೇಳುತ್ತಾರೆ.

**ಉತ್ಪನ್ನಗಳ ಸಂರಕ್ಷಣೆ ಸವಾಲು:** ಈಗಾಗಲೇ ಅತಿವೃಷ್ಟಿಯಿಂದ ಕಂಗೆಟ್ಟಿರುವ ರೈತರು, ಅಳಿದುಳಿದ ರಾಗಿ, ಭತ್ತವನ್ನು ಸಂಗ್ರಹಿಸಿ ಇಟ್ಟುಕೊಂಡಿದ್ದಾರೆ. ಮಳೆಯ ಹೊಡೆತಕ್ಕೆ ಸಿಕ್ಕಿರುವರಾಗಿ ಮತ್ತು ಭತ್ತವನ್ನು ಸಂರಕ್ಷಣೆ ಮಾಡುವುದೇ ದೊಡ್ಡ ಸಮಸ್ಯೆಯಾಗಿದೆ ಎನ್ನುತ್ತಾರೆ ರೈತರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು.

**ವೃಷಭ** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ನಿಮ್ಮ ಭಾವನೆಗಳನ್ನು ನಿಯಂತ್ರಿಸುವಲ್ಲಿ ತೊಂದರೆ ಹೊಂದಿರುತ್ತೀರಿ.

**ಮಿಥುನ** ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡ ಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ.

**ಕರ್ಕಾಟಕ** ಇಂದು ಮನೆಯಲ್ಲಿ ನೀವು ಇತರರನ್ನು ಮುಜುಗರಪಡಿಸದೇ ನಿಮ್ಮ ಕುಟುಂಬದ ಅವಶ್ಯಕತೆಗಳಿಗೆ ಹೊಂದಿಕೊಳ್ಳಲು ಯತ್ನಿಸಬೇಕು. ಇಂದು ನೀವು ಒಂದು ಹೃದಯ ಒಡೆಯುವುದನ್ನು ತಪ್ಪಿಸುತ್ತೀರಿ.

**ಸಿಂಹ** ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ?ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು.

**ಕನ್ಯಾ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ತುಲಾ** ಬಹಳಷ್ಟು ವಿಷಯಗಳು ನೀವು ಬಯಸಿದಂತಿರುವ ಹಾಸ್ಯದಿಂದ ತುಂಬಿದ ಒಂದು ದಿನ. ನಿಮ್ಮ ಸಹೋದರ–ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು.

**ವೃಶ್ಚಿಕ** ನಿಮ್ಮ ಕುಟುಂಬ ಸದಸ್ಯರೆಡೆಗೆ ನಿಮ್ಮ ಸರ್ವಾಧಿಕಾರಿ ಧೋರಣೆ ಕೇವಲ ಅನುಪಯುಕ್ತ ವಾದಗಳನ್ನು ಪ್ರಾರಂಭಿಸುತ್ತದೆ ಮತ್ತು ಇದು ಟೀಕೆಯನ್ನೂ ತರಬಹುದು.

**ಧನಸ್ಸು** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣಕಾಸು ಸ್ಥಿತಿ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ.

**ಮಕರ** ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ನೀವು ಸಾಲ ಪಡೆಯಬಹುದು.

**ಕುಂಭ** ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ– ಆದರೆ ಅದೇ ಸಮಯದಲ್ಲಿ ಖರ್ಚೂ ತುಂಬಾ ಹೆಚ್ಚಾಗುತ್ತದೆ.

**ಮೀನ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

# ವಚನ ಸಾಹಿತ್ಯ ಒಂದು ಜನಾಂಗದ ಸ್ವತ್ತಲ್ಲ: ಬೆಲ್ಲಾಳ ಶರಣರು

## ವಚನಗಳ ಆಳ ಅಧ್ಯಯನ, ಸಂಶೋಧನೆಯ ಮೂಲಕ ಬೆಲ್ಲಾಳ ಶರಣರು ಜಗತ್ತಿಗೆ ವಚನಗಳ ಬೆಳಕು ಮೂಡಿಸುತ್ತಿದ್ದಾರೆ

• **ಉದಯವಾಹಿನಿ ಚಿತ್ರದುರ್ಗ**

ವಚನ ಸಾಹಿತ್ಯದ ಶ್ರೇಷ್ಠತೆಯ ಸಾರವನ್ನು ಜಗತ್ತಿಗೆ ಉಣಬಡಿಸುತ್ತಿರುವ ಸಿದ್ದರಾಮ ಬೆಲ್ಮಾಳ ಶರಣರು ಅಖಿಲ ಭಾರತ 13ನೇ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದಾರೆ. ವಚನಗಳ ಆಳ ಅಧ್ಯಯನ, ಸಂಶೋಧನೆಯ ಮೂಲಕ ಬೆಲ್ಲಾಳ ಶರಣರು ಜಗತ್ತಿಗೆ ವಚನಗಳ ಬೆಳಕು ಮೂಡಿಸುತ್ತಿದ್ದಾರೆ. ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನ ಬೆಲ್ಮಾಳ ಗ್ರಾಮದ ಕಡುಬಡತನದ ಕುಟುಂಬದಲ್ಲಿ ಜನಿಸಿದ ಇವರು ಸಣ್ಣ ವಯಸ್ಸಿನಿಂದಲೂ ವಚನಗಳನ್ನೇ ಉಸಿರಾಗಿಸಿಕೊಂಡಿದ್ದಾರೆ. ವಿಠಲ ನಾಮಾಂಕಿತರಾಗಿದ್ದ ಅವರು ತಮ್ಮ ಜ್ಞಾನ, ಶ್ರದ್ಧೆ, ಯೋಗ ಶಕ್ತಿಯಿಂದ ಸಿದ್ಧರಾಮ ಶರಣರಾಗಿ ರೂಪುಗೊಂಡ ಕಥೆಯೇ ರೋಚಕವಾದುದು.

ಶೋಷಿತ ಸಮುದಾಯದಲ್ಲಿ ಜನಿಸಿದರೂ ತಮ್ಮ ಜ್ಞಾನದ ಬೆಳಕಿನಿಂದ ಪ್ರವರ್ಧಮಾನಕ್ಕೆ ಬಂದವರು. 1974ರಲ್ಲಿ ಭಾಲ್ಕಿಯ ಚನ್ನಬಸವ ಪಟ್ಟದೇವರ ಸಾನ್ನಿಧ್ಯದಲ್ಲಿ ನಡೆದ ಸಿದ್ದರಾಮ ಜಯಂತಿಯಲ್ಲಿ ಬಾಲಕ ವಿಠಲ 15 ನಿಮಿಷ ಭಾಷಣ ಮಾಡಿದ್ದರು. ಅವರ ಜ್ಞಾನವನ್ನು ಕಂಡ ಶ್ರೀಗಳು



ಉದಯವಾಹಿನಿ ಚಿತ್ರ

**ಜಗತ್ತಿಗೆ ವಚನಗಳ ಬೆಳಕು**

'ಸಿದ್ದರಾಮ ಸಿಕ್ಕಿದ' ಎಂದು ಘೋಷಿಸಿದರು. ಅಂದಿನಿಂದ ವಿಠಲ ನಾಮ ಅಳಿದು ಸಿದ್ದರಾಮ ಶಿವಯೋಗಿಯೆಂದೇ ಪ್ರಸಿದ್ಧಿ ಪಡೆದರು.

1975ರಲ್ಲಿ ಲಿಂಗದೀಕ್ಷೆ ಪಡೆದ ಸಿದ್ದರಾಮ ಬೆಲ್ಲಾಳ, ಶ್ವೇತ ವಸ್ತ್ರ ಧರಿಸಿ ಶಿವಯೋಗಿಯಾದರು. ಕೇವಲ 4ನೇ ತರಗತಿವರೆಗೆ ಓದಿದ್ದರೂ ವಚನ ಸಾಹಿತ್ಯವನ್ನು ಆಳವಾಗಿ ಅಧ್ಯಯನ ನಡೆಸಿದ್ದಾರೆ. ನಾಲ್ಕು ದಶಕಗಳ ಅಧ್ಯಯನದಿಂದ ಶರಣ

**ಮಾನವ ಏಕತೆ, ಅಖಂಡತ್ವದ ಮೂಲ ಬೇರು ಶರಣ ಸಾಹಿತ್ಯ. ಯಾವುದೋ ಒಂದು ಜನಾಂಗದ ಸ್ವತ್ತಲ್ಲ, ಅದು ಮಾನವ ಕುಲಕೋಟಿಯ ಆಸ್ತಿ. ಆಧುನಿಕ ಕಾಲಘಟ್ಟದ ತಲ್ಲಣಗಳಿಗೆ ವಚನಗಳು ಮದ್ದು ಕೊಡುತ್ತವೆಯೇ?**



ಸಾಹಿತ್ಯಕ್ಕೆ ಹೊಸ ರೂಪ ಕೊಟ್ಟಿರುವ ಬೆಲ್ಲಾಳ ಸಿದ್ಧರಾಮರು ಈಗ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದಾರೆ. ಈ ವೇಳೆ ಅವರು ಜೊತೆ ಮಾತನಾಡಿದ್ದಾರೆ.

ಶರಣ ಸಾಹಿತ್ಯಕ್ಕೆ ವೇದ, ಪುರಾಣ, ಆಗಮಗಳು ಮೂಲವಲ್ಲ. ಪುರಾತನವಾದ ಸಂಸ್ಕೃತವೂ ಮೂಲವಲ್ಲ. ಇದು ಅಪ್ಪಟ ಶರಣರ ಸ್ವಾನುಭಾವದ ಸಾಹಿತ್ಯ. ಕೃಷಿಕ, ಕಾರ್ಮಿಕ, ಕಾಯಕ ಜೀವಿಯ ಸಾಹಿತ್ಯ. ಸಾಮಾನ್ಯ ಜನರು ತಮ್ಮ ಬದುಕಿನ ಅನುಭವಗಳನ್ನೇ ಅಸಾಮಾನ್ಯ ರೀತಿಯಲ್ಲಿ ಕಟ್ಟಿಕೊಟ್ಟಿದ್ದಾರೆ. ವಚನಗಳಲ್ಲಿ ಮಾನವ ಸಮಾನತೆ ಇದೆ. ಏಕತೆ, ಸಾಮರಸ್ಯವಿದೆ. ಇಲ್ಲಿ ಮಾನವ ಜೀವದ ಉಗಮದ ಮೂಲವಿದೆ, ಮನುಷ್ಯನ ವಿಕಾಸದ ಹಾದಿ ಇದೆ. ಕನ್ನಡ ಸಾಹಿತ್ಯಕ್ಕೆ ವಚನಗಳು ನೀಡಿರುವ ಕೊಡುಗೆ ಏನು?

ಕನ್ನಡ ಸಾಹಿತ್ಯಕ್ಕೆ ವಚನಗಳೇ ಪ್ರಾಣ. ವಚನಗಳಿಲ್ಲದೇ ಕನ್ನಡ ಸಾಹಿತ್ಯವಿಲ್ಲ. ಕನ್ನಡ ಭಾಷೆ ಶ್ರೀಮಂತಗೊಳ್ಳುವಲ್ಲಿ ವಚನಗಳ ಕೊಡುಗೆ ಅಗಾಧವಾಗಿದೆ. ಸಕಲ ಭಾಷೆಯ ಸಾಹಿತ್ಯಗಳಲ್ಲಿ ಕನ್ನಡಕ್ಕೆ ಪರಿಪೂರ್ಣತೆ ಇದ್ದು, ಅದಕ್ಕೆ ವಚನ ಸಾಹಿತ್ಯ ಜೀವಧಾತುವಾಗಿದೆ. ಕನ್ನಡದ ಮೌಲ್ಯವನ್ನು ವಚನಗಳು ಎತ್ತರಕ್ಕೆ ಏರಿಸಿವೆ. ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸುವ ಶರಣ ಸಾಹಿತ್ಯ ಕನ್ನಡಕ್ಕೆ ಭೂಷಣವಾಗಿದೆ. ವಚನ ಸಾಹಿತ್ಯ ಒಂದು ಸಮುದಾಯಕ್ಕೆ ಸೀಮಿತ ಎಂಬಂತೆ ಬಿಂಬಿತವಾಗುತ್ತಿದೆಯಲ್ಲಾ?

ಅದು ತಪ್ಪು ತಿಳಿವಳಿಕೆ. ಆ ಬಗ್ಗೆ ನನಗೂ ತೀವ್ರ ಬೇಸರವಿದೆ. ವಚನ ಸಾಹಿತ್ಯದ ಅಧ್ಯಯನದಿಂದ ಮಾತ್ರ ಆ ತಪ್ಪು ತಿಳಿವಳಿಕೆ ತೊಲಗಲು ಸಾಧ್ಯ.

**ರೋಗಕ್ಕೆ ವಚನ ಸಾಹಿತ್ಯ ಉತ್ತಮ ಔಷಧಿ**

**ಹಿಂಸೆ, ಅಸೂಯೆ, ಪ್ರತ್ಯೇಕತಾವಾದವೆಂಬ ರೋಗಕ್ಕೆ ವಚನ ಸಾಹಿತ್ಯ ಉತ್ತಮ ಔಷಧಿಯಾಗಿದೆ. ಜಗತ್ತೇ ಮಹಾಮನೆಯಾಗಿದ್ದು ಮಾನವ ಕುಲಕೋಟಿ ಕುಟುಂಬ ಸದಸ್ಯರಾಗಬೇಕು ಎನ್ನುವ ತತ್ತ್ವದಡಿ ಜಗದ ಜೀವಿಗಳು ಜೀವಿಸಬೇಕು. ನಾವೆಲ್ಲಾ ವಿಶ್ವ ಕುಟುಂಬಿಗಳಾಗಬೇಕು. ದೇಶ, ಜಾತಿ, ಧರ್ಮ, ವರ್ಣ, ಲಿಂಗ ಭೇದವಿಲ್ಲದೇ ಒಂದಾಗಿ ಬದುಕುವ ಶಕ್ತಿಯನ್ನು ವಚನ ಸಾಹಿತ್ಯ ನೀಡುತ್ತದೆ.**

ದುಡಿಯುವ ಕಾಯಕ ಜೀವಿಗಳೇ ವಚನಗಳಿಗೆ ಜೀವ ತುಂಬಿದ್ದಾರೆ.

ಮಡಿವಾಳ ಮಾಚಿದೇವ ಹಡಪದ ಅಪ್ಪಣ್ಣ, ಕುರುಬ ಗೊಲ್ಲಾಳ, ಮೋಳಿಗೆಯ ಮಹಾದೇವಿ, ಕಾಳವ್ವ, ಲಕ್ಕಮ್ಮ, ರಾಯಮ್ಮ ಮುಂತಾದವರು ಸ್ವಾನುಭವದಿಂದ ಸೃಷ್ಟಿಸಿದ ವಚನಗಳು ಶರಣ ಸಾಹಿತ್ಯದ ಮೌಲ್ಯವನ್ನು ಹೆಚ್ಚಿಸಿವೆ.

## ಸರ್ಕಾರಿ ನೌಕರರಿಗೆ ಕೆಲಸದ ಜೊತೆ ಕ್ರೀಡೆಯೂ ಅತಿಮುಖ್ಯ

• **ಉದಯವಾಹಿನಿ, ಚಿಂಚೋಳಿ**

ಸರ್ಕಾರಿ ನೌಕರರು ಅತಿಯಾದ ಕೆಲಸದ ಒತ್ತಡದಿಂದ ಬಹಳಷ್ಟು ಅಧಿಕಾರಿಗಳಿಗೆ ಸಿಬ್ಬಂದಿ ವರ್ಗದವರಿಗೆ ಬಿಪಿ, ಶೂಗರ್ ಅಂಥಹ ರೋಗರುಜಿನಗಳು ಬರುತ್ತಿದ್ದು ಇದನ್ನು ದೂರವಾಗಿಸಲು ಕೆಲಸದ ಜೋತೆ ಕ್ರೀಡೆಯು ಮುಖ್ಯವಾಗಿದೆ ಎಂದು ತಾಲ್ಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಂಕರ ರಾಠೋಡ್ ಹೇಳಿದರು. ಪಟ್ಟಣದ ತಾಲ್ಲೂಕಾ ಹೊರ ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯತ್ ಸಂಯುಕ್ತ ಆಶ್ರಯದಲ್ಲಿ ತಾಲ್ಲೂಕಾ ಪಂಚಾಯತ್ ನೇತೃತ್ವದಲ್ಲಿ ಆರ್‌ಡಿಪಿಆರ್ ಇಲಾಖಾ ನೌಕರರ ಕ್ರೀಡಾಕೂಟ ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡಿದ ಅವರು, ಆರ್‌ಡಿಪಿಆರ್ ಇಲಾಖೆಯಲ್ಲಿ ಸದಾಕಾಲ ಕೆಲಸದ ಒತ್ತಡವಿರುತ್ತದೆ ಅದಕ್ಕಾಗಿ ಅವರ ಮನಸ್ಸು ದುರಿದುಂಬಿಸಲು ಅಧಿಕಾರಿಗಳು ಸಿಬ್ಬಂದಿ ವರ್ಗದವರಿಗೂ ದೈಹಿಕವಾಗಿ ಮಾನಸಿಕವಾಗಿ ಶಕ್ತಿ ವೃದ್ಧಿಸಲು ಕೆಲಸದ ಜೋತೆಗೆ ಕ್ರೀಡೆಗೂ ಸಹ ಮಹತ್ವ ನೀಡುವಂತೆ ಕ್ರೀಡಾಕೂಟ ಆಯೋಜಿಸಲಾಗಿದೆ.

ಕ್ರೀಡಾಕೂಟಗಳು ಕ್ರಿಕೆಟ್, ವಾಲಿಬಾಲ್, ರನ್ನಿಂಗ್, ಚಕ್ರ ಏಸೆತ,ಕ್ಯಾರಂ,ಸೇರಿದಂತೆ ವಿವಿಧ ಕ್ರೀಡಾಕೂಟ ಹಮ್ಮಿಕೊಂಡಿದ್ದು ಆರ್ಡಿಪಿಆರ್ ಇಲಾಖೆಯ ಎಲ್ಲಾ ಅಧಿಕಾರಿಗಳು ಸಿಬ್ಬಂದಿ ವರ್ಗದವರು ಕ್ರೀಡೆಯಲ್ಲಿ ಭಾಗವಹಿಸಿ ಯಶಸ್ಸಿಗೊಳಿಸಿ, ಮತ್ತು ತಾಲ್ಲೂಕಾ ಮಟ್ಟದಲ್ಲಿ ಗೆಲುವು ಸಾಧಿಸಿದ ತಂಡಕ್ಕೆ ಮತ್ತು ಸೋಲು ಕಂಡ ತಂಡದಲ್ಲಿ ಉತ್ತಮ ಪ್ರದರ್ಶನ ಮಾಡಿದವರಿಗೂ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲು ನೇಮಿಸಿಕೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ಲಕ್ಷ್ಮಯ್ಯ, ಪಿ.ಆರ್.ಇ ಎಇಇ ಪ್ರವೀಣಕುಮಾರ,ಅಕ್ಷರ ದಾಸೋಹ ಅಧಿಕಾರಿ ಜಯಪ್ಪ ಚಾಪಲ್, ಉದ್ಯೋಗ ಖಾತ್ರಿ ಯೋಜನೆ ಸಹಾಯಕ ನಿರ್ದೇಶಕ ನಾಗೇಂದ್ರಪ್ಪ, ಪಿಟಿಓ ಮಲ್ಲಿಕಾರ್ಜುನ, ಪಿಡಿಓ ಸಂಘದ ಅಧ್ಯಕ್ಷ ಪವನಕುಮಾರ ಮೇತ್ರಿ, ಪಿಡಿಓಗಳಾದ ರಾಮಕೃಷ್ಣ, ಗೋವಿಂದ ರೆಡ್ಡಿ, ಮಲ್ಲಿಕಾರ್ಜುನ ಗಿರಿ,ಯಲಗೊಂಡ, ಸುನೀಲ್,ಹೀರಾಸಿಂಗ್,ದಶರಥ ಪಾತ್ರೆ, ಸೇರಿದಂತೆ ರೀಯಾಜ್ ಅಮೀನ್,ಶಾಮರಾವ ಮೋಘಾ,ಕುಪೇಂದ್ರ, ಪಿಆರ್ಇಜೆಇ ಜಾವೀದ್ ಪಟೇಲ, ಮಲ್ಲಿಕಾರ್ಜುನ ನಲ್ಲಿ, ಸೇರಿದಂತೆ ಆರ್.ಡಿ.ಪಿ.ಆರ್ ಅಧಿಕಾರಿಗಳು ಸಿಬ್ಬಂದಿ ವರ್ಗದವರು ಇದ್ದರು.

## ಕೋಟೆಕಾರ್ ಬ್ಯಾಂಕ್ ದರೋಡೆಗೆ ಸ್ಥಳೀಯ ವ್ಯಕ್ತಿಗಳಿಂದ ನೆರವು

• **ಉದಯವಾಹಿನಿ, ಮಂಗಳೂರು**

ಕೋಟೆಕಾರ್ ಸಹಕಾರಿ ಬ್ಯಾಂಕ್ ದರೋಡೆ ಪ್ರಕರಣದಲ್ಲಿ ಸ್ಥಳೀಯರ ಸಹಕಾರ ನೀಡಿದ್ದಾರೆಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಪೂರ್ವ ನಿಯೋಜಿತದಂತೆ ಕೇವಲ 5 ನಿಮಿಷದಲ್ಲಿ ಸುಮಾರು 10 ಕೋಟಿ ಮೌಲ್ಯದ ಚಿನ್ನಾಭರಣಗಳನ್ನು ಗೋಣಿ ಚೀಲದಲ್ಲಿ ತುಂಬಿಕೊಂಡು ಕಾರಿನಲ್ಲಿ ಪರಾರಿಯಾಗಿರುವ ದುಷ್ಕರ್ಮಿಗಳ ಜಾಡು ಹಿಡಿದು ಪೊಲೀಸರ ತಂಡ ಶೋಧ ಕಾರ್ಯ ನಡೆಸಿರುವ ನಡುವೆಯೇ ರಾಜ್ಯದ ಅತಿ ದೊಡ್ಡ ದರೋಡೆ ಪ್ರಕರಣವೆಂದು ಬಿಂಬಿತವಾಗಿರುವ ಈ ಕೃತ್ಯಕ್ಕೆ ಸ್ಥಳೀಯರು ಮತ್ತು ಬ್ಯಾಂಕ್‌ನ ಬಗ್ಗೆ ಸಂಪೂರ್ಣ ತಿಳಿದಿರುವವರು ಸಹಕಾರ ನೀಡಿದ್ದಾರೆಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ.

ಸಂಪೂರ್ಣ ಘಟನೆ ಹಿಂದೆ ವ್ಯಕ್ತಿಯೊಬ್ಬನ ಪಾತ್ರವಿದ್ದು ಆತನ ಮಾಹಿತಿ ಪಡೆದು ಸೆರೆಗೆ ಬಲೆ ಬೀಸಲಾಗಿದೆ. ಮುಖ್ಯಮಂತ್ರಿ ಮಂಗಳೂರಿಗೆ ಬರುವ ದಿನವನ್ನು ನಿಗದಿಪಡಿಸಿ ಪೊಲೀಸರ ಗಮನವನ್ನು ಬೇರೆಡೆಗೆ ಸೆಳೆದು ಕೇವಲ 5 ನಿಮಿಷದಲ್ಲಿ ಈ ದೊಡ್ಡ ದರೋಡೆ ನಡೆದಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆಯೆಂಬ ಆರೋಪಗಳ ನಡುವೆಯೇ ನಡುವೆ ನಡೆದ ಈ ಘಟನೆ ಬೆಚ್ಚಿಬೀಳಿಸಿದೆ.

ಬೀದರ್‌ನಲ್ಲಿ ಎಟಿಎಂ ಸಿಬ್ಬಂದಿಯ ಕೊಂದು ಒಂದು ಕೋಟಿ ರೂ. ದೋಚಿದ್ದ ಘಟನೆ ಹಾಗೂ ಮಂಗಳೂರಿನ ಬ್ಯಾಂಕ್ ದರೋಡೆ ಪ್ರಕರಣದ ಬಗ್ಗೆ ಪೊಲೀಸರಿಗೆ ಪತ್ತೆ ಹಚ್ಚುವ ಕಾರ್ಯ ದೊಡ್ಡ ಸಸವಾಲಾಗಿದೆ.




ಉದಯವಾಹಿನಿ ಚಿತ್ರ

**ಪೊಲೀಸರಿಗೆ ದೊಡ್ಡ ಸವಾಲು**

**ದರೋಡೆಗೆ ನಿಗದಿಪಡಿಸಿದ್ದ ಸಮಯ ಮತ್ತು ಪರಾರಿಯಾಗಲು ಬಳಸಿದ್ದ ತಂತ್ರಗಾರಿಕೆ ಪತ್ತೆಹಚ್ಚುವುದು ಪೊಲೀಸರಿಗೆ ಈಗ ದೊಡ್ಡ ಸವಾಲಾಗಿದೆ. ದರೋಡೆಕೋರರು ಕೇರಳ ಪ್ರವೇಶಿಸಿ ನಂತರ ನಾಪತ್ತೆಯಾಗಿದ್ದು, ಅವರು ಜಲಮಾರ್ಗದ ಮೂಲಕ ತಮಿಳುನಾಡಿಗೆ ಹೋಗಿರಬಹುದೆಂದು ಶಂಕೆ ವ್ಯಕ್ತಪಡಿಸಿ ಪೊಲೀಸರ ಒಂದು ತಂಡ ಅಲ್ಲಿ ಕಾರ್ಯಾಚರಣೆ ಆರಂಭಿಸಿದೆ.**

## ಫಿರೋಜ್ ಸೇಠ್ ಜೊತೆ ಡಿಕೆಶಿ ಪ್ರತ್ಯೇಕ ಮಾತುಕತೆ

• **ಉದಯವಾಹಿನಿ, ಬೆಳಗಾವಿ**

ಮಾಜಿ ಶಾಸಕ ಫಿರೋಜ್ ಸೇಠ್ ಜೊತೆ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಪ್ರತ್ಯೇಕ ಮಾತುಕತೆ ನಡೆಸಿದ್ದು, ಕಾಂಗ್ರೆಸ್‌ನ ಬಣ ಚಟುವಟಿಕೆಗಳ ನಡುವೆ ಇದು ಮಹತ್ವ ಪಡೆದಿದೆ. ಬೆಳಗಾವಿ ಜಾದವ ನಗರದ ಟಿವಿ ಸೆಂಟರ್ ನಲ್ಲಿ ಫಿರೋಜ್ ಸೇಠ್ ಮನೆಯಲ್ಲಿ ಮಾತುಕತೆ ನಡೆದಿದೆ.

ಮಾಜಿ ಶಾಸಕ ಫಿರೋಜ್ ಸೇಠ್ ಅವರು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರೊಂದಿಗೆ ಅಂತರ ಕಾಯ್ದುಕೊಂಡಿರುವುದು ಇಲ್ಲಿ ಗಮನಿಸಬೇಕಾದ ಸಂಗತಿ. ಡಿಕೆಶಿ ಭೇಟಿ ಸಂದರ್ಭದಲ್ಲಿ ಸಚಿವ ಸುಧಾಕರ್, ಶಾಸಕ ಆಸೀಫ್ ಸೇಠ್, ಎಂಎಲ್ ಸಿ ಚನ್ನರಾಜ್ ಹಟ್ಟಿಹೊಳಿ ಉಪಸ್ಥಿತರಿದ್ದರು.

ಸುಮಾರು 15 ನಿಮಿಷಗಳ ಕಾಲ ಉಭಯ ನಾಯಕರ ಮಾತುಕತೆ ನಡೆದಿದೆ. ಈ ಬಗ್ಗೆ ಮಾತನಾಡಿದ ಮಾಜಿ ಶಾಸಕ ಫಿರೋಜ್ ಸೇಠ್, ಮಾತುಕತೆ ಸಂದರ್ಭದಲ್ಲಿ ಯಾವುದೇ ರಾಜಕೀಯ ಚರ್ಚೆಯಾಗಿಲ್ಲ. ನಾನೇ ಸ್ವತಃ ನಮ್ಮ ಮನೆಗೆ ಡಿ ಕೆ ಶಿವಕುಮಾರ್ ಅವರಿಗೆ ಆಹ್ವಾನ ನೀಡಿದ್ದೆ. ಸಚಿವ ಸತೀಶ್ ಜಾರಕಿಹೊಳಿ ಅವರ ಜೊತೆ ನಮಗೆ ಯಾವುದೇ ಅಸಮಾಧಾನ ಅಥವಾ ಮನಸ್ತಾಪ ಇಲ್ಲ ಎಂದರು. ಜಾರಕಿಹೊಳಿ ಮತ್ತು ನಮ್ಮ ಕುಟುಂಬದ ನಡುವೆ 50 ವರ್ಷದ ಸಂಬಂಧ ಇದೆ. ವದಂತಿಗಳಿಗೆ ಅರ್ಥವಿಲ್ಲ ಎಂದ ಅವರು, ತಮ್ಮ ಸಹೋದರ ರಾಜು ಸೇಠ ಸ್ನೇಹಿತರು ಹಾಗೂ ಕೆಲವು ಶಾಸಕರ ಜೊತೆಗೆ ದುಬೈ ಪ್ರವಾಸಕ್ಕೆ ಹೋಗುತ್ತೇವೆ ಎಂದು ಹೇಳಿದ್ದಾರೆ. ಇದರ ಹಿಂದೆ ಯಾವ ರಾಜಕೀಯ ಅಥವಾ ಅಸಮಾಧಾನ ಇಲ್ಲ ಎಂದು ಫಿರೋಜ್ ಸೇಠ ಸ್ಪಷ್ಟನೆ ನೀಡಿದರು.



ಉದಯವಾಹಿನಿ ಚಿತ್ರ

**ಕುತೂಹಲಕ್ಕೆ ಕಾರಣವಾದ ಚರ್ಚೆ**

## ಗಾಂಧೀಜಿ, ಅಂಬೇಡ್ಕರ್ ಕಾಂಗ್ರೇಸ್ಸಿನ ಶಕ್ತಿ: ಮಧು ಬಂಗಾರಪ್ಪ

• **ಉದಯವಾಹಿನಿ, ಶಿವಮೊಗ್ಗ**

ಮಹಾತ್ಮ ಗಾಂಧೀಜಿ ಮತ್ತು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಕಾಂಗ್ರೆಸ್ ಪಕ್ಷದ ಶಕ್ತಿಗಳು ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಹೇಳಿದರು.

ಜನವರಿ 21ರಂದು ಬೆಳಗಾವಿಯಲ್ಲಿ ನಡೆಯುವ ಕಾಂಗ್ರೆಸ್ ಸಮಾವೇಶದ ಅಂಗವಾಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಗಾಂಧಿ ಭಾರತ ಸ್ಮರಣಾರ್ಥ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಹೆಸರಿನಲ್ಲಿ ಕಾಂಗ್ರೆಸ್ ಸಮಾವೇಶ ನಡೆಸಲಾಗುತ್ತಿದೆ. ಅಂಬೇಡ್ಕರ್ ಮತ್ತು ಗಾಂಧೀಜಿ ತತ್ವಗಳನ್ನು ಬಿಜೆಪಿಗರು ವಿರೋಧಿಸುತ್ತಾರೆ.

ಆದರೆ ಅವರ ತತ್ತ್ವಗಳನ್ನು ಮನೆ ಮನೆಗೆ ತಲುಪಿಸುವ ಕೆಲಸವನ್ನು ಪಕ್ಷದ ಕಾರ್ಯಕರ್ತರು ಮಾಡುವ ಅಗತ್ಯವಿದೆ ಎಂದರು. ಬೆಳಗಾವಿಯಲ್ಲಿ ನಡೆಯುವ ಸಮಾವೇಶದಲ್ಲಿ ಜಿಲ್ಲೆಯಿಂದ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಸಮಾವೇಶವನ್ನು ಯಶಸ್ವಿಗೊಳಿಸಲು ಮುಂದಾಗಬೇಕು ಎಂದು ಹೇಳಿದರು.

ಬಿಜೆಪಿಗರಿಗೆ ಗಾಂಧೀಜಿ ಮತ್ತು ಅಂಬೇಡ್ಕರ್ ತತ್ವಗಳನ್ನು ಕಂಡರೆ ಆಗುವುದಿಲ್ಲ. ಗಾಂಧೀಜಿಯನ್ನು ಕೊಂದ ವ್ಯಕ್ತಿಯ ಹೆಸರಿನಲ್ಲಿ ದೇವಸ್ಥಾನ ನಿರ್ಮಿಸಿದ್ದಾರೆ. ಸಂವಿಧಾನವನ್ನು ಅವರು ವಿರೋಧ ಮಾಡುತ್ತಾರೆ' ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಆರ್. ಪ್ರಸನ್ನ ಕುಮಾರ ಹೇಳಿದರು. ವಿಧಾನ ಪರಿಷತ್ ಮಾಜಿ ಸದಸ್ಯ ಆಯನೂರು ಮಂಜುನಾಥ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಆರ್.ಎಂ. ಮಂಜುನಾಥಗೌಡ, ಸುಡಾ ಅಧ್ಯಕ್ಷ ಎಚ್.ಎಸ್. ಸುಂದರೇಶ್ ನಾಗರಾಜಗೌಡ, ಎಚ್.ಸಿ. ಯೋಗೀಶ್ ಅವರು ಮಾತನಾಡಿದರು.



ಉದಯವಾಹಿನಿ ಚಿತ್ರ

## ಬೀದಿ ನಾಯಿಯನ್ನು ಆಟೋದಲ್ಲಿ ಎಳೆದೊಯ್ದ ವಾಜೀದ್ ಅರೆಸ್ಟ್

• **ಉದಯವಾಹಿನಿ ಶಿವಮೊಗ್ಗ**

ಹೊಸನಗರ ತಾಲ್ಲೂಕಿನ ರಿಪ್ಪನ್‌ಪೇಟೆ ಸಮೀಪದ ಕೆಂಚನಾಲ ಗ್ರಾಮದಲ್ಲಿ ಬೀದಿ ನಾಯಿ ಎಳೆದೊಯ್ಯ ಸುದ್ದಿಯೊಂದು ರಾಜ್ಯಾದ್ಯಂತ ಸುದ್ದಿಯಾಗಿದ್ದು ಕೊಂದು ಆಟೋದಲ್ಲಿ ಎಳೆದೊಯ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಕೆಂಚನಾಲ ಗ್ರಾಮದ ಆಟೋ ಚಾಲಕ ವಾಜೀದ್ ಬಂಧಿತ. ಈತನನ್ನು ಕೆಂಚನಾಲ ರೈಲ್ವೆ ನಿಲ್ದಾಣದ ಬಳಿಯಲ್ಲಿ ಬೀದಿ ನಾಯಿಯನ್ನು ಅಮಾನುಷವಾಗಿ ಹೊಡೆದು ಸಾಯಿಸಿ ಆಟೋದಲ್ಲಿ ಎಳೆದುಕೊಂಡು ಹೋದ ಆರೋಪದಡಿ ಎಫ್‌ಐಆರ್ ದಾಖಲಿಸಿ ಬಂಧಿಸಲಾಗಿದೆ. ಕೆಂಚನಾಲ ರೈಲ್ವೆ ನಿಲ್ದಾಣದ ಬಳಿಯಲ್ಲಿ ಅದರಷ್ಟಕ್ಕೆ ಮಲಗಿದ್ದ ನಾಯಿಯ ಮೇಲೆ ಆರೋಪಿ ವಾಜೀದ್ ದೊಡ್ಡ ಗಾತ್ರದ ಕಲ್ಲು ಎತ್ತಿ ಹಾಕಿ ಕೊಂದಿದ್ದಾನೆ. ಬಳಿಕ ಲಗ್ಗೇಜ್ ಆಟೋಗೆ ಕಟ್ಟಿ ಎಳೆದೊಯ್ದ ವಿಡಿಯೋ ವೈರಲ್ ಆಗಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಕೇಂದ್ರ ಸಚಿವ, ಪ್ರಾಣಿ ದಯಾ ಸಂಘದ ರಾಷ್ಟ್ರೀಯ ಕಾರ್ಯಕರ್ತೆ ಮೇನಕಾ ಗಾಂಧಿ ಎಂಟ್ರಿಯಾಗಿದ್ದು ಕ್ರೂರವಾಗಿ ಕೊಂದು ಆಟೋದಲ್ಲಿ ಎಳೆದೊಯ್ದ ಪ್ರಕರಣ ದಾಖಲಿಸುವಂತೆ ಮಾಡಿದ್ದಾರೆ.

## ಪೂರ್ವವಲಯ ಐಜಿಪಿ ರವಿಕಾಂತೇಗೌಡ ಅಧಿಕಾರ ಸ್ವೀಕಾರ

• **ಉದಯವಾಹಿನಿ, ದಾವಣಗೆರೆ**



ಪೂರ್ವ ವಲಯ ಪೊಲೀಸ್ ಮಹಾ ನಿರೀಕ್ಷಕರಾಗಿ ಡಾ.ಬಿ ಆರ್ ರವಿಕಾಂತೇಗೌಡ ಅಧಿಕಾರಿ ಸ್ವೀಕರಿಸಿದರು. ಪೊಲೀಸ್ ಅಧೀಕಕರಾದ ಶ್ರೀಮತಿ ಉಮಾ ಪ್ರಶಾಂತ್ ಐಪಿಎಸ್ ರವರು, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ವಿಜಯಕುಮಾರ ಎಂ ಸಂತೋಷ , ಜಿ ಮಂಜುನಾಥ, ಚನ್ನಗಿರಿ ಸಹಾಯಕ ಪೊಲೀಸ್ ಅಧೀಕ್ಷಕರಾದ, ಸ್ಯಾಮ್ ವರ್ಗೀಸ್ , ದಾವಣಗೆರೆ ಗ್ರಾಮಾಂತರ ಪೊಲೀಸ್ ಉಪಾಧೀಕ್ಷಕರಾದ ಬಿ ಎಸ್ ಬಸವರಾಜ್, ದಾವಣಗೆರೆ ನಗರ ಪೊಲೀಸ್ ಉಪಾಧೀಕ್ಷಕರಾದ ಶರಣ ಬಸವೇಶ್ವರ ಬೀಮರಾವ್, ಡಿಎಆರ್ ಉಪಾಧೀಕ್ಷಕರಾದ ಪಿ ಬಿ ಪ್ರಕಾಶ್, ರುದ್ರೇಶ್ ಉಜ್ಜಿನಕೊಪ್ಪ, ಬೆರಳು ಮುದ್ರೆ ಘಟಕದ ಪೊಲೀಸ್ ಉಪಾಧೀಕ್ಷಕರಾದ ರುದ್ರೇಶ್ ಹಾಗೂ ಪೊಲೀಸ್ ನಿರೀಕ್ಷಕರಾದ ಲಕ್ಷ್ಮಣ್ ನಾಯ್ಕ್, ನಲವಾಗಲು ಮಂಜುನಾಥ, ತೇಜಾವತಿ, ಸೋಮಶೇಖರ್ ಉಪಸ್ಥಿತರಿದ್ದರು.

# ವೇಮನರ ವಚನಗಳು ಸಮಾಜಕ್ಕೆ ದಾರಿದೀಪ: ಬಿ.ಟಿ.ಕುಮಾರಸ್ವಾಮಿ

## ಜಾತಿಯ ಒಗ್ಗಟ್ಟು, ಜಾತಿಯ ಬಲ ಪ್ರದರ್ಶನವಲ್ಲ, ಮಹನೀಯರನ್ನು ಯಾವುದೇ ಜಾತಿಗೆ ಸೀಮಿತ ಮಾಡುವುದು ಸರಿಯಲ್ಲ

• **ಉದಯವಾಹಿನಿ ಚಿತ್ರದುರ್ಗ**

ಮಹಾಯೋಗಿ ವೇಮನರು ವಚನಗಳ ಮೂಲಕ ಸಮಾಜದ ಅಂಕು–ಡೊಂಕು ತಿದ್ದಿ ಸರಿ ದಾರಿಗೆ ಯತ್ನಿಸಿದವರು. ವೇಮನರ ವಚನಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ''ಮಹಾಯೋಗಿ ವೇಮನ ಜಯಂತಿ ಆಚರಣೆ ಸಮಾರಂಭದಲ್ಲಿ ವೇಮನರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಜಯಂತಿ ಆಚರಣೆಗಳು ಜಾತಿಯ ಒಗ್ಗಟ್ಟು, ಜಾತಿಯ ಬಲ ಪ್ರದರ್ಶನವಲ್ಲ. ಮಹನೀಯರನ್ನು ಯಾವುದೇ ಜಾತಿಗೆ ಸೀಮಿತ ಮಾಡುವುದು ಸರಿಯಲ್ಲ. ಮಹನೀಯರ ಸಂದೇಶ, ಬದುಕು, ವಿಚಾರಧಾರೆಗಳು ಇಡೀ ಮಾನವ ಸಂಕುಲಕ್ಕೆ ಸಂಬಂಧಪಟ್ಟಿವೆ. ವೇಮನ ವಿಚಾರ ತಿಳಿದುಕೊಳ್ಳುವ ಮೂಲಕ ನಾವು ಮೌಲ್ಯಯುತ ಬದುಕು ರೂಢಿಸಿಕೊಳ್ಳಬೇಕು ಎಂದು ಹೇಳಿದರು. ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ ಮಾತನಾಡಿ, ವೇಮನರು ತೆಲುಗಿನಲ್ಲಿ ಬರೆದ ಅನೇಕ ವಚನಗಳು ಬೇರೆ ಬೇರೆ ಭಾಷೆಗಳಲ್ಲದೇ ಕನ್ನಡಕ್ಕೂ ಭಾಷಾಂತರಗೊಂಡಿವೆ. ಮಹಾಯೋಗಿ ವೇಮನರ ವಚನಗಳು ಸಮಾಜಕ್ಕೆ ಮಾರ್ಗದರ್ಶನವಾಗಿದ್ದು, ಅವರ ವಚನಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

**ರೆಡ್ಡಿ ಸಮುದಾಯ ಆರ್ಥಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ ಉತ್ತಮ ಸಮಾಜವಾಗಿದೆ. ಮಹನೀಯರ ಜಯಂತಿ ಕಾರ್ಯಕ್ರಮಗಳಿಗೆ ಮಕ್ಕಳನ್ನು ಕರೆದುಕೊಂಡು ಬರುವ ಮೂಲಕ ಮಹನೀಯರ, ಮಾನವತಾವಾದಿಗಳ ವಿಚಾರಧಾರೆಗಳನ್ನು ತಿಳಿಸಬೇಕು ಎಂದು ತಿಳಿಸಿದ ಅವರು, ಪ್ರಸ್ತುತ ದಿನಗಳಲ್ಲಿ ಸಂಸ್ಕೃತಿ, ಸಂಸ್ಕಾರ ಅಳವಿನಂಚಿನಲ್ಲಿವೆ. ಹಾಗಾಗಿ ಕುಸಿಯುತ್ತಿರುವ ಮೌಲ್ಯಗಳನ್ನು ಕಟ್ಟಬೇಕು. ಆ ಮೂಲಕ ಸಮಾಜವನ್ನು ಉತ್ತಮವಾಗಿ ಮಾರ್ಗಕ್ಕೆ ಕೊಂಡ್ಯೊಯಲು ಸಾಧ್ಯವಾಗಲಿದೆ**

**-ಬಿ.ಟಿ.ಕುಮಾರಸ್ವಾಮಿ, ಡಿಸಿ**



ಉದಯವಾಹಿನಿ ಚಿತ್ರ

**ಮಹಾಯೋಗಿ ವೇಮನ ಜಯಂತಿ**

ಚಳ್ಳಕೆರೆ ತಾಲ್ಲೂಕು ಬೇಡರೆಡ್ಡಿಹಳ್ಳಿ ಜಿ.ವಿ.ಆಂಜನಪ್ಪ ಸ್ಮಾರಕ ಸಂಯುಕ್ತ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಎಸ್.ಬಿ.ಭೀಮರೆಡ್ಡಿ ಉಪನ್ಯಾಸ ನೀಡಿ, ವೇಮನರು ಹೇಳಿದ ವಚನಗಳಲ್ಲಿ ನಮ್ಮ ಜೀವನಕ್ಕೆ ಅನ್ವಯಿಸುವ, ಜೀವನ ಉತ್ತಮವಾಗಿ ಸಾಗುವುದಕ್ಕೆ, ಬೇಕಾಗುವ ಜ್ಞಾನ ಪಡೆಯುವುದಕ್ಕಾಗಿ ವೇಮನ ವಚನಗಳನ್ನು ಓದಿ ಅರ್ಥೈಸಿಕೊಂಡು ಬದುಕಿದರೆ ಜೀವನ ಸಾರ್ಥಕವಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ರೆಡ್ಡಿ ಸಮುದಾಯದ ನಿವೃತ್ತ ಅಧಿಕಾರಿಗಳಾದ ವಿಶ್ವನಾಥ ರೆಡ್ಡಿ, ಇಂಟೂರು ಜಯರಾಮರೆಡ್ಡಿ, ರಾಮಕೃಷ್ಣರೆಡ್ಡಿ, ಹನುಮಂತರೆಡ್ಡಿ, ವೆಂಕಟೇಶ್ ರೆಡ್ಡಿ, ಮುಖಂಡರಾದ ವಿಜಯಕುಮಾರ್ ಡಿ.ಕೆ. ಹಟ್ಟಿ, ಮಂಜುನಾಥ ಬೆಳಗಟ್ಟ, ವಕೀಲ ಬಾಬುರೆಡ್ಡಿ ಸೇರಿದಂತೆ ಮತ್ತಿತರರು ಇದ್ದರು.

ಹಿಮಂತರಾಜ ಮತ್ತು ತಂಡದವರು ಗೀತ ಗಾಯನ ನಡೆಸಿಕೊಟ್ಟರು.

**ವೇಮನರು ಜಗತ್ತು ಕಂಡ ದಾರ್ಶನಿಕರು**

**ವೇಮನರು ಕೇವಲ ರೆಡ್ಡಿ ಸಮುದಾಯಕ್ಕೆ ಮಾತ್ರ ಸೀಮಿತ ಎಂಬ ಸಂಕುಚಿತ ಮನೋಭಾವದಿಂದ ಹೊರಬರಬೇಕು. ವೇಮನರು ಜಗತ್ತು ಕಂಡ ದಾರ್ಶನಿಕರು. ವೇಮನರನ್ನು ವಿಶಾಲ ದೃಷ್ಟಿಕೋನದಿಂದ ಗಮನಿಸಿ, ಅರ್ಥೈಸಿಕೊಂಡರೆ ವೇಮನರು ಸಂಪೂರ್ಣವಾಗಿ ಅರ್ಥವಾಗುತ್ತಾರೆ ಎಂದು ತಿಳಿಸಿದ ಅವರು, ವೇಮನರ ವಚನಗಳನ್ನು ನಾವು ತಿಳಿದುಕೊಂಡು ನಮ್ಮ ಮುಂದಿನ ಪೀಳಿಗೆಗೆ ಈ ಎಲ್ಲಾ ವಿಷಯಗಳನ್ನು ವರ್ಗಾಯಿಸಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.**

## ಹೈಯಾಳ ಎತ್ತಿನ ಜಾತ್ರೆಯಲ್ಲಿ ದಾಖಲೆ ಬೆಲೆಯಲ್ಲಿ ಜೋಡೆತ್ತು ಮಾರಾಟ



ಉದಯವಾಹಿನಿ ಚಿತ್ರ

• **ಉದಯವಾಹಿನಿ ವಡಗೇರಾ**

ಹೈಯಾಳ ( ಬಿ) ಗ್ರಾಮದ ಸಾಗರ ನಾಡಿನ ಆರಾಧ್ಯ ದೈವ ಶ್ರೀ ಹೈಯ್ಯಾಲಿಂಗೇಶ್ವರ ದೇವಸ್ಥಾನದಲ್ಲಿ ಮಕರ ಸಂಕ್ರಾಂತಿ ಹಬ್ಬದಿಂದ ಒಂದು ವಾರಗಳ ಕಾಲ ನಡಿಯುವ ಎತ್ತಿನ ಜಾತ್ರೆಯು ಅತ್ಯಂತ ವಿಜೃಂಭಣೆಯಿಂದ ನಡೆಯುತ್ತದೆ ಈ ಎತ್ತಿನ ಜಾತ್ರೆಗೆ ಹೊರ ಜಿಲ್ಲೆ ಹಾಗೂ ಸುತ್ತಮುತ್ತಲ ಗ್ರಾಮಗಳಿಂದ ಸಾವಿರಾರು ರೈತರು ತಮ್ಮ ಎತ್ತುಗಳನ್ನು ತಂದು ಈ ಜಾತ್ರೆಯಲ್ಲಿ ಮಾರಾಟ ಮಾಡುತ್ತಾರೆ ಅದರಂತೆ ಈ ವರ್ಷವೂ ಕೂಡ ಜಾತ್ರೆಯಲ್ಲಿ ವಿವಿಧ ಭಾಗಗಳಿಂದ ಸಾವಿರಾರು ಎತ್ತುಗಳು ಮಾರಾಟಕ್ಕೆ ಬಂದಿದೆ ಅದರಲ್ಲಿ ಅತಿ ಹೆಚ್ಚು ಬೆಲೆಗೆ ಒಂದು ಜೋಡಿ ಎತ್ತುಗಳು ಮಾರಾಟವಾಗಿವೆ ಮಾರಾಟ ಮಾಡಿದ ರೈತನಿಗೆ ಅತಿ ಹೆಚ್ಚು ಲಾಭ ತಂದು ಕೊಟ್ಟಿವೆ ಕಳೆದ ವರ್ಷ ಇದೇ ಜಾತ್ರೆಯಲ್ಲಿ ಒಂದು ಜೋಡು ಎತ್ತುಗಳಿಗೆ ಒಂದು ಲಕ್ಷದ ಎಂಬತ್ತು ಸಾವಿರ ರೂಪಾಯಿಗಳಿಗೆ ಮಾರಾಟವಾಗಿದ್ದವು ಈ ವರ್ಷವೂ ಅದಕ್ಕಿಂತ ಹೆಚ್ಚಿನ ಬೆಲೆಗೆ ಜೋಡು ಎತ್ತುಗಳು ಮಾರಾಟವಾಗಿವೆ ದೇವದುರ್ಗ ತಾಲ್ಲೂಕಿನ ಕರಿಗುಡ್ಡ ಗ್ರಾಮದ ಸಾಬಣ್ಣ ಎಂಬ ರೈತನು ತಂದಿದ್ದ ಎತ್ತುಗಳನ್ನು ವಡಗೇರಾ ತಾಲ್ಲೂಕಿನ ಕಮಲ ನಾಯಕ್ ತಾಂಡ ನಿವಾಸಿ ಬಸವರಾಜ ರಾಥೋಡ್ ಎಂಬ ಯುವ ರೈತನು ಎರಡು ಲಕ್ಷ ನಲವತ್ತು ಸಾವಿರಕ್ಕೆ ಜೋಡಿ ಎತ್ತುಗಳನ್ನು ಖರೀದಿಸಿದ್ದು ಇದು ಈ ಜಾತ್ರೆಯಲ್ಲಿ ದಾಖಲೆಯಾಗಿದೆ.

## ವಿವಿಧ ಇಲಾಖೆಗಳ ಗ್ರೂಪ್ ಬಿ ಸ್ಪರ್ಧಾತ್ಮಕ ಪರೀಕ್ಷೆ: 4623 ಅಭ್ಯರ್ಥಿಗಳು ಗೈರು

• **ಉದಯವಾಹಿನಿ ಚಿತ್ರದುರ್ಗ**

ಕರ್ನಾಟಕ ಲೋಕಸೇವಾ ಅಯೋಗದ ವತಿಯಿಂದ ವಿವಿಧ ಇಲಾಖೆಗಳ ಗ್ರೂಪ್–ಬಿ ಉಳಿಕೆ ಮೂಲ ವೃಂದದಲ್ಲಿನ ಹುದ್ದೆಗಳಿಗೆ ಭಾನುವಾರ ನಡೆದ ಸ್ಪರ್ಧಾತ್ಮಕ ಪರೀಕ್ಷೆಯು ಜಿಲ್ಲೆಯಲ್ಲಿ ಶಾಂತಿಯುತವಾಗಿ ಯಾವುದೇ ಗೊಂದಲವಿಲ್ಲದೆ ಜರುಗಿತು. ಚಿತ್ರದುರ್ಗ ನಗರದ 21 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಿತು. ಪತ್ರಿಕೆ–1 ಸಾಮಾನ್ಯ ಪತ್ರಿಕೆಗೆ ಜಿಲ್ಲೆಯಲ್ಲಿ ಒಟ್ಟು 7783 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದರು. ಈ ಪೈಕಿ 3160 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 4623 ಅಭ್ಯರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ತಿಳಿಸಿದ್ದಾರೆ.

## 15 ಶಾಸಕರ ದುಬೈ ಟೂರ್ ಹೇಳಿಕೆ ನೀಡಿದ್ದ ಆಸೀಫ್ ಸೇಠ್ ಗೆ ಡಿಕೆಶಿ ಪಾಠ

• **ಉದಯವಾಹಿನಿ ಬೆಳಗಾವಿ**

ಶೀಘ್ರದಲ್ಲೇ 15 ಜನ ಶಾಸಕರು ದುಬೈ ಟೂರ್ ಹೋಗುವುದಾಗಿ ಹೇಳಿಕೆ ನೀಡಿದ್ದ ಶಾಸಕ ಆಸೀಫ್ ಸೇಠ್ ಗೆ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಪಾಠ ಮಾಡಿದ ಪ್ರಸಂಗ ರವಿವಾರ ನಡೆದಿದೆ. ಮಾಧ್ಯಮಗಳಲ್ಲಿ ವರದಿ ಪ್ರಸಾರವಾದ ಬೆನ್ನಲ್ಲೇ ಆಸೀಫ್ ಸೇಠ್‌ಗೆ ಡಿಕೆಶಿ ಕ್ಲಾಸ್ ತೆಗೆದುಕೊಂಡಿದ್ದಾರೆ. ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ತಮ್ಮ ಕಾರಿನಲ್ಲಿ ಕೂರಿಸಿಕೊಂಡು ಸೇಠ್ ಜತೆಗೆ ಅವರು ಮಾತನಾಡಿದರು. ಗನ್ ಮ್ಯಾನ್, ಪಿಎಗಳನ್ನು ವಾಹನದಿಂದ ಕೆಳಗಿಳಿಸಿ ಆಸೀಫ್ ಸೇಥ್ ಜೊತೆಗೆ ಮಾತನಾಡಿದರು. 15 ನಿಮಿಷಗಳ ಕಾಲ ಕಾರಲ್ಲೇ ಇಬ್ಬರು ನಾಯಕರು ಕುಳಿತುಕೊಂಡು ಚರ್ಚೆ ನಡೆಸಿದರು.

# ಮತ್ತೆ ಯುದ್ಧರಂಗಕ್ಕಿಳಿಯುವ ಹಕ್ಕನ್ನು ಕಾಯ್ದಿರಿಸಿದ್ದೇವೆ: ನೆತನ್ಯಾಹು

## ● ಒತ್ತೆಯಾಳುಗಳ ಪಟ್ಟಿ ಕೈಸೇರುವವರೆಗೂ ಕದನ ವಿರಾಮ ಜಾರಿ ಇಲ್ಲ ಎಂದ ಬೆಂಜಮಿನ್ ನೆತನ್ಯಾಹು

**ಇಸ್ರೇಲ್ – ಹಮಾಸ್ ಯುದ್ಧಕ್ಕೆ ಬ್ರೇಕ್**



**ಜೆರುಸಲೇಂ:** ಇನ್ನೇನು ಕೆಲವೇ ಕ್ಷಣಗಳಲ್ಲಿ ಇಸ್ರೇಲ್ –ಪ್ಯಾಲೆಸ್ಟೈನ್ ನಡುವಿನ ಗಾಜಾ ಯುದ್ಧ ಕದನ ವಿರಾಮ ಒಪ್ಪಂದ ಪ್ರಾರಂಭವಾಗಲಿದೆ.

ಆದರೆ ಒತ್ತೆಯಾಳುಗಳ ಬಿಡುಗಡೆ ವಿಚಾರದಲ್ಲಿ ಎಚ್ಚರಿಕೆಯ ಹೆಜ್ಜೆಯನ್ನಟ್ಟಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಹಮಾಸ್ ಒತ್ತೆಯಾಳುಗಳ ಪಟ್ಟಿ ಬಿಡುಗಡೆಯಾಗುವವರೆಗೂ ಕದನ ವಿರಾಮ ಚೌಕಟ್ಟಿನಲ್ಲಿ ಮುಂದುವರೆಯುವುದು ಕಷ್ಟ ಎಂದು ಎಚ್ಚರಿಸಿದ್ದಾರೆ.

ಹಮಾಸ್ ಬಿಡುಗಡೆ ಮಾಡುವ ಒತ್ತೆಯಾಳುಗಳ ಪಟ್ಟಿ ತಮ್ಮ ಕೈಸೇರುವವರೆಗೂ, ಕದನ ವಿರಾಮ ಚೌಕಟ್ಟಿನೊಂದಿಗೆ ಮುಂದುವರಿಯಲು ಸಾಧ್ಯವಾಗುವುದಿಲ್ಲ ಎಂದು ಬೆಂಜಮಿನ್ ನೆತನ್ಯಾಹು ಸ್ಪಷ್ಟಪಡಿಸಿದ್ದಾರೆ. ಅಲ್ಲದೇ ಒಪ್ಪಂದದ ಉಲ್ಲಂಘನೆಯಾದಲ್ಲಿ ಮುಂದಾಗುವ ಅನಾಹುತಗಳಿಗೆ ಹಮಾಸ್ ಹೊಣೆಯಾಗಲಿದೆ ಎಂದೂ ಇಸ್ರೇಲ್ ಪ್ರಧಾನಿ ನೇರ ಎಚ್ಚರಿಕೆ ನೀಡಿದ್ದಾರೆ.

ಒಪ್ಪಿಗೆಯಂತೆ ಬಿಡುಗಡೆ ಮಾಡಲಾಗುವ ಒತ್ತೆಯಾಳುಗಳ ಪಟ್ಟಿಯನ್ನು ನಾವು ಸ್ವೀಕರಿಸುವವರೆಗೆ, ಕದನ ವಿರಾಮದ ಚೌಕಟ್ಟಿನೊಂದಿಗೆ ಮುಂದುವರಿಯಲು ಸಾಧ್ಯವಾಗುವುದಿಲ್ಲ. ಒಪ್ಪಂದದ ಉಲ್ಲಂಘನೆಯನ್ನು ಇಸ್ರೇಲ್ ಸಹಿಸುವುದಿಲ್ಲ.. ಎಂದು ಬೆಂಜಮಿನ್ ನೆತನ್ಯಾಹು ಅಗತ್ಯ ಬಿದ್ದರೆ ಅಮೆರಿಕದ ಬೆಂಬಲದೊಂದಿಗೆ ಹಮಾಸ್ ವಿರುದ್ಧದ ಯುದ್ಧವನ್ನು ಪುನರಾರಂಭಿಸುವ ಹಕ್ಕನ್ನು ಇಸ್ರೇಲ್ ಹೊಂದಿದೆ.

ಎಲ್ಲಾ ಒತ್ತೆಯಾಳುಗಳನ್ನು ಇಸ್ರೇಲ್‌ಗೆ ಮರಳಿ ಕರೆತರುವುದನ್ನು ಖಚಿತಪಡಿಸಿಕೊಳ್ಳುವುದು ತಮ್ಮ ಪ್ರಾಥಮಿಕ ಆದ್ಯತೆಯಾಗಿದೆ. ಈ ವಿಚಾರದಲ್ಲಿ ಯಾವುದೇ ರಾಜಿಗೆ ಇಸ್ರೇಲ್ ಸಿದ್ಧವಿಲ್ಲ.. ಎಂದು ನೆತನ್ಯಾಹು ಸ್ಪಷ್ಟಪಡಿಸಿದ್ದಾರೆ. ಹಮಾಸ್ ಒತ್ತೆಯಾಳಾಗಿದ್ದ 251 ಜನರಲ್ಲಿ 94 ಮಂದಿ ಇನ್ನೂ ಗಾಜಾದಲ್ಲಿದ್ದಾರೆ.

ಇದುವರೆಗೂ 34 ಜನ ಒತ್ತೆಯಾಳುಗಳು ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ಸೇನೆ ಮಾಹಿತಿ ನೀಡಿದೆ. ಕದನ ವಿರಾಮ ಒಪ್ಪಂದ ಇಂದು ಬೆಳಗ್ಗೆ ಶುರುವಾಗಲಿದ್ದು, ಇಸ್ರೇಲ್ ಕ್ಯಾಬಿನೆಟ್ ಕದನ ವಿರಾಮ ಮತ್ತು ಒತ್ತೆಯಾಳು–ಕೈದಿಗಳ ಬಿಡುಗಡೆ ಒಪ್ಪಂದದ ಪರವಾಗಿ ಮತ ಚಲಾಯಿಸಿದೆ ಎಂದು ಸಂಧಾನಕಾರ ದೇಶ ಕತಾರ್ ಮಾಹಿತಿ ನೀಡಿದೆ.

ಸದ್ಯ ಗಾಜಾದ ಮೇಲಿನ ಇಸ್ರೇಲ್ ಸೇನಾ ದಾಳಿಗಳು ಮುಂದುವರೆದಿದ್ದು, ದಕ್ಷಿಣ ಗಾಜಾದ ಖಾನ್ ಯೂನಿಸ್‌ನಲ್ಲಿ ನಡೆಸಿದ ವೈಮಾನಿಕ ದಾಳಿಯಲ್ಲಿ ಒಂದೇ ಕುಟುಂಬದ ಕನಿಷ್ಠ ಐವರು ಸದಸ್ಯರು ಮರಣವನ್ನಪ್ಪಿದ್ದಾರೆ ಎಂದು ಗಾಜಾದ ಸಿವಿಲ್ ಡಿಫೆನ್ಸ್ ಸಂಸ್ಥೆ ವರದಿ ಮಾಡಿದೆ.

ವೈಮಾನಿಕ ದಾಳಿಯ ಸೈರನ್‌ಗಳು ಮೊಳಗಿದ ನಂತರ ಜೆರುಸಲೇಂನಲ್ಲಿ ಕಟ್ಟೆಚ್ಚರವಹಿಸಲಾಗಿದ್ದು, ಇರಾನ್ ಬೆಂಬಲಿತ ಹೌತಿ ಬಂಡುಕೋರರು ಪ್ಯಾಲೆಸ್ಟೈನ್ ಪರವಾಗಿ ಇಸ್ರೇಲ್ ಮೇಲೆ ದಾಳಿ ಮಾಡುವ ಸಾಧ್ಯತೆ ಹೆಚ್ಚಿದೆ ಎನ್ನಲಾಗಿದೆ.

ಅಮೆರಿಕದ ಅಧ್ಯಕ್ಷರಾಗಿ ಎರಡನೇ ಅವಧಿಗೆ ಡೊನಾಲ್ಡ್ ಟ್ರಂಪ್ ಅಧಿಕಾರ ಸ್ವೀಕರಿಸುವ ಮುನ್ನಾದಿನ, ಕದನ ವಿರಾಮ ಜಾರಿಗೆ ಬರುತ್ತಿರುವುದು ಜಾಗತಿಕವಾಗಿ ಗಮನ ಸೆಳೆದಿದೆ.

### 33 ಒತ್ತೆಯಾಳು ಬಿಡುಗಡೆ

**ಸದ್ಯ ಒಪ್ಪಂದದ ಮೊದಲ ಹಂತದ ಭಾಗವಾಗಿ ಇಂದು ಸಂಜೆ 4 ಗಂಟೆಯ ಒಳಗಾಗಿ, 737 ಪ್ಯಾಲೇಸ್ಟಿನಿಯನ್ ಕೈದಿಗಳನ್ನು ಬಿಡುಗಡೆ ಮಾಡಲಾಗುವುದು ಎಂದು ಇಸ್ರೇಲ್‌ನ ನ್ಯಾಯ ಸಚಿವಾಲಯ ಮಾಹಿತಿ ನೀಡಿದೆ. ಅದೇ ರೀತಿ ಆರಂಭಿಕ 42 ದಿನಗಳ ಕದನ ವಿರಾಮ ಒಪ್ಪಂದದನ್ವಯ ತನ್ನ ವಶದಲ್ಲಿರುವ 33 ಒತ್ತೆಯಾಳುಗಳನ್ನು ಹಮಾಸ್ ಬಿಡುಗಡೆ ಮಾಡಲಿದೆ ಎಂದು ಕತಾರ್ ಪ್ರಧಾನಮಂತ್ರಿ, ಶೇಖ್ ಮೊಹಮ್ಮದ್ ಬಿನ್ ಅಬ್ದುಲ್ರಹ್ಮಾನ್ ಬಿನ್ ಜಾಸಿಮ್ ಅಲ್-ಥಾನಿ ಸ್ಪಷ್ಟಪಡಿಸಿದ್ದಾರೆ.**

- **ಇಸ್ರೇಲ್–ಹಮಾಸ್ ಕದನ ವಿರಾಮ ಒಪ್ಪಂದ ಜಾರಿಗೆ ಕ್ಷಣಗಣನೆ**
- **ಒತ್ತೆಯಾಳುಗಳ ಬಿಡುಗಡೆ ವಿಚಾರವಾಗಿ ಗರಂ ಆದ ಬೆಂಜಮಿನ್ ನೆತನ್ಯಾಹು**
- **ಹಮಾಸ್‌ಗೆ ನೇರ ಎಚ್ಚರಿಕೆಯ ಸಂದೇಶ ರವಾನಿಸಿದ ಇಸ್ರೇಲ್ ಪ್ರಧಾನಿ**
- **ಒತ್ತೆಯಾಳುಗಳ ಪಟ್ಟಿ ಕೈಸೇರುವವರೆಗೂ ಕದನ ವಿರಾಮ ಜಾರಿ ಇಲ್ಲ ಎಂದ ನೆತನ್ಯಾಹು**

## ನನ್ನ ಭಾರತ ಪ್ರವಾಸಕ್ಕೆ ಎಲ್ಲಾ ಏರ್ಪಾಡು ಮಾಡಿ: ಅಧಿಕಾರಿಗಳಿಗೆ ಟ್ರಂಪ್ ಸೂಚನೆ

**ವಾಷಿಂಗ್ಟನ್:** ಡೊನಾಲ್ಡ್ ಟ್ರಂಪ್ ಅವರು ಅಮೆರಿಕದ 47ನೇ ಅಧ್ಯಕ್ಷರಾಗಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸಲಿದ್ದು, ಟ್ರಂಪ್ ಪದಗ್ರಹಣ ಸಮಾರಂಭಕ್ಕೆ ಭರ್ಜರಿ ಸಿದ್ಧತೆ ನಡೆಯುತ್ತಿದೆ. ಈ ಮಧ್ಯೆ, ಅಧಿಕಾರ ಸ್ವೀಕರಿಸುತ್ತಿದ್ದಂತೇ ಡೊನಾಲ್ಡ್ ಟ್ರಂಪ್ ಅವರು ಚೀನಾ ಮತ್ತು ಭಾರತ ಪ್ರವಾಸ ಕೈಗೊಳ್ಳುವ ಸಾಧ್ಯತೆ ಇದೀಗ ದಟ್ಟವಾಗಿದೆ.

ಬೀಜಿಂಗ್‌ನೊಂದಿಗಿನ ಸಂಬಂಧವನ್ನು ಬಲಪಡಿಸುವ ಪ್ರಯತ್ನದ ಭಾಗವಾಗಿ, ಅಧಿಕಾರ ವಹಿಸಿ ಕೊಂಡ ನಂತರ ಚೀನಾಕ್ಕೆ ಪ್ರಯಾಣಿಸಲು ಡೊನಾಲ್ಡ್ ಟ್ರಂಪ್ ಮುಂದಾಗಿದ್ದಾರೆ.

ಇದೇ ವೇಳೆ ಭಾರತಕ್ಕೆ ಭೇಟಿ ನೀಡುವ ಕುರಿತು ಸಲಹೆಗಾರರೊಂದಿಗೆ ಮಾತುಕತೆ ನಡೆಸಿದ್ದಾರೆ ಎಂದು ಅಮೆರಿಕದ ಮಾಧ್ಯಮಗಳು ವರದಿ ಮಾಡಿವೆ.

ಡೊನಾಲ್ಡ್ ಟ್ರಂಪ್ ಅವರು ಅಧ್ಯಕ್ಷರಾಗಿ ಆಯ್ಕೆಯಾದ ನಂತರ, ಚೀನಾಕ್ಕೆ ಪ್ರಯಾಣಿಸಲು ಬಯಸಿದ್ದಾರೆ.ಕ್ಸಿ ಜಿನ್‌ಪಿಂಗ್ ಅವರೊಂದಿಗಿನ ತಮ್ಮ ಸ್ನೇಹ ಸಂಬಂಧವನ್ನು ಮತ್ತಷ್ಟು ಗಾಢವಾಗಿಸಲು ಮುಂದಾಗಿರುವ ಟ್ರಂಪ್, ಚೀನಾ ಪ್ರವಾಸದ ಬಳಿಕ ಭಾರತದತ್ತ ಮುಖ ಮಾಡುವ ಸಾಧ್ಯತೆ ಇದೆ. ಎಂದು ವಾಲ್ ಸ್ಟ್ರೀಟ್ ಜರ್ನಲ್ ವರದಿ ಮಾಡಿದೆ. ಟ್ರಂಪ್ ಅವರು ಭಾರತಕ್ಕೆ ಸಂಭವನೀಯ ಪ್ರವಾಸದ ಬಗ್ಗೆ ಸಲಹೆಗಾರರೊಂದಿಗೆ ಮಾತನಾಡಿದ್ದಾರೆ. ಕಳೆದ ತಿಂಗಳು ಭಾರತದ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್. ಜೈಶಂಕರ್ ಅವರ ಅಮೆರಿಕ ಪ್ರವಾಸದ ವೇಳೆ ಈ ಕುರಿತು ಪ್ರಾಥಮಿಕ ಹಂತದ ಮಾತುಕತೆಗಳು ನಡೆದಿವೆ.. ಎಂದು ವಾಲ್ ಸ್ಟ್ರೀಟ್ ಜರ್ನಲ್ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಭಾರತವು, ಆಸ್ಟ್ರೇಲಿಯಾ, ಜಪಾನ್ ಮತ್ತು ಅಮೆರಿಕವನ್ನು ಒಳಗೊಂಡ ಕ್ವಾಡ್ ಶೃಂಗಸಭೆಯನ್ನು ಆಯೋಜಿಸಲು ಸಿದ್ಧವಾಗಿದೆ. ಈ ಸಭೆಯಲ್ಲಿ ಭಾಗವಹಿಸಲು ಡೊನಾಲ್ಡ್ ಟ್ರಂಪ್ ಭಾರತಕ್ಕೆ ಆಗಮಿಸುವುದು ಖಚಿತವಾಗಿದೆ. ಅದೇ ರೀತಿ ಕ್ವಾಡ್ ಶೃಂಗಸಭೆಗೂ ಮೊದಲು ನಡೆಯಲಿರುವ ಶ್ವೇತಭವನದ ಸಭೆಗೆ, ಟ್ರಂಪ್ ಅವರು ಭಾರತದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸುವ ಸಾಧ್ಯತೆಯೂ ಇದೆ.

ಸದ್ಯ ಟ್ರಂಪ್ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಭರದ ಸಿದ್ಧತೆಗಳು ನಡೆಯುತ್ತಿದ್ದು, ಪ್ರಥಮ ಮಹಿಳೆ ಮೆಲಾನಿಯಾ ಮತ್ತು ಮಗ ಬ್ಯಾರನ್ ಅವರೊಂದಿಗೆ ವಿಶೇಷ ವಿಮಾನದಲ್ಲಿ ಡಲ್ಲೆಸ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಡೊನಾಲ್ಡ್ ಟ್ರಂಪ್ ಬಂದಿಳಿದಿದ್ದಾರೆ. ಟ್ರಂಪ್ ಪದಗ್ರಹಣ ಸಮಾರಂಭದಲ್ಲಿ ಚೀನಾದ ಉಪಾಧ್ಯಕ್ಷ ಹಾನ್ ಜೆಂಗ್ ಭಾಗವಹಿಸಲಿದ್ದುಮ ಭಾರತದಿಂದ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್. ಜೈಶಂಕರ್ ಟ್ರಂಪ್ ಪದಗ್ರಹಣಕ್ಕೆ ಸಾಕ್ಷಿಯಾಗಲಿದ್ದಾರೆ.

ಈಗಾಗಲೇ ಚೀನಾ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಅವರೊಂದಿಗೆ ದೂರವಾಣಿ ಕರೆಯಲ್ಲಿ ಮಾತನಾಡಿರುವ ಡೊನಾಲ್ಡ್ ಟ್ರಂಪ್, ಅಮೆರಿಕ–ಚೀನಾ ನಡುವಿನ ರಾಜತಾಂತ್ರಿಕ ಸಂಬಂಧಕ್ಕೆ ಹೊಸ ಭಾಷ್ಯ ಬರೆಯುವುದಾಗಿ ಹೇಳಿದ್ದಾರೆ. ಅದರಂತೆ ಭಾರತದೊಂದಿಗೂ ಉತ್ತಮ ಸಂಬಂಧ ಹೊಂದು ನಿಟ್ಟಿನಲ್ಲಿ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಮಂತ್ರಿ, ನರೇಂದ್ರ ಮೋದಿ ನೇತೃತ್ವದ ಕೇಂದ್ರ, ಸರ್ಕಾರದೊಂದಿಗೆ ಮಾತುಕತೆ ನಡೆಸಲಿದ್ದಾರೆ ಎಂದು ನಿರೀಕ್ಷಿಸಲಾಗಿದೆ.

- **ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಲಿರುವ ಡೊನಾಲ್ಡ್ ಟ್ರಂಪ್**
- **ಅಧ್ಯಕ್ಷರಾಗಿ ಚೀನಾ ಪ್ರವಾಸಕ್ಕೆ ಆದ್ಯತೆ ನೀಡಲಿರುವ ಡೊನಾಲ್ಡ್ ಟ್ರಂಪ್**
- **ಭಾರತ ಪ್ರವಾಸ ಸಾಧ್ಯತೆಗಳ ಕುರಿತು ಯೋಚಿಸುವಂತೆ ಅಧಿಕಾರಿಗಳಿಗೆ ಸೂಚನೆ**
- **ಭಾರತ–ಅಮೆರಿಕ ರಾಜತಾಂತ್ರಿಕ ಸಂಬಂಧ ಸುಧಾರಣೆಗೆ ಡೊನಾಲ್ಡ್ ಟ್ರಂಪ್ ಒತ್ತು**

**ಪದಗ್ರಹಣ ಸಮಾರಂಭಕ್ಕೆ ಭರ್ಜರಿ ಸಿದ್ಧತೆ**



## ಸೈಫ್ ಮೇಲೆ ದಾಳಿ ಪ್ರಕರಣ : ಆರೋಪಿ ಬಾಂಗ್ಲಾ ಮೂಲದ ಶರೀಫುಲ್ ಇಸ್ಲಾಂ ಶೆಹಜಾದ್ ಅರೆಸ್ಟ

**ಮುಂಬೈ:** ಬಾಲಿವುಡ್ ಚಿತ್ರರಂಗವನ್ನೇ ಬೆಚ್ಚಿ ಬೀಳಿಸಿದ್ದ ಚಿತ್ರನಟ ಸೈಫ್ ಅಲಿಖಾನ್‌ಗೆ ಚಾಕು ಇರಿದು ಪರಾರಿಯಾಗಿದ್ದ ಪ್ರಮು ಆರೋಪಿಯನ್ನು ಕೊನೆಗೂ ಮಹಾರಾಷ್ಟ್ರ ಪೊಲೀಸರು ಬಂಧಿಸಿದ್ದಾರೆ. ಮೂಲತಃ ಬಾಂಗ್ಲಾದೇಶದ ಪ್ರಜೆಯಾಗಿರುವ ಮೊಹಮದ್ ಶರೀಫವುಲ್ಲಾ ಇಸ್ಲಾಮ್ ಷಹಜಾದ್ ಅಲಿಯಾಸ್ ಬಿಜೋಯ್ ದಾಸ್ ಎಂದು ಗುರುತಿಸಲಾಗಿದ್ದು, ಪಶ್ಚಿಮ ಬಂಗಾಳದ ರಾಜಧಾನಿ ಕೋಲ್ಕತ್ತಾದ ನಿವಾಸಿಯಾಗಿದ್ದ ಎಂದು ತಿಳಿದುಬಂದಿದೆ.

ಘಟನೆ ನಡೆದ ನಂತರ ಮುಂಬೈನಿಂದ ಪುಣೆಗೆ ತೆರಳಿ ಅಲ್ಲಿಂದ ಪರಾರಿಯಾಗಲು ಯತ್ನಿಸುತ್ತಿದ್ದ ವೇಳೆ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾನೆ. ಈತನ ದಾಖಲೆಗಳನ್ನು ಪರಿಶೀಲಿಸಿದಾಗ ಒಂದಕ್ಕೊಂದು ತಾಳೆಯಾಗುತ್ತಿರಲಿಲ್ಲ.

ವಶಕ್ಕೆ ಪಡೆದು ವಿಚಾರಣೆ ನಡೆಸಿದ ನಂತರ ಸೈಫ್ ಅಲಿಖಾನ್‌ಗೆ ಚಾಕು ಇರಿದಿರುವುದನ್ನು ಒಪ್ಪಿಕೊಂಡಿರುವುದಾಗಿ ಪುಣೆ ಡಿಸಿಪಿ ದೀಕ್ಷಿತ್ ಗೆಡಂ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ಮೇಲ್ನೋಟಕ್ಕೆ ಈತ ಬಾಂಗ್ಲಾದೇಶದವನಾಗಿದ್ದು, ನಕಲಿ ದಾಖಲೆ ಬಳಸಿ ಭಾರತದೊಳಗೆ ನುಸುಳಿರಬಹುದೆಂದು ಪೊಲೀಸರು ಶಂಕಿಸಿ ದ್ದಾರೆ. ಈತನ ಬಳಿ ಯಾವುದೇ ಭಾರತೀಯ ದಾಖಲೆಗಳಿಲ್ಲದಿರುವುದರಿಂದ ಪಾಸ್‌ಪೋರ್ಟ್ ಕಾಯ್ದೆಯಡಿ ಬಂಧಿಸಲಾಗಿದ್ದು, ಎಲ್ಲಾ ಆಯಾಮಗಳಲ್ಲಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆರೋಪಿ ಬಾಂಗ್ಲಾದೇಶದವನೆಂದು ಸೂಚಿಸುವ ಕೆಲವು ವಸ್ತುಗಳನ್ನು ಆತನಿಂದ ವಶಪಡಿಸಿಕೊಂಡಿದ್ದೇವೆ. ಅವನು ಭಾರತಕ್ಕೆ ಅಕ್ರಮವಾಗಿ ಬಂದು ತನ್ನ ಹೆಸರನ್ನು ಬಿಜೋಯ್ ದಾಸ್ ಎಂದು ಬದಲಾಯಿಸಿಕೊಂಡಿದ್ದಾನೆ.

ಮೊಹಮದ್ ಸರಿಫುಲ್ ಇಸ್ಲಾಂ ಶೆಹಜಾದ್ ವಿಜಯ್‌ದಾಸ್, ಬಿಜೋಯ್ ದಾಸ್ ಮತ್ತು ಮೊಹಮದ್ ಇಲಿಯಾಸ್ ಸೇರಿದಂತೆ ಹಲವು ಹೆಸರುಗಳನ್ನು ಇಟ್ಟುಕೊಂಡು ಸುಮಾರು ನಾಲ್ಕು ತಿಂಗಳಿನಿಂದ ಮುಂಬೈ ಸುತ್ತಮುತ್ತಲ ಪ್ರದೇಶಗಳಲ್ಲಿ ವಾಸಿಸುತ್ತಿದ್ದ.



## ಗ್ಯಾಸೋಲಿನ್ ಟ್ಯಾಂಕರ್ ಸ್ಫೋಟದಲ್ಲಿ 70 ಜನ ಸಾವು

**ಅಬುಜ:** ನೈಜೀರಿಯಾದಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿದ್ದು ಗ್ಯಾಸೋಲಿನ್ ಟ್ಯಾಂಕರ್ ಏಕಾಏಕಿ ಸ್ಫೋಟಗೊಂಡು 70 ಜನರು ಸಾವನ್ನಪ್ಪಿದ್ದರೆ 56ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಎಲ್ಲಾ ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸ್ಫೋಟದ ನಂತರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭೀತಿ ಉಂಟಾಗಿದೆ. ರಾಷ್ಟ್ರೀಯ ತುರ್ತು ನಿರ್ವಹಣಾ ಏಜೆನ್ಸಿ ಮುಖ್ಯಸ್ಥ ಹುಸೇನಿ ಇಸಾ ಈ ಘಟನೆಯ ಬಗ್ಗೆ ಮಾಹಿತಿ ನೀಡಿದ್ದಾರೆ. ಇಂಧನ ವರ್ಗಾವಣೆ ವೇಳೆ ಅಪಘಾತ ಸಂಭವಿಸಿದೆ. ಒಂದು ಟ್ಯಾಂಕರ್‌ನಿಂದ ಇನ್ನೊಂದು ಟ್ಯಾಂಕರ್‌ಗೆ ಪೆಟ್ರೋಲ್ ವರ್ಗಾವಣೆಯಾಗುತ್ತಿತ್ತು. ಆಗ ಟ್ಯಾಂಕರ್‌ನಲ್ಲಿ ಸ್ಫೋಟ ಸಂಭವಿಸಿದೆ. ಅನಿಲವನ್ನು ವರ್ಗಾಯಿಸುವ ಜನರನ್ನು ಜೀವಂತವಾಗಿ ಸುಟ್ಟು ಹೋಗಿದ್ದಾರೆ.

ನೈಜರ್‌ನ ಗವರ್ನರ್ ಮೊಹಮದ್ ಬಾಗೊ ಹೇಳಿಕೆಯಲ್ಲಿ ರಾಜ್ಯದ ಡಿಕ್ಕೊ ಪ್ರದೇಶದ ಹಲವಾರು ನಿವಾಸಿಗಳು ಗ್ಯಾಸೋಲಿನ್ ಟ್ಯಾಂಕರ್ನಿಂದ ಭಾರಿ ಸ್ಫೋಟದಿಂದ ಗಾಯಗೊಂಡಿದ್ದಾರೆ , ಬಾಗೋ ಅನೇಕರು ಸುಟ್ಟು ಕರಕಲಾದರು. ಟ್ಯಾಂಕರ್ ನಿಂದ ದೂರ ಇದ್ದವರು ಎಂದು ತಿಳಿಸಿದರು. ಅವರು ಗಾಯದಿಂದ ಪಾರಾಗಿದ್ದಾರೆ. ಇದೊಂದು ದುರದೃಷ್ಟಕರ ಘಟನೆ ಎಂದರು.

ಜನರು ಹತ್ತಿರ ಹೋಗದಂತೆ ತಡೆಯಲಾಗುತ್ತಿದೆ. ಇದರ ಹೊರತಾಗಿಯೂ ಇಂಧನ ಖರೀದಿಸಲು ಜನಸಾಗರವೇ ನೆರೆದಿತ್ತು. ಅಗ್ನಿಶಾಮಕ ದಳ ಬೆಂಕಿಯನ್ನು ನಿಯಂತ್ರಿಸುವಲ್ಲಿ ಯಶಸ್ವಿಯಾಗಿದೆ ಎಂದು ಸುಕ್ವಾಮ್ ತಿಳಿಸಿದ್ದಾರೆ. ಸೆಪ್ಟೆಂಬರ್‌ನಲ್ಲಿ ನೈಜೀರ್‌ನ ಜನನಿಬಿಡ ಹೆದ್ದಾರಿಯಲ್ಲಿ ಪೆಟ್ರೋಲ್ ತುಂಬಿದ ಟ್ಯಾಂಕರ್ ಸ್ಫೋಟಗೊಂಡಿತ್ತು. ಇದರಲ್ಲಿ ಕನಿಷ್ಠ 48 ಜನರು ಸಾವನ್ನಪ್ಪಿದ್ದಾರೆ. ಅನೇಕ ನೈಜೀರಿಯನ್ನರು ಈ ಘಟನೆಗಳಿಗೆ ನಡೆಯುತ್ತಿರುವ ಆರ್ಥಿಕ ಸಂಕಷ್ಟವನ್ನು ದೂಷಿಸುತ್ತಿದ್ದಾರೆ. ಇಂತಹ ಅನಾಹುತಗಳನ್ನು ತಡೆಯಲು ಕಟ್ಟುನಿಟ್ಟಿನ ಸಂಚಾರ ನಿಯಮಗಳನ್ನು ಪಾಲಿಸುವಂತೆ ಆಗ್ರಹಿಸುತ್ತಿದ್ದಾರೆ. ಆಫ್ರಿಕಾದ ಅತಿದೊಡ್ಡ ತೈಲ ಉತ್ಪಾದಿಸುವ ದೇಶದಲ್ಲಿ ಇಂತಹ ಅಪಘಾತಗಳು ಸಾಮಾನ್ಯವಾಗಿವೆ. ಇದರಿಂದಾಗಿ ದೇಶದಲ್ಲಿ ಹತ್ತಾರು ಜನರು ಸಾಯುತ್ತಿದ್ದಾರೆ.



## ಸ್ಪಷ್ಟ ಜನಾದೇಶದೊಂದಿಗೆ ದೆಹಲಿ ಗದ್ದುಗೆ ಏರಲಿದೆ ಬಿಜೆಪಿ: ಸಮೀಕ್ಷೆ

**ನವದೆಹಲಿ:** ಭಾರೀ ಹಣಾಹಣಿಯಿಂದ ಕೂಡಿರುವ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಎಎಪಿಯು ಬಿಜೆಪಿಯ ತೀವ್ರ ಪ್ರತಿಸ್ಪರ್ಧಿಯ ನಡುವೆಯೂ ಮೂರನೇ ಬಾರಿಗೆ ಸ್ಪಷ್ಟ ಜನಾದೇಶ ಪಡೆದು ಅಧಿಕಾರ ಹಿಡಿಯಲಿದೆ ಎಂದು ಸಮೀಕ್ಷೆಯೊಂದು ಹೇಳಿದೆ.

ಆದರೆ ಈ ಹಿಂದೆ 2015 ಮತ್ತು 2020ರಲ್ಲಿ ಐತಿಹಾಸಿಕ ಗೆಲುವು ಸಾಧಿಸಿದ್ದ ಆಮ್ ಆದಿ ಈ ಬಾರಿ ಸ್ಥಾನ ಗಳಿಕೆಯಲ್ಲಿ ಗಣನೀಯ ಪ್ರಮಾಣ ಕುಸಿತ ಕಾಣಲಿದೆ.

ಜನತ್ ಎಂಬ ಖಾಸಗಿ ಸಂಸ್ಥೆ ನಡೆಸಿರುವ ಸಮೀಕ್ಷೆಯಲ್ಲಿ ಆಮ್ ಆದಿ ಈ ಬಾರಿ ಒಟ್ಟು 70 ವಿಧಾನಸಭಾ ಕ್ಷೇತ್ರಗಳ ಪೈಕಿ, 39ರಿಂದ 41 ಸ್ಥಾನ ಪಡೆಯಬಹುದು. ಬಿಜೆಪಿ 29ರಿಂದ 31, ಕಾಂಗ್ರೆಸ್ ಹೆಚ್ಚೆಂದರೆ 1ರಿಂದ 2 ಸ್ಥಾನಗಳನ್ನು ಮಾತ್ರ ಗೆಲ್ಲಬಹುದು ಎಂದು ಅಂದಾಜಿಸಿದೆ.

ಸರ್ಕಾರ ರಚನೆಗೆ 36 ಸ್ಥಾನಗಳು ಬೇಕಾಗಿದ್ದು, ಆಡಳಿತ ವಿರೋಧಿ ಅಲೆಯಲ್ಲೂ ಸರಳ ಬಹುಮತದ ಮೂಲಕ ಅಧಿಕಾರಕ್ಕೆ ಬರುವ ಸಾಧ್ಯತೆಯೇ ಹೆಚ್ಚಾಗಿದೆ ಎಂದು ಸಮೀಕ್ಷೆ ನುಡಿದಿದೆ.

2024ರ ಲೋಕಸಭೆ ಚುನಾವಣೆಯಲ್ಲಿ ಎಎಪಿ, ಕಾಂಗ್ರೆಸ್ ಇಂಡಿಯಾ ಮೈತ್ರಿಕೂಟದಲ್ಲಿ ಮಿತ್ರಪಕ್ಷಗಳು. ಆದರೆ ದೆಹಲಿ ವಿಧಾನಸಭೆ ಚುನಾವಣೆ ಯನ್ನು ಎರಡೂ ಪಕ್ಷಗಳು ಏಕಾಂಗಿಯಾಗಿ ಎದುರಿಸುತ್ತಿವೆ.

ಕಾಂಗ್ರೆಸ್, ಬಿಜೆಪಿಯ ಪ್ರಕಾರ ದೆಹಲಿಯಲ್ಲಿ ಎಎಪಿ ವಿರುದ್ಧ ಆಡಳಿತ ವಿರೋಧಿ ಅಲೆ ಇದೆ. ಭ್ರಷ್ಟಾಚಾರ ಆರೋಪ, ಅರವಿಂದ ಕೇಜ್ರಿವಾಲ್ ಜೈಲುವಾಸ, ಮುಖ್ಯಮಂತ್ರಿಗಳ ಬದಲಾವಣೆ ಬಳಿಕ ಎಎಪಿ ವಿರುದ್ಧ ಜನಾಕ್ರೋಶವಿದೆ. ಇದನ್ನು ಬಳಸಿಕೊಂಡು ಅಧಿಕಾರ ಹಿಡಿಯಬೇಕು ಎಂದು ಎರಡೂ ಪಕ್ಷಗಳು ತಂತ್ರ ರೂಪಿಸಿವೆ.

ಫೆಬ್ರವರಿ 5ರಂದು ನಡೆಯುವ ದೆಹಲಿ ವಿಧಾನಸಭೆ ಚುನಾವಣೆಗೆ 70 ಕ್ಷೇತ್ರಗಳಿಗೆ 981 ಅಭ್ಯರ್ಥಿಗಳು 1,521 ನಾಮಪತ್ರಗಳನ್ನು ಸಲ್ಲಿಸಿದ್ದಾರೆ.

ನಿನ್ನೆ ನಾಮಪತ್ರಗಳ ಪರಿಶೀಲನೆ ನಡೆದಿದೆ. ನಾಮಪತ್ರಗಳನ್ನು ವಾಪಸ್ ಪಡೆಯಲು ಜನವರಿ 20ರ ಸೋಮವಾರ ಕೊನೆಯ ದಿನವಾಗಿದೆ.



**2020ರ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಎಎಪಿ 62 ಸೀಟುಗಳಲ್ಲಿ ಗೆಲ್ಲುವ ಮೂಲಕ ರಾಜ್ಯದಲ್ಲಿ 2ನೇ ಬಾರಿಗೆ ಸರ್ಕಾರ ರಚನೆ ಮಾಡಿತ್ತು. ಬಿಜೆಪಿ 8 ಸೀಟುಗಳಲ್ಲಿ ಜಯಗಳಿಸಿತ್ತು. ಕಾಂಗ್ರೆಸ್ ಒಂದು ಸ್ಥಾನ ಗೆಲ್ಲಲು ಸಹ ವಿಫಲವಾಗಿತ್ತು. ಆದರೆ ಈ ಬಾರಿ ಕಾಂಗ್ರೆಸ್ 1–2 ಸೀಟು ಗೆಲ್ಲಬಹುದು ಎಂದು ಅಂದಾಜಿಸಲಾಗಿದೆ.**

## ಒಲಿಂಪಿಕ್ಸ್ ವಿಜೇತೆ ಮನುಭಾಕರ್ ಅವರ ಅಜ್ಜಿ, ಮಾವ ದುರ್ಮರಣ

**ಹರಿಯಾಣ:** ಸ್ಕೂಟರ್ ಹಾಗೂ ಕಾರಿನ ನಡುವೆ ಉಂಟಾದ ಭೀಕರ ಅಪಘಾತದಲ್ಲಿ ಒಲಿಂಪಿಕ್ಸ್ ಪದಕ ವಿಜೇತೆ ಮನುಭಾಕರ್ ಅವರ ಅಜ್ಜಿ ಹಾಗೂ ಮಾವ ಸಾವನ್ನಪ್ಪಿದ್ದಾರೆ. ಬೆಳಗ್ಗೆ 9 ಗಂಟೆ ಸುಮಾರಿನಲ್ಲಿ ಹರಿಯಾಣದ ಮಹೇಂದ್ರಘಾರ್ ಬೈಪಾಸ್ ನಲ್ಲಿ ಮನುಭಾಕರ್ ಅವರ ಅಜ್ಜಿ ಸಾವಿತ್ರಿ ದೇವಿ ಹಾಗೂ ಮಾವ ಯದುವೀರ್ ಸಿಂಗ್ ಸ್ಕೂಟರ್‌ನಲ್ಲಿ ತೆರಳುತ್ತಿದ್ದಾಗ ಬ್ರೇಜಾ ಕಾರೊಂದು ವೇಗವಾಗಿ ಬಂದು ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಸ್ಥಳೀಯ ಪೊಲೀಸರು ಮನುಭಾಕರ್ ಅವರ ಅಜ್ಜಿ ಹಾಗೂ ಮಾವನ ಮೃತ ದೇಹಗಳನ್ನು ಸರ್ಕಾರಿ ಆಸ್ಪತ್ರೆಗೆ ಸಾಗಿಸಿ ಮರಣೋತ್ತರ ಪರೀಕ್ಷೆಯ ನಂತರ ದೇಹಗಳನ್ನು ಅವರ ಕುಟುಂಬದವರಿಗೆ ಒಪ್ಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಎಎಸ್‌ಐ, ಕಾರು ಹಾಗೂ ಸ್ಕೂಟರ್ ನಡುವೆ ಅಪಘಾತ ಉಂಟಾಗಿದೆ ಎಂಬ ವಿಷಯ ತಿಳಿದು ನಾವು ಸ್ಥಳಕ್ಕೆ ಭೇಟಿ ನೀಡಿದ್ದಾಗ, ಸ್ಕೂಟರ್ ನಲ್ಲಿ ಪ್ರಯಾಣಿಸುತ್ತಿದ್ದ ಇಬ್ಬರು ಸಾವನ್ನಪ್ಪಿದ್ದರು. ಅಪಘಾತ ನಂತರ ಕಾರಿನ ಚಾಲಕ ಪರಾರಿಯಾಗಿದ್ದು ಆತನ ಪತ್ತೆಗೆ ಕ್ರಮಕ್ಕೆಗೊಂಡಿದ್ದೇವೆ' ಎಂದು ಹೇಳಿದ್ದಾರೆ. ಪ್ಯಾರಿಸ್ ಒಲಿಂಪಿಕ್ಸ್ ನಲ್ಲಿ ಎರಡು ಪದಕಗಳನ್ನು ಗೆದ್ದು ದೇಶದ ಕೀರ್ತಿಯನ್ನು ಹೆಚ್ಚಿಸಿದ್ದ ಮನುಭಾಕರ್ ಅವರು ಕಳೆದೆರಡು ದಿನಗಳ ಹಿಂದೆಷ್ಟೇ ರಾಷ್ಟ್ರಪತಿ ಭವನದಲ್ಲಿ ನಡೆದಿದ್ದ ಸಮಾರಂಭದಲ್ಲಿ ಖೇಲ್ ರತ್ನ ಪ್ರಶಸ್ತಿ ಪಡೆದಿದ್ದರು.



# 30 ಲಕ್ಷ ಬೀದಿ ನಾಯಿಗಳ ಹತ್ಯೆಗೆ ನಿರ್ಧರಿಸಿದ ಮೊರಾಕ್ಕೊ

## 2030ರ ಫಿಫಾ ವಿಶ್ವಕಪ್ ಆತಿಥ್ಯ ವಹಿಸಿದ ಹಿನ್ನೆಲೆ ದೇಶದ ಪ್ರವಾಸೋದ್ಯಮದ ಆಕರ್ಷಣೆ ಹೆಚ್ಚಿಸಲು ಬೀದಿ ನಾಯಿಗಳ ಸಾಮೂಹಿಕ ಹತ್ಯೆ

**ಸ್ಪೇನ್:** ಪೋರ್ಚುಗಲ್ ಮತ್ತು ಮೊರಾಕೊ 2030ರ ಫಿಫಾ ವಿಶ್ವಕಪ್ ಆತಿಥ್ಯ ವಹಿಸಲಿದೆ. ವಿಶ್ವಕಪ್ ಆಯೋಜನೆ ಸಾರಥ್ಯ ವಹಿಸಿಕೊಂಡಿರುವ ಹಿನ್ನೆಲೆ ಮೊರಾಕ್ಕೊ ಈಗಿನಿಂದಲೇ ಸಿದ್ಧತೆ ಆರಂಭಿಸಿದೆ. ಟೂರ್ನಿ ನಡೆಯುವ ಸಂದರ್ಭದಲ್ಲಿ ದೇಶದ ಪ್ರವಾಸೋದ್ಯಮದ ಆಕರ್ಷಣೆಯನ್ನು ಹೆಚ್ಚಿಸಲು ಮುಂದಾಗಿದೆ. ಈ ಪ್ರಯತ್ನದ ಭಾಗವಾಗಿ ಬರೋಬ್ಬರಿ 30 ಲಕ್ಷ ಬೀದಿ ನಾಯಿಗಳನ್ನು ಕೊಲ್ಲಲು ನಿರ್ಧರಿಸಿದೆ. ಈ ನಡೆ ಜಾಗತಿಕ ಮಟ್ಟದಲ್ಲಿ ಪ್ರಾಣಿ ಪ್ರಿಯರ ಆಕ್ರೋಶಕ್ಕೆ ಕಾರಣವಾಗಿದೆ. ಈಗಾಗಲೇ ಸಾವಿರಾರು ಬೀದಿ ನಾಯಿಗಳನ್ನು ಹತ್ಯೆ ಮಾಡಲಾಗಿದೆ ಎಂದು ವರದಿಯಾಗಿದೆ.

**ಮೊರಾಕ್ಕೊ:** ಸ್ಪೇನ್, ಪೋರ್ಚುಗಲ್ ಮತ್ತು ಮೊರಾಕೊ 2030ರ ಫಿಫಾ ವಿಶ್ವಕಪ್ ಆತಿಥ್ಯ ವಹಿಸಲಿದೆ. ವಿಶ್ವಕಪ್ ಆಯೋಜನೆ ಸಾರಥ್ಯ ವಹಿಸಿಕೊಂಡಿರುವ ಹಿನ್ನೆಲೆ ಮೊರಾಕ್ಕೊ ಈಗಿನಿಂದಲೇ ಸಿದ್ಧತೆ ಆರಂಭಿಸಿದೆ. ಟೂರ್ನಿ ನಡೆಯುವ ಸಂದರ್ಭದಲ್ಲಿ ದೇಶದ ಪ್ರವಾಸೋದ್ಯಮದ ಆಕರ್ಷಣೆಯನ್ನು ಹೆಚ್ಚಿಸಲು ಮುಂದಾಗಿದೆ. ಈ ಪ್ರಯತ್ನದ ಭಾಗವಾಗಿ ಬರೋಬ್ಬರಿ 30 ಲಕ್ಷ ಬೀದಿ ನಾಯಿಗಳನ್ನು ಕೊಲ್ಲಲು ನಿರ್ಧರಿಸಿದೆ. ಈ ನಡೆ ಜಾಗತಿಕ ಮಟ್ಟದಲ್ಲಿ ಪ್ರಾಣಿ ಪ್ರಿಯರ ಆಕ್ರೋಶಕ್ಕೆ ಕಾರಣವಾಗಿದೆ. ಈಗಾಗಲೇ ಸಾವಿರಾರು ಬೀದಿ ನಾಯಿಗಳನ್ನು ಹತ್ಯೆ ಮಾಡಲಾಗಿದೆ ಎಂದು ವರದಿಯಾಗಿದೆ.

ಫಿಫಾ ವಿಶ್ವಕಪ್ ಟೂರ್ನಿ ಹಿನ್ನೆಲೆ 30 ಲಕ್ಷ ನಾಯಿಗಳನ್ನು ಸಾಯಿಸುವ ಸಂಭಾವ್ಯತೆಯ ಬಗ್ಗೆ ಅಂತಾರಾಷ್ಟ್ರೀಯ ಪ್ರಾಣಿ ಕಲ್ಯಾಣ ಮತ್ತು ಸಂರಕ್ಷಣಾ ಒಕ್ಕೂಟ ಎಚ್ಚರಿಕೆ ನೀಡಿದ್ದು, 'ಮೊರಾಕೊದ ಅಗ್ಲಿ ಸೀಕ್ರೆಟ್' ಎಂಬ ಅಭಿಯಾನವನ್ನು ಆರಂಭಿಸಿದೆ. ಆಗಸ್ಟ್ 2024ರಲ್ಲಿ ಬೀದಿ ನಾಯಿಗಳ ಸಾಮೂಹಿಕ ಹತ್ಯೆಗಳನ್ನು ನಿಲ್ಲಿಸಲಾಗಿದೆ ಎಂದು ಫಿಫಾಗೆ ಮೊರಾಕೊ ತಿಳಿಸಿದೆ. ಆದರೆ ಹತ್ಯೆ ಪ್ರಕ್ರಿಯೆ ಮುಂದು ವರಿದಿದೆ. ನಾಯಿಗಳಿಗೆ ಸ್ಟ್ರೈಕ್ನೈನ್ ವಿಷ ನೀಡಿ ಕೊಲ್ಲಲಾಗುತ್ತಿದೆ ಎಂದು ಆರೋಪಿಸಿದೆ. ಪ್ರಮುಖ ನಗರದಲ್ಲಿ ಗುಂಡು ಹಾರಿಸಿ ಈಗಾಗಲೇ ಹಲವು ಸಂಖ್ಯೆಯ ಬೀದಿ ನಾಯಿಗಳನ್ನು ಸಾಯಿಸಲಾಗಿದೆ. ಇನ್ನು ಕೆಲವು ನಾಯಿಗಳನ್ನು ಸೆರೆ ಹಿಡಿದು, ಟ್ರಕ್‌ಗಳಿಗೆ ತುಂಬಿಸಲಾಗುತ್ತಿದೆ. ಬಳಿಕ ನಿರ್ಜನ ಪ್ರದೇಶಕ್ಕೆ ಕೊಂಡು ಹೋಗಿ ಅಮಾನವೀಯವಾಗಿ ಕೊಲ್ಲಲಾಗುತ್ತಿದೆ ಎಂದು ಐಡಬ್ಲ್ಯುಪಿಸಿ ಹೇಳಿಕೊಂಡಿದೆ.

ಫಿಫಾಗೆ ಪತ್ರ ಬರೆದ ಡಾ.ಜೇನ್ ಗುಡಾಲ್

ಮೊರಾಕೊ ದೇಶದಲ್ಲಿ ನಡೆಯುತ್ತಿರುವ ಬೀದಿ ನಾಯಿಗಳ ಮಾರಣಹೋಮದ ಬಗ್ಗೆ ಪ್ರಾಣಿ ಸಂರಕ್ಷಣಾಕಾರ ಡಾ.ಜೇನ್ ಗುಡಾಲ್ ಆಕ್ರೋಶ ಹೊರಹಾಕಿದ್ದಾರೆ. ಅಂತಾರಾಷ್ಟ್ರೀಯ ಪ್ರಾಣಿಗಳ ಒಕ್ಕೂಟದ ವರದಿಗಳು ಮತ್ತು ಸಾಕ್ಷಿಗಳನ್ನು ನೀಡಿದರೂ, ಫಿಫಾ ಮೌನವಾಗಿರುವುದರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಫಿಫಾಗೆ ಪತ್ರ ಬರೆದು, ತಕ್ಷಣ ಮಧ್ಯಸ್ಥಿಕೆ ವಹಿಸುವಂತೆ ಒತ್ತಾಯಿಸಿದ್ದಾರೆ.

ಈ ಭಯಾನಕ ಕೃತ್ಯಗಳನ್ನು ದಾಖಲಿಸುವ ವಿವರವಾದ ದಸ್ತಾವೇಜುಗಳನ್ನು ನಿಮಗೆ ಪ್ರಸ್ತುತ ಪಡಿಸಲಾಗಿದೆ ಎಂದು ಇಂಟರ್ನ್ಯಾಷನಲ್ ಅನಿಮಲ್ ಸಮ್ಮಿಶ್ರದಿಂದ ತಿಳಿದುಕೊಳ್ಳಲು ನಾನು ಸಮಾನವಾಗಿ ದಿಗ್ಭ್ರಮೆ ಗೊಂಡಿದ್ದೇನೆ, ಅವುಗಳಲ್ಲಿ ಹೆಚ್ಚಿನವು ಊಹಿಸಬಹುದಾದ ಅತ್ಯಂತ ಕ್ರೂರ ಮತ್ತು ಕ್ರೂರ ಶೈಲಿಯಲ್ಲಿ ನಡೆಸಲ್ಪಟ್ಟಿವೆ ಮತ್ತು ಇನ್ನೂ ಅವುಗಳನ್ನು ನಿರ್ಲಕ್ಷಿಸಿದಂತೆ ತೋರುತ್ತಿದೆ. ಅವಳು ಬರೆದಳು 'ಫಿಫಾ ವಿಶ್ವಕಪ್ ನಡೆಯಲು ಇನ್ನೂ ಐದು ವರ್ಷಗಳು ಬಾಕಿ ಇದೆ.

ಹೀಗಿರುವಾಗಿ ಮುಂಚಿತವಾಗಿ 30 ಬೀದಿ ನಾಯಿಗಳನ್ನು ಕೊಲ್ಲಲು ಮೊರಾಕೊ ಯೋಜಿಸಿರುವುದು ಆತಂಕಕಾರಿ ಬೆಳವಣಿಗೆ.

ವ್ಯಾಕ್ಸಿನೇಷನ್, ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ ಮೂಲಕ ಬೀದಿ ನಾಯಿಗಳ ಸಂಖ್ಯೆಯನ್ನು ಕಡಿಮೆ ಮಾಡಲು ಸಾಧ್ಯವಿದೆ.



### ಭಯಾನಕ ದೃಶ್ಯಗಳು ಎಲ್ಲೆಡೆ ವೈರಲ್

**ಬೀದಿ ನಾಯಿಗಳು ನರಳಾಡುತ್ತಿರುವುದು, ರಕ್ತದ ಮಡುವಿನಲ್ಲಿ ಬಿದ್ದಿರುವುದು, ನಾಯಿಗಳನ್ನು ಬಲೆಯೊಳಗೆ ಹಾಕಿ ಟ್ರಕ್‌ಗೆ ಎಸೆಯುತ್ತಿರುವುದು, ನೋವಿನಿಂದ ಕಿರುಚಾಡುತ್ತಿರುವುದು ಇತ್ಯಾದಿ ಚಿತ್ರಣಗಳು ಸದ್ಯ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಇದರ ವಿರುದ್ಧ ಸಾಕಷ್ಟು ಆಕ್ರೋಶ ವ್ಯಕ್ತವಾಗಿದೆ.**



- **ಫಿಫಾ ವಿಶ್ವಕಪ್ಗೂ ಮುನ್ನ 30 ಲಕ್ಷ ಬೀದಿ ನಾಯಿಗಳ ಹತ್ಯೆಗೆ ನಿರ್ಧರಿಸಿದ ಮೊರಾಕೊ**
- **2030ರ ಫಿಫಾ ವಿಶ್ವಕಪ್ ಆತಿಥ್ಯ ವಹಿಸಿದ ಹಿನ್ನೆಲೆ ದೇಶದ ಪ್ರವಾಸೋದ್ಯಮದ ಆಕರ್ಷಣೆ ಹೆಚ್ಚಿಸಲು ಬೀದಿ ನಾಯಿಗಳ ಸಾಮೂಹಿಕ ಹತ್ಯೆ**
- **ಮೊರಾಕ್ಕೊ ದೇಶದ ನಡೆಗೆ ಜಾಗತಿಕ ಮಟ್ಟದಲ್ಲಿ ಪ್ರಾಣಿ ಪ್ರಿಯರ ಆಕ್ರೋಶ**

## ಮಿನಿ ನ್ಯೂಸ್

### ಸುಪ್ರೀಂಕೋರ್ಟ್‌ನಲ್ಲಿ ಗುಂಡಿನ ಮೊರೆತ ನ್ಯಾಯಾಧೀಶರಿಬ್ಬರ ಸಾವು

**ಟೆಹ್ರಾನ್:** ಸುಪ್ರೀಂಕೋರ್ಟ್‌ನಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಇಬ್ಬರು ನ್ಯಾಯಾಧೀಶರು ಸಾವನ್ನಪ್ಪಿ, ಓರ್ವರು ಗಾಯಗೊಂಡಿರುವ ಘಟನೆ ಇರಾನ್ ಸುಪ್ರೀಂಕೋರ್ಟ್‌ನಲ್ಲಿ ನಡೆದಿದ್ದು ನ್ಯಾಯಾಧೀಶರು ಮತ್ತು ವಕೀಲ ಸಮುಯದಾಯವನ್ನು ಬೆಚ್ಚಿ ಬೀಳಿಸಿದೆ.

''ರಾಷ್ಟ್ರೀಯ ಭದ್ರತೆ, ಬೇಹುಗಾರಿಕೆ ಮತ್ತು ಭಯೋತ್ಪಾದನೆಯ ವಿರುದ್ಧದ ಅಪರಾಧಗಳ ವಿರುದ್ಧ ಹೋರಾಡುವ'' ಪ್ರಕರಣಗಳನ್ನು ನಿರ್ವಹಿಸುತ್ತಿದ್ದ ಅಲಿ ರಜಿನಿ ಮತ್ತು ಮೊಹಮ್ಮದ್ ಮೊಘಿಸೆಹ್ ಹತ್ಯೆ ಮಾಡಲಾಗಿದೆ. ಈ ಹತ್ಯೆಯ ಹಿಂದೆ ಭಯೋತ್ಪಾದಕ ಸಂಘಟನೆಗಳ ಕೈವಾಡವಿದೆ ಎನ್ನಲಾಗಿದೆ. ಇಬ್ಬರು ಅನುಭವಿ ನ್ಯಾಯಾಧೀಶರ ಹತ್ಯೆಯನ್ನು ಯೋಜಿತ ರೀತಿ ಮಾಡಿದ್ದಾರೆ. ಬಂದೂಕುಧಾರಿಯೊಬ್ಬ ಸುಪ್ರೀಂ ಕೋರ್ಟ್‌ಗೆ ನುಸುಳಿ ಇಬ್ಬರು ನ್ಯಾಯಾಧೀಶರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಇದರಿಂದ ಸ್ಥಳದಲ್ಲಿಯೇ ನ್ಯಾಯಾಧೀಶರು ಸಾವನ್ನಪ್ಪಿದ್ದಾರೆ ಎಂದು ಹೇಳಲಾಗಿದೆ.

ನ್ಯಾಯಾಧೀಶರ ಹತ್ಯೆಯ ಹಿಂದೆ ದಾಳಿಕೋರ ''ಭಯೋತ್ಪಾದಕ'' ಸಂಘಟನೆಯ ಸದಸ್ಯ ಇರಬಹುದು ಎಂದು ಪೊಲೀಸರು ಶಂಕಿಸಿದ್ದು ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ

ನ್ಯಾಯಾಂಗ ವಕ್ತಾರ ಅಸ್ಗರ್ ಜಹಾಂಗೀರ್ ರಾಜ್ಯ ದೂರದರ್ಶನಕ್ಕೆ ನೀಡಿದ ಪ್ರತಿಕ್ರಿಯೆಯಲ್ಲಿ ಬಂದೂಕಿ ಹೊಂದಿದ್ದ ಶಸ್ತ್ರಸಜ್ಜಿತ ವ್ಯಕ್ತಿಯೊಬ್ಬರು ಇಬ್ಬರು ನ್ಯಾಯಾಧೀಶರ ಕೋಣೆಗೆ ಪ್ರವೇಶಿಸಿ'' ಅವರ ಮೇಲೆ ಗುಂಡು ಹಾರಿಸಿದ್ದಾರೆ ''ಘಟನೆಗೆ ಸಂಬಂಧಿಸಿದಂತೆ ವ್ಯಕ್ತಿಗಳನ್ನು ಗುರುತಿಸಲಾಗಿದ್ದು ಶೀಘ್ರದಲ್ಲಿ ಬಂಧಿಸುವ ಕೆಲಸ ನಡೆದಿದೆ ಎಂದು ಹೇಳಿದ್ದಾರೆ.

### ಚೀನಾ ಆರ್ಥಿಕತೆ ಚೇತರಿಕೆ

**ಬೀಜಿಂಗ್:** ಕಳೆದ ವರ್ಷದ ಕೊನೆಯ ಮೂರು ತಿಂಗಳಲ್ಲಿ ಚೀನಾದ ಆರ್ಥಿಕತೆಯು ಚೇತರಿಸಿಕೊಂಡಿದ್ದು, ಸರ್ಕಾರ 2024 ರಲ್ಲಿ ಬೆಳವಣಿಗೆಯ ಗುರಿಯನ್ನು ಶೇಕಡಾ 5ಕ್ಕೆ ತಲುಪಲು ಅವಕಾಶ ಮಾಡಿಕೊಟ್ಟಿದೆ ಎಂದು ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಹೇಳಿದ್ದಾರೆ.

ವಿಶ್ವದ ಎರಡನೇ ಅತಿದೊಡ್ಡ ಆರ್ಥಿಕತೆ ಹೊಂದಿರುವ ಚೀನಾದಲ್ಲಿ ದೀರ್ಘಕಾಲದ ಆಸ್ತಿ ಬಿಕ್ಕಟ್ಟು, ಹೆಚ್ಚಿನ ಸ್ಥಳೀಯ ಸರ್ಕಾರಿ ಸಾಲ ಮತ್ತು ಯುವ ನಿರುದ್ಯೋಗ ನಿವಾರಿಸಲು ಹೆಣಗಾಡುತ್ತಿರುವಾಗ ಇದು ದಶಕಗಳಲ್ಲಿಯೇ ನಿಧಾನಗತಿಯ ಬೆಳವಣಿಗೆಯ ದರಗಳಲ್ಲಿ ಒಂದಾಗಿದೆ. ಕಳೆದ ವರ್ಷದ ಕೊನೆಯಲ್ಲಿ ಸರ್ಕಾರ ಹಲವಾರು ಉತ್ತೇಜಕ ಕ್ರಮ ಕೈಗೊಂಡ ಹಿನ್ನೆಲೆಯಲ್ಲಿ ಬೆಳವಣಿಗೆಯ ದರ ಶೇಕಡ 5ಕ್ಕೆ ಬಂದಿದೆ ಎಂದು ತಿಳಿಸಿದ್ದಾರೆ.

2024ರಲ್ಲಿ ಚೀನಾದ ಆರ್ಥಿಕ ಸಾಧನೆಗಳು ಕಠಿಣವಾಗಿ ಗೆದ್ದಿದ್ದೇವೆ. ಬೆಳವಣಿಗೆಯ ದರ ಮತ್ತಷ್ಟು ಹೆಚ್ಚಳವಾಗುವ ನಿರೀಕ್ಷೆ ಇತ್ತು. ಕಡಿಮೆ ಸಾಲ ವೆಚ್ಚಗಳು ಮತ್ತು ಹೆಚ್ಚುತ್ತಿರುವ ರಫ್ತುಗಳು ಚೀನಾ ವಾರ್ಷಿಕ ಬೆಳವಣಿಗೆ ದರ 4.9 ರಷ್ಟು ಇದೆ ಎಂದು ತಿಳಿಸಿದ್ದಾರೆ

ಈ ನಡುವೆ ವಿಶ್ವಬ್ಯಾಂಕ್ ಪ್ರತಿಕ್ರಿಯೆ ನೀಡಿ ಚೀನಾ ಮತ್ತಷ್ಟು ಬೆಳವಣಿಗೆ ಸಾಧಿಸಬಹುದು ಎಂದು ಅಂದಾಜು ಮಾಡಿದ್ದು ಹೂಡಿಕೆದಾರರು ತಮ್ಮನ್ನು ತಾವು ಸಿದ್ಧಪಡಿಸಿಕೊಳ್ಳುತ್ತಿದ್ದಾರೆ.

### ಪ್ಯಾರಾಗ್ಲೈಡಿಂಗ್ ವೇಳೆ ಅಪಘಾತ: ಪ್ರವಾಸಿ ಮಹಿಳೆ ಮತ್ತು ತರಬೇತುದಾರ ಸಾವು

**ಪಣಜಿ:** ಉತ್ತರ ಗೋವಾದಲ್ಲಿ ಪ್ಯಾರಾಗ್ಲೈಡಿಂಗ್ ಮಾಡುತ್ತಿದ್ದಾಗ ಕಂದಕಕ್ಕೆ ಡಿಕ್ಕಿ ಹೊಡೆದು 27 ವರ್ಷದ ಪ್ರವಾಸಿ ಮಹಿಳೆ ಮತ್ತು ಆಕೆಯ ತರಬೇತುದಾರರು ಮೃತಪಟ್ಟ ಘಟನೆ ನಡೆದಿದೆ.

ನಿನ್ನೆ ಸಂಜೆ ಕೇರಿ ಗ್ರಾಮದಲ್ಲಿ ಈ ಅಪಘಾತ ಸಂಭವಿಸಿದೆ. ಪುಣೆ ನಿವಾಸಿ ಶಿವಾನಿ ಡೇಬಲ್ ಮತ್ತು ಆಕೆಯ ತರಬೇತುದಾರ ನೇಪಾಳ ಪ್ರಜೆ ಸುಮಲ್ ನೇಪಾಳಿ (26ವ) ಸಂಜೆ 5 ಗಂಟೆ ಸುಮಾರಿಗೆ ಕೇರಿ ಪ್ರಸ್ಥಭೂಮಿಯಲ್ಲಿ ಅಪಘಾತಕ್ಕೀಡಾಗಿ ಮೃತಪಟ್ಟಿದ್ದಾರೆ.

ಅಕ್ರಮವಾಗಿ ಕಾರ್ಯನಿರ್ವಹಿಸುತ್ತಿದ್ದ ಸಾಹಸ ಕ್ರೀಡಾ ಕಂಪನಿಯೊಂದಿಗೆ ಪ್ಯಾರಾಗ್ಲೈಡಿಂಗ್ ಮಾಡಲು ಡೇಬಲ್ ಹೋದಾಗ ಈ ದುರ್ಘಟನೆ ನಡೆದಿದೆ. ಪ್ಯಾರಾಗ್ಲೈಡರ್ ಬಂಡೆಯಿಂದ ಹಾರಿದ ಕೂಡಲೇ ಕಂದಕಕ್ಕೆ ಬಿದ್ದು, ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮಾನವ ಜೀವಕ್ಕೆ ಅಪಾಯವನ್ನುಂಟುಮಾಡಿದ್ದಕ್ಕಾಗಿ ಕಂಪನಿ ಮಾಲೀಕ ಶೇಖರ್ ರೈಜಾದಾ ವಿರುದ್ಧ ಭಾರತೀಯ ನ್ಯಾಯ ಸಂಹಿತ ಸಂಬಂಧಿತ ನಿಬಂಧನೆಗಳ ಅಡಿಯಲ್ಲಿ ಮಾಂಡ್ರೆಮ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

### ಚೆನ್ನೈ ಸೇರಿ ಸುತ್ತಮುತ್ತ ಜಿಲ್ಲೆಗಳಲ್ಲಿ ಭಾರೀ ಮಳೆ, ಹವಾಮಾನ ಇಲಾಖೆ ಎಚ್ಚರಿಕೆ

**ಚೆನ್ನೈ:** ಚೆನ್ನೈನಲ್ಲಿ ಭಾರೀ ಮಳೆಯಾಗಿದ್ದು, ಚೆನ್ನೈನ ಪ್ರಾದೇಶಿಕ ಹವಾಮಾನ ಕೇಂದ್ರ, ಮುನ್ಸೂಚನೆಯ ಪ್ರಕಾರ, ತಮಿಳುನಾಡಿನ ಕೆಲವು ಪ್ರದೇಶಗಳಲ್ಲಿ ಬೆಳಗ್ಗೆ 10 ಗಂಟೆಯವರೆಗೆ ಮಳೆ ಸುರಿದಿದೆ. ಬೆಳಗ್ಗೆ 7:30 ರ ಸುಮಾರಿಗೆ ಚೆನ್ನೈನಲ್ಲಿ 24 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಭಾರತದ ಹವಾಮಾನ ಇಲಾಖೆ ರಾಜ್ಯದ ಕೆಲವು ಭಾಗಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿದೆ. ಹವಾಮಾನ ಇಲಾಖೆ ಮುನ್ಸೂಚನೆಯ ಪ್ರಕಾರ, ಕನ್ಯಾಕುಮಾರಿ, ತಿರುನಲ್ವೇಲಿ, ತೂತುಕುಡಿ, ರಾಮನಾಥಪುರಂ ಮತ್ತು ತೆಂಕಸಿ ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ತಮಿಳುನಾಡಿನ ಪ್ರತ್ಯೇಕ ಪ್ರದೇಶಗಳಲ್ಲಿ ಸಾಮಾನ್ಯವಾಗಿ ಬೆಳಗಿನ ಸಮಯದಲ್ಲಿ ಮಂಜು/ಮಬ್ಬು ಹೆಚ್ಚಾಗುವ ಸಾಧ್ಯತೆಯಿದೆ.

ದಕ್ಷಿಣ ತಮಿಳುನಾಡಿನ ಹಲವೆಡೆ ಹಗುರದಿಂದ ಮಧ್ಯಮ ಪ್ರಮಾಣದಲ್ಲಿ ಮಳೆಯಾಗುವ ಮುನ್ಸೂಚನೆಯನ್ನು ಐಎಂಡಿ ನೀಡಿದೆ. ಉತ್ತರ ತಮಿಳುನಾಡಿನಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ, ಪುದುಚೇರಿ ಮತ್ತು ಕಾರೈಕಲ್ ಪ್ರದೇಶದ ಮೇಲೆ ಗುಡುಗು ಮತ್ತು ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ.

ಕನ್ಯಾಕುಮಾರಿ, ತಿರುನಲ್ವೇಲಿ, ತೂತುಕುಡಿ, ರಾಮನಾಥಪುರಂ ಮತ್ತು ತೆಂಕಾಸಿ ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಐಎಂಡಿ ತನ್ನ ಬುಲೆಟಿನ್‌ನಲ್ಲಿ ಯಲ್ಲೋ ಅಲರ್ಟ್ ಘೋಷಿಸಿದೆ. ಆರ್‌ಎಂಸಿ ಚೆನ್ನೈ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಗುರವಾದ ಗುಡುಗು ಸಹಿತ ಮಧ್ಯಮ ಮಳೆ ಎಂದು ಮುನ್ಸೂಚನೆ ನೀಡಿದೆ.

ಐಎಂಡಿ ಪ್ರಕಾರ, ತಮಿಳುನಾಡು ಕರಾವಳಿಯ ನೈಋತ್ಯ ಬಂಗಾಳಕೊಲ್ಲಿಯಲ್ಲಿ ಕೆಳಮಟ್ಟದಲ್ಲಿ ಪೂರ್ವ ದಿಕ್ಕಿನಲ್ಲಿ ವಾಯುಭಾರ ಕುಸಿತ ಉಂಟಾಗಿದೆ. ಇದರ ಪ್ರಭಾವದಿಂದಾಗಿ, ಕರಾವಳಿ ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನ ಕೆಲವು ಸ್ಥಳಗಳಲ್ಲಿ ಚದುರಿದ ಹಗುರದಿಂದ ಮಧ್ಯಮ ಮಳೆಯೊಂದಿಗೆ ಭಾರೀ ಮಳೆ, ಗುಡುಗು ಸಹಿತ ಮತ್ತು ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ.




# ಹೀನಾಯ ಸ್ಥಿತಿಯಲ್ಲಿದೆ ಎಮರ್ಜೆನ್ಸಿ

ಕಂಗನಾ ರಣಾವತ್ ನಿರ್ದೇಶನ ಮತ್ತು ನಿರ್ಮಾಣದ ಎಮರ್ಜೆನ್ಸಿ ಸಿನಿಮಾ ಜನವರಿ 17 ರಂದು ಬಿಡುಗಡೆಯಾಯಿತು. ಆದರೆ, 25 ಕೋಟಿ ರೂಪಾಯಿ ಬಜೆಟ್‌ನ ಈ ಚಿತ್ರ ನಿರೀಕ್ಷಿತ ಗಳಿಕೆ ಮಾಡಲು ವಿಫಲವಾಗಿದೆ. ಮೊದಲ ದಿನ 2.5 ಕೋಟಿ ಮತ್ತು ಎರಡನೇ ದಿನ 2.74 ಕೋಟಿ ಮಾತ್ರ ಗಳಿಕೆ ಮಾಡಿದೆ. 'ಎಮರ್ಜೆನ್ಸಿ' ಸಿನಿಮಾ ಜನವರಿ 17ರಂದು ರಿಲೀಸ್ ಆಯಿತು. ಈ ಚಿತ್ರದ ಬಗ್ಗೆ ಫ್ಯಾನ್ಸ್ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದರು. ಸಿನಿಮಾಗೆ ಅನೇಕರು ಮೆಚ್ಚುಗೆ ಸೂಚಿಸಿದ್ದಾರೆ. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಪಾತ್ರದಲ್ಲಿ ಕಂಗನಾ ನಟಿಸಿ ಅವರು ಭೇಷ್ ಎನಿಸಿಕೊಂಡಿದ್ದಾರೆ. ಆದರೆ, ಸಿನಿಮಾ ಗಳಿಕೆ ಮಾತ್ರ ಹೀನಾಯ ಸ್ಥಿತಿ ತಲುಪಿದೆ. ಇದರಿಂದ ಕಂಗನಾ ಅವರು ಸಾಕಷ್ಟು ಬೇಸರ ಮಾಡಿಕೊಂಡಿದ್ದಾರೆ. ಆ ಬಗ್ಗೆ ಇಲ್ಲಿದೆ ವಿವರ. 'ಎಮರ್ಜೆನ್ಸಿ' ಸಿನಿಮಾಗೆ ಕಂಗನಾ ರಣಾವತ್ ಅವರ ನಿರ್ದೇಶನ ಇದೆ. ಈ ಚಿತ್ರಕ್ಕೆ ಅವರು ನಿರ್ಮಾಪಕಿಯೂ ಹೌದು. ಜೀ ಸ್ಟುಡಿಯೋ ಜೊತೆ ಸೇರಿ ಅವರು ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಈ ಸಿನಿಮಾದ ಬಜೆಟ್ 25 ಕೋಟಿ ರೂಪಾಯಿ ಆಗಿದೆ. ಆದರೆ, ಸದ್ಯ ಸಿನಿಮಾದ ಗಳಿಕೆ ನೋಡಿದ ಅನೇಕರಿಗೆ ಶಾಕ್ ಆಗಿದೆ.



# ನಿರ್ದೇಶಕನ ಜೊತೆಗೆ ಪ್ರೀತಿಯಲ್ಲಿ ಬಿದ್ದ ಸಮಂತಾ

## ಆಡಿಯೋ ಸಂದೇಶದಿಂದ ಗುಟ್ಟು ರಟ್ಟು

ನಟಿ ಸಮಂತಾ ಋತ್ ಪ್ರಭು, ನಾಗ ಚೈತನ್ಯ ಇಂದ ವಿಚ್ಛೇದನ ಪಡೆದು ಮೂರು ವರ್ಷವಾಯ್ತು. ನಾಗ ಚೈತನ್ಯ ಈಗಾಗಲೇ ಮದುವೆ ಸಹ ಆಗಿಬಿಟ್ಟರು. ಆದರೆ ಸಮಂತಾ ಒಂಟಿಯಾಗಿದ್ದಾರೆ. ಆದರೆ ಇದೀಗ ಸಮಂತಾ, ನಿರ್ದೇಶಕನೊಬ್ಬನ ಜೊತೆ ಪ್ರೀತಿಯಲ್ಲಿದ್ದಾರೆ ಎನ್ನಲಾಗುತ್ತಿದೆ. ನಟಿ ಸಮಂತಾ, ನಾಗ ಚೈತನ್ಯ ಜೊತೆ ವಿಚ್ಛೇದನ ಪಡೆದು ಮೂರು ವರ್ಷಕ್ಕೂ ಹೆಚ್ಚು ಸಮಯವಾಗಿದೆ. ನಾಗ ಚೈತನ್ಯ ಈಗಾಗಲೇ ಎರಡನೇ ಮದುವೆಯನ್ನೂ ಆಗಿದ್ದಾರೆ. ಆದರೆ ನಟಿ ಸಮಂತಾ ಮಾತ್ರ ಸಿಂಗಲ್ ಆಗಿಯೇ ಉಳಿದಿದ್ದಾರೆ. ಆದರೆ ಸಮಂತಾ, ಖ್ಯಾತ ನಿರ್ದೇಶಕನೊಬ್ಬನೊಟ್ಟಿಗೆ ಪ್ರೀತಿಯಲ್ಲಿದ್ದಾರೆ ಎನ್ನಲಾಗುತ್ತಿದೆ. ಚಿತ್ರಕತೆ, ವೆಬ್ ಸರಣಿಗಳನ್ನು ನಿರ್ದೇಶನ ಮಾಡುತ್ತಿರುವ ನಿರ್ದೇಶಕನೊಟ್ಟಿಗೆ ಸಮಂತಾ ಪ್ರೀತಿಯಲ್ಲಿದ್ದಾರೆ ಎಂಬ ಸುದ್ದಿ ಈ ಹಿಂದೆಯೂ ಹರಿದಾಡಿತ್ತು. ಆದರೆ ಇದೀಗ ಆಡಿಯೋ ಸಂದೇಶವೊಂದರಿಂದ ಈ ಸುದ್ದಿ ಖಾತ್ರಿಯಾಗಿದೆ ಎನ್ನಲಾಗುತ್ತಿದೆ. ಸಮಂತಾ, ಇತ್ತೀಚೆಗೆ ಗಲಾಟಾ ಇಂಡಿಯಾ ಹೆಸರಿನ ತಮಿಳು ಯೂಟ್ಯೂಬ್ ಚಾನೆಲ್‌ಗೆ ಸಂದೇಶ ನೀಡುತ್ತಿದ್ದರಂತೆ. ಸಂದರ್ಶನದ ಮಧ್ಯೆ ಸಮಂತಾ ವಾಟ್ಸ್‌ಆಪ್‌ಗೆ ಸಂದೇಶವೊಂದು ಬಂತಂತೆ. ಅದೂ ಆಡಿಯೋ ಸಂದೇಶ. ಆ ಆಡಿಯೋ ಸಂದೇಶವನ್ನು, ಸಂದರ್ಶನದ ನಡುವೆಯೇ ಸಮಂತಾ ತೆರೆದು ಕೇಳಿಸಿಕೊಂಡಿದ್ದಾರೆ. ಆ ಬಳಿಕ ಅವರ ಮುಖ ಚಹರೆಯೇ ಬದಲಾಯ್ತಂತೆ. ಸಂದೇಶ ಕೇಳಿಸಿಕೊಂಡ ಬಳಿಕ ನಟಿ ನಾಚಿ ನೀರಾದರಂತೆ. ಆ ಬಳಿಕ ಇನ್ನಷ್ಟು ಉತ್ಸಾಹದಿಂದ ಸಂದರ್ಶನ ಮುಂದುವರೆಸಿದರಂತೆ. ಅಲ್ಲೇ ಇದ್ದವರ ಪ್ರಕಾರ ಆ ಸಂದೇಶ ಒಬ್ಬ ಯುವ ನಿರ್ದೇಶಕನದ್ದು. ಖ್ಯಾತ ವೆಬ್ ಸರಣಿ ನಿರ್ದೇಶಕ ಜೋಡಿಯಾದ ರಾಜ್ ಅಂಡ್ ಡಿಕೆ ಅವರಲ್ಲಿ ರಾಜ್ ಜೊತೆಗೆ ಸಮಂತಾ ಪ್ರೀತಿಗೆ ಬಿದ್ದಿದ್ದಾರೆ ಎಂಬ ಸುದ್ದಿ ಕಳೆದ ಕೆಲ ತಿಂಗಳುಗಳಿಂದಲೂ ಹರಿದಾಡುತ್ತಲೇ ಇದೆ. ಇದೀಗ ಸಮಂತಾ, ಗಲಾಟಾ ಇಂಡಿಯಾ ಸಂದರ್ಶನದ ಸಮಯದಲ್ಲಿ ರಾಜ್ ಅವರಿಂದಲೇ ಸಂದೇಶ ಸ್ವೀಕರಿಸಿದ್ದರು ಎಂಬ ಮಾತುಗಳು ಕೇಳಿ ಬರುತ್ತಿವೆ.

# ಸ್ಯಾಂಡಲ್‌ವುಡ್‌ನಲ್ಲಿ ಮದುವೆ ಸಂಭ್ರಮ, ನಡೆಯಲಿದೆ ಸಾಲು-ಸಾಲು ಶುಭ ಕಾರ್ಯ

2025 ರ ಆರಂಭದಲ್ಲಿ ಚಂದನವನದಲ್ಲಿ ಸಾಲು-ಸಾಲು ಶುಭ ಕಾರ್ಯಗಳು ನಡೆಯುತ್ತಿವೆ. ಹಲವು ಸೆಲೆಬ್ರಿಟಿಗಳು ಒಬ್ಬರ ಹಿಂದೊಬ್ಬರಂತೆ ವಿವಾಹ ಆಗುತ್ತಿದ್ದಾರೆ.

ಡಾಲಿ ಧನಂಜಯ್ ಸೇರಿದಂತೆ ಇನ್ನೂ ಕೆಲವು ಸೆಲೆಬ್ರಿಟಿಗಳ ಮದುವೆ ಫೆಬ್ರವರಿ ತಿಂಗಳಲ್ಲಿ ನಡೆಯಲಿದೆ. ಇಲ್ಲಿದೆ ನೋಡಿ ಪಟ್ಟಿ. 2025ರ ಆರಂಭದಲ್ಲಿ ಚಂದನವನದಲ್ಲಿ



ಸಾಲು-ಸಾಲು ಕಾರ್ಯಗಳು ನಡೆಯುತ್ತಿವೆ. ನಟರಾಕ್ಷಸ ಎಂದೇ ಹೆಸರುವಾಸಿ ಆಗಿರುವ ಡಾಲಿ ಧನಂಜಯ್ ಅವರ ಮದುವೆ ಕೆಲವೇ ದಿನಗಳಲ್ಲಿ ನಡೆಯಲಿದೆ.

ಡಾಲಿ ಧನಂಜಯ್ ಅವರು ವೈದ್ಯೆ ಧನ್ಯತಾ ಅವರನ್ನು ವಿವಾಹವಾಗಲಿದ್ದು ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂಗಳಾದ ಯಡಿಯೂರಪ್ಪ, ಕುಮಾರಸ್ವಾಮಿ, ರಾಜ್ಯದ ಪ್ರಮುಖ ಮಠಗಳ ಸ್ವಾಮೀಜಿಗಳು ಸಿನಿಮಾ, ರಾಜಕೀಯ ಗಣ್ಯರುಗಳಿಗೆ ಮದುವೆ ಆಮಂತ್ರಣ ಪತ್ರಿಕೆಗಳನ್ನು ನೀಡಿದ್ದಾರೆ. ಇವರ ವಿವಾಹ ಫೆಬ್ರವರಿ ಹದಿನಾರರಂದು ಮೈಸೂರಿನಲ್ಲಿ ಬಲು ಅದ್ಧೂರಿಯಾಗಿ ನಡೆಯಲಿದೆ.

ರಕ್ಷಿತಾ ಅವರ ಸಹೋದರ, 'ಏಕ್ ಲವ್ ಯಾ' ಸಿನಿಮಾದ ನಾಯಕ ರಾಣಾ ಅವರ ವಿವಾಹವೂ ಫೆಬ್ರವರಿಯಲ್ಲಿಯೇ ನಡೆಯಲಿದೆ. ನಿರ್ದೇಶಕ ಪ್ರೇಮ್ ಮತ್ತು ರಕ್ಷಿತಾ ಅವರುಗಳು ಮುಂದೆ ನಿಂತು ರಾಣಾ ಮದುವೆ ಮಾಡುತ್ತಿದ್ದಾರೆ. ಇವರೇ ಮುಂದೆ ನಿಂತು ಸಿನಿಮಾ ಮತ್ತು ರಾಜಕೀಯ ಗಣ್ಯರಿಗೆ ವಿವಾಹ ಆಮಂತ್ರಣ ಪತ್ರಿಕೆ ವಿತರಣೆ ಮಾಡು ತ್ತಿದ್ದಾರೆ. ರಾಣಾ ವಿವಾಹ ಫೆಬ್ರವರಿ 7 ರಂದು ನಡೆಯಲಿದೆ. ಕನ್ನಡ ಚಿತ್ರರಂಗದ ಹಿರಿಯ ನಟಿ, ರಾಜಕಾರಣಿಯೂ ಆಗಿರುವ ಜಯಮಾಲಾ ಅವರ ಪುತ್ರಿ ಸೌಂದರ್ಯ ಅವರ ವಿವಾಹ ಸಹ ಫೆಬ್ರವರಿ 7 ರಂದೇ ನಡೆಯಲಿದೆ. ಜಯಮಾಲಾ ಅವರು ಸಹ ಪುತ್ರಿಯ ವಿವಾಹ ಆಮಂತ್ರಣ ಪತ್ರಿಕೆಯನ್ನು ನೀಡುತ್ತಿದ್ದಾರೆ. ಹಿರಿಯ ಐಎಎಸ್ ಅಧಿಕಾರಿ ರಾಮಚಂದ್ರ ರಾವ್ ಪುತ್ರ ರುಷಬ್ ಅನ್ನು ಸೌಂದರ್ಯ ಮದುವೆ ಆಗಲಿದ್ದಾರೆ. ಇಬ್ಬರ ವಿವಾಹ ಪ್ಯಾಲೆಸ್ ಗ್ರೌಂಡ್‌ನಲ್ಲಿ ನಡೆಯಲಿದೆ.

# ಆರೋಪಿಗೆ 5 ದಿನ ಪೊಲೀಸ್ ಕಸ್ಟಡಿ

ಬಾಲಿವುಡ್ ನಟ ಸೈಫ್ ಅಲಿ ಖಾನ್ ಅವರ ಮೇಲೆ ಹಲ್ಲೆ ಮಾಡಿದ ಆರೋಪದಲ್ಲಿ ಮೊಹಮ್ಮದ್ ಶೆರಿಫುಲ್ ಇಸ್ಲಾಂ ಶೆಹಜಾದ್ ಎಂಬ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ನಂತರ ಆತನನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ಆರೋಪಿಯನ್ನು 5 ದಿನಗಳ ಕಾಲ ಪೊಲೀಸರ ಕಸ್ಟಡಿಗೆ ಒಪ್ಪಿಸಲಾಗಿದೆ. ಹೆಚ್ಚಿನ ತನಿಖೆಯನ್ನು ಮುಂಬೈ ಪೊಲೀಸರು ಮಾಡುತ್ತಿದ್ದಾರೆ. ಖ್ಯಾತ ನಟ ಸೈಫ್ ಅಲಿ ಖಾನ್ ಅವರ ಮನೆಯ ಮೇಲೆ ದಾಳಿ ಮಾಡಿದ ಪ್ರಕರಣದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ. ಬಾಂಗ್ಲಾದೇಶಿ ಮೂಲದ ಮೊಹಮ್ಮದ್ ಶೆರಿಫುಲ್ ಇಸ್ಲಾಂ ಶೆಹಜಾದ್ ಎಂಬಾತನನ್ನು ಮುಂಬೈ ಪೊಲೀಸರು ಅರೆಸ್ಟ್ ಮಾಡಿದ್ದು, ಹೆಚ್ಚಿನ ಮಾಹಿತಿ ಪಡೆಯುತ್ತಿದ್ದಾರೆ. ಹಾಗಾಗಿ ಆತನನ್ನು ಐದು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಒಪ್ಪಿಸಿ ಮುಂಬೈ ಕೋರ್ಟ್ ಆದೇಶ ನೀಡಿದೆ.



ಸೈಫ್ ಮನೆ ಮೇಲೆ ಆದ ದಾಳಿಯ ಉದ್ದೇಶ ಏನು ಇನ್ನೂ ಯಾರೆಲ್ಲ ಈ ಕೃತ್ಯದಲ್ಲಿ ಭಾಗಿ ಆಗಿದ್ದಾರೆ ಎಂಬುದು ತನಿಖೆ ಬಳಿಕ ಗೊತ್ತಾಗಲಿದೆ. ಬಾಂಗ್ಲಾದೇಶದಿಂದ ಅಕ್ರಮವಾಗಿ ಭಾರತಕ್ಕೆ ಬಂದಿರುವ ಮೊಹಮ್ಮದ್ ಶೆರಿಫುಲ್ ಇಸ್ಲಾಂ ಶೆಹಜಾದ್ ಕೆಲವು ತಿಂಗಳಿಂದ ಮುಂಬೈನಲ್ಲಿ ವಾಸವಾಗಿದ್ದಾನೆ. ತನ್ನ ಹೆಸರನ್ನು ಕೂಡ ಆದ ಬದಲಾಯಿಸಿಕೊಂಡಿದ್ದಾನೆ. ವಿಜಯ್ ದಾಸ್ ಎಂಬ ಹೆಸರಿನ ಮೂಲಕ ಆತ ತನ್ನ ನಿಜವಾದ ಗುರುತನ್ನು ಮುಚ್ಚಿಟ್ಟಿದ್ದಾನೆ. ಇಂಥ ಹಲವು ಶಾಕಿಂಗ್ ಸತ್ಯಗಳು ಬಯಲಾಗುತ್ತಿವೆ.

# ಈ ಯುವತಿಗೆ ಈಗ ಭರ್ಜರಿ ಆಫರ್



ವಿಜಯ್ ದೇವರಕೊಂಡ ಅಭಿನಯದ 'ಗೀತ ಗೋವಿಂದಂ' ಚಿತ್ರವು ರಶ್ಮಿಕಾ ಮಂದಣ್ಣ ಮತ್ತು ಅನಿಷಾ ದಾಮಾ ಅವರಿಗೆ ದೊಡ್ಡ ಯಶಸ್ಸನ್ನು ತಂದುಕೊಟ್ಟಿದೆ. ಸಣ್ಣ ಪಾತ್ರದಲ್ಲಿ ನಟಿಸಿದ್ದ ಅನಿಷಾ, ತಮ್ಮ ಆಕರ್ಷಕ ನೋಟದಿಂದ ಪ್ರೇಕ್ಷಕರ ಗಮನ ಸೆಳೆದರು. ಈ ಚಿತ್ರದ ನಂತರ ಅವರಿಗೆ ಹಲವು ಅವಕಾಶಗಳು ಬಂದಿವೆ ಮತ್ತು ಸೋಶಿಯಲ್ ಮೀಡಿಯಾದಲ್ಲಿ ಅವರ ಜನಪ್ರಿಯತೆ ಗಗನಕ್ಕೇರಿದೆ. ವಿಜಯ್ ದೇವರಕೊಂಡ ಅವರಿಗೆ ಸೌತ್ ಇಂಡಸ್ಟ್ರಿಯಲ್ಲಿನ ಕ್ರೇಜ್ ಇದೆ. ತಮ್ಮ ವೃತ್ತಿ ಜೀವನದ ಆರಂಭದ ದಿನಗಳಲ್ಲಿ ಸಣ್ಣ ಪುಟ್ಟ ಪಾತ್ರಗಳಲ್ಲಿ ನಟಿಸಿದ್ದ ವಿಜಯ್, 'ಅರ್ಜುನ್ ರೆಡ್ಡಿ' ಚಿತ್ರದ ಮೂಲಕ ನಾಯಕನಾಗಿ ಬ್ಲಾಕ್ ಬಸ್ಟರ್ ಹಿಟ್ ಪಡೆದರು. ವಿಜಯ್ ಅಭಿನಯದ 'ಗೀತ ಗೋವಿಂದಂ', 'ಟ್ಯಾಕ್ಸಿವಾಲಾ' ಮೊದಲಾದ ಚಿತ್ರಗಳು ಪ್ರೇಕ್ಷಕರ ಮನಸೂರೆಗೊಂಡವು. 'ಗೀತ ಗೋವಿಂದಂ' ವಿಜಯ್ ಅವರ ವೃತ್ತಿಜೀವನದಲ್ಲಿ ದೊಡ್ಡ ಯಶಸ್ಸು ಗಳಿಸಿದ ಚಿತ್ರಗಳಲ್ಲಿ ಒಂದಾಗಿದೆ. ನಿರ್ದೇಶಕ ಪರಶುಮಾರ್ ನಿರ್ದೇಶನದ ಈ ಚಿತ್ರದಲ್ಲಿ ವಿಜಯ್‌ಗೆ ಜೋಡಿಯಾಗಿ ರಶ್ಮಿಕಾ ಮಂದಣ್ಣ ನಟಿಸಿದ್ದಾರೆ. ಈ ಚಿತ್ರದಲ್ಲಿ ನಟಿಸಿದ ಇತರ ಕಲಾವಿದರಿಗೂ ಬೇಡಿಕೆ ಬಂದಿದೆ. 'ಗೀತ ಗೋವಿಂದಂ' ಚಿತ್ರ 2018 ರಲ್ಲಿ ಬಿಡುಗಡೆಯಾಯಿತು ಮತ್ತು ದೊಡ್ಡ ಯಶಸ್ಸನ್ನು ಪಡೆಯಿತು. ಉತ್ತಮ ಆದಾಯವನ್ನೂ ಗಳಿಸಿತ್ತು. ಈ ಚಿತ್ರದ ಎಲ್ಲಾ ಹಾಡುಗಳು ಸೂಪರ್ ಹಿಟ್ ಆಗಿದ್ದು ಗೋಪಿ ಸುಂದರ್ ಸಂಗೀತ ನೀಡಿದ್ದಾರೆ. ರಶ್ಮಿಕಾ ಜೊತೆ ಮತ್ತೊಬ್ಬ ಹುಡುಗಿ ಹೆಚ್ಚು ಫೇಮಸ್ ಆದಳು. ಈ ಸಿನಿಮಾದಲ್ಲಿ ವಿಜಯ್ ಪ್ರೀತಿಸುವ ವಿದ್ಯಾರ್ಥಿನಿಯಾಗಿ ನಟಿಸಿದ ಹುಡುಗಿ ನೆನಪಿದೆಯಾ ಆ ಸುಂದರಿಯ ಹೆಸರು ಅನಿಷಾ ದಾಮಾ. ಈ ಚಿತ್ರದಲ್ಲಿ ತೆರೆ ಮೇಲೆ ಸ್ವಲ್ಪ ಕಾಲ ಕಾಣಿಸಿಕೊಂಡರೂ ತನ್ನ ಗ್ಲಾಮರಸ್ ಲುಕ್ ನಿಂದ ಪ್ರಭಾವ ಬೀರಿದ್ದಾರೆ.

# ಗಂಭೀರ್ ಲೆಕ್ಕಾಚಾರಗಳನ್ನು ಉಲ್ಟಾ ಮಾಡಿದ ರೋಹಿತ್

ಚಾಂಪಿಯನ್ಸ್ ಟ್ರೋಫಿಗಾಗಿ ಭಾರತ ತಂಡವನ್ನು ಘೋಷಿಸಲಾಗಿದೆ. ಟೀಮ್ ಇಂಡಿಯಾ ಪ್ರಕಟಣೆಗೆ ಶನಿವಾರ ಮಧ್ಯಾಹ್ನ 12.30 ಕ್ಕೆ ಸುದ್ದಿಗೋಷ್ಠಿ ಕರೆದಿದ್ದರೂ, ಭಾರತ ತಂಡದ ಘೋಷಣೆಯಾಗಿದ್ದು 3 ಗಂಟೆಗೆ. ಹೀಗೆ ಟೀಮ್ ಇಂಡಿಯಾ ಘೋಷಣೆ ವಿಳಂಬವಾಗಲು ಮುಖ್ಯ ಕಾರಣ ರೋಹಿತ್ ಶರ್ಮಾ ಹಾಗೂ ಕೋಚ್ ಗೌತಮ್ ಗಂಭೀರ್ ನಡುವಣ ಭಿನ್ನಾಭಿಪ್ರಾಯ ಎಂಬುದು ಇದೀಗ ಬಹಿರಂಗವಾಗಿದೆ.



ಆಯ್ಕೆ ಸಮಿತಿಯೊಂದಿಗೆ ಚರ್ಚಿಸಿ ರೋಹಿತ್ ಶರ್ಮಾ ಭಾರತ ತಂಡವನ್ನು ಆಯ್ಕೆ ಮಾಡಿದ್ದರು. ಈ ಪಟ್ಟಿಯೊಂದಿಗೆ ಆಯ್ಕೆ ಸಮಿತಿ ಮುಖ್ಯಸ್ಥ ಅಜಿತ್ ಅಗರ್ಕರ್ ಹಾಗೂ ರೋಹಿತ್ ಶರ್ಮಾ ವಾಂಖೆಡೆ ಸ್ಟೇಡಿಯಂನಲ್ಲಿ ಪ್ರೆಸ್ ಕಾನ್ಫರೆನ್ಸ್ ರೂಮ್‌ಗೆ 12 ಗಂಟೆಗೆ ಆಗಮಿಸಿದ್ದರು. ಆದರೆ ಇನ್ನೇನು ಟೀಮ್ ಇಂಡಿಯಾ ಘೋಷಣೆಯಾಗಲಿದೆ ಅನ್ನುವಷ್ಟರಲ್ಲಿ ತೆರೆಮರೆಯಲ್ಲಿ ಗಂಭೀರ ಚರ್ಚೆ ನಡೆದಿದೆ.

ಈ ಚರ್ಚೆಯ ನಡುವೆ ಗೌತಮ್ ಗಂಭೀರ್ ಟೀಮ್ ಇಂಡಿಯಾ ಉಪ ನಾಯಕನಾಗಿ ಹಾರ್ದಿಕ್ ಪಾಂಡ್ಯರನ್ನು ಆಯ್ಕೆ ಮಾಡುವಂತೆ ಪಟ್ಟು ಹಿಡಿರುವುದಾಗಿ ವರದಿಯಾಗಿದೆ. ಆದರೆ ಅಜಿತ್ ಅಗರ್ಕರ್ ಹಾಗೂ ರೋಹಿತ್ ಶರ್ಮಾ, ಶುಭ್‌ಮನ್ ಗಿಲ್ ಪರ ವಹಿಸಿದ್ದರು. ಅಲ್ಲದೆ ಅಗರ್ಕರ್ ತಮ್ಮ ನಿರ್ಧಾರವನ್ನು ಬದಲಿಸಲು ಸಿದ್ಧರಿರಲಿಲ್ಲ. ಹೀಗಾಗಿ ಗಿಲ್ ಅವರನ್ನೇ ವೈಸ್ ಕ್ಯಾಪ್ಟನ್ ಆಗಿ ಆಯ್ಕೆ ಮಾಡಲಾಗಿದೆ.

ಇನ್ನು ಟೀಮ್ ಇಂಡಿಯಾದ ವಿಕೆಟ್ ಕೀಪರ್ ಆಗಿ ಸಂಜು ಸ್ಯಾಮ್ಸನ್ ಅವರಿಗೆ ಸ್ಥಾನ ನೀಡಬೇಕೆಂದು ಗೌತಮ್ ಗಂಭೀರ್ ಆಗ್ರಹಿಸಿದ್ದರು. ಆದರೆ ರೋಹಿತ್ ಶರ್ಮಾ, ರಿಷಭ್ ಪಂತ್ ಪರ ನಿಂತಿದ್ದರು. ಪಂತ್‌ಗಿಂತ ಸ್ಯಾಮ್ಸನ್ ಅವರ ಪ್ರದರ್ಶನ ಉತ್ತಮವಾಗಿದೆ ಎಂದು ಗಂಭೀರ್ ಮನವೊಲಿಸಲು ಯತ್ನಿಸಿದರೂ, ರೋಹಿತ್ ಶರ್ಮಾ ಹಾಗೂ ಅಜಿತ್ ಅಗರ್ಕರ್ ರಿಷಭ್ ಪಂತ್ ಅವರ ಆಯ್ಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

ಹೀಗೆ ಎರಡುವರೆ ಗಂಟೆಗಳ ಕಾಲ ನಡೆದ ಈ ಚರ್ಚೆಯಲ್ಲಿ ಕೊನೆಗೂ ರೋಹಿತ್ ಶರ್ಮಾ ತಮಗೆ ಬೇಕಾದಂತಹ ತಂಡವನ್ನು ಆಯ್ಕೆ ಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಇದೀಗ ಹಿಟ್‌ಮ್ಯಾನ್ ಬಯಕೆಯಂತೆ ಅಜಿತ್ ಅಗರ್ಕರ್ ನೇತೃತ್ವದ ಆಯ್ಕೆ ಸಮಿತಿ ಬಲಿಷ್ಠ ತಂಡವನ್ನು ರೂಪಿಸಿದೆ. ಆದರೆ ದೀರ್ಘಕಾಲ ನಡೆದ ಈ ಚರ್ಚೆಯಿಂದಾಗಿ ಇದೀಗ ಕೋಚ್ ಗೌತಮ್ ಗಂಭೀರ್ ಹಾಗೂ ರೋಹಿತ್ ಶರ್ಮಾ ನಡುವೆ ಎಲ್ಲಾವೂ ಸರಿಯಿಲ್ಲವಾ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿರುವುದಂತು ಸುಳ್ಳಲ್ಲ.



# ಟೀಮ್ ಇಂಡಿಯಾದಲ್ಲಿ 6 ಹಳೆ ಹುಲಿಗಳು



ಫೆಬ್ರವರಿ 19 ರಿಂದ ಶುರುವಾಗಲಿರುವ ಬಹುನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿ ಟೂರ್ನಿಗೆ ಭಾರತ ತಂಡವನ್ನು ಪ್ರಕಟಿಸಲಾಗಿದೆ. 15 ಸದಸ್ಯರ ಈ ತಂಡದಲ್ಲಿ ಕಳೆದ ಬಾರಿ ಚಾಂಪಿಯನ್ಸ್ ಟ್ರೋಫಿ ಆಡಿದ 6 ಆಟಗಾರರು ಇರುವುದು ವಿಶೇಷ. ಅಂದರೆ 2017ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಾಣಿಸಿಕೊಂಡಿದ್ದ ಆರು ಆಟಗಾರರು ಈ ಬಾರಿ ಕೂಡ ಸ್ಥಾನ ಪಡೆದಿದ್ದಾರೆ. ಅವರೆಂದರೆ....

2017ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಟೀಮ್ ಇಂಡಿಯಾವನ್ನು ಮುನ್ನಡೆಸಿದ್ದು ವಿರಾಟ್ ಕೊಹ್ಲಿ. ಈ ವೇಳೆ 5 ಇನಿಂಗ್ಸ್ ಆಡಿದ್ದ ಕೊಹ್ಲಿ ಒಟ್ಟು 258 ರನ್ ಕಲೆಹಾಕಿ ಮಿಂಚಿದ್ದರು. ಕಳೆದ ಬಾರಿಯ ಚಾಂಪಿಯನ್ಸ್ ಟ್ರೋಫಿ ಯಲ್ಲಿ ರೋಹಿತ್ ಶರ್ಮಾ ಟೀಮ್ ಇಂಡಿಯಾ ಆರಂ ಭಿಕನಾಗಿ ಕಣಕ್ಕಿಳಿದಿದ್ದರು.

5 ಪಂದ್ಯಗಳಲ್ಲಿ ಇನಿಂಗ್ಸ್ ಆರಂಭಿಸಿದ್ದ ಹಿಟ್‌ಮ್ಯಾನ್ ಒಟ್ಟು 304 ರನ್ ಬಾರಿಸಿ ಭಾರತದ ಪರ ಟಾಪ್ ಸ್ಕೋರರ್ ಎನಿಸಿಕೊಂಡಿದ್ದರು.

2017 ರಲ್ಲಿ ಟೀಮ್ ಇಂಡಿಯಾ ಪರ ಆಲ್‌ರೌಂಡರ್ ಆಗಿ ಕಣಕ್ಕಿಳಿದಿದ್ದ ಪಾಂಡ್ಯ 3 ಇನಿಂಗ್ಸ್‌ಗಳ ಮೂಲಕ ಒಟ್ಟು 105 ರನ್ ಕಲೆಹಾಕಿದ್ದರು. ಅಲ್ಲದೆ 5 ಪಂದ್ಯಗಳಿಂದ 4 ವಿಕೆಟ್‌ಗಳನ್ನು ಸಹ ಕಬಳಿಸಿದ್ದರು.

ಟೀಮ್ ಇಂಡಿಯಾದ ಸ್ಪಿನ್ ಆಲ್‌ರೌಂಡರ್ ಆಗಿ ರವೀಂದ್ರ ಜಡೇಜಾ ಕಳೆದ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿದಿದ್ದರು. ಈ ವೇಳೆ 5 ಪಂದ್ಯಗಳಿಂದ 4 ವಿಕೆಟ್ ಕಬಳಿಸಿದರೆ, 2 ಇನಿಂಗ್ಸ್‌ಗಳ ಮೂಲಕ 15 ರನ್ ಕಲೆಹಾಕಿದ್ದರು. ಚಾಂಪಿಯನ್ಸ್ ಟ್ರೋಫಿ 2017 ರಲ್ಲಿ ಭಾರತ ತಂಡದ ಪ್ರಮುಖ ವೇಗಿಯಾಗಿ ಜಸ್‌ಪ್ರೀತ್ ಬುಮ್ರಾ ಕಾಣಿಸಿಕೊಂಡಿದ್ದರು. ಅದರೆ 5 ಪಂದ್ಯಗಳಿಂದ ಅವರು ಕಬಳಿಸಿದ್ದು ಕೇವಲ 4 ವಿಕೆಟ್‌ಗಳು ಮಾತ್ರ.

2017ರ ಚಾಂಪಿಯನ್ಸ್ ಟ್ರೋಫಿ ತಂಡದಲ್ಲಿ ಮೊಹಮ್ಮದ್ ಶಮಿ ಕಾಣಿಸಿಕೊಂಡರೂ, ಅವರು ಯಾವುದೇ ಪಂದ್ಯದಲ್ಲಿ ಕಣಕ್ಕಿಳಿದಿರಲಿಲ್ಲ. ಇದೀಗ ಚೊಚ್ಚಲ ಚಾಂಪಿಯನ್ಸ್ ಟ್ರೋಫಿ ಪಂದ್ಯವಾಡಲು ಶಮಿ ಸಜ್ಜಾಗಿದ್ದಾರೆ.



# ವಿರಾಟ್ ಕೊಹ್ಲಿ ರೋಹಿತ್ ಶರ್ಮಾ ಕೊನೆಯ ಜೊತೆಯಾಟ

ಟೀಮ್ ಇಂಡಿಯಾ ದಿಗ್ಗಜರಾದ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಮೂರನೇ ಬಾರಿ ಜೊತೆಯಾಗಿ ಚಾಂಪಿಯನ್ಸ್ ಟ್ರೋಫಿ ಆಡಲು ಸಜ್ಜಾಗಿದ್ದಾರೆ. 2013 ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಜೊತೆಯಾಗಿ ಕಣಕ್ಕಿಳಿದಿದ್ದ ಈ ಜೋಡಿಯು ಆ ಬಳಿಕ 2017 ರಲ್ಲೂ ಜೊತೆ ಜೊತೆಯಾಗಿ ಕಾಣಿಸಿಕೊಂಡಿದ್ದರು.

ಇದೀಗ 2025 ರಲ್ಲಿ ಮತ್ತೆ ಜೊತೆಯಾಗಿ ಕಣಕ್ಕಿಳಿಯಲು ಸಜ್ಜಾಗಿದ್ದಾರೆ. ಆದರೆ ಇದು ಕೊನೆಯ ಜೊತೆಯಾಟವಾಗುವುದು ಖಚಿತ. ಏಕೆಂದರೆ ಚಾಂಪಿಯನ್ಸ್ ಟ್ರೋಫಿ ಬಳಿಕ ಟೀಮ್ ಇಂಡಿಯಾಗೆ ಮೇಜರ್ ಸರ್ಜರಿಯಾಗಲಿದೆ ಎಂಬ ಸೂಚನೆಯನ್ನು ಆಯ್ಕೆ ಸಮಿತಿ ಮುಖ್ಯಸ್ಥ ಅಜಿತ್ ಅಗರ್ಕರ್ ನೀಡಿದ್ದಾರೆ. ಇತ್ತ ಚಾಂಪಿಯನ್ಸ್ ಟ್ರೋಫಿಯಲ್ಲಿ ರೋಹಿತ್ ಶರ್ಮಾ ವಿಫಲರಾದರೆ ಏಕದಿನ ತಂಡದಿಂದ ಹೊರಬೀಳುವುದು ಖಚಿತ. ಅಷ್ಟೇ ಅಲ್ಲದೆ ಹಿಟ್‌ಮ್ಯಾನ್ ಅವರ ಕೆರಿಯರ್ ಕೂಡ ಇದರೊಂದಿಗೆ ಕೊನೆಗೊಳ್ಳಲಿದೆ ಎಂದು ಕೆಲ ವರದಿಗಳು ತಿಳಿಸಿವೆ. ಹೀಗಾಗಿ ಇದು ರೋಹಿತ್ ಶರ್ಮಾ ಅವರ ಕೊನೆಯ ಐಸಿಸಿ ಟೂರ್ನಿಯಾಗುವ ಸಾಧ್ಯತೆ ಹೆಚ್ಚು. ಮತ್ತೊಂದೆಡೆ ವಿರಾಟ್ ಕೊಹ್ಲಿಯ ಭವಿಷ್ಯ ಕೂಡ ಚಾಂಪಿಯನ್ಸ್ ಟ್ರೋಫಿಯೊಂದಿಗೆ ನಿರ್ಧಾರವಾಗಲಿದೆ. ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಕಳಪೆ ಪ್ರದರ್ಶನ ನೀಡಿದ್ದ ಕೊಹ್ಲಿಗೂ ಬಿಸಿ ಮುಟ್ಟಿಸಲು ಬಿಸಿಸಿಐ ನಿರ್ಧರಿಸಿದೆ. ಹೀಗಾಗಿ ಚಾಂಪಿಯನ್ಸ್ ಟ್ರೋಫಿಯಲ್ಲಿ ವಿಫಲರಾದರೆ ಕೆಲ ಸರಣಿಗಳಿಂದ ಅವರನ್ನು ಕೈ ಬಿಡುವ ಸೂಚನೆ ನೀಡಲಾಗಿದೆ.

ಹೀಗಾಗಿ ಈ ಬಾರಿಯ ಚಾಂಪಿಯನ್ಸ್ ಟ್ರೋಫಿ ಟೂರ್ನಿಯು ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕೆರಿಯರ್‌ನ ಭವಿಷ್ಯ ನಿರ್ಧರಿಸಲಿದೆ. ಈ ಭವಿಷ್ಯ ನಿರ್ಧಾರಕ ಟೂರ್ನಿಯಲ್ಲಿ ಅದ್ಭುತ ಪ್ರದರ್ಶನ ನೀಡಿ ತನ್ನ ಸ್ಥಾನವನ್ನು ಗಟ್ಟಿಸುವವರು ಯಾರು ಎಂಬುದೇ ಈಗ ಕುತೂಹಲ.

**ಭಾರತ ತಂಡ:** ರೋಹಿತ್ ಶರ್ಮಾ, ಶುಭ್‌ಮನ್ ಗಿಲ್ , ಕೊಹ್ಲಿ, ಶ್ರೇಯಸ್ ಅಯ್ಯರ್, ಕೆಎಲ್ ರಾಹುಲ್, ಹಾರ್ದಿಕ್ ಪಾಂಡ್ಯ, ಪಟೇಲ್, ಸುಂದರ್, ಕುಲ್ದೀಪ್ ಯಾದವ್, ಬುಮ್ರಾ, ಶಮಿ, ಅರ್ಷದೀಪ್ ಸಿಂಗ್, ಜೈಸ್ವಾಲ್, ಪಂತ್, ಜಡೇಜಾ.

# ವಿಂಡೀಸ್ ವಿರುದ್ಧ ಗೆಲುವು ಸಾಧಿಸಿದ ಭಾರತ

ಜನವರಿ 18 ರಿಂದ ಆರಂಭವಾಗಿರುವ ಅಂಡರ್-19 ಮಹಿಳಾ ಟಿ20 ವಿಶ್ವಕಪ್‌ನಲ್ಲಿ ಭಾರತ ವನಿತಾ ಪಡೆ ಗೆಲುವಿನ ಶುಭಾರಂಭ ಮಾಡಿದೆ. ತನ್ನ ಚೊಚ್ಚಲ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡವನ್ನು ಎದುರಿಸಿದ್ದ ಟೀಂ ಇಂಡಿಯಾ 20 ಓವರ್‌ಗಳ ಗುರಿಯನ್ನು ಕೇವಲ 26 ಎಸೆತಗಳಲ್ಲಿ ಬೆನ್ನಟ್ಟಿತು. ಇದರೊಂದಿಗೆ ವೆಸ್ಟ್ ಇಂಡೀಸ್ ವಿರುದ್ಧ 9 ವಿಕೆಟ್‌ಗಳ ಅದ್ಭುತ ಜಯ ಸಾಧಿಸಿತು. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ವೆಸ್ಟ್ ಇಂಡೀಸ್ 13.2 ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು 44 ರನ್ ಕಲೆಹಾಕಲಷ್ಟೇ ಶಕ್ತವಾಯಿತು. ಈ ಗುರಿ ಬೆನ್ನಟ್ಟಿದ ಭಾರತ



ವನಿತಾ ಪಡೆ ಕೇವಲ 1 ವಿಕೆಟ್ ಕಳೆದುಕೊಂಡು 4.2 ಓವರ್‌ಗಳಲ್ಲಿ ಜಯದ ಬಗೆ ಬೀರಿತು. ವಿಂಡೀಸ್ ತಂಡವನ್ನು ಏಕಪಕ್ಷೀಯವಾಗಿ ಸೋಲಿಸುವ ಮೂಲಕ ಭಾರತ ತಂಡವು ತನ್ನ ಇತರ ಎದುರಾಳಿಗಳಿಗೂ ಸ್ಪಷ್ಟ ಸಂದೇಶವನ್ನು ನೀಡಿದೆ.

**ಸುಲಭವಾಗಿ ಗುರಿ ಬೆನ್ನಟ್ಟಿದ ಭಾರತ**

ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ ಭಾರತೀಯ ಬೌಲರ್‌ಗಳ ದಾಳಿಗೆ ತತ್ತರಿಸಿ ಪೂರ್ಣ 20 ಓವರ್‌ಗಳನ್ನು ಆಡಲು ಸಾಧ್ಯವಾಗಲಿಲ್ಲ. ಹೀಗಾಗಿ ಇಡೀ ತಂಡ 13.2 ಓವರ್‌ಗಳಲ್ಲಿ 44 ರನ್ ಗಳಿಸಿ ಆಲೌಟ್ ಆಯಿತು. ಈ ಮೂಲಕ ವಿಂಡೀಸ್ ತಂಡ ಟೂರ್ನಿಯ ಇತಿಹಾಸದಲ್ಲೇ ಅತ್ಯಂತ ಕಡಿಮೆ ಸ್ಕೋರ್‌ಗೆ ಆಲೌಟ್ ಆದ ಬೇಡದ ದಾಖಲೆಯನ್ನು ಬರೆಯಿತು. ಗೆಲುವಿಗೆ 45 ರನ್‌ಗಳ ಗುರಿ ಪಡೆದಿದ್ದ ಭಾರತ ಕೇವಲ 4.2 ಓವರ್‌ಗಳಲ್ಲಿ 1 ವಿಕೆಟ್ ಕಳೆದುಕೊಂಡು ಜಯದ ನಗೆ ಬೀರಿತು.

**9 ವಿಕೆಟ್‌ಗಳ ಜಯ**

45 ರನ್ಗಳ ಸುಲಭ ಗುರಿ ಬೆನ್ನತ್ತಿದ ಭಾರತ 4 ರನ್ ಗಳಿಸುವಷ್ಟರಲ್ಲಿ ತನ್ನ ಏಕೈಕ ವಿಕೆಟ್ ಕಳೆದುಕೊಂಡಿತು. ಆದರೆ ಆ ಬಳಿಕ ಭಾರತದ ಬ್ಯಾಟ್ಸ್‌ಮನ್‌ಗಳು ವೆಸ್ಟ್ ಇಂಡೀಸ್‌ಗೆ ವಿಕೆಟ್ ಪಡೆಯುವ ಎರಡನೇ ಅವಕಾಶವನ್ನೇ ನೀಡಲಿಲ್ಲ. ಎರಡನೇ ವಿಕೆಟ್‌ಗೆ ಕಮಲಿನಿ ಮತ್ತು ಚಾಲ್ಕೆ ನಡುವೆ 43 ರನ್‌ಗಳ ಅಜೇಯ ಪಾಲುದಾರಿಕೆ ಇತ್ತು. ಈ ಇಬ್ಬರೂ ಬ್ಯಾಟ್ಸ್‌ಮನ್‌ಗಳು ಪಂದ್ಯ ಮುಗಿಸಿದ ಬಳಿಕ ಪೆವಿಲಿಯನ್ ಸೇರಿಕೊಂಡರು. ಈ ಮೂಲಕ ವೆಸ್ಟ್ ಇಂಡೀಸ್ ತಂಡವನ್ನು 9 ವಿಕೆಟ್‌ಗಳಿಂದ ಸೋಲಿಸುವಲ್ಲಿ ಭಾರತ ಯಶಸ್ವಿಯಾಯಿತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966